PRGI No.: KARKAN/2023/86346

# ವಿಜಯ ವಿಶ್ವವಾಣಿ

VIJAYA VISHWAVANI Kannada Daily
ವಿಜಯ ಧ್ವನಿ
ಕನ್ನಡ ದಿನಪತ್ರಿಕೆ
₹1

ಬೆಂಗಳೂರು * ಬೆಂಗಳೂರು ಗ್ರಾಮಾಂತರ * ಚಿಕ್ಕಬಳ್ಳಾಪುರ * ಕೋಲಾರ * ಮಂಡ್ಯ * ರಾಮನಗರ * ತುಮಕೂರು * ಚಾಮರಾಜನಗರ * ಉತ್ತರ ಕರ್ನಾಟಕ * ಕಲಬುರ್ಗಿ * ಯಾದಗಿರಿ * ಬೀದರ್ * ರಾಯಚೂರು

Volume-2 | ಸಂಪುಟ–2 | Issue- 892 | ಸಂಚಿಕೆ–892 | Saturday, April 18, 2026 | ಶನಿವಾರ, ಏಪ್ರಿಲ್ 18, 2026 | Pages- 8 | ಪುಟಗಳು–8

**ಶುಭ ಮುಂಜಾವು**

ಒಳ್ಳೆಯತನದಿಂದ ಮತ್ತು ಸತ್ಯದ ಮಾರ್ಗದಲ್ಲಿ ನಡೆಯುವವರನ್ನು ಸುಲಭವಾಗಿ ಹೆದರಿಸಲು ಸಾಧ್ಯವಿಲ್ಲ. –ಶೇಕ್ಸ್ ಪಿಯರ್

ನೀವು ಎಲ್ಲರಿಂದ ದೂರಾಗಿ ಒಬ್ಬಂಟಿಗರಾಗಿದ್ದರೆ, ನಿಮ್ಮ ಪಾಪದ ಕೃತ್ಯಗಳಿಂದ ಸಂಕಟ ಪಡಬೇಕಾಗುತ್ತದೆ. –ಸಂತ ಕಬೀರ್

ಕಾಲವನ್ನು ನಾವು ಪಾಲಿಸಿದರೆ ಅದು ನಮಗೆ ವಿಧೇಯವಾಗಿರುತ್ತದೆ. –ಸರ್ ಎಂ.ವಿ.

ಔಷಧ, ಐಸಿಯು ಕೊರತೆ, ಸ್ವಚ್ಛತೆ ಕಾಪಾಡದಿದ್ದರೆ ಕಠಿಣ ಕ್ರಮ 02

ಲೋಕಸಭೆ: ಕಾಂಗ್ರೆಸ್, ಡಿಎಂಕೆ ಮೇಲೆ ಹೆಚ್.ಡಿ. ಕುಮಾರಸ್ವಾಮಿ ತೀವ್ರ ವಾಗ್ದಾಳಿ 05

ಬೆಂಗಳೂರಿನಲ್ಲಿ ಜಾಗತಿಕ ಸುಸ್ಥಿರ ಇಂಧನ ಸಮ್ಮೇಳನ ಉದ್ಘಾಟಿಸಲಿರುವ ಸಿಎಂ 07

## ಹೊರ್ಮುಜ್ ಜಲಸಂಧಿಯು ಹಡಗುಗಳ ಸಂಚಾರಕ್ಕೆ ಮುಕ್ತ: ಇರಾನ್ ಮಹತ್ವದ ಘೋಷಣೆ

ಲೆಬನಾನ್–ಇಸ್ರೇಲ್ 10 ದಿನಗಳ ತಾತ್ಕಾಲಿಕ ಕದನ ವಿರಾಮ ಗುರುವಾರದಿಂದ ಜಾರಿಗೆ ಬಂದಿದೆ. ಇದರ ಬೆನ್ನಲ್ಲೇ ಇರಾನ್ ಈ ಮಹತ್ವದ ಘೋಷಣೆ ಮಾಡಿದೆ. ಪರಿಸ್ಥಿತಿ ಸುಧಾರಿಸಿದ ತಕ್ಷಣ ಹೊರ್ಮುಜ್ ಜಲಸಂಧಿಯಲ್ಲಿ ನೌಕಾಯಾನದ ಸ್ವಾತಂತ್ರ್ಯವನ್ನು ಮರುಸ್ಥಾಪಿಸಲು ನಾವು ಸಿದ್ಧರಿದ್ದೇವೆ ಎಂಬ ಸಂಕೇತವನ್ನು ಅಮೆರಿಕಕ್ಕೆ ರವಾನಿಸುವ ಉದ್ದೇಶ ದಿಂದ ಸುಮಾರು 40 ದೇಶಗಳ ಮತ್ತೊಂದು ಸಭೆಯ ಅಧ್ಯಕ್ಷತೆಯನ್ನು ವಹಿಸುವುದಾಗಿ ಫ್ರಾನ್ಸ್ ಮತ್ತು ಬ್ರಿಟನ್ ಇಂದು ಮುಂಜಾನೆ ಘೋಷಿಸಿವೆ.

## ದ್ವಿ ಪೌರತ್ವ ಆರೋಪ: ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸಲು ಕೋರ್ಟ್ ಆದೇಶ



ಲಖನೌ: ದ್ವಿ ಪೌರತ್ವ ವಿವಾದಕ್ಕೆ ಸಂಬಂಧಿಸಿದಂತೆ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಅಲಹಾಬಾದ್ ಹೈಕೋರ್ಟ್‌ನ ಲಖನೌ ಪೀಠ ಶುಕ್ರವಾರ(ಏ 17) ಆದೇಶಿಸಿದೆ.

ಎಫ್‌ಐಆರ್ ದಾಖಲಾದ ನಂತರ, ರಾಜ್ಯ ಸರ್ಕಾರವು ಈ ವಿಷಯದ ಬಗ್ಗೆ ತನಿಖೆ ನಡೆಸಲು ಕೇಂದ್ರ ತನಿಖಾ ಸಂಸ್ಥೆಯ ಸಹಾಯ ಪಡೆಯಬಹುದು ಎಂದು ನ್ಯಾಯಾಲಯ ಹೇಳಿದೆ.

ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕರೂ ಆಗಿರುವ ರಾಹುಲ್ ಗಾಂಧಿಯವರ ವಿರುದ್ಧ ಎಫ್‌ಐಆರ್ ದಾಖಲಿಸಲು ನಿರ್ದೇಶಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಿದ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಅರ್ಜಿದಾರ ಎಸ್. ವಿಘ್ನೇಶ್ ಶಿಶಿರ್ ಅವರು ಹೈಕೋರ್ಟ್ ಮೆಟ್ಟಿಲೇರಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸುಭಾಷ್ ವಿದ್ಯಾರ್ಥಿ ಅವರ ಪೀಠವು ಈ ಆದೇಶ ನೀಡಿದೆ. ಪೌರತ್ವಕ್ಕೆ ಸಂಬಂಧಿಸಿದ ಪ್ರಕರಣಗಳ ಬಗ್ಗೆ ವಿಚಾರಣೆ ನಡೆಸುವ ಅಧಿಕಾರ ಇಲ್ಲ ಎಂದು ವಿಶೇಷ ನ್ಯಾಯಾಲಯವು ಹೇಳಿತ್ತು.

ಕರ್ನಾಟಕದ ಬಿಜೆಪಿ ಕಾರ್ಯಕರ್ತರಾಗಿರುವ ಅರ್ಜಿದಾರರು, ರಾಹುಲ್ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ(ಬಿಎನ್‌ಎಸ್) ಅಧಿಕೃತ ರಹಸ್ಯ ಕಾಯ್ದೆ, ವಿದೇಶಿಯರ ಕಾಯ್ದೆ ಮತ್ತು ಪಾಸ್‌ಪೋರ್ಟ್ ಕಾಯ್ದೆಯ ನಿಬಂಧನೆಗಳ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿ ವಿಸ್ತೃತ ತನಿಖೆಗೆ ಕೋರಿದ್ದರು.

## ಮುಸ್ಲಿಮರಿಗೆ ಕಾಂಗ್ರೆಸ್ ಮಾಡಿದಷ್ಟು ಸಹಾಯ ಯಾರೂ ಮಾಡಿಲ್ಲ: ಡಿಸಿಎಂ ಡಿಕೆ ಶಿವಕುಮಾರ್

ನವದೆಹಲಿ: ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ವಿಚಾರವಾಗಿ ಭುಗಿಲೆದ್ದಿರುವ ಸಂಘರ್ಷಕ್ಕೆ ಸಂಬಂಧಿಸಿದಂತೆ ಡಿಸಿಎಂ ಡಿಕೆ ಶಿವಕುಮಾರ್ ಖಾರವಾಗಿ ಪ್ರತಿಕ್ರಿಯಿಸಿದ್ದಾರೆ.

ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಡಿಸಿಎಂ ಡಿಕೆ ಶಿವಕುಮಾರ್, ಸಚಿವ ಜಮೀರ್ ಅಹ್ಮದ್ ರಾಜೀನಾಮೆ ನೀಡುವ ವಿಚಾರ ಕುರಿತು ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದರು.

ಈ ವೇಳೆ, 'ಮುಸ್ಲಿಂ ನಾಯಕರಿಗೆ ಕಾಂಗ್ರೆಸ್ ಸಹಾಯ ಮಾಡಿದಷ್ಟು ಯಾರೂ ಮಾಡಿಲ್ಲ. ಹಿಂದೆಯೂ ಮಾಡಿಲ್ಲ, ಮುಂದೆಯೂ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು.

ಸಚಿವ ಜಮೀರ್ ಅಹ್ಮದ್ ಖಾನ್ ಅವರ ರಾಜೀನಾಮೆ ವಿಚಾರವಾಗಿ ಹಬ್ಬಿರುವ ವದಂತಿಗಳ ಬಗ್ಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, 'ನಾನು ಈ ವಿಚಾರವನ್ನು ಪತ್ರಿಕೆಗಳಲ್ಲಿ ಮಾತ್ರ ನೋಡಿದ್ದೇನೆ. ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ವೈಯಕ್ತಿಕ ಕೆಲಸಗಳ ನಿಮಿತ್ತ ಸಭೆಯ ನಂತರ ನಾನು ಅಲ್ಲಿಂದ ಹೊರಟಿದ್ದೆ, ಹೀಗಾಗಿ ಈ ಬಗ್ಗೆ ನನಗೆ ಹೆಚ್ಚಿನ ಮಾಹಿತಿ ಇಲ್ಲ. ಏನೇ ಇದ್ದರೂ ಹೈಕಮಾಂಡ್ ಮತ್ತು ಪಕ್ಷದ ವರಿಷ್ಠರು ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತಾರೆ,' ಎಂದು ತಿಳಿಸಿದರು.

ಕಾಂಗ್ರೆಸ್ ನಲ್ಲಿ ಅಲ್ಪಸಂಖ್ಯಾತ ನಾಯಕರು ಟಾರ್ಗೆಟ್ ಆಗುತ್ತಿದ್ದಾರೆ ಎಂಬ ಆರೋಪಗಳನ್ನು ತಳ್ಳಿಹಾಕಿದ ಅವರು, ಕಾಂಗ್ರೆಸ್ ಪ್ರತಿ ಹಂತದಲ್ಲೂ ಮುಸ್ಲಿಂ ನಾಯಕರಿಗೆ ಬೆನ್ನೆಲುಬಾಗಿ ನಿಂತಿದೆ ಎಂದರು. ಅಂತೆಯೇ ಮುಸ್ಲಿಂ ನಾಯಕರು ಟಾರ್ಗೆಟ್ ಆಗಿಲ್ಲ. ಅವರಿಗೆ ಕಾಂಗ್ರೆಸ್ ಸಹಾಯ ಮಾಡಿದಷ್ಟು ಯಾರೂ ಮಾಡಿಲ್ಲ. ಪ್ರತಿ ಹಂತದಲ್ಲಿ ಬೆನ್ನೆಲುಬಾಗಿ ನಿಂತಿದ್ದೇವೆ. ಹಿಂದೆಯೂ ಮಾಡಿಲ್ಲ, ಮುಂದೆ ಯಾರೂ ಮಾಡಲೂ ಸಾಧ್ಯವಿಲ್ಲ ಎಂದು ಹೇಳಿದರು.

ದಾವಣಗೆರೆ ದಕ್ಷಿಣ ಅದು ಅಲ್ಪಸಂಖ್ಯಾತರ ಸೀಟ್ ಅಲ್ಲ. ಅಲ್ಲಿ ಶಾಮನೂರು ಶಿವಶಂಕರಪ್ಪ 40 ವರ್ಷಗಳಿಂದ ಕ್ಷೇತ್ರವನ್ನ ಕಾಪಾಡಿಕೊಂಡು ಬಂದಿದ್ದಾರೆ. ಅವರ ಜನಸಂಖ್ಯೆ ಇತ್ತು ನಿಜ.. ಅವರು ಕೇಳಿದ್ದು ತಪ್ಪಿಲ್ಲ. ಅಲ್ಪಸಂಖ್ಯಾತ ಕೆಲವು ನಾಯಕರು ಟಿಕೆಟ್ ಕೇಳಿದ್ದರು. ಆದರೆ ಬಳಿಕ ನಡೆದ ಚರ್ಚೆಯಲ್ಲಿ ಅವರು ಒಪ್ಪಿದ ಮೇಲೆಯೇ ಸಮರ್ಥ್ ಗೆ ಟಿಕೆಟ್ ನೀಡಿದೆ. ಕೆಲವು ರಿಪೋರ್ಟ್‌ಗಳ ಆಧಾರದ ಮೇಲೆ ಪಕ್ಷ ಕ್ರಮ ತೆಗೆದುಕೊಂಡಿದೆ ಅಷ್ಟೇ ಎಂದು ಡಿಕೆ ಶಿವಕುಮಾರ್ ಹೇಳಿದರು.

ಯೋಗೀಶಗೌಡ ಕೊಲೆ ಪ್ರಕರಣ

# ಕೈ ಶಾಸಕ ವಿನಯ್ ಕುಲಕರ್ಣಿಗೆ ಜೀವಾವಧಿ ಶಿಕ್ಷೆ

ಬೆಂಗಳೂರು: ಯೋಗೀಶಗೌಡ ಗೌಡರ ಕೊಲೆ ಪ್ರಕರಣದಲ್ಲಿ ಪ್ರಕರಣದ ಅಪರಾಧಿ, 15ನೇ ಆರೋಪಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಅವರಿಗೆ ಜೀವಾವಧಿ ಶಿಕ್ಷೆಯನ್ನು ವಿಧಿಸಲಾಗಿದೆ.

ಇಂದು ಜನಪ್ರತಿನಿಧಿಗಳ ನ್ಯಾಯಾಲಯದ ನ್ಯಾಯಾಧೀಶರಾದ ಸಂತೋಷ್ ಗಜಾನನ ಭಟ್ ಅವರು ಶಿಕ್ಷೆ ವಿಧಿಸಿ ತೀರ್ಪು ಪ್ರಕಟಿಸಿದರು.

ಪ್ರಕಣದಲ್ಲಿನ 19 ಅಪರಾಧಿಗಳ ಪೈಕಿ 16 ಅಪರಾಧಿಗಳೆಲ್ಲರಿಗೂ ಜೀವಾವಧಿ ಶಿಕ್ಷೆಯನ್ನು ನೀಡಿ ಆದೇಶಿಸಲಾಗಿದೆ.

2016 ರಲ್ಲಿ ಧಾರವಾಡದಲ್ಲಿ ಜಿಲ್ಲಾ ಪಂಚಾಯಿತಿಯ ಬಿಜೆಪಿ ಸದಸ್ಯರಾಗಿದ್ದ ಯೋಗೀಶಗೌಡ ಗೌಡರ್ ಕೊಲೆ ನಡೆದಿತ್ತು. 2019ರಲ್ಲಿ ಈ ಪ್ರಕರಣದ ತನಿಖೆಯನ್ನು ಸಿಬಿಐ ಕೈಗೆತ್ತಿಕ್ಕೊಂಡಿತ್ತು.

ಪ್ರಕರಣದಲ್ಲಿನ 17 ಆರೋಪಿಗಳನ್ನು 'ಅಪರಾಧಿಗಳು' ಎಂದು ಬುಧವಾರ ನಿರ್ಣಯಿಸಿದ್ದ, 'ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆ'ಯ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ ಗಜಾನನ ಭಟ್ ಅವರು, ಶುಕ್ರವಾರ ಶಿಕ್ಷೆಯ ಪ್ರಮಾಣ ನಿರ್ಧರಿಸಿ ಘೋಷಿಸಿದರು.

ಶಿಕ್ಷೆಯ ಪ್ರಮಾಣ ನಿರ್ಧರಿಸುವ ಕುರಿತು ಗುರುವಾರ ನಡೆದ ವಿಚಾರಣೆಯಲ್ಲಿ ಕಾನೂನಿನ ತತ್ವಗಳಿಗೆ ಅನುಗುಣವಾಗಿ ಗರಿಷ್ಠ ಶಿಕ್ಷೆಗೆ ವಿನಾಯ್ತಿ ಕೋರುವ ಅಪರಾಧಿಗಳ ಮನವಿಯನ್ನು ನ್ಯಾಯಾಧೀಶರು ಆಲಿಸಿದ್ದರು.

ಅದರಂತೆ ಶುಕ್ರವಾರ ನ್ಯಾಯಾಲಯದಲ್ಲಿ ಎಲ್ಲಾ ಅಪರಾಧಿಗಳನ್ನೂ ಪೊಲೀಸರು ಹಾಜರುಪಡಿಸಿದರು. ಮಧ್ಯಾಹ್ನ ಶಿಕ್ಷೆಯ ಪ್ರಮಾಣವನ್ನು ಪ್ರಕಟಿಸಲಾಯಿತು.



**ಯೋಗೀಶಗೌಡ ಪ್ರಕರಣ; ಆಗಿದ್ದೇನು?**

2016, ಜೂನ್ 15: ಸಪ್ತಾಪುರದ ಉದಯ ಜಿಮ್ ಬಳಿ ಯೋಗೀಶಗೌಡ ಗೌಡರ್ ಅವರನ್ನು ಕೊಚ್ಚಿ ಕೊಲೆ

ಜೂನ್ 17: ಬಸವರಾಜ ಮುತ್ತಗಿ, ವಿಕ್ರಮ ಬಳ್ಳಾರಿ, ಕೀರ್ತಿಕುಮಾರ ಕುರಹಟ್ಟಿ, ಸಂದೀಪ ಸವದತ್ತಿ, ವಿನಾಯಕ ಕಟಗಿ ಹಾಗೂ ಮಹಾಬಳೇಶ ಹೊಂಗಲ್ ಬಂಧನ.

2017, ನ. 17: ಪ್ರಕರಣದ ವಿಚಾರಣೆಯನ್ನು 4ನೇ ಜಿಲ್ಲಾ ಕೋರ್ಟ್‌ನಿಂದ ಬೇರೆಡೆ ವರ್ಗಾಯಿಸಬೇಕು' ಎಂದು ಕೋರಿ ಯೋಗೀಶಗೌಡ ಗೌಡರ್ ಪತ್ನಿ ಮಲ್ಲಮ್ಮ ಗೌಡರ್ ಹಾಗೂ ಸೋದರ ಗುರುನಾಥಗೌಡ ಗೌಡರ್ ಅವರಿಂದ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಎಚ್.ಜಿ ರಮೇಶ ಅವರಿಗೆ ಪತ್ರ.

ನ. 23: 'ಇಡೀ ಪ್ರಕರಣದಲ್ಲಿ ಸಚಿವ ವಿನಯ ಕುಲಕರ್ಣಿ ಪಾತ್ರ ಇದೆ' ಎಂದು ಯೋಗೀಶಗೌಡ ಗೌಡರ್ ಸಹೋದರ ಗುರುನಾಥ ಗೌಡರ್ ಆರೋಪ.

ನ. 27: ಆರೋಪಿಗಳೊಂದಿಗೆ ರಾಜಿಸಂಧಾನಕ್ಕೆ ಡಿವೈಎಸ್ಪಿ ಬಿ.ಪಿ.ಚಂದ್ರಶೇಖರ ಒತ್ತಡ ಹೇರಿದ್ದರು ಎಂದು ಆರೋಪಿಸಿ ಯೋಗೀಶಗೌಡ ಗೌಡರ್ ಸಹೋದರ ಗುರುನಾಥಗೌಡ ಗೌಡರ್ರಿಂದ ಎಸ್ಪಿಗೆ ದೂರು.

ಡಿ. 3: ಡಿವೈಎಸ್ಪಿಗಳಾದ ತುಳಜಪ್ಪ ಸುಲ್ಫಿ ಹಾಗೂ ಬಿ.ಕೆ.ಚಂದ್ರಶೇಖರ ಹಸ್ತಕ್ಷೇಪ ಕುರಿತು ಬೆಳಗಾವಿ ಹೆಚ್ಚುವರಿ ಎಸ್ಪಿ ಅವರಿಂದ ತನಿಖೆ.

2018, ಜ. 23: ಪ್ರಕರಣವನ್ನು ಸಿಬಿಐಗೆ ಒಪ್ಪಿಸಲು ಕೋರಿ ಸಲ್ಲಿಸಿದ್ದ ಅರ್ಜಿಯಲ್ಲಿ ಪ್ರತಿವಾದಿಯನ್ನಾಗಿಸಬೇಕು ಎಂದು ಯೋಗೀಶಗೌಡ ಗೌಡರ್ ಪತ್ನಿ ಮಲ್ಲಮ್ಮ ಗೌಡರ್ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಕೆ.

ಮಾ. 1: ಪ್ರಕರಣವನ್ನು ಸಿಬಿಐಗೆ ವಹಿಸುವಂತೆ ನಿರ್ದೇಶನ ಕೋರಿ ಗುರುನಾಥಗೌಡ ಗೌಡರ್ ಮತ್ತು ತುಂಗಮ್ಮ (ಯೋಗೀಶಗೌಡ ಗೌಡರ್ ತಾಯಿ) ಸಲ್ಲಿಸಿದ್ದ ರಿಟ್ ಅರ್ಜಿ ಹೈಕೋರ್ಟ್‌ನಿಂದ ವಜಾ.

ಏ. 10: ಪ್ರಕರಣದಲ್ಲಿ ಸಾಕ್ಷ್ಯನಾಶ ಹಾಗೂ ಸಾಕ್ಷಿಗಳಿಗೆ ಬೆದರಿಕೆ ಒಡ್ಡಿದ ಆರೋಪದಡಿ ವಿನಯ ಕುಲಕರ್ಣಿ, ಡಿವೈಎಸ್ಪಿಗಳಾದ ತುಳಜಪ್ಪ ಸುಲ್ಫಿ, ಬಿ.ಪಿ.ಚಂದ್ರಶೇಖರ ವಿರುದ್ಧ ಉಪನಗರ ಠಾಣೆಯಲ್ಲಿ ಪ್ರಕರಣ ದಾಖಲು.

ಜು. 1: ಆರೋಪಿಗಳಿಗೆ ಜಾಮೀನು ರದ್ದತಿ ಕೋರಿ ಸರ್ಕಾರ ಹೈಕೋರ್ಟ್‌ಗೆ ಸಲ್ಲಿಸಿದ್ದ ಅರ್ಜಿ ವಜಾ.

2019, ಸೆ. 6: ಪ್ರಕರಣವನ್ನು ಸಿಬಿಐಗೆ ವಹಿಸಿದ ರಾಜ್ಯ ಸರ್ಕಾರ. ಪ್ರಕರಣ ಸಿಬಿಐಗೆ ವಹಿಸದಂತೆ ಆರೋಪಿ ಬಸವರಾಜ ಮುತ್ತಗಿ ಮೊರೆ. ತನಿಖೆಗೆ ಹೈಕೋರ್ಟ್ ತಡೆ. 'ಸುಪ್ರೀಂ'ನಿಂದ ತೆರವು.

2020, ಮಾ. 7: ಪ್ರಕರಣಕ್ಕೆ ಸಂಬಂಧಿಸಿದಂತೆ ದಿನೇಶ, ಅಶ್ವತ್ಥ, ಸುನೀಲಕುಮಾರ್, ನಾಜೀರ್ ಅಹ್ಮದ್, ಶಾ ನವಾಜ್, ನೂತನ್ ಮತ್ತು ಹರ್ಷಿತ್ ಬಂಧನ.

ಸೆ. 26: ವಿನಯ ಕುಲಕರ್ಣಿ ಸೋದರ ವಿಜಯ ಕುಲಕರ್ಣಿ ಸೇರಿ ಹಲವರ ವಿಚಾರಣೆ.

ನ. 5: ಸಿಬಿಐ ಅಧಿಕಾರಿಗಳು ವಿನಯ ಕುಲಕರ್ಣಿ ಅವರನ್ನು ಧಾರವಾಡದ ಅವರ ನಿವಾಸದಲ್ಲಿ ಸುದೀರ್ಘ ವಿಚಾರಣೆ ನಡೆಸಿ, ನಂತರ ಬಂಧಿಸಿದರು. ಅವರನ್ನು ಬೆಳಗಾವಿಯ ಹಿಂಡಲಗಾ ಜೈಲಿಗೆ ಕಳುಹಿಸಲಾಯಿತು.

2021, ಫೆಬ್ರುವರಿ 22: ಸಿಬಿಐ ನ್ಯಾಯಾಲಯಕ್ಕೆ ಹೆಚ್ಚುವರಿ ದೋಷಾರೋಪ ಪಟ್ಟಿ ಸಲ್ಲಿಸಿ, ವಿನಯ ಕುಲಕರ್ಣಿ ಅವರನ್ನು 15ನೇ ಆರೋಪಿಯನ್ನಾಗಿ ಹೆಸರಿಸಿತು.

ಆಗಸ್ಟ್ 20: ಸುಪ್ರೀಂ ಕೋರ್ಟ್ ವಿನಯ ಕುಲಕರ್ಣಿ ಅವರಿಗೆ ಷರತ್ತುಬದ್ಧ ಜಾಮೀನು ಮಂಜೂರು.

2024, ಏಪ್ರಿಲ್ 8: ಸೆಷನ್ಸ್ ನ್ಯಾಯಾಲಯ ನಿಗದಿಪಡಿಸಿರುವ ದೋಷಾರೋಪಣೆ ಯಲ್ಲಿ ದೋಷಗಳಿವೆ' ಎಂದು ಆಕ್ಷೇಪಿಸಿ ವಿನಯ ಕುಲಕರ್ಣಿ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ವಜಾಗೊಳಿಸಿದ ಹೈಕೋರ್ಟ್.

ಮೇ 7: ಧಾರವಾಡ ಪ್ರವೇಶಕ್ಕೆ ಹೈಕೋರ್ಟ್ ಅನುಮತಿ ಪಡೆದು ಶಾಸಕ ವಿನಯ ಕುಲಕರ್ಣಿ ತಮ್ಮ ಧಾರವಾಡಕ್ಕೆ ಬಂದು ಮತ ಚಲಾಯಿಸಿದರು.

2025, ಜೂನ್ 6: ಸಾಕ್ಷ್ಯ ನಾಶ ಮತ್ತು ಸಾಕ್ಷಿಗಳ ಮೇಲೆ ಪ್ರಭಾವ ಬೀರಲು ಪ್ರಯತ್ನಿಸುತ್ತಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ವಿನಯ ಕುಲಕರ್ಣಿ ಅವರಿಗೆ ನೀಡಿದ್ದ ಜಾಮೀನು ರದ್ದು.

ಜೂನ್ 13: ಸುಪ್ರೀಂ ಕೋರ್ಟ್ ಶರಣಾಗಲು ನೀಡಿದ್ದ ಸಮಯಾವಕಾಶ ವಿಸ್ತರಿಸಲು ನಿರಾಕರಿಸಿದ ನಂತರ, ವಿನಯ ಕುಲಕರ್ಣಿ ಅವರು ನ್ಯಾಯಾಲಯಕ್ಕೆ ಶರಣಾಗಿ ಮತ್ತೆ ನ್ಯಾಯಾಂಗ ಬಂಧನಕ್ಕೆ ಒಳಗಾದರು.

2026, ಏ.2: ಯೋಗೇಶ್‌ಗೌಡ ಗೌಡರ್ ಕೊಲೆ ಪ್ರಕರಣದ ವಿಚಾರಣೆಯನ್ನು

ಜನಪ್ರತಿನಿಧಿಗಳ ವಿಶೇಷ ಸೆಷನ್ಸ್ ನ್ಯಾಯಾಲಯ ಪೂರ್ಣಗೊಳಿಸಿತು.

ಏ.15: ತೀರ್ಪು ಪ್ರಕಟ

## ಇನ್ಸ್‌ಪೆಕ್ಟರ್ ಚನ್ನಕೇಶವ ಟಿಂಗರೀಕರ್‌ಗೆ 7 ವರ್ಷ ಜೈಲು ಶಿಕ್ಷೆ



17ನೇ ಆರೋಪಿ ಇನ್ಸ್‌ಪೆಕ್ಟರ್ ಚನ್ನಕೇಶವ ಟಿಂಗರೀಕರ್‌ಗೆ ಏಳು ವರ್ಷ ಕಾರಾಗೃಹ ಶಿಕ್ಷೆಯನ್ನು ನ್ಯಾಯಾಧೀಶರು ಪ್ರಕಟಿಸಿದರು. ಕೊಲೆ ನಡೆದಾಗ ಟಿಂಗರೀಕರ್ ಧಾರವಾಡ ಉಪನಗರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಆಗಿದ್ದರು.

# ಲೋಕಸಭೆ: ಮಹಿಳಾ ಮೀಸಲಾತಿ ತಿದ್ದುಪಡಿ ಮಸೂದೆಗೆ ಸೋಲು




ನವದೆಹಲಿ: ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ತಿದ್ದುಪಡಿ ಮಸೂದೆಗೆ ಸೋಲಾಗಿದೆ. ಮಹಿಳಾ ಮಿಸಲಾತಿ ಕಾಯ್ದೆಗೆ 131ನೇ ಸಂವಿಧಾನ ತಿದ್ದುಪಡಿ ತರುವ ಮೂಲಕ ಶಾಸನಸಭೆಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಕಲ್ಪಿಸಲು ಸರ್ಕಾರ ಮುಂದಾಗಿತ್ತು.

ಆದರೆ, ಮೂರನೇ ಎರಡರಷ್ಟು ಬಹುಮತ ಸಿಗದೆ ಮಸೂದೆಗೆ ಸೋಲಾಗಿದೆ. 489 ಸಂಸದರು ಮತದಾನದಲ್ಲಿ ಭಾಗವಹಿಸಿದ್ದರು. ಹಾಗಾಗಿ, ಮಸೂದೆ ಅಂಗೀಕರಿಸಲು ಸರ್ಕಾರಕ್ಕೆ 328 ಮತಗಳ ಅವಶ್ಯಕತೆ ಇತ್ತು. ಮಸೂದೆ ಪರ 298 ಮತಗಳು ಬಿದ್ದಿದ್ದು, ವಿರುದ್ಧ 230 ಮತಗಳು ಬಿದ್ದಿವೆ. ಸಂವಿಧಾನ ತಿದ್ದುಪಡಿ ಮಸೂದೆಯಾಗಿರುವುದರಿಂದ ಮೂರನೇ ಎರಡರಷ್ಟು ಬಹುಮತ ಅತ್ಯಗತ್ಯವಾಗಿತ್ತು.

ಸದನದಲ್ಲಿ ಹಾಜರಿದ್ದ ಒಟ್ಟು ಸದಸ್ಯರು ಮತ್ತು ಚಲಾವಣೆಯಾದ ಮತಗಳ ಪೈಕಿ ಕನಿಷ್ಠ ಮೂರನೇ ಎರಡರಷ್ಟು ಬಹುಮತವನ್ನು ಪಡೆಯದ ಕಾರಣ ಈ ನಿರ್ಣಯವನ್ನು ಅಂಗೀಕರಿಸಲಾಗಿಲ್ಲ. ಆದ್ದರಿಂದ, ಈ ಸಾಂವಿಧಾನಿಕ ತಿದ್ದುಪಡಿ ಮಸೂದೆಗೆ ಸೋಲಾಗಿದೆ ಎಂದು ಸ್ಪೀಕರ್ ಓಂ ಬಿರ್ಲಾ ಘೋಷಿಸಿದರು.

ಸಂವಿಧಾನ ತಿದ್ದುಪಡಿ ಮಸೂದೆಗೆ ಸೋಲಾಗಿರುವುದರಿಂದ ಸರ್ಕಾರವು ಕ್ಷೇತ್ರ ಪುನರ್ವಿಂಗಡಣೆ ಮಸೂದೆ ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮಹಿಳಾ ಕೋಟಾ ತಿದ್ದುಪಡಿ ಮಾಡುವ ಮತ್ತೊಂದು ಮಸೂದೆಯನ್ನು ಮುಂದುವರಿಸುವುದಿಲ್ಲ ಎಂದು ವರದಿ ತಿಳಿಸಿದೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಕೇಂದ್ರ ಸಚಿವ ಕಿರಣ್ ರಿಜಿಜು, ವಿರೋಧ ಪಕ್ಷವು ಮಹಿಳೆಯರನ್ನು ಗೌರವಿಸುವ ಐತಿಹಾಸಿಕ ಅವಕಾಶವನ್ನು ಕಳೆದುಕೊಂಡಿದೆ ಎಂದರು. ಮಹಿಳೆಯರಿಗೆ ಹಕ್ಕುಗಳನ್ನು ನೀಡುವ ಮೋದಿ ಸರ್ಕಾರದ ಹೋರಾಟ ಮುಂದುವರಿಯುತ್ತದೆ ಎಂದು ಹೇಳಿದರು.

ನಾವು ಸಂವಿಧಾನದ ಮೇಲಿನ ಈ ದಾಳಿಯನ್ನು ಸೋಲಿಸಿದ್ದೇವೆ ಎಣದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದ್ದು, ಇದು ಮಹಿಳಾ ಮೀಸಲಾತಿ ಮಸೂದೆ ಆಗಿರಲಿಲ. ಬದಲಾಗಿ ಭಾರತದ ರಾಜಕೀಯ ರಚನೆಯನ್ನು ಬದಲಾಯಿಸುವ ಒಂದು ಮಾರ್ಗ ಎಂದು ನಾವು ಸ್ಪಷ್ಟವಾಗಿ ಹೇಳಿದ್ದೇವು. ನಿಜವಾಗಿಯೂ ಮಹಿಳಾ ಮೀಸಲಾತಿ ಜಾರಿಗೆ ಬಯಸಿದರೆ, 2023ರ ಕಾನೂನನ್ನು ಕೂಡಲೇ ತರಬೇಕು. ಇಡೀ ವಿರೋಧ ಪಕ್ಷವು ಅದನ್ನು ಬೆಂಬಲಿಸುತ್ತದೆ ಎಂದು ನಾನು ಪ್ರಧಾನಿಗೆ ಹೇಳಲು ಬಯಸುತ್ತೇನೆ ಎಂದಿದ್ದಾರೆ.

## ರಾಜಕಾರಣಿಯ ಮಾತು ಕೇಳಿ ಕೊಲೆ ಮಾಡಿದರೆ ಏನಾಗುತ್ತದೆ ಎಂಬುದು ಸಾಬೀತಾಗಿದೆ: ಅಶೋಕ್



ಮಂಡ್ಯ: 'ಧಾರವಾಡದ ಯೋಗೇಶ್‌ಗೌಡ ಗೌಡರ್ ಕೊಲೆ ಪ್ರಕರಣವನ್ನು ಕಾಂಗ್ರೆಸ್ನವರು ಮುಚ್ಚಿಹಾಕಲು ಯತ್ನಿಸಿದ್ದರು. ಸಿಬಿಐಗೆ ಕೊಟ್ಟ ಮೇಲೆ ಸತ್ಯ ಬಹಿರಂಗ ಆಗಿದೆ. ಶಾಸಕ ವಿನಯ ಕುಲಕರ್ಣಿಗೆ ಶಿಕ್ಷೆಯಾಗಿದೆ. ರಾಜಕೀಯ ಕೊಲೆಗೆ ತಿಲಾಂಜಲಿ ಹಾಡಬೇಕು' ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹೇಳಿದರು.

ಶುಕ್ರವಾರ ಮಾಧ್ಯಮದವರೊಂದಿಗೆ ಮಾತನಾಡಿ, 'ರಾಜಕಾರಣಿಯ ಮಾತು ಕೇಳಿ ಕೊಲೆ ಮಾಡಿದರೆ ಏನಾಗುತ್ತದೆ ಎಂಬುದು ಯೋಗೇಶ್ಗೌಡ ಕೊಲೆ ಪ್ರಕರಣದಲ್ಲಿ ಸಾಬೀತಾಗಿದೆ ಎಂದರು.


'ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಎನ್ಡಿಎ ಸರ್ಕಾರ ಮಹಿಳಾ ಮೀಸಲಾತಿ ಕಾಯ್ದೆ ಜಾರಿಗೊಳಿಸುವ ಮೂಲಕ ಚರಿತ್ರೆ ನಿರ್ಮಿಸಿದೆ. ಆದರೆ ಕಾಂಗ್ರೆಸ್ನವರು ಮೊಸರಲ್ಲಿ ಕಲ್ಲು ಹುಡುಕುವ ಪ್ರಯತ್ನ ಮಾಡುತ್ತಿದ್ದಾರೆ. ಧರ್ಮಾಧಾರಿತವಾಗಿಯೂ ಕ್ಯಾತೆ ತೆಗೆಯುತ್ತಿದ್ದಾರೆ' ಎಂದು ಟೀಕಿಸಿದರು.

'ಕ್ಷೇತ್ರ ಮರು ವಿಂಗಡಣೆಯಿಂದ ದಕ್ಷಿಣ ರಾಜ್ಯಗಳಿಗೆ ಯಾವುದೇ ಅನ್ಯಾಯವಾಗಲ್ಲ. ತಮಿಳುನಾಡು ಸಿಎಂ ಸ್ಟಾಲಿನ್ಗೆ ಬುದ್ಧಿ ಇಲ್ಲ. ಮೋದಿ ಅವರು ಮೂರನೇ ಬಾರಿ ಗೆದ್ದಿದ್ದಾರೆ. ನಾಲ್ಕನೇ ಬಾರಿಯೂ ಗೆದ್ದರೆ ಟೆಂಟ್ ಕಟ್ಟಿಕೊಂಡು ಹೋಗಬೇಕಾಗುತ್ತದೆ ಎಂಬ ಭಯ ಅವರಿಗೆ ಶುರುವಾಗಿದೆ ಎಂದು ವ್ಯಂಗ್ಯವಾಡಿದರು.

'ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಸತ್ತು ಹೋಗಿದೆ. ಶಾಸಕರು ದೆಹಲಿಗೆ ಹೋಗುತ್ತಿದ್ದಾರೆ. ಒಂದೆಡೆ ಡಿ.ಕೆ. ಶಿವಕುಮಾರ್ ಸಿಎಂ ಆಗಲು ಹೊರಟಿದ್ದಾರೆ. ಆದರೆ ಸಿದ್ದರಾಮಯ್ಯ ಸಿಎಂ ಕುರ್ಚಿ ಬಿಡುತ್ತಿಲ್ಲ. ಇದೀಗ ಅವರವರ ಮಕ್ಕಳು ಅಪ್ಪಂದಿರೇ ಮುಖ್ಯಮಂತ್ರಿ ಆಗಬೇಕು ಎಂದು ಹೇಳುತ್ತಿದ್ದಾರೆ. ಸಿದ್ದರಾಮಯ್ಯ ಅವರು ರಾಜ್ಯವನ್ನು ಸಾಲದ ಕೂಪಕ್ಕೆ ಕೊಂಡೊಯ್ಯುತ್ತಿದ್ದಾರೆ' ಎಂದು ವ್ಯಂಗ್ಯವಾಡಿದರು.

'ಎಚ್.ಡಿ.ದೇವೇಗೌಡ ಅವರನ್ನು ಮತ್ತೆ ರಾಜ್ಯಸಭೆಗೆ ಆಯ್ಕೆ ಮಾಡುವ ವಿಚಾರವನ್ನು ರಾಷ್ಟ್ರೀಯ ನಾಯಕರು ತೀರ್ಮಾನ ಮಾಡುತ್ತಾರೆ. ಇದರಲ್ಲಿ ನಮ್ಮ ಹಸ್ತಕ್ಷೇಪ ಏನೂ ಇರುವುದಿಲ್ಲ' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

# ಸತ್ಯಕ್ಕೆ ಸಾವಿಲ್ಲ, ಇದು ಇಡೀ ಸಮಾಜಕ್ಕೆ ಸಿಕ್ಕ ಜಯ: ಸಿಬಿಐ ಪರ ವಕೀಲರ ನುಡಿ



ಬೆಂಗಳೂರು: 2016ರಲ್ಲಿ ಧಾರವಾಡದಲ್ಲಿ ನಡೆದ ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ವಿಧಿಸಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಆದೇಶಕ್ಕೆ ಸಿಬಿಐ ಪರ ವಕೀಲರು ಸಂತಸ ವ್ಯಕ್ತಪಡಿಸಿದ್ದಾರೆ.

ತೀರ್ಪಿನ ಬಳಿಕ ಸಿಟಿ ಸಿವಿಲ್ ನ್ಯಾಯಾಲಯದ ಮುಂದೆ ಸುದ್ದಿಗಾರರೊಂದಿಗೆ ಮಾತನಾಡಿದ ವಕೀಲರಾದ ಹೇಮಾ ಅವರು, "ಸತ್ಯಕ್ಕೆ ಸಾವಿಲ್ಲ. ಇದು ಇಡೀ ಸಮಾಜಕ್ಕೆ ಸಿಕ್ಕ ಜಯ" ಎಂದರು.

"ಪ್ರಕರಣದ ತನಿಖೆ ನಡೆಸಿದ್ದ ರಾಜ್ಯ ಪೊಲೀಸರು, ಪ್ರಮುಖ ಆರೋಪಿಗಳ ಹೆಸರುಗಳನ್ನು ಕೈಬಿಟ್ಟು ಇತರರ ವಿರುದ್ಧ ಆರೋಪಪಟ್ಟಿ ಸಲ್ಲಿಸಿದ್ದರು. ಬಳಿಕ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಿದ್ದು, ಸಿಬಿಐ ಅಧಿಕಾರಿಗಳು ಎಲ್ಲ ಕೋನಗಳಲ್ಲೂ ತನಿಖೆ ನಡೆಸಿದ್ದರು. ಎಲ್ಲ ಆರೋಪಿಗಳ ವಿರುದ್ಧ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ಆರೋಪ ಪಟ್ಟಿ ಸಲ್ಲಿಸಿದ್ದರು. ಇದನ್ನು ಪರಿಗಣಿಸಿದ ವಿಶೇಷ ನ್ಯಾಯಾಲಯ, ಅಪರಾಧಿಗಳಿಗೆ ಈ ಶಿಕ್ಷೆ ವಿಧಿಸಿದೆ" ಎಂದು ತಿಳಿಸಿದರು.

"ನಮ್ಮ ಸಿಬಿಐ ತಂಡದ ಶ್ರಮದಿಂದ ಇಂದು ಸಂತ್ರಸ್ತರಿಗೆ ನ್ಯಾಯ ಸಿಕ್ಕಿದೆ. ಇದು ಕೇವಲ ತನಿಖಾಧಿಕಾರಿಗಳ ಗೆಲುವಲ್ಲ, ಸಮಾಜಕ್ಕೆ ಸಿಕ್ಕ ಗೆಲುವು" ಎಂದು ಅವರು ಬಣ್ಣಿಸಿದರು.

"ಪ್ರಕರಣದಲ್ಲಿ ಇತರೆ ಸಾಕ್ಷಿಗಳಿಗೆ ಬೆದರಿಕೆ ಹಾಕಲಾಗಿತ್ತು. ನ್ಯಾಯಾಲಯದಲ್ಲಿ ಸಾಕ್ಷ್ಯ ನುಡಿಯದಂತೆ ಮತ್ತು ಕೋರ್ಟ್‌ಗೆ ಹಾಜರಾಗದಂತೆ ತಡೆಯಲಾಗಿತ್ತು. ಅಂತಹ ಎಲ್ಲ ಸಾಕ್ಷಿಗಳಿಗೂ ಸಿಬಿಐ ಅಧಿಕಾರಿಗಳು ರಕ್ಷಣೆ ನೀಡಿ ಅವರಲ್ಲಿ ಭರವಸೆ ಮೂಡಿಸಿದ್ದರು. ಇದೇ ಕಾರಣದಿಂದ ಪ್ರಕರಣ ಸಂಬಂಧ ಎಲ್ಲ ಸಾಕ್ಷಿಗಳನ್ನು ನ್ಯಾಯಾಲಯ ಪರಿಗಣಿಸಿ ತಪ್ಪಿತಸ್ಥರಿಗೆ ಜೀವಾವಧಿ ಶಿಕ್ಷೆ ನೀಡಿ ಆದೇಶಿಸಿದೆ" ಎಂದರು.

ಮತ್ತೊಬ್ಬ ಸಿಬಿಐ ಪರ ವಕೀಲ ಶಿವಾನಂದ ಪೆರ್ಲಾ ಅವರು ಮಾತನಾಡಿ, "ಇದೊಂದು ಐತಿಹಾಸಿಕ ತೀರ್ಪು" ಎಂದು ಬಣ್ಣಿಸಿದ್ದಾರೆ.

ಪ್ರಕರಣ ಸಂಬಂಧ ಪ್ರತ್ಯಕ್ಷ ಸಾಕ್ಷಿಗಳ ಹೇಳಿಕೆಗಳು, ಸಿಸಿಟಿವಿ ಫೋಟೋಸ್‌ಗಳು, ಫೋನ್ ಟವರ್ ಲೋಕೇಶನ್ ಮತ್ತು ಸಿಡಿಆರ್‌ಗಳನ್ನು ಪರಿಶೀಲಿಸಿದ್ದು, ಅವುಗಳು ಶಿಕ್ಷೆ ಆಗುವುದಕ್ಕೆ ಸಹಕಾರಿಯಾಗಿವೆ. ಮೊದಲು ಧಾರವಾಡ ಪೊಲೀಸರು ಕೇವಲ ಐದು ಜನರ ಮೇಲೆ ಮಾತ್ರ ಚಾರ್ಜ್‌ಶೀಟ್ ಹಾಕಿದ್ದರು. ಆದರೆ ಸಿಬಿಐ ತನಿಖೆ ಕೈಗೆತ್ತಿಕೊಂಡ ನಂತರ ವಿನಯ್ ಕುಲಕರ್ಣಿ ಅವರ ರಾಜಕೀಯ ದ್ವೇಷವೇ ಕೊಲೆಗೆ ಕಾರಣ ಎಂದು ಪತ್ತೆಹಚ್ಚಿ, ಒಟ್ಟು 21 ಜನರ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಿತ್ತು. ಪ್ರಕರಣದ ಪ್ರಮುಖ ಆರೋಪಿ ವಿನಯ್ ಕುಲಕರ್ಣಿ ಅವರು ಇತರೆ ಆರೋಪಿಗಳ ಜೊತೆ ನಿರಂತರವಾಗಿ ಮಾತನಾಡಿದ್ದು, ಜೊತೆಗೆ ಹಣ ಪಾವತಿಸಿದ್ದ ಅಂಶ ಗೊತ್ತಾಗಿತ್ತು. ಈ ಎಲ್ಲ ಅಂಶಗಳು ತನಿಖೆಗೆ ಸಹಕಾರಿಯಾದವು" ಎಂದು ವಿವರಿಸಿದರು.

"ಈ ಪ್ರಕರಣದಲ್ಲಿ ತಪ್ಪಿತಸ್ಥರಿಗೆ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ. ಆದರೆ, ಜೀವಾವಧಿ ಶಿಕ್ಷೆಗೊಳಗಾದವರು 14 ವರ್ಷದ ಬಳಿಕ ಶಿಕ್ಷೆಯಿಂದ ಮುಕ್ತರಾಗುತ್ತಾರೆ ಎಂದು ಅರ್ಥವಲ್ಲ. ಬದಲಿಗೆ ಜೀವ ಇರುವವರೆಗೂ ಶಿಕ್ಷೆ ಅನುಭವಿಸಬೇಕು. ಆದರೆ, 14 ವರ್ಷದ ಬಳಿಕ ಸರ್ಕಾರಕ್ಕೆ ಬಿಡುಗಡೆಗೆ ಸಂಬಂಧಿಸಿದಂತೆ ನಿರ್ಧಾರ ಕೈಗೊಳ್ಳಲು ಅವಕಾಶ ಇರಲಿದೆ" ಎಂದು ತಿಳಿಸಿದರು.

ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ಶಾಸಕ ವಿನಯ್ ಕುಲಕರ್ಣಿ ಸೇರಿದಂತೆ 16 ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ವಿಧಿಸಿ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಇಂದು ಐತಿಹಾಸಿಕ ತೀರ್ಪು ನೀಡಿದೆ.

## ಅಪರಾಧಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿಯ ಮುಂದಿನ ದಾರಿ ಏನು?

ಬೆಂಗಳೂರು: ಧಾರವಾಡದ ಜಿಪಂ ಮಾಜಿ ಸದಸ್ಯ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿಗೆ ಜನಪ್ರತಿನಿಧಿ ಗಳ ವಿಶೇಷ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ.

ಪ್ರಕರಣದಲ್ಲಿನ 17 ಆರೋಪಿಗಳನ್ನು 'ಅಪರಾಧಿಗಳು' ಎಂದು ಬುಧವಾರ ನಿರ್ಣಯಿಸಿದ್ದ, 'ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆ'ಯ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ ಗಜಾನನ ಭಟ್ ಅವರು, ಶುಕ್ರವಾರ ಶಿಕ್ಷೆಯ ಪ್ರಮಾಣ ನಿರ್ಧರಿಸಿ ಘೋಷಿಸಿದರು.

ಶಿಕ್ಷೆಯ ಪ್ರಮಾಣ ನಿರ್ಧರಿಸುವ ಕುರಿತು ಗುರುವಾರ ನಡೆದ ವಿಚಾರಣೆಯಲ್ಲಿ ಕಾನೂನಿನ ತತ್ವಗಳಿಗೆ ಅನುಗುಣವಾಗಿ ಗರಿಷ್ಠ ಶಿಕ್ಷೆಗೆ ವಿನಾಯ್ತಿ ಕೋರುವ ಅಪರಾಧಿಗಳ ಮನವಿಯನ್ನು ನ್ಯಾಯಾಧೀಶರು ಆಲಿಸಿದ್ದರು.

ಅದರಂತೆ ಶುಕ್ರವಾರ ನ್ಯಾಯಾಲಯದಲ್ಲಿ ಎಲ್ಲಾ ಅಪರಾಧಿಗಳನ್ನೂ ಪೊಲೀಸರು ಹಾಜರುಪಡಿಸಿದರು. ಮಧ್ಯಾಹ್ನ ಶಿಕ್ಷೆಯ ಪ್ರಮಾಣವನ್ನು ಪ್ರಕಟಿಸಲಾಯಿತು.

ಇದರಿಂದಾಗಿ ಅವರು ಶಾಸಕ ಸ್ಥಾನವನ್ನು ಕಳೆದುಕೊಂಡಿದ್ದಾರೆ. ಹೌದು. ಬುಧವಾರ ಶಾಸಕರು ಸೇರಿದಂತೆ 16 ಮಂದಿಯನ್ನು ದೋಷಿ ಎಂದು ತೀರ್ಪು ಪ್ರಕಟಿಸಿದ್ದ ಕೋರ್ಟ್ ಇಂದು ಶಿಕ್ಷೆಯ ಪ್ರಮಾಣ ಪ್ರಕಟಿಸಿದೆ. ಜೀವವಾಧಿ ಶಿಕ್ಷೆಯ ಕೋರ್ಟ್ ಆದೇಶದಿಂದಾಗಿ ಜನಪ್ರತಿನಿಧಿಗಳ ಕಾಯ್ದೆಯ ಸೆಕ್ಷನ್ 8(4) ರ ಪ್ರಕಾರ ತಕ್ಷಣದಿಂದಲೇ ವಿನಯ್ ಕುಲಕರ್ಣಿ ಅವರ ಶಾಸಕ ಸ್ಥಾನ ರದ್ದಾಗಿದೆ.

ಜನಪ್ರತಿನಿಧಿ ಕಾಯ್ದೆ, 1951 ರ ಪ್ರಕಾರ ಕೊಲೆ ಕೇಸ್‌ನಲ್ಲಿ ಶಾಸಕರೊಬ್ಬರು ದೋಷಿ ಎಂದು ಸಾಬೀತಾಗಿ, ಶಿಕ್ಷೆ ಜಾರಿಯಾದ ನಂತರ ಅವರ ಶಾಸಕ ಸ್ಥಾನ ಅಧಿಕೃತವಾಗಿ ರದ್ದಾಗುತ್ತದೆ.

ಯಾವುದೇ ಶಾಸಕ ಅಥವಾ ಸಂಸದರು ಕ್ರಿಮಿನಲ್ ಪ್ರಕರಣದಲ್ಲಿ ದೋಷಿ ಎಂದು ಸಾಬೀತಾಗಿ, ಅವರಿಗೆ ನ್ಯಾಯಾಲಯವು ಕನಿಷ್ಠ 2 ವರ್ಷ ಅಥವಾ ಅದಕ್ಕಿಂತ ಹೆಚ್ಚು ಅವಧಿಯ ಜೈಲು ಶಿಕ್ಷೆ ವಿಧಿಸಿದರೆ, ಅವರು ತಕ್ಷಣವೇ ತಮ್ಮ ಸ್ಥಾನದಿಂದ ಅನರ್ಹಗೊಳ್ಳುತ್ತಾರೆ.

ಕೊಲೆ ಪ್ರಕರಣಗಳಲ್ಲಿ (ಐಪಿಸಿ ಸೆಕ್ಷನ್ 302 ಅಥವಾ ಬಿಎನ್‌ಎಸ್ ಸೆಕ್ಷನ್ 103) ಅಪರಾಧ ಸಾಬೀತಾದರೆ ಕನಿಷ್ಠ ಶಿಕ್ಷೆ ಜೀವಾವಧಿ ಕಾರಾಗೃಹ ವಾಸ ಅಥವಾ ಗರಿಷ್ಠ ಮರಣದಂಡನೆ ಆಗಿರುತ್ತದೆ. ಇದು 2 ವರ್ಷಗಳಿಗಿಂತ ಬಹಳ ಹೆಚ್ಚಿರುವುದರಿಂದ, ಕೊಲೆ ಪ್ರಕರಣದಲ್ಲಿ ದೋಷಿಯಾದ ತಕ್ಷಣ ಶಾಸಕ ಸ್ಥಾನ ರದ್ದಾಗುತ್ತದೆ.

ಕೇವಲ ಶಾಸಕ ಸ್ಥಾನ ರದ್ದಾಗು ವುದು ಮಾತ್ರವಲ್ಲ, ಅವರು ಜೈಲು ಶಿಕ್ಷೆ ಅನುಭವಿಸಿ ಬಿಡುಗಡೆಯಾದ ದಿನದಿಂದ ಮುಂದಿನ 6 ವರ್ಷಗಳ ಕಾಲ ಯಾವುದೇ ಚುನಾವಣೆಗೆ ಸ್ಪರ್ಧಿಸುವಂತಿಲ್ಲ.

ಜನಪ್ರತಿನಿಧಿ ನ್ಯಾಯಾಲಯವು ಶಿಕ್ಷೆ ಪ್ರಕಟಿಸಿದ ತಕ್ಷಣವೇ ಶಾಸಕರು ಹೈಕೋರ್ಟ್ ಅಥವಾ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬಹುದು. ಮೇಲಿನ ನ್ಯಾಯಾಲಯವು ಕೇವಲ ಅವರ ಜೈಲು ಶಿಕ್ಷೆಯ ಮೇಲಷ್ಟೇ ಅಲ್ಲದೇ, ಅವರ ಮೇಲಿನ ಅಪರಾಧ ನಿರ್ಣಯದ ಮೇಲೂ ತಡೆಯಾಜ್ಞೆನೀಡಿದರೆ ಮಾತ್ರ ಅವರ ಶಾಸಕ ಸ್ಥಾನ ಮರಳಿ ಸಿಗುತ್ತದೆ. ಕೇವಲ ಜಾಮೀನು ಸಿಕ್ಕರೆ ಸ್ಥಾನ ಉಳಿಯುವುದಿಲ್ಲ.

# ಲೋಕಸಭೆ: ಕಾಂಗ್ರೆಸ್, ಡಿಎಂಕೆ ಮೇಲೆ ಹೆಚ್.ಡಿ. ಕುಮಾರಸ್ವಾಮಿ ತೀವ್ರ ವಾಗ್ದಾಳಿ

ನವದೆಹಲಿ : ಲೋಕಸಭೆ ಮತ್ತು ವಿಧಾಸಭೆಗಳಲ್ಲಿ ಮಹಿಳೆಯರಿಗೆ 33% ಮೀಸಲಾತಿ ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಇರಿಸಿರುವ ಹೆಜ್ಜೆ ಐತಿಹಾಸಿಕ ಎಂದು ಬಣ್ಣಿಸಿದ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು; ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಹಾಗೂ ಡಿಎಂಕೆ ಪಕ್ಷಗಳ ವಾದಗಳು ಭಯ ಹುಟ್ಟಿಸುವ ರೀತಿಯಲ್ಲಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಲೋಕಸಭೆಯಲ್ಲಿ ಶುಕ್ರವಾರ ಮಹಿಳಾ ಮೀಸಲು ಮಸೂದೆಯನ್ನು ಬೆಂಬಲಿಸಿ ಮಾತನಾಡಿದ ಕೇಂದ್ರ ಸಚಿವರು; ಮಹಿಳೆಯರಿಗೆ ಮೀಸಲಾತಿ ನೀಡುವ ನಿಟ್ಟಿನಲ್ಲಿ ಈ ಮಸೂದೆಯು ಭಾರತದ ಪ್ರಜಾಪ್ರಭುತ್ವದ ಪಯಣದಲ್ಲಿ ಕ್ರಾಂತ ಕ್ರಾಂತಿಕಾರಕ ಹೆಜ್ಜೆಯಾಗಿದೆ ಎಂದರು.

**ಸುಧಾರಣೆಗಳಿಗೆ ಕಾಂಗ್ರೆಸ್ ಅಡ್ಡಿಯಾಗಿದೆ:**

ಕಾಂಗ್ರೆಸ್ ಪಕ್ಷವು ನಿರಂತರವಾಗಿ ಸುಧಾರಣೆಗಳಿಗೆ ವ್ಯವಸ್ಥಿತವಾಗಿ ತಡೆಯೊಡ್ಡುತ್ತಿದೆ. ಈ ಮಸೂದೆಯನ್ನು ಬೆಂಬಲಿಸುವುದನ್ನು ಬಿಟ್ಟು ಜನರನ್ನು ದಾರಿತಪ್ಪಿಸುವ ಸಂಕಥನಗಳನ್ನು ಸೃಷ್ಟಿಸುತ್ತಿದೆ. ಕಾಂಗ್ರೆಸ್ ಸೃಷ್ಟಿಸುತ್ತಿರುವ ಗೊಂದಲಗಳಿಗೆ ಅರ್ಥವಿಲ್ಲ, ಅವುಗಳನ್ನು ಜನರು ನಂಬುವುದಿಲ್ಲ ಹಾಗೂ ಸಂಕುಚಿತ ಸಂಕಥನಗಳ ಕಾಂಗ್ರೆಸ್ ವಾದವು ರಾಷ್ಟ್ರದ ವಿಶಾಲ ತಳಹದಿಯ ಭಾವನೆಯನ್ನು ಪ್ರತಿಬಿಂಬಿಸುವುದಿಲ್ಲ ಎಂದು ಅವರು ಸ್ಪಷ್ಟ ಮಾತುಗಳಲ್ಲಿ ಹೇಳಿದರು.

**ಎಂ.ಕೆ. ಸ್ಟಾಲಿನ್ ನಿಲುವು ದಕ್ಷಿಣ ಭಾರತದ ಅಭಿಪ್ರಾಯವಲ್ಲ:**

ಮಸೂದೆಯ ಬಗ್ಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರು ತೆಗೆದುಕೊಂಡ ನಿಲುವು ಎಲ್ಲಾ ದಕ್ಷಿಣದ ರಾಜ್ಯಗಳ ಅಭಿಪ್ರಾಯವಲ್ಲ ನೇರ ಮಾತುಗಳಲ್ಲಿ ಹೇಳಿದ ಕೇಂದ್ರ ಸಚಿವರು; ಇಂದು ನಾವು ಯಾವ ಮಸೂದೆಯ ಬಗ್ಗೆ ಚರ್ಚೆ ನಡೆಸುತ್ತಿದ್ದೇವೆಯೋ ಅದನ್ನು ಮುಕ್ತವಾಗಿ ಬೆಂಬಲಿಸಿರುವ ಆಂಧ್ರ ಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರನ್ನು ಶ್ಲಾಘಿಸಿ, ನಾಯ್ಡು ಅವರಿಗೇನು ರಾಷ್ಟ್ರಪ್ರೇಮ ಇಲ್ಲವೇ? ಇಂದು ಪ್ರಶ್ನಿಸಿದರು.

ತಮಿಳುನಾಡಿನಲ್ಲಿ ಅಧಿಕಾರದಲ್ಲಿರುವ ಡಿಎಂಕೆ ಈ ಮಹತ್ವದ ಮಸೂದೆಗಳನ್ನು ತೀವ್ರವಾಗಿ ವಿರೋಧಿಸುತ್ತಿರುವುದು ಮತ್ತು ಅವುಗಳು ದಕ್ಷಿಣದ ರಾಜ್ಯಗಳ ಮೇಲೆ ಭಾರಿ ಪ್ರತಿಕೂಲ ಪರಿಣಾಮ ಬೀರುತ್ತವೆ ಎಂಬ ಕಳವಳವನ್ನು ವ್ಯಕ್ತಪಡಿಸಿದೆ. ಇದು ಸರಿಯಲ್ಲ, ಅನಗತ್ಯವಾಗಿದೆ ಎಂದು ಕೇಂದ್ರ ಸಚಿವರು ಪ್ರತಿಪಾದಿಸಿದರು.

**ಕಿರಿಯ ಸಹೋದರ ಎಂದು ಕುಟುಕಿದ ಸಚಿವರು:**

ಕಾಂಗ್ರೆಸ್ ಮತ್ತು ಡಿಎಂಕೆ ಮೈತ್ರಿಯನ್ನು ಗುರಿಯಾಗಿಸಿಕೊಂಡು ವಾಗ್ದಾಳಿ ನಡೆಸಿದ ಕುಮಾರಸ್ವಾಮಿ ಅವರು; ರಾಹುಲ್ ಗಾಂಧಿ ಅವರು ಕೆಲ ದಿನಗಳ ಹಿಂದೆ, ತಾವು ಸ್ಟಾಲಿನ್ ಅವರ ಕಿರಿಯ ಸಹೋದರ ಎಂದು ಹೇಳಿಕೊಂಡಿದ್ದರು. ಆದರೆ ವಿಧಾನಸಭೆ ಕ್ಷೇತ್ರಗಳ ಹಂಚಿಕೆ ನಂತರ ಹಿರಿಯ ಸಹೋದರ ಕಿರಿಯ ಸಹೋದರನ ಮೇಲೆ ಮುನಿಸಿಕೊಂಡಂತೆ ಕಾಣುತ್ತಿದೆ. ಆದರೂ ಕಿರಿಯ ಸಹೋದರ ಈಗಲೂ ಹಿರಿಯ ಸಹೋದರನಿಂದ ಪ್ರೀತಿಯನ್ನು ನಿರೀಕ್ಷೆ ಮಾಡುತ್ತಿರುವಂತೆ ತೋರುತ್ತಿದೆ ಎಂದು ತರಾಟೆಗೆ ತೆಗೆದುಕೊಂಡರು.

ಮಹಿಳಾ ಮೀಸಲಾತಿ, ಅದರಲ್ಲೂ ಮುಖ್ಯವಾಗಿ ಅನುಪಾತದ ಪ್ರಾತಿನಿಧ್ಯದ ಬಗ್ಗೆ ರಾಹುಲ್ ಗಾಂಧಿ ಅವರ ನಿಲುವಿನಲ್ಲಿ ಸ್ಪಷ್ಟತೆ ಇಲ್ಲ ಎಂದು ಟೀಕಿಸಿದ ಸಚಿವ ಕುಮಾರಸ್ವಾಮಿ ಅವರು; ರಾಹುಲ್.ಗಾಂಧಿ ಅವರು ತಮಿಳುನಾಡು ಬಗ್ಗೆ ನೀಡುತ್ತಿರುವ ಹೇಳಿಕೆಯನ್ನು ಉತ್ತರ ಪ್ರದೇಶ, ಬಿಹಾರ ಅಥವಾ ಮಧ್ಯಪ್ರದೇಶಕ್ಕೆ ಹೋಗಿ ಹೇಳುತ್ತಾರೆಯೇ? ಎಂದು ಖಾರವಾಗಿ ಪ್ರಶ್ನಿಸಿದರು.

ಕ್ಷೇತ್ರ ಮರು ವಿಂಗಡಣೆಯ ಬಗ್ಗೆ ಪ್ರತಿಪಕ್ಷಗಳ ಕಳವಳಕ್ಕೆ ಅರ್ಥವಿಲ್ಲ. ಸರ್ಕಾರವು ಎಲ್ಲಾ ರಾಜ್ಯಗಳಲ್ಲಿ ಸ್ಥಾನಗಳಲ್ಲಿ ಸರಾಸರಿ ಶೇ.50ರಷ್ಟು ಕ್ಷೇತ್ರಗಳನ್ನು ಹೆಚ್ಚಿಸುವ ಏಕರೂಪ ಬದ್ಧತೆಯನ್ನು ಖಚಿತಪಡಿಸಿದೆ. ಯಾವುದೇ ರಾಜ್ಯವು ತನ್ನ ಪ್ರಸ್ತುತ ಪ್ರಾತಿನಿಧ್ಯವನ್ನು ಕಳೆದುಕೊಳ್ಳುವುದಿಲ್ಲ ಹಾಗೂ ಭಾರತವು ತನ್ನ ಅಪಾರ ಜನಸಂಖ್ಯೆಯ ಹೊರತಾಗಿಯೂ ಬ್ರಿಟನ್ ನಂತಹ ದೇಶಕ್ಕಿಂತ ಕಡಿಮೆ ಚುನಾಯಿತ ಪ್ರತಿನಿಧಿಗಳನ್ನು ಹೊಂದಿದೆ. ಹೀಗಾಗಿ ಸಂಸದರ ಸಂಖ್ಯೆಯನ್ನು ಹೆಚ್ಚಿಸುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸ್ವಾತಂತ್ರ್ಯ ಬಂದು 75 ವರ್ಷಗಳ ನಂತರ ಬಹುದೊಡ್ಡ ಪರಿವರ್ತನಾತ್ಮಕ ಸುಧಾರಣೆಗೆ ಪ್ರಧಾನಿಗಳು ನಾಂದಿ ಹಾಡಿದ್ದಾರೆ ಎಂದ ಸಚಿವರು; ಪ್ರಧಾನಿಗಳ ನೇತೃತ್ವದಲ್ಲಿ ಭಾರತವು ದೃಢವಾದ ಮತ್ತು ಅರ್ಥಪೂರ್ಣ ಪರಿವರ್ತನೆಯತ್ತ ಸಾಗುತ್ತಿದೆ. ಇಡೀ ಜಗತ್ತು ಯುದ್ಧಗಳಿಂದ ತಲ್ಲಣಿಸುತ್ತಿದ್ದರೆ ಭಾರತ ಮಾತ್ರ ಸುಧಾರಣೆಗಳತ್ತ ದೃಢ ಸಂಕಲ್ಪದಿಂದ ಹೊರಳಿದೆ ಎಂದು ಒತ್ತಿ ಹೇಳಿದರು.

ಲೋಕಸಭೆಯ ಸಂಖ್ಯಾಬಲ ಹೆಚ್ಚಿಸುವ ಕೇಂದ್ರದ ನಿರ್ಧಾರವು ವಿಧಾನಸಭೆಗಳು ಮತ್ತು ಲೋಕಸಭೆಯಲ್ಲಿ ಮಹಿಳೆಯರ ಹೆಚ್ಚಿನ ಭಾಗವಹಿಸುವಿಕೆಯನ್ನು ಸಕ್ರಿಯಗೊಳಿಸುತ್ತದೆ ಮತ್ತು ಪ್ರಜಾಪ್ರಭುತ್ವವನ್ನು ಬಲಪಡಿಸುವ ಕ್ರಾಂತಿಕಾರಕ ಹೆಜ್ಜೆಯಾಗಿದೆ. ಈ ಕ್ರಮವು ಮಹಿಳೆಯರಿಗೆ ಮಾಡುವ ಉಪಕಾರವಲ್ಲ, ಬದಲಾಗಿ ಸಮಾಜಕ್ಕೆ ಅವರು ನೀಡಿದ ಕೊಡುಗೆಯನ್ನು ಗುರುತಿಸಿ ಮನ್ನಣೆ ನೀಡುವುದೇ ಆಗಿದೆ ಎಂದು ಅವರು ಹೇಳಿದರು ಹಾಗೂ ಮಹಿಳೆಯರು ಶಕ್ತಿ ಸ್ವರೂಪರು, ರಾಷ್ಟ್ರ ನಿರ್ಮಾಣದ ಕೇಂದ್ರಬಿಂದುವಾಗಿದ್ದಾರೆ ಎಂದು ಬಣ್ಣಿಸಿದರು.

**ಮಹಿಳಾ ಮೀಸಲು ಕನಸು ಕಂಡಿದ್ದ ದೇವೇಗೌಡರು:**

1995ರಲ್ಲಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಕರ್ನಾಟಕದ ಮುಖ್ಯಮಂತ್ರಿಯಾಗಿದ್ದಾಗ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ನೀಡುವ ಆಶಯವನ್ನು ಪ್ರಪ್ರಥಮ ಬಾರಿಗೆ ಪ್ರಸ್ತಾಪಿಸಿದ್ದರು ಎಂಬುದನ್ನು ಸ್ಮರಿಸಿದ ಸಚಿವರು; ದೇವೇಗೌಡರು ಆ ನಂತರ 1996ರಲ್ಲಿ ಪ್ರಧಾನಿಯಾಗಿ ಸಂಸತ್ತಿನಲ್ಲಿ ಈ ಮಹಿಳಾ ಮೀಸಲು ಮಸೂದೆಯನ್ನು ಮಂಡಿಸಿದರು, ಆದರೆ ರಾಜಕೀಯ ಬೆಂಬಲದ ಕೊರತೆಯಿಂದಾಗಿ ಆ ಸಮಯದಲ್ಲಿ ಅದನ್ನು ಈ ಸದನದಲ್ಲಿ ಅಂಗೀಕರಿಸಲು ಸಾಧ್ಯವಾಗಲಿಲ್ಲ ಎಂದು ಹೇಳಿದರು.

ರಾಷ್ಟ್ರದ ಒಟ್ಟು ಜನಸಂಖ್ಯೆಯಲ್ಲಿ ಅರ್ಧದಷ್ಟು ಇರುವ ಮಹಿಳೆಯರಿಗೆ ಈ ಮೀಸಲಾತಿ ಬಹುದೊಡ್ಡ ಶಕ್ತಿಯನ್ನು ತುಂಬುತ್ತದೆ. ಆತ್ಮನಿರ್ಭರ ಭಾರತದ ಮೂಲಕ ವಿಕಸಿತ ಭಾರತ ಸಾಕಾರಕ್ಕೆ ಪ್ರಧಾನಿಗಳು ಹೇಗೆ ಶ್ರಮಿಸುತ್ತಿದ್ದಾರೆಯೋ ಹಾಗೆಯೇ ಮಹಿಳೆಯರಿಗೆ ಮೀಸಲು ನೀಡಿ ರಾಜಕೀಯವಾಗಿ ಶಕ್ತಿ ನೀಡುವ ಮೂಲಕ *ನಾರೀಭಾರತ* ಸಾಕಾರಕ್ಕೆ ಮುಂದಾಗಿದ್ದಾರೆ ಎಂದು ಸಚಿವ ಕುಮಾರಸ್ವಾಮಿ ಅವರು ಪ್ರತಿಪಾದಿಸಿದರು.

ನಾನು ಕೂಡ ಈ ಐತಿಹಾಸಿಕ ಸಂದರ್ಭಕ್ಕೆ ಭಾಗವಾಗಿರುವುದು ನನಗೆ ಅತೀವ ಸಂತೋಷ ತಂದಿದೆ ಎಂದು ಹೇಳಿದ ಸಚಿವರು; ಈ ಮೀಸಲಾತಿಯನ್ನು ನಾವು ಔದಾರ್ಯವೆಂದು ನೋಡಬಾರದು. ವಾಸ್ತವವಾಗಿ, ಇದು ನಮ್ಮ ಸಮಾಜದಲ್ಲಿ ಮಹಿಳೆಯರ ಶಕ್ತಿ ಮತ್ತು ಕೊಡುಗೆಗೆ ಮನ್ನಣೆ, ಗೌರವ ನೀಡುವುದಾಗಿದೆ. ತಾಯಿಯೇ ಮೊದಲ ಗುರು ಮತ್ತು ಮಹಿಳೆಯೊಬ್ಬರು ಕಲಿತರೆ ಶಾಲೆಯೊಂದನ್ನು ತೆರೆದಂತೆ ಎಂಬ ಮಾತನ್ನು ನಾವೆಲ್ಲರೂ ಕೇಳಿದ್ದೇವೆ. ಶಾಸನಸಭೆಗಳಲ್ಲಿ ಮಹಿಳೆಯರಿಗೆ ಹೆಚ್ಚು ಅವಕಾಶ ನೀಡುವ ಮೂಲಕ ಪ್ರಜಾಪ್ರಭುತ್ವದ ಅಡಿಪಾಯವನ್ನು ಮತ್ತಷ್ಟು ಬಲಪಡಿಸಲಾಗುತ್ತಿದೆ. ಈ ಐತಿಹಾಸಿಕ ದಿನದಂದು ಭಾರತಮಾತೆ ನಮ್ಮೆಲ್ಲರ ಬಗ್ಗೆ ಹೆಮ್ಮೆಪಡುತ್ತಿದ್ದಾಳೆ ಎಂದು ನಾನು ನಂಬಿದ್ದೇನೆ ಎಂದು ಪ್ರತಿಪಾದಿಸಿದರು.

# ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ನೌಕರರ ಪತ್ತಿನ (ಸಾಲ)ಸಹಕಾರ ಸಂಘದ ಉಪಾಧ್ಯಕ್ಷರಾಗಿ ದೇವರಾಜ್ ವಿ.ಆಯ್ಕೆ

**ವಿಷಯ:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ನೌಕರರ ಪತ್ತಿನ(ಸಾಲ) ಸಹಕಾರ ಸಂಘ ನಿ. ಶಾಂತಿನಗರ ನೂತನ ಉಪಾಧ್ಯಕ್ಷರಾಗಿ ಶ್ರೀ ದೇವರಾಜ ವಿ ರವರು ನಡೆದ ಉಪಾಧ್ಯಕ್ಷರ ಚುನಾವಣೆಯಲ್ಲಿ ಆಯ್ಕೆಯಾಗಿರುತ್ತಾರೆ. ಉಪಾಧ್ಯಕ್ಷರಾಗಿ ಪದಗ್ರಹಣ ನೇರವೇರಿತು, ಆಡಳಿತ



ಮಂಡಳಿಯ ಸದಸ್ಯರುಗಳು ಉಪಸ್ಥಿತರಿದದರು.

ಇದೇ ಸಂದರ್ಭದಲ್ಲಿ ದೇವರಾಜ್ ಬಿ.ರವರು ಮಾತನಾಡಿ ಒಬ್ಬರಿಂದ ಒಬ್ಬರಿಗೆ ಸಹಕಾರ ನೀಡಿ ಅಭಿವೃದ್ಧಿಯತ್ತ ಸಾಗವುದು ಸಹಕಾರ ಸಂಘದ ತತ್ವ ಆದರ ಅಡಿಯಲ್ಲಿ ಸಹಕಾರ ಸಂಘ ಕಾರ್ಯನಿರ್ವಹಿಸುತ್ತಿದೆ.

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಸಾವಿರಾರು ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ. ಮನೆ ಕಟ್ಟಲು, ಮಕ್ಕಳ ಉನ್ನತ ವ್ಯಾಸಂಗಕ್ಕೆ ಮತ್ತು ಆರ್ಥಿಕ ಸಂಕಷ್ಟ ಎದುರಾದಗ ತತಕ್ಷಣವೇ ಅವರಿಗೆ ಸಾಲ ಸೌಲಭ್ಯ ಸಿಗಬೇಕು.

ನಮ್ಮ ಸದಸ್ಯರ ಮಕ್ಕಳ ಉನ್ನತ ಶಿಕ್ಷಣದಲ್ಲಿ ಅತಿ ಹೆಚ್ಚು ಅಂಕಗಳಿಸಿದವರಿಗೆ ಹೆಚ್ಚಿನ ಪ್ರೋತ್ಸಾಹ ಸಹಕಾರ ನೀಡಬೇಕು ಇದರಿಂದ ಅವರ ಪ್ರತಿಭೆ ಇನ್ನು ಹೆಚ್ಚು ಹೊರಬರುತ್ತದೆ ಉನ್ನತ ಹುದ್ದೆಗಳಲ್ಲಿ ನೌಕರರ ಮಕ್ಕಳ ಅಲಂಕಾರಿಸಬೇಕು ಇದು ಉತ್ತಮ ಉದ್ದೇಶವಾಗಿದೆ ಈ ನಿಟ್ಟಿನಲ್ಲಿ ಸಹಕಾರ ಸಂಘವು ಸಹಕಾರ ನೀಡಲಿದೆ ಎಂದು ಹೇಳಿದರು.

# ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ತುರ್ತುಗತಿ, ಪ್ರಕ್ರಿಯೆ ಪಾರದರ್ಶಕವಾಗಿಲ್ಲ: ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ/ನವದೆಹಲಿ :** ಮಹಿಳಾ ಮೀಸಲಾತಿ ಮಸೂದೆಯನ್ನು ತುರ್ತುಗತಿಯಲ್ಲಿ, ಸಮಗ್ರ ಚರ್ಚೆ ಮತ್ತು ಸಲಹೆಗಳಿಲ್ಲದೆ ಮುಂದುವರಿಸಲಾಗುತ್ತಿರುವ ಕ್ರಮ ಗಂಭೀರ ಚಿಂತನೆಗೆ ಕಾರಣವಾಗಿದೆ ಎಂದು ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಲೋಕಸಭೆಯಲ್ಲಿ ತಿಳಿಸಿದ್ದಾರೆ.



ನವದೆಹಲಿಯ ಸಂಸತ್ತಿನಲ್ಲಿ ನಡೆಯುತ್ತಿರುವ ಮೂರು ಮಸೂದೆಗಳ ಮಂಡನೆಯ ವಿಶೇಷ ಅಧಿವೇಶನದಲ್ಲಿ ಮಾತನಾಡಿದ ಅವರು "ಮೂರು ಮಸೂದೆಗಳನ್ನು ಮೂರು ದಿನಗಳಲ್ಲಿ ತರಲಾಗಿದೆ. ಯಾವುದೇ ಮುಕ್ತ ಶಾಸನಾತ್ಮಕ ಸಲಹೆ ಇಲ್ಲ, ಎಲ್ಲಾ ಪಕ್ಷಗಳೊಂದಿಗೆ ಚರ್ಚೆ ನಡೆದಿಲ್ಲ. ಚರ್ಚೆಗೆ ಕೆಲವೇ ದಿನಗಳ ಮೊದಲು ಪತ್ಯ ಹಂಚಲಾಗಿದೆ. ಇದು ಸೂಕ್ಷ್ಮ ಆಡಳಿತವಲ್ಲ, ರಾಷ್ಟ್ರೀಯ ಒಪ್ಪಿಗೆಯನ್ನು ಅಗತ್ಯವಿರುವ ವಿಷಯದಲ್ಲಿ ತುರ್ತು ನಿರ್ಧಾರ ಮಾಡುವ ಕ್ರಮವಾಗಿದೆ" ಎಂದು ಹೇಳಿದರು.

ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, "ಮಸೂದೆ ಕುರಿತು ವಿವರಿಸುವ ಮೊದಲು ಎಲ್ಲಾ ಪಕ್ಷಗಳ ಅಭಿಪ್ರಾಯವನ್ನು ಏಕೆ ಕೇಳಲಿಲ್ಲ?" ಎಂದು ಪ್ರಶ್ನಿಸಿದರು. ಪ್ರಜಾಪ್ರಭುತ್ವದಲ್ಲಿ ಸಂವಾದ ಮತ್ತು ಸಹಕಾರ ದೇಶದ ಸಮೃದ್ಧಿಗೆ ಅವಶ್ಯಕ ಎಂದು ಅವರು ಹೇಳಿದರು.

ಮಹಿಳಾ ಮೀಸಲಾತಿ ಕುರಿತು ಕಾಂಗ್ರೆಸ್ ಪಕ್ಷದ ನಿಲುವು ಸ್ಪಷ್ಟವಾಗಿದೆ ಎಂದು ಹೇಳಿದ ಅವರು, "ರಾಜೀವ್ ಗಾಂಧಿ ಅವರ ಕಾಲದಲ್ಲೇ 73ನೇ ಮತ್ತು 74ನೇ ಸಂವಿಧಾನ ತಿದ್ದುಪಡಿಗಳ ಮೂಲಕ ಗ್ರಾಮೀಣ ಮಟ್ಟದಲ್ಲಿ ಮಹಿಳಾ ಪ್ರತಿನಿಧಿತ್ವವನ್ನು ವಿಸ್ತರಿಸಲಾಗಿದೆ. ನಮ್ಮ ಬದ್ಧತೆ ಯಾವತ್ತೂ ಷರತ್ತುಬದ್ಧವಾಗಿರಲಿಲ್ಲ" ಎಂದರು.

ಪ್ರಸ್ತುತ ಮಸೂದೆ ಕುರಿತು ಅವರು ಗಂಭೀರ ಆಕ್ಷೇಪ ವ್ಯಕ್ತಪಡಿಸಿ, "ನಾರಿ ಶಕ್ತಿ" ಎಂಬ ಹೆಸರಿನಲ್ಲಿ "ನಾರಿ ಪ್ರತೀಕ್ಷಾ" ಸೃಷ್ಟಿಯಾಗುವ ಅಪಾಯವಿದೆ. ಜನಗಣತಿ ನವೀಕರಣವಿಲ್ಲದೆ, ವಲಸೆ ಕುರಿತ ಸ್ಪಷ್ಟ ಮಾಹಿತಿಯಿಲ್ಲದೆ, ಮುಂದಿನ ದಶಕಗಳ ರಾಜಕೀಯ ಪ್ರತಿನಿಧಿತ್ವವನ್ನು ಮರು ವಿನ್ಯಾಸಗೊಳಿಸುವುದು ಸೂಕ್ತವಲ್ಲ'' ಎಂದು ಅಭಿಪ್ರಾಯಪಟ್ಟರು.

ಕರ್ನಾಟಕದ ಪರವಾಗಿ ಮಾತನಾಡಿದ ಅವರು, "ಕರ್ನಾಟಕವು ದೇಶದ ಜಿಡಿಪಿಗೆ ಸುಮಾರು 9% ಕೊಡುಗೆ ನೀಡುತ್ತದೆ. ಶಿಕ್ಷಣ, ಆರೋಗ್ಯ ಹಾಗೂ ಜನಸಂಖ್ಯಾ ನಿಯಂತ್ರಣದಲ್ಲಿ ಪ್ರಗತಿ ಸಾಧಿಸಿರುವ ರಾಜ್ಯಕ್ಕೆ ಕಡಿಮೆ ಪ್ರತಿನಿಧಿತ್ವ ನೀಡುವುದು ನ್ಯಾಯವೇ?" ಎಂದು ಪ್ರಶ್ನಿಸಿದರು.

ಮಸೂದೆದಲ್ಲಿ ಒಬಿಸಿ ಮಹಿಳೆಯರಿಗೆ ಪ್ರತ್ಯೇಕ ಅವಕಾಶ ನೀಡದಿರುವುದನ್ನು ಅವರು ಟೀಕಿಸಿ, "ಇದು ಸಂಪೂರ್ಣ ಪ್ರತಿನಿಧಿತ್ವವಲ್ಲ, ಆಯ್ದ ಪ್ರತಿನಿಧಿತ್ವ ಮಾತ್ರ" ಎಂದರು.

# ಔಷಧ, ಐಸಿಯು ಕೊರತೆ, ಸ್ವಚ್ಛತೆ ಕಾಪಾಡದಿದ್ದರೆ ಕಠಿಣ ಕ್ರಮ: ಡಾ. ಪಾಟೀಲ್ ಎಚ್ಚರಿಕೆ

**ಬೆಂಗಳೂರು :** ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ, ಅಸಮರ್ಪಕ ಐಸಿಯು ನಿರ್ವಹಣೆ ಮತ್ತು ಸ್ವಚ್ಛತೆ ಕಾಪಾಡದಿರುವ ಬಗ್ಗೆ ನಿರಂತರ ದೂರುಗಳು ಬರುತ್ತಿವೆ. ಇದೇ ರೀತಿ ಮುಂದುವರಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ್ ಪಾಟೀಲ್ ಎಚ್ಚರಿಸಿದ್ದಾರೆ.

ವಿಕಾಸಸೌಧದಲ್ಲಿ ಶುಕ್ರವಾರ ನಡೆದ ಇಲಾಖಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ. ಪಾಟೀಲ್, ಲೋಕಾಯುಕ್ತರು ಮಾಡಿದ ಅವಲೋಕನಗಳು ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುವ ಆಸ್ಪತ್ರೆಗಳಲ್ಲಿ ಔಷಧ ಲಭ್ಯತೆಯ ಬಗ್ಗೆ ವ್ಯಾಪಕ ದೂರುಗಳು ಬಂದಿರುವ ಬಗ್ಗೆ ಉಲ್ಲೇಖಿಸಿದರು.

ಔಷಧ ಖರೀದಿ ಪ್ರಕ್ರಿಯೆಯನ್ನು ಸಮರ್ಪಕವಾಗಿ ನಡೆಸಲು ಆಸ್ಪತ್ರೆ ಮುಖ್ಯಸ್ಥರಿಗೆ ಜವಾಬ್ದಾರಿ ವಹಿಸಲಾಗಿದೆ. ಮೊದಲು ಔಷಧ ದಾಸ್ತಾನು ಖಾಲಿಯಾಗುವವರೆಗೆ ಏಕೆ ಕಾಯುತ್ತೀರಿ?" ಎಲ್ಲಾ ಸರ್ಕಾರಿ ಆಸ್ಪತ್ರೆ ಮತ್ತು ಕಾಲೇಜು ಮುಖ್ಯಸ್ಥರು ಕನಿಷ್ಠ ಮೂರು ತಿಂಗಳ ಮುಂಚಿತವಾಗಿ ಖರೀದಿ ಟೆಂಡರ್ ಪ್ರಕ್ರಿಯೆ ಆರಂಭಿಸಬೇಕು ಎಂದು ಸಚಿವರು ಆದೇಶಿಸಿದರು.

ಐಸಿಯು ಹಾಸಿಗೆಗಳ ಕೊರತೆಯ ಬಗ್ಗೆಯೂ ಸಾಕಷ್ಟು ದೂರುಗಳು ಬಂದಿವೆ. ವಿಕ್ಟೋರಿಯಾ ಆಸ್ಪತ್ರೆಯ ಆಘಾತ ಮತ್ತು ತುರ್ತು ಆರೈಕೆ ಕೇಂದ್ರದ ಮುಖ್ಯಸ್ಥರಿಂದ ವಿವರಣೆ ಪಡೆದುಕೊಂಡಿದ್ದೇನೆ. ಹೆಚ್ಚುವರಿ ಐಸಿಯು ಹಾಸಿಗೆಗಳಿಗಾಗಿ 10 ಅಂತಸ್ತಿನ ವಿಕ್ಟೋರಿಯಾ ಆಸ್ಪತ್ರೆ ಕಟ್ಟಡದಲ್ಲಿ ಮಹಡಿಯನ್ನು ಗೊತ್ತುಪಡಿಸುವಂತೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೋಶಿನ್ ಮತ್ತು ವೈದ್ಯಕೀಯ



ಶಿಕ್ಷಣ ನಿರ್ದೇಶಕಿ ಡಾ.ಬಿ.ಎಲ್. ಸುಜಾತಾ ರಾಥೋಡ್ ಅವರಿಗೆ ಸಚಿವರು ಸೂಚಿಸಿದರು.

ಹೊಸ ಕಟ್ಟಡವನ್ನು ಮೇ 2 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ ಎಂದು ಡಾ. ಪಾಟೀಲ್ ಇದೇ ಸಂದರ್ಭದಲ್ಲಿ ಮಾಹಿತಿ ನೀಡಿದರು.

ನೈರ್ಮಲ್ಯ ಮತ್ತು ಲಿಫ್ಟ್ ವಿಷಯದ ಬಗ್ಗೆಯೂ ಅಧಿಕಾರಿಗಳನ್ನು ಸಚಿವರು ತರಾಟೆಗೆ ತೆಗೆದುಕೊಂಡರು.

ಇಲಾಖೆಯ ಎಂಜಿನಿಯರಿಂಗ್ ವಿಭಾಗವು ಬಾಕಿ ಇರುವ ನಾಗರಿಕ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಮೇ ಅಂತ್ಯದವರೆಗೆ ಗಡುವು ನೀಡಲಾಗಿದೆ ಎಂದು ತಿಳಿಸಿದರು.

AB-ARK (ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ) ಯೋಜನೆಯಡಿ ಶೇ. 100 ರಷ್ಟು ಬಿಲ್ ಪಡೆಯದಿರುವುದು ಸರಿಯಲ್ಲ. ಕೆಲವು ಸಂಸ್ಥೆಗಳು ಶೇ. 60% ರಷ್ಟು ಮಾತ್ರ ಪಡೆದುಕೊಂಡಿವೆ. 100% ಪಡೆದರೆ ಸ್ವಾವಲಂಬಿ ಆಗಬಹುದು. ಈ ವಿಷಯದಲ್ಲಿ ಯಾವುದೇ ಲೋಪ ಕಂಡುಬರಬಾರದ " ಎಂದು ಡಾ. ಶರಣಪ್ರಕಾಶ್ ಪಾಟೀಲ್ ಎಚ್ಚರಿಸಿದರು.

# ಹೈಕೋರ್ಟ್ ನಿರ್ದೇಶನ: ವೇತನ ಸಹಿತ ಮುಟ್ಟಿನ ರಜೆ ಜಾರಿಗೆ ತರಲು ಸರ್ಕಾರ ಬದ್ಧ; ಸಂತೋಷ್ ಲಾಡ್

**ಬೆಂಗಳೂರು:** ಹೈಕೋರ್ಟ್ ನಿರ್ದೇಶನದ ನಂತರ, ಎಲ್ಲಾ ವಲಯಗಳಲ್ಲಿ ವೇತನ ಸಹಿತ ಮುಟ್ಟಿನ ರಜೆ ನೀತಿಯನ್ನು ಸಾಧ್ಯವಾದಷ್ಟು ಬೇಗ ಕಟ್ಟುನಿಟ್ಟಾಗಿ ಜಾರಿಗೆ ತರುವುದಾಗಿ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ.

ಔಪಚಾರಿಕವಾಗಿ ನಿಯಮ ಜಾರಿಗೆ ಬರುವವರೆಗೆ, ಮುಟ್ಟಿನ ರಜೆ ನೀತಿಯನ್ನು "ಕಟ್ಟುನಿಟ್ಟಾಗಿ ಮತ್ತು ನಿಷ್ಠೆಯಿಂದ" ಜಾರಿಗೆ ತರುವಂತೆ ಕರ್ನಾಟಕ ಹೈಕೋರ್ಟ್ ಇತ್ತೀಚೆಗೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿತ್ತು.

ನಮ್ಮ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ನೀತಿಯಾದ 'ಋತುಚಕ್ರ ರಜೆ ನೀತಿ'ಗೆ ಪೂರಕವಾಗಿ ಕರ್ನಾಟಕ ಉಚ್ಚ ನ್ಯಾಯಾಲಯ ನೀಡಿರುವ ನಿರ್ದೇಶನವನ್ನು ಸ್ವಾಗತಿಸುತ್ತೇನೆ. ಋತುಚಕ್ರ ರಜೆನೀತಿಯನ್ನು ಇಡೀ ದೇಶದಲ್ಲೇ ಸಮರ್ಪಕವಾಗಿ ಹಾಗೂ ಮಾದರಿಯಾಗಿ ಜಾರಿಗೆ ತರುವ ನಿಟ್ಟಿನಲ್ಲಿ ನಮ್ಮ ರಾಜ್ಯ ಸರ್ಕಾರ ದಿಟ್ಟ ಹೆಜ್ಜೆ ಇರಿಸಿದೆ.

ಘನ ನ್ಯಾಯಾಲಯದ ಅಭಿಪ್ರಾಯದಂತೆ "ಮುಟ್ಟಿನ ರಜೆಯು ಮಹಿಳೆಯರ ಘನತೆ, ನ್ಯಾಯಯುತ ಮತ್ತು ಅವರ ವಾಸ್ತವಿಕ ಬದುಕಿನ ಮಾನವೀಯ ಅರಿವು" ಎಂಬುದನ್ನು ಮೂಲ ಆಶಯವಾಗಿಟ್ಟುಕೊಂಡು ಅತಿ ಶೀಘ್ರದಲ್ಲಿ ಎಲ್ಲ ವಲಯಗಳಲ್ಲೂ ಸಹ ತಿಂಗಳಿಗೆ ಒಂದರಂತೆ ಒಟ್ಟು ವರ್ಷಕ್ಕೆ 12 ವೇತನ ಸಹಿತ ಋತುಚಕ್ರ ರಜೆ ನೀತಿಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲಾಗುವುದು ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಸಂತೋಷ್ ಲಾಡ್ ಬರೆದುಕೊಂಡಿದ್ದಾರೆ.

ಎಲ್ಲಾ ವಲಯಗಳಲ್ಲಿ ಅದರ ಏಕರೂಪ, ಸ್ಥಿರ ಮತ್ತು ಕಠಿಣ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ಅಗತ್ಯವಿರುವ ಸೂಕ್ತ ಮಾರ್ಗಸೂಚಿಗಳು, ಸುತ್ತೋಲೆಗಳು ಮತ್ತು ಆಡಳಿತಾತ್ಮಕ ಸೂಚನೆಗಳನ್ನು ನೀಡುವ ಮೂಲಕ ನೀತಿಯ ಪರಿಣಾಮಕಾರಿ ಕಾರ್ಯಾಚರಣೆಯನ್ನು ಖಚಿತಪಡಿಸಿಕೊಳ್ಳುವುದು ರಾಜ್ಯದ ಜವಾಬ್ದಾರಿಯಾಗಿದೆ ಎಂದು ನ್ಯಾಯಾಲಯ ಹೇಳಿತ್ತು.

ಬೆಳಗಾವಿ ಜಿಲ್ಲೆಯ ಗೋಕಾಕ್ ತಾಲ್ಲೂಕಿನ ಮೂಡಲಗಿಯ ಹೋಟೆಲ್‌ನಲ್ಲಿ ಕೆಲಸ ಮಾಡುವ 41




ವರ್ಷದ ಚಂದ್ರವ್ವ ಹನುಮಂತ್ ಗೋಕಾವಿ ಅವರು ನವೆಂಬರ್ 20, 2025 ರಂದು,

ಕೆಲಸ ಮಾಡುವ ಎಲ್ಲಾ ಮಹಿಳೆಯರಿಗೆ ಒಂದು ದಿನದ ಮುಟ್ಟಿನ ರಜೆ ನೀಡುವ ಸರ್ಕಾರದ ಆದೇಶವನ್ನು ಜಾರಿಗೆ ತರುವಂತೆ ಕೋರಿ ಧಾರವಾಡ ಪೀಠದ ಮುಂದೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆಯ ಸಂದರ್ಭದಲ್ಲಿ ನ್ಯಾಯಾಲಯವು ಈ ನಿರ್ದೇಶನ ನೀಡಿದೆ.

# ಕಾಂಗ್ರೆಸ್ ಪಕ್ಷ ಒಂದು ಸಮುದಾಯ ಮತ್ತು ಅದರ ನಾಯಕರನ್ನು ಕೆಟ್ಟದಾಗಿ ನಡೆದುಕೊಳ್ಳುತ್ತಿದೆ ಎಂದು ಮುಸ್ಲಿಮ್ ಸಂಘಟನೆಗಳ ಆರೋಪ

**ಬೆಂಗಳೂರು :** ರಾಜಕೀಯ ಲೆಕ್ಕಾಚಾರದ ಹೆಸರಿನಲ್ಲಿ ಒಂದು ಸಮುದಾಯ ಮತ್ತು ಅದರ ನಾಯಕರನ್ನು ಕೆಟ್ಟದಾಗಿ ನಡೆಸಿಕೊಳ್ಳುವುದನ್ನು ತೀವ್ರವಾಗಿ ಖಂಡಿಸಲಿದ್ದು, ಮುಂದೆ ಇಂತಹ ಏಕಪಕ್ಷೀಯ ನಿರ್ಧಾರಗಳನ್ನು ಕೈಗೊಳ್ಳದಂತೆ ಹಾಗೂ ಈಗಿನ ನಿರ್ಧಾರವನ್ನು ಮರುಪರಿಶೀಲಿಸುವಂತೆ ಕರ್ನಾಟಕದ ವಿವಿಧ ಪ್ರದೇಶಗಳ ಪ್ರಮುಖ ಮುಸ್ಲಿಮ್ ಸಂಘಟನೆಗಳು ಆಗ್ರಹಿಸಿದೆ.

ಈ ಕುರಿತ ಜಂಟಿ ಹೇಳಿಕೆ ಬಿಡುಗಡೆ ಮಾಡಿದ್ದು, ಕಾಂಗ್ರೆಸ್ ಪಕ್ಷವು ಕರ್ನಾಟಕದ ಮುಸ್ಲಿಂ ಸಮುದಾಯ ಮತ್ತು ಅದರ ನಾಯಕರೊಂದಿಗೆ ನಡೆದುಕೊಳ್ಳುತ್ತಿರುವ ರೀತಿಯನ್ನು ತೀವ್ರವಾಗಿ ಖಂಡಿಸುವುದಾಗಿ ತಿಳಿಸಿದೆ.

ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಅಧಿಕಾರದಲ್ಲಿ ಬರಲು ಇಲ್ಲಿನ ಮುಸ್ಲಿಮರು ಅದಕ್ಕೆ ನೀಡಿರುವ ಒಗ್ಗಟ್ಟಿನ ಬೆಂಬಲ ಪ್ರಮುಖ ಕಾರಣ. ಆದರೆ ಕಾಂಗ್ರೆಸ್ ಪಕ್ಷ ಮತ್ತು ಅದರ ಸರಕಾರ ಮುಸ್ಲಿಮರನ್ನು ಘನತೆಯೊಂದಿಗೆ ನಡೆಸಿಕೊಳ್ಳುತ್ತಿಲ್ಲ ಎಂಬುದು ಅದರ ಇತ್ತೀಚಿನ ನಡೆಗಳಿಂದ ಸ್ಪಷ್ಟವಾಗಿದೆ. ತನ್ನನ್ನು ಬೆಂಬಲಿಸಿ ಅಧಿಕಾರಕ್ಕೆ ತರುವಲ್ಲಿ ನಿರ್ಣಾಯಕ ಕೊಡುಗೆ ನೀಡಿರುವ ಮುಸ್ಲಿಮ್ ಸಮುದಾಯಕ್ಕೆ ರಾಜಕೀಯ ನೇಮಕಾತಿಗಳಲ್ಲಿ ಹಾಗೂ ಅಧಿಕಾರ ಶಾಹಿಯ ಪ್ರಮುಖ ಹುದ್ದೆಗಳಲ್ಲೂ ಸೂಕ್ತ ಪ್ರಾತಿನಿಧ್ಯ ನೀಡದ ಕಾಂಗ್ರೆಸ್ ಈಗ ಮುಸ್ಲಿಮ್ ಸಮುದಾಯವನ್ನು ಮತ್ತೆ ಮತ್ತೆ ಅವಮಾನಿಸುತ್ತಿದೆ ಎಂಬ ನೋವಿನ ಭಾವನೆ ಸಮುದಾಯದಲ್ಲಿ ತೀವ್ರವಾಗುತ್ತಿದೆ.

ದಾವಣಗೆರೆ ಉಪ ಚುನಾವಣೆ ಹಾಗೂ ಇತ್ತೀಚಿನ ಬೆಳವಣಿಗೆಗಳನ್ನು ಗಮನಿಸಿದರೆ, ಕಾಂಗ್ರೆಸ್ ಪಕ್ಷವು ಮುಸ್ಲಿಮರಿಗೆ ಒಂದು ಸ್ಪಷ್ಟ ಸಂದೇಶ ನೀಡಿದಂತಿದೆ. ಅದೇನೆಂದರೆ, "ನೀವು ನಮಗೆ ಒಂದು ವೋಟ್ ಬ್ಯಾಂಕ್ ಮಾತ್ರ. ಕಾಂಗ್ರೆಸ್ ಪಕ್ಷಕ್ಕೆ ವೋಟ್ ಹಾಕುವುದು ಮಾತ್ರ ನಿಮ್ಮ ಕೆಲಸ. ಪಕ್ಷದಲ್ಲಿ ಹುದ್ದೆ, ಸ್ಥಾನಮಾನ, ಪ್ರಾತಿನಿಧ್ಯ, ಅವಕಾಶ ನಾವು ನೀಡುವ ಭಿಕ್ಷೆ. ಒಂದೊಮ್ಮೆ ನಿಮ್ಮ ಹಕ್ಕು ಅಥವಾ ನಿಮಗಾದ ಅನ್ಯಾಯದ ಕುರಿತು ಪ್ರಶ್ನೆ ಕೇಳಿದಲ್ಲಿ ಶಿಸ್ತುಕ್ರಮ ಕೈಗೊಳ್ಳಲಾಗುವುದು."

ಕಾಂಗ್ರೆಸ್ ನ ಈ ಪಕ್ಷಪಾತಿ ಧೋರಣೆಯನ್ನು ಕರ್ನಾಟಕದ ಮುಸ್ಲಿಮ್ ಸಮುದಾಯ ಇನ್ನು ಮುಂದೆ ಸಹಿಸುವುದಿಲ್ಲ.

ಮುಸ್ಲಿಮ್ ಸಮುದಾಯದ ಕೆಲ ನಾಯಕರನ್ನು ಪಕ್ಷ ವಿರೋಧಿ ಚಟುವಟಿಕೆಯ ಕಟಕಟೆಯಲ್ಲಿ ನಿಲ್ಲಿಸಿ, ಶಿಸ್ತಿನ ಪಾಠ ಹೇಳುತ್ತಿರುವ ಕಾಂಗ್ರೆಸ್ ಪಕ್ಷ, ಈ ಹಿಂದೆ ಇದೇ ರೀತಿಯ ಸಂದರ್ಭಗಳಲ್ಲಿ ಪಕ್ಷದಿಂದ ತಗೆದುಕೊಳ್ಳಲಾದ ಶಿಸ್ತು ಕ್ರಮಗಳೇನು ಎಂಬುದನ್ನು ಸ್ಪಷ್ಟಪಡಿಸಬೇಕು. ಇಲ್ಲದಿದ್ದಲ್ಲಿ , ಪಕ್ಷದ ಶಿಸ್ತು ನಿಯಮಗಳು ಕೇವಲ ಒಂದು ಸಮುದಾಯಕ್ಕೆ ಮಾತ್ರ ಅನ್ವಯವಾಗುತ್ತಿವೆಯೇ ಎಂಬ ಗಂಭೀರ ಪ್ರಶ್ನೆ ಉದ್ಭವಿಸುತ್ತದೆ.

ಇದು ಕೇವಲ ಕೆಲವು ವ್ಯಕ್ತಿಗಳ ವಿಚಾರವಲ್ಲ. ಇಡೀ ಮುಸ್ಲಿಮ್ ಸಮುದಾಯದ ಘನತೆಯ ವಿಷಯವಾಗಿದೆ. ಸಮುದಾಯದ ಧಾರ್ಮಿಕ ಹಾಗೂ ಸಾಮಾಜಿಕ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಏಕಪಕ್ಷೀಯವಾಗಿ ತೀರ್ಮಾನಗಳನ್ನು ತೆಗೆದುಕೊಳ್ಳುತ್ತಿರುವುದು ಸರಿಯಲ್ಲ. ಇದನ್ನು ಕೇವಲ ರಾಜಕೀಯ ನಿರ್ಧಾರವೆಂದು ಸಮರ್ಥಿಸಲು ಸಾಧ್ಯವಿಲ್ಲ.

ಮುಸ್ಲಿಮರು ಪ್ರಾತಿನಿಧ್ಯ ಕೇಳಿದ್ದೇ ತಪ್ಪು ಎಂಬಂತೆ ಕಾಂಗ್ರೆಸ್ ನಲ್ಲಿ ಬಿಂಬಿಸಲಾಗುತ್ತಿದೆ. ನ್ಯಾಯಯುತವಾಗಿ ನೀಡಲೇಬೇಕಿದ್ದ ಟಿಕೆಟ್ ನೀಡದೆ ಪಕ್ಷದ ಪರವಾಗಿ ಪ್ರಚಾರ ಮಾಡಲು ಹೇಳಿ, ನಂತರ ಕ್ಷುಲ್ಲಕ ಕಾರಣಗಳನ್ನು ನೀಡಿ ಶಿಸ್ತು ಕ್ರಮ ಕೈಗೊಳ್ಳುವುದು ನ್ಯಾಯಸಮ್ಮತವಲ್ಲ. "ನೀವು ನಾವು ಹೇಳಿದಂತೆ ಕೇಳಿಕೊಂಡು ಬಿದ್ದಿರಬೇಕು" ಎಂಬ ಕಾಂಗ್ರೆಸ್ ಪಕ್ಷದ ಈ ಧೋರಣೆ ತೀವ್ರ ಖಂಡನೀಯವಾಗಿದೆ. ಸಾಲದ್ದಕ್ಕೆ ಪಕ್ಷದಲ್ಲಿರುವ ಸಮುದಾಯದ ನಾಯಕರನ್ನೇ ಒಬ್ಬರ ವಿರುದ್ಧ ಒಬ್ಬರನ್ನು ಎತ್ತಿಕಟ್ಟುವ ಕೆಲಸವನ್ನು ಕಾಂಗ್ರೆಸ್ ಪಕ್ಷದ ಮುಖಂಡರು ಮಾಡುತ್ತಿದ್ದಾರೆ ಎಂಬ ಅನುಮಾನವೂ ಸಮುದಾಯವನ್ನು ಕಾಡುತ್ತಿದೆ.

ಇಂತಹ ಸೂಕ್ಷ್ಮ ಸಂದರ್ಭದಲ್ಲಿ ಮುಸ್ಲಿಮ್ ಸಮುದಾಯದ ಕೆಲವು ಮುಖಂಡರೂ ತಮ್ಮ ಸಮುದಾಯದ ಜೊತೆಗಿನ ಪಕ್ಷದ ತಾರತಮ್ಯ ನೀತಿಯನ್ನು ವಿರೋಧಿಸದೆ, ಸಮುದಾಯದ ಪರವಾಗಿ ಪಕ್ಷದ ವೇದಿಕೆಯಲ್ಲಿ ಧ್ವನಿ ಎತ್ತಿದ ನಾಯಕರ ಬೆಂಬಲಕ್ಕೆ ಗಟ್ಟಿಯಾಗಿ ನಿಲ್ಲದೆ ತಮ್ಮ ಸ್ವಾರ್ಥ ಸಾಧನೆಗೆ ಮುಂದಾಗುವಂತಹ ನಡೆ ಅನುಸರಿಸಿರುವುದು ಖಂಡನೀಯವಾಗಿದೆ.

ಕೆಲವು ಸಮುದಾಯಗಳ ನಾಯಕರು ಎಷ್ಟು ದೊಡ್ಡ ಪ್ರಮಾದ ಮಾಡಿದರೂ ಯಾವುದೇ ಕ್ರಮವಿಲ್ಲ, ನೇರವಾಗಿ ಪಕ್ಷ ವಿರೋಧಿ ಹೇಳಿಕೆ ಕೊಟ್ಟರೂ ಅವರಿಗೆ ಶಿಸ್ತು ಕ್ರಮದ ಬದಲಿಗೆ ಬಹುಮಾನ, ಇನ್ನಷ್ಟು ಗೌರವ, ಆದರೆ ಒಂದು ನಿರ್ದಿಷ್ಟ ಸಮುದಾಯದ ನಾಯಕರು ಪಕ್ಷದ ಫರ್ಮಾನು ಪಾಲಿಸುವಲ್ಲಿ ಒಂದಿಷ್ಟು ಹೆಚ್ಚು ಕಡಿಮೆಯಾದರೂ ಅವರ ತಲೆದಂಡ – ಇದು ನ್ಯಾಯವಲ್ಲ, ಇದು ಸ್ವೀಕಾರಾರ್ಹವಲ್ಲ.

ಈ ರೀತಿಯ ತಾರತಮ್ಯದ ನಡೆ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಹಾನಿಕಾರಿಯಾಗಲಿದೆ. ಇದೇ ಧೋರಣೆ ಮುಂದುವರಿದರೆ ಮುಂದಾಗುವ ತೀವ್ರ ರಾಜಕೀಯ ಹಿನ್ನಡೆಗೆ ಪಕ್ಷದ ಈ ರೀತಿಯ ನಿರ್ಧಾರಗಳೇ ಕಾರಣವಾಗಬಹುದು. ರಾಜ್ಯದಲ್ಲಿ ಸಂವಿಧಾನದ ಮೌಲ್ಯಗಳ ಪ್ರಕಾರ ನಡೆಯುವ ಜಾತ್ಯತೀತ ಸರಕಾರ ಬರಬೇಕು, ಜನರನ್ನು ವಿಭಜಿಸುವ ಕೋಮುವಾದಿಗಳಿಗೆ ಅಧಿಕಾರ ಸಿಗಬಾರದು ಎಂಬ ಕಾರಣದಿಂದ ಕಾಂಗ್ರೆಸ್ ಪಕ್ಷಕ್ಕೆ ರಾಜ್ಯದ ಮುಸ್ಲಿಮರು ಒಗ್ಗಟ್ಟಾಗಿ ಬೆಂಬಲಿಸಿ ಮತ ನೀಡಿದ್ದಾರೆ. ದೇಶದ ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯಲು ಹಾಗು ಅವುಗಳನ್ನು ಬಲಪಡಿಸಲು ಮುಸ್ಲಿಮರು ಕಾಂಗ್ರೆಸ್ ಗೆ ಮತ ಹಾಕಿದ್ದಾರೆ. ಆದರೆ ಅದನ್ನೇ ಮುಸ್ಲಿಮರ ದೌರ್ಬಲ್ಯ, ಅವರಿಗೆ ಬೇರೆ ಆಯ್ಕೆಗಳೇ ಇಲ್ಲ ಎಂದು ಕಾಂಗ್ರೆಸ್ ತಿಳಿದುಕೊಂಡರೆ ಅದು ಮುಂದಿನ ದಿನಗಳಲ್ಲಿ ಆ ಪಕ್ಷಕ್ಕೆ ರಾಜಕೀಯವಾಗಿ ಬಹಳ ದುಬಾರಿಯಾಗಲಿದೆ ಎಂದು ಪ್ರಕಟಣೆ ಮೂಲಕ ಎಚ್ಚರಿಸಿದೆ..

# ಅಖಿಲ ಕರ್ನಾಟಕ ಬೇಕರಿ ಮತ್ತು ಸ್ವೀಟ್ಸ್ ಅಸೋಸಿಯೇಷನ್‌ಗೆ ನೂತನ ರಾಜ್ಯ ಸಂಚಾಲಕರಾಗಿ ಶ್ರೀ ಕೇಶವ ಅಯ್ಯಂಗಾರ್ ಅವರ ನೇಮಕ

**ಬೆಂಗಳೂರು:** ಅಖಿಲ ಕರ್ನಾಟಕ ಬೇಕರಿ ಮತ್ತು ಸ್ವೀಟ್ಸ್ ಅಸೋಸಿಯೇಷನ್‌ನ ನೂತನ ರಾಜ್ಯ



ಸಂಚಾಲಕರಾಗಿ ಹಿರಿಯ ಉದ್ಯಮಿ ಹಾಗೂ ಸಂಘಟಕ ಶ್ರೀ ಕೇಶವ ಅಯ್ಯಂಗಾರ್ ಅವರನ್ನು ಸರ್ವಾನುಮತದಿಂದ ನಿಯುಕ್ತಿಗೊಳಿಸಲಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಶೈಲೇಂದ್ರ ಶರ್ಮ ಅವರು ಇಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಳೆದ 2 ದಶಕಗಳಿಂದ ಬೇಕರಿ ಉದ್ಯಮದಲ್ಲಿರುವ ಶ್ರೀ ಕೇಶವ ಅಯ್ಯಂಗಾರ್ ಅವರು ಕ್ಷೇತ್ರದ ಸಮಸ್ಯೆಗಳ ಬಗ್ಗೆ ಆಳವಾದ ತಿಳಿವಳಿಕೆ ಹೊಂದಿದ್ದಾರೆ.

ಉದ್ಯಮ ಎದುರಿಸುತ್ತಿರುವ FSSAI ನಿಯಮಗಳ ಕ್ಲಿಷ್ಟತೆ, GST ಸಮಸ್ಯೆ, ಕಚ್ಚಾ ವಸ್ತುಗಳ ಬೆಲೆ ಏರಿಕೆ, ಕಾರ್ಮಿಕರ ಕೊರತೆ ಮುಂತಾದ ಜ್ವಲಂತ ವಿಷಯಗಳನ್ನು ಸರ್ಕಾರದ ಮಟ್ಟದಲ್ಲಿ ಪರಿಹರಿಸಲು ಸಮರ್ಥ ನಾಯಕತ್ವದ ಅವಶ್ಯಕತೆ ಇತ್ತು.

ಈ ನಿಟ್ಟಿನಲ್ಲಿ ಕಾರ್ಯಕಾರಿ ಸಮಿತಿಯು ಶ್ರೀ ಅಯ್ಯಂಗಾರ್ ಅವರನ್ನು ಆಯ್ಕೆ ಮಾಡಿದೆ.

# H5N1 ಭಯ ಬೇಡ, ಜಾಗರೂಕತೆ ಮುಖ್ಯ: ದಿನೇಶ್ ಗುಂಡೂರಾವ್

**ಬೆಂಗಳೂರು** : ಹೆಸರಘಟ್ಟದ ಮತ್ತೂರು ಗ್ರಾಮದ ಕೋಳಿ ಸಾಕಾಣಿಕೆ ತರಬೇತಿ ಕೇಂದ್ರದಲ್ಲಿ ಇದೇ ತಿಂಗಳ 14 ನೇ ತಾರೀಖಿನಂದು NIHSAD, ಭೋಪಾಲ್ ವರದಿಯ ಪ್ರಕಾರ H5N1 ಹಕ್ಕಿಜ್ವರ ದೃಢಪಟ್ಟಿದ್ದು, ನಿಯಮಾವಳಿಯಂತೆ ತಕ್ಷಣವೇ ನಿಯಂತ್ರಣಕ್ಕೆ ಸಕಲ ಕ್ರಮ ಕೈಗೊಳ್ಳಲಾಗಿದೆ.



ಎಪ್ರಿಲ್ 16 ರಂದು ರಾಜ್ಯ, ಜಿಲ್ಲಾ ಮತ್ತು ಪಿ ಹೆಚ್ ಸಿ ಆರ್ ಆರ್ ಟಿ ತಂಡ ಸ್ಥಳಕ್ಕೆ ಭೇಟಿ ನೀಡಿ ಮುತ್ತೂರು ಗ್ರಾಮವನ್ನು ಸೋಂಕಿತ ವಲಯ(3km ವ್ಯಾಪ್ತಿ) ಮತ್ತು ಸುತ್ತಲಿನ 10km ಪ್ರದೇಶವನ್ನು ಕಣ್ಗಾವಲು ವಲಯ ಎಂದು ಘೋಷಿಸಲಾಗಿದೆ. ಎಪ್ರಿಲ್ 15 ರಂದು 7444 ಕೋಳಿಗಳು, 14 ಸಾವಿರಕ್ಕೂ ಅಧಿಕ ಮೊಟ್ಟೆಗಳು, 2250 ಕೆಜಿ ಕೋಳಿ ಆಹಾರವನ್ನು ಪಶುಪಾಲನೆ ಇಲಾಖೆ ನೇತೃತ್ವದಲ್ಲಿ ವೈಜ್ಞಾನಿಕವಾಗಿ ಕಲ್ಲಿಂಗ್ ಮಾಡಿ ವಿಲೇವಾರಿ ಮಾಡಲಾಗಿದ್ದು, ಇದರಲ್ಲಿ ಭಾಗಿಯಾದ 10 ಸಿಬ್ಬಂದಿಯನ್ನು ಕ್ವಾರಂಟೈನ್ ಮಾಡಿ, ಒಸೆಲ್ಟಾಮಿವಿರ್ ಔಷಧದೊಂದಿಗೆ ವೈದ್ಯಕೀಯ ನಿಗಾದಲ್ಲಿ ಇರಿಸಲಾಗಿದೆ. ಈ ಸ್ಥಳವನ್ನು ಒಂದು ವರ್ಷದವರೆಗೆ ನಿಷೇಧಿತ ಪ್ರದೇಶ ಎಂದು ಘೋಷಣೆ ಮಾಡಲಾಗಿದೆ.

ಆರೋಗ್ಯ ಇಲಾಖೆ ಕಣ್ಗಾವಲು ಪ್ರಗತಿಯಲ್ಲಿದ್ದು 3 ಕಿ ಮೀ ವ್ಯಾಪ್ತಿ ವಲಯದಲ್ಲಿ ಒಟ್ಟು 3422 ಜನಸಂಖ್ಯೆಯ ಎರಡು ಗ್ರಾಮಗಳಿದ್ದು, 3–10 ಕಿ ಮೀ ವ್ಯಾಪ್ತಿಯಲ್ಲಿ ಒಟ್ಟು 22,395 ಜನಸಂಖ್ಯೆ ಇರುವ 17 ಗ್ರಾಮಗಳು ಇದ್ದು, ಆರೋಗ್ಯ ಕಾರ್ಯಕರ್ತರು ಹಾಗೂ ಆಶಾ ಕಾರ್ಯಕರ್ತರು ದಿನನಿತ್ಯ ಮನೆಮನೆ ಭೇಟಿ ನೀಡಿ ಮುಂದಿನ ಹತ್ತು ದಿನಗಳ ಕಾಲ ಜ್ವರ ಕಣ್ಗಾವಲು ನಡೆಸಲಾಗುವುದು. ಶಂಕಿತ ಪ್ರಕರಣಗಳನ್ನು ತಕ್ಷಣ ವರದಿ ಮಾಡಲು ಆಸ್ಪತ್ರೆಗಳಿಗೆ ಸೂಚಿಸಲಾಗಿದ್ದು, ಪಿಪಿಇ ಕಿಟ್, ಮಾಸ್ಕ್, ಒಸೆಲ್ಟಾಮಿವಿರ್, ವಿಟಿಎಂ ಮತ್ತು ಗಂಟಲು ಸ್ವಾಬ್ ಗಳನ್ನು ಅಗತ್ಯ ಪ್ರಮಾಣದಲ್ಲಿ ಹೆಸರಘಟ್ಟ ಮತ್ತು ಸೊನ್ನೇನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಲಭ್ಯ ಇರಬೇಕೆಂದು ಕಟ್ಟು ನಿಟ್ಟಿನ ಸೂಚನೆ ನೀಡಲಾಗಿದೆ.

ಈವರಿಗೆ ಯಾವುದೇ ಮನುಷ್ಯರಲ್ಲಿ ಈ ರೋಗ ವರದಿಯಾಗಿಲ್ಲ. ಹಾಗಾಗಿ ಸಾರ್ವಜನಿಕರು ಆತಂಕ ಪಡುವ ಅಗತ್ಯ ಇಲ್ಲ. ಆದರೆ ಜಾಗರೂಕರಾಗಿರಬೇಕು. ಅನಾರೋಗ್ಯ/ಸತ್ತ ಹಕ್ಕಿಗಳ ಸಂಪರ್ಕದಿಂದ ದೂರ ಇರಬೇಕು. ಯಾವುದೇ ರೀತಿಯ ಅನುಮಾನ ಕಂಡುಬಂದರೆ ತಕ್ಷಣ ಪಶುಸಂಗೋಪನೆ ಅಥವಾ ಆರೋಗ್ಯ ಇಲಾಖೆಗೆ ಮಾಹಿತಿ ನೀಡಬೇಕು. ಸರಿಯಾಗಿ ಬೇಯಿಸಿದ ಕೋಳಿ ಮಾಂಸ ಮತ್ತು ಮೊಟ್ಟೆ ಸೇವಿಸಿ. ಆರೋಗ್ಯ ಇಲಾಖೆ ಎಲ್ಲ ರೀತಿಯ ಪರಿಸ್ಥಿತಿ ಎದುರಿಸಲು ಸಜ್ಜಾಗಿದೆ.

# ಕರ್ನಾಟಕದಲ್ಲಿ ಎಸ್‌ಐಟಿ ರಚಿಸಿ ತನಿಖೆ ಆಗಲಿ: ಸಿ.ಟಿ.ರವಿ

**ಬೆಂಗಳೂರು:** ಮಹಾರಾಷ್ಟ್ರದ ನಾಸಿಕ್‌ನ ಟಿಸಿಎಸ್‌ನಲ್ಲಿ ನಡೆದ ಸಂಘಟಿತ ಲವ್ ಜಿಹಾದ್ ಪ್ರಕರಣ ಬೆಳಕಿಗೆ ಬಂದ ನಂತರ ಇಂತಹ ಸಂಘಟಿತ ಲವ್ ಜಿಹಾದ್ ಜಾಲ ಕರ್ನಾಟಕದ ಕಾಪೆರ್ರೊ?ರೇಟ್ ಕಂಪನಿಗಳಲ್ಲೂ ವಿಸ್ತರಿಸಿರುವ ಸಾಧ್ಯತೆ ಇದೆ. ಆದ್ದರಿಂದ ಇಲ್ಲೂ ಒಂದು ಎಸ್‌ಐಟಿ ರಚಿಸಿ ತನಿಖೆಯಾಗಬೇಕು ಎಂದು ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರು ಆಗ್ರಹಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನಾಸಿಕ್ ಪ್ರಕರಣ ಬಹಳ ಗಂಭೀರವಾಗಿದ್ದು, ಕರ್ನಾಟಕದಲ್ಲೂ ಟಿಸಿಎಸ್ ರೀತಿಯ ಅನೇಕ ಬಹುರಾಷ್ಟ್ರೀಯ ಕಂಪೆನಿಗಳಿವೆ. ಉದ್ಯೋಗಕ್ಕಾಗಿ ಬರುವ ಅಸಹಾಯಕ ಹೆಣ್ಣು ಮಕ್ಕಳ ಶೋಷಣೆ, ಲವ್ ಜಿಹಾದ್‌ನಂತಹ ಮತಾಂತರದ ಜಾಲ ಇಲ್ಲೂ ಇರುವ ಸಾಧ್ಯತೆ ಇದೆ. ಆದ್ದರಿಂದ ಇವುಗಳ ಕುರಿತು ಸಮಗ್ರ ತನಿಖೆ ಆಗಬೇಕು ಎಂದರು.

ಹಾಲಿ ಅಥವಾ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಎಸ್‌ಐಟಿ ರಚಿಸಿ ಸಮಗ್ರ ತನಿಖೆ ಮಾಡಬೇಕು. ಆಗ ಸತ್ಯಾಸತ್ಯತೆ ಹೊರಬರಲಿದೆ. ಮತಾಂತರ ಮತ್ತು ಮತಾಂತರದ ನಂತರ ಇಡೀ ದೇಶವನ್ನೇ ದುರ್ಬಲಗೊಳಿಸುವ ಸಂಚು ತಿಳಿಯಲಿದೆ. ಮುಖ್ಯಮಂತ್ರಿಗಳು ಈ ಬಗ್ಗೆ ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಪೂರ್ವಕ ಮನವಿ ಮಾಡಿದರು. ನಾಸಿಕ್ ಪೊಲೀಸರು ಒಳ್ಳೆಯ ಕೆಲಸ ಮಾಡಿದ್ದಾರೆ. ಪ್ರಕರಣವನ್ನು ಲಘುವಾಗಿ ಪರಿಗಣಿಸದೆ ವಿಶೇಷ ಕಾರ್ಯಪಡೆ ಮಾಡಿ ಉದ್ಯೋಗಿಗಳಾಗಿ ಸೇರಿ ವ್ಯವಸ್ಥಿತ ಜಾಲವನ್ನು ಬಯಲಿಗೆಳೆದರು. ಈ ರೀತಿ ಸಂಘಟಿತ ಜಾಲ ವಿದೇಶಿ ನೆಟ್‌ವರ್ಕ್ ಹೊಂದಿದೆ ಎಂಬ ಪ್ರಾಥಮಿಕ ವರದಿ ಇದೆ. ಇದು ನಾಸಿಕ್‌ಗೆ ಮಾತ್ರ ಸೀಮಿತವೇ ಅಥವಾ ದೇಶದ ಉದ್ದಗಲಕ್ಕೂ ಹರಡಿದೆಯೇ ಎಂಬ ಬಗ್ಗೆ ತನಿಖೆಯ ಅವಶ್ಯಕತೆ ಇದೆ ಎಂದರು.

ಸರ್ಕಾರ ಈ ನಿಟ್ಟಿನಲ್ಲಿ ಕೈ ಕಟ್ಟಿ ಕೂರಬಾರದು. ಏಕೆಂದರೆ ಸರ್ಕಾರಕ್ಕೆ ಜವಾಬ್ದಾರಿ ಇದೆ. ಈ ಲವ್ ಜಿಹಾದ್ ಪ್ರಕರಣ ಕೇವಲ ನಾಸಿಕ್ ಮತ್ತು ಟಿಸಿಎಸ್‌ಗೆ ಸೀಮಿತವಾಗಿದೆ ಎಂದು ಭಾವಿಸಬಾರದು. ಕರ್ನಾಟಕದ ಕಂಪನಿಗಳಲ್ಲಿ ರಾತ್ರಿ, ಹಗಲು ಕೆಲಸ ಮಾಡುವ ಹೆಣ್ಣು ಮಕ್ಕಳು ಇದ್ದಾರೆ. ಉದ್ಯೋಗದ ಅನಿವಾರ್ಯತೆ ನಡುವೆ ಇಂತಹ ಜಾಲದಲ್ಲಿ ಸಿಕ್ಕಿ ಬೀಳುವ ಅಸಹಾಯಕತೆ ಇದೆ ಎಂದರು.

ಕರ್ನಾಟಕದಲ್ಲಿ ಮೂರು ವರ್ಷದಲ್ಲಿ 44,826 ವಯಸ್ಕ ಮಹಿಳೆಯರು, 6894 ಬಾಲಕಿಯರು ನಾಪತ್ತೆಯಾಗಿದ್ದಾರೆ. ಬೆಂಗಳೂರಿನಲ್ಲಿ 2290 ಹೆಣ್ಣು ಮಕ್ಕಳು ಕಾಣೆಯಾಗಿದ್ದಾರೆ. ಲವ್ ಜಿಹಾದ್ ಎಂಬುದು ವ್ಯಕ್ತಿ ವ್ಯಕ್ತಿಗಳ ನಡುವಿನ ಸಮಸ್ಯೆಯಾಗಿ ಈಗ ಉಳಿದಿಲ್ಲ. ಈ ವ್ಯವಸ್ಥಿತ ಜಾಲಕ್ಕೆ ತರಬೇತಿ, ಹಣ ಪೂರೈಕೆ, ಬಲೆಗೆ ಬಿದ್ದವರ ಮತಾಂತರಗೊಳಿಸುವುದು ಎಲ್ಲವೂ ಹಲವು ಪ್ರಕರಣದಲ್ಲಿ ಬೆಳಕಿಗೆ ಬಂದಿದೆ ಎಂದು ವಿವರಿಸಿದರು

ಸಂಘಟಿತ ಅಪರಾಧವನ್ನು ನ್ಯಾಯಾಲಯಗಳೂ ಗಂಭೀರವಾಗಿ ಪರಿಗಣಿಸಬೇಕು. ಏಕೆಂದರೆ ಇಂತಹ ಕೃತ್ಯಗಳ ಹಿಂದೆ ಕುತಂತ್ರ ಇದೆ. ಮತಾಂತರದ ಷಡ್ಯಂತ್ರ ಇದೆ. ಹಿಂದೂ ಹೆಣ್ಣು ಮಕ್ಕಳನ್ನೇ ಗುರಿಯಾಗಿಸುವ ಜಾಲ ಇದೆ. ವಿದೇಶಿ ಮತೀಯ ಶಕ್ತಿಗಳ ಜೊತೆಗೂ ಕೈ ಜೋಡಿಸಿದ್ದಾರೆ ಅನ್ನೋದನ್ನು ಹಗುರವಾಗಿ ಪರಿಗಣಿಸಬಾರದು ಎಂದರು.

**ಅಂಬೇಡ್ಕರ್ ಕನಸು ನನಸು ಮಾಡಿದ ಮೋದಿ...**

ಐತಿಹಾಸಿಕ ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ಮುಂದಾಗಿರುವ ಮೋದಿ ಸರ್ಕಾರಕ್ಕೆ ಅಭಿನಂದನೆಗಳು. ಮಹಿಳೆಯರಿಗೂ ಸಮಾನತೆ ಸಿಗಬೇಕು ಎಂಬ ಕನಸನ್ನು ಮೋದಿ ಅವರಿಗಿಂತಲೂ ಮೊದಲು ಅಂಬೇಡ್ಕರ್ ಅವರು ಕಂಡಿದ್ದರು. ಈಗ ಬಾಬಾ ಸಾಹೇಬರ ಕನಸನ್ನು ಮೋದಿ ಅವರು ನನಸು ಮಾಡುತ್ತಿದ್ದಾರೆ. ನಮ್ಮ ಪುರಾಣದಲ್ಲೂ ಮಹಿಳೆಯರಿಗೆ ಆದ್ಯತೆ ನೀಡಲಾಗಿತ್ತು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

**ಜನಸಂಖ್ಯೆಗೆ ಅನುಗುಣವಾಗಿ ಕ್ಷೇತ್ರ ಹೆಚ್ಚಳ...**

ಕ್ಷೇತ್ರ ಮರುವಿಂಗಡಣೆಯನ್ನು ಹಿಂದೆ ಇದ್ದ ನಿಯಮವನ್ನು ಅಳವಡಿಸಿಕೊಂಡೇ ಮಾಡುತ್ತಿದ್ದಾರೆ. ಜನಸಂಖ್ಯೆಗೆ ಅನುಗುಣವಾಗಿ ಕ್ಷೇತ್ರ ಹೆಚ್ಚಳವಾಗುತ್ತಿದೆ. ಸಾಂಸ್ಥಿಕ ಬದಲಾವಣೆ ತರುವ ಐತಿಹಾಸಿಕ ಮಸೂದೆಯನ್ನು ವಿವೇಚನೆ ಇರುವವರು ವಿರೋಧಿಸುವುದಿಲ್ಲ. ಕಪೊ?ಲ ಕಲ್ಪಿತ ಆರೋಪ ಮಾಡುವವರು ವಿರೋಧಿಸುತ್ತಾರೆ ಎಂದರು. ಮೊದಲು ಅನುಮಾನ ಹುಟ್ಟು ಹಾಕುವುದು, ಆಮೇಲೆ ಆರೋಪ ಮಾಡುವುದು. ಆಮೇಲೆ ಎತ್ತಿಕಟ್ಟುವುದು ಮಾಡುತ್ತಾರೆ ಎಂದು ಹೇಳಿದರು.

ಎಲ್ಲಾ ರಾಜ್ಯಗಳಲ್ಲಿ ಪ್ರತಿಶತ ಐವತ್ತು ಕ್ಷೇತ್ರಗಳು ಹೆಚ್ಚಳವಾಗಲಿದೆ. ಅನ್ಯಾಯ ಎಲ್ಲೂ ಆಗಲ್ಲ. ಸುಳ್ಳು ಆರೋಪ ಮಾಡಿದ್ದಕ್ಕೆ ಮುಖ್ಯಮಂತ್ರಿಗಳು ಕ್ಷಮೆಯಾಚನೆ ಮಾಡಬೇಕು. ಬದಲಿಗೆ ವಿರೋಧ ಮಾಡ್ತಾ ಇದ್ದೀರಿ ಎಂದರೆ ನೀವು ಸುಧಾರಣೆ ವಿರೋಧಿಗಳು, ಅಂಬೇಡ್ಕರ್ ಅವರ ವಿಚಾರಗಳ ವಿರೋಧಿಗಳು, ಸಂವಿಧಾನದ ನೈಜ ಆಶಯಕ್ಕೆ ವಿರೋಧಿಗಳು ಎಂದೇ ಅರ್ಥ ಎಂದು ಮತ್ತೊಂದು ಪ್ರಶ್ನೆಗೆ ಹೇಳಿದರು.

ರಾಜ್ಯಗಳಿಗೆ ಅನ್ಯಾಯವಾಗುತ್ತದೆ ಎಂದು ಮುಖ್ಯಮಂತ್ರಿಗಳು ಭಾವಿಸುವುದಾದರೆ ಇದನ್ನು ನರೇಂದ್ರ ಮೋದಿ ಅವರು ಮಾಡಿದ್ದಲ್ಲ. ಈ ಹಿಂದೆ ನೆಹರು ಮತ್ತು ಇಂದಿರಾ ಗಾಂಧಿ ಅವರೇ ಅನ್ಯಾಯ ಮಾಡಿರಬೇಕು. ಮನಮೋಹನ್ ಸಿಂಗ್ ಮತ್ತು ಸೋನಿಯಾ ಗಾಂಧಿ ಅವರ ನೇತೃತ್ವದಲ್ಲಿ ಅನ್ಯಾಯ ನಡೆದಿರಬೇಕು. ಕರಡು ಬರುವ ಮೊದಲೇ ಆಪಾದನೆ ಮಾಡಿದಿರಿ. ಈಗ ಚರ್ಚೆ ನಡೆಯುತ್ತಾ ಇದೆ ಕೇಳಿಸಿಕೊಳ್ಳಿ. ಅದರ ಮೇಲೂ ಅನುಮಾನ ಇದ್ದರೆ ಅದು ನಿಮ್ಮ ರೋಗ ಎಂದರು.

ಕಾಂಗ್ರೆಸ್ ಮಹಿಳಾ ಘಟಕದವರು ಮಸೂದೆ ಬೆಂಬಲಿಸಿ ಸಿಹಿ ಹಂಚಬೇಕು, ಆದರೆ ಅವರು ವಿರೋಧಿಸುತ್ತಾರೆ ಎಂದರೆ ಸರಿಯಲ್ಲ. ಈ ಹಿಂದೆ ರಾಜ್ಯದಲ್ಲಿ ಕ್ಷೇತ್ರ ಮರುವಿಂಗಡಣೆ ಆದಾಗ ಹಲವು ಕ್ಷೇತ್ರಗಳು ಕಳೆದುಹೋದವು. ಬೆಂಗಳೂರಿನಲ್ಲಿ ಹೆಚ್ಚು ಕ್ಷೇತ್ರಗಳು ಆದವು ಎಂದು ಹೇಳಿದರು.

ಮುಖ್ಯಮಂತ್ರಿಗಳು ಅಧಿಕಾರದಲ್ಲಿ ಮುಂದುವರಿಯಬೇಕು ಎಂಬ ಕಾರಣಕ್ಕೆ ಕೆ.ಎನ್.ರಾಜಣ್ಣ, ಡಾ. ಗೋವಿಂದರಾಜು, ನಸೀರ್ ಅಹಮದ್, ಜಬ್ಬಾರ್ ಅವರನ್ನು ಬಲಿ ಕೊಟ್ಟರು. ತಾನು ಅಧಿಕಾರಕ್ಕೆ ಬರಲು ನೆರವಾದ ಎಲ್ಲರನ್ನೂ ಬಲಿಕೊಟ್ಟಾದರೂ ತಾನು ಮುಂದುವರಿಯಬೇಕು ಎಂದು ಸಿಎಂ ಬಯಸಿದ್ದಾರೆ. ಅವರು ಬಹಳ ಚತುರ, ಯಾರನ್ನು ಯಾವಾಗ ಬಳಸಬೇಕು, ಯಾವಾಗ ಬಲಿ ಕೊಡಬೇಕು ಎಂಬುದು ತಿಳಿದಿದೆ. ಅಹಿಂದ ಎಂಬುದು ರಾಜಕೀಯ ಅಧಿಕಾರ ಹಿಡಿಯುವ ನಾಟಕದ ಕಥೆ ಎಂಬುದು ಸ್ಪಷ್ಟ ಎಂದು ನುಡಿದರು.

# ಮೈಲನಾಯಕನಹೊಸಹಳ್ಳಿ ಶಾಲಾ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು

**ಚನ್ನಪಟ್ಟಣ:** ತಾಲೂಕಿನ ಮೈಲನಾಯಕನ ಹೊಸಹಳ್ಳಿ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳ ಕಲಿಕಾ ವಾತಾವರಣವನ್ನು ಸುಧಾರಿಸುವ ಉದ್ದೇಶದಿಂದ ರೋಟರಿ ಬೆಂಗಳೂರು ಸಮೃದ್ಧಿ ಹಾಗೂ ರೊಟ್ರಾಕ್ಟ್ ಡಿಸ್ಟ್ರಿಕ್ಟ್ 3192 ಗರುಡ ತಂಡದವರು ಸೀಲಿಂಗ್ ಫ್ಯಾನ್ ಮತ್ತು ಟೇಬಲ್ ಫ್ಯಾನ್‌ಗಳನ್ನು ಕೊಡುಗೆಯಾಗಿ ನೀಡಿ ಮಾದರಿಯ ಸೇವಾ ಕಾರ್ಯ ನೆರವೇರಿಸಿದರು.



ಕಾರ್ಯಕ್ರಮವನ್ನು ರೋಟರಿ ಬೆಂಗಳೂರು ಸಮೃದ್ಧಿ ಅಧ್ಯಕ್ಷ ಮೈಲನಾಯಕನ ಹೊಸಹಳ್ಳಿ ಎಂ.ಎ. ರವಿಕುಮಾರ್ ಅವರ ನೇತೃತ್ವದಲ್ಲಿ ಆಯೋಜಿಸಲಾಗಿತ್ತು.

ಶಾಲೆಯ ತರಗತಿಗಳಲ್ಲಿ ಗಾಳಿಯ ಹರಿವನ್ನು ಹೆಚ್ಚಿಸುವ ಮೂಲಕ ವಿದ್ಯಾರ್ಥಿಗಳಿಗೆ ಆರಾಮದಾಯಕ ಕಲಿಕಾ ವಾತಾವರಣ ಕಲ್ಪಿಸುವುದು ಇದರ ಪ್ರಮುಖ ಉದ್ದೇಶವಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಎಂ.ಎ. ರವಿಕುಮಾರ್ ಅವರು, ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ವಿದ್ಯಾರ್ಥಿಗಳ ಕಲಿಕೆಗೆ ಅಡ್ಡಿಯಾಗಬಾರದು. ಸಮಾಜಮುಖಿ ಸಂಸ್ಥೆಗಳು ಇಂತಹ ಶಾಲೆಗಳ ಅಭಿವೃದ್ಧಿಗೆ ಕೈಜೋಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ಶಾಲೆಗೆ ಇನ್ನಷ್ಟು ಅಗತ್ಯ ಸೌಲಭ್ಯಗಳನ್ನು ಒದಗಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಇದೇ ವೇಳೆ ಶಿಕ್ಷಣ ಪ್ರೇಮಿ ಹಾಗೂ ಯುವ ನೇತಾರ ಮೈಲನಾಯಕನ ಹೊಸಹಳ್ಳಿ ಕರಣ್ ಎಂ.ಎ. ಆನಂದ್ ಮಾತನಾಡಿ, ಸರ್ಕಾರಿ ಶಾಲೆಗಳೇ ಗ್ರಾಮೀಣ ಮಕ್ಕಳ ಭವಿಷ್ಯ ರೂಪಿಸುವ ಕೇಂದ್ರಗಳು. ಇಂತಹ ಶಾಲೆಗಳಿಗೆ ಸಮಾಜದ ವಿವಿಧ ವಲಯಗಳಿಂದ ಸಹಕಾರ ದೊರಕುವುದು ಶ್ಲಾಘನೀಯ ಬೆಳವಣಿಗೆಯಾಗಿದೆ. ವಿದ್ಯಾರ್ಥಿಗಳು ಉತ್ತಮ ಸೌಲಭ್ಯಗಳೊಂದಿಗೆ ವಿದ್ಯಾಭ್ಯಾಸ ಮಾಡುವಂತಾಗಬೇಕು ಎಂಬುದು ಎಲ್ಲರ ಜವಾಬ್ದಾರಿ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು, ಶಿಕ್ಷಕ ವರ್ಗದವರು, ಗ್ರಾಮದ ಪ್ರಮುಖರಾದ ಸೋಮಶೇಖರ್, ರವಿಕುಮಾರ್ ಎಂ., ದೊಡ್ಡೇಗೌಡ ಸೇರಿದಂತೆ ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ಅಂಧತ್ವವನ್ನೇ ಗೆದ್ದು ಕೃಷಿಯಲ್ಲಿ ಸಾಧನೆ ಮಾಡಿದ್ದ ಗರಕಹಳ್ಳಿ ತಮ್ಮಣ್ಣ ನಿಧನ

**ಚನ್ನಪಟ್ಟಣ:** ತಾಲೂಕಿನ ಗರಕಹಳ್ಳಿ ಗ್ರಾಮದ ಪ್ರಗತಿಪರ ಕೃಷಿಕ ತಮ್ಮಣ್ಣ (70) ಅವರು ಅನಾರೋಗ್ಯದಿಂದಾಗಿ ಶುಕ್ರವಾರ ನಿಧನರಾದರು. ಕೃಷಿಯ ಮೇಲಿನ ಅಪಾರ ಆಸಕ್ತಿ, ದುಡಿಮೆ ಮತ್ತು ಆತ್ಮವಿಶ್ವಾಸದಿಂದ ಗ್ರಾಮೀಣ ವಲಯದಲ್ಲಿ ವಿಶೇಷವಾಗಿ ಗುರುತಿಸಿಕೊಂಡಿದ್ದ



ಅವರ ಅಗಲಿಕೆಯಿಂದ ಗ್ರಾಮದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ. ಅಂಧರಾಗಿದ್ದರೂ ಜೀವನದಲ್ಲಿ ಹತಾಶರಾಗದೆ, ಕೃಷಿಯನ್ನೇ ತಮ್ಮ ಬದುಕಿನ ದಾರಿಯನ್ನಾಗಿ ಮಾಡಿಕೊಂಡಿದ್ದ ತಮ್ಮಣ್ಣ ಅವರು ಅನೇಕ ರೈತರಿಗೆ ಮಾದರಿಯಾಗಿದ್ದರು. ಕೃಷಿ ಹಾಗೂ ತೋಟಗಾರಿಕೆ ಇಲಾಖೆಯಿಂದ ರೈತರಿಗಾಗಿ ದೊರೆಯುವ ವಿವಿಧ ಸವಲತ್ತುಗಳನ್ನು ಸದ್ಬಳಕೆ ಮಾಡಿಕೊಂಡು, ತಮ್ಮ ಜಮೀನಿನಲ್ಲಿ ಸಮರ್ಥವಾಗಿ ಕೃಷಿ ನಡೆಸುತ್ತಿದ್ದರು. ಬಾಳೆ, ತೆಂಗು ಹಾಗೂ ವಿವಿಧ ತರಕಾರಿ ಬೆಳೆಗಳನ್ನು ಬೆಳೆಯುವಲ್ಲಿ ಹೆಸರುವಾಸಿಯಾಗಿದ್ದ ಅವರು ಪರಿಶ್ರಮಿ ರೈತರಾಗಿ ಹೆಸರು ಗಳಿಸಿದ್ದರು.

ಸಾಧನೆಗೆ ದೈಹಿಕ ಅಡಚಣೆ ಅಡ್ಡಿಯಾಗುವುದಿಲ್ಲ ಎಂಬುದನ್ನು ತಮ್ಮ ಬದುಕಿನ ಮೂಲಕ ತೋರಿಸಿದ ತಮ್ಮಣ್ಣ ಅವರು, ಕೃಷಿಯಲ್ಲಿ ಹೊಸ ವಿಧಾನಗಳನ್ನು ಅಳವಡಿಸಿಕೊಂಡು ಪ್ರಗತಿಪರ ರೈತರಾಗಿ ಗುರುತಿಸಿಕೊಂಡಿದ್ದರು. ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಂದಲೂ ಮೆಚ್ಚುಗೆ ಪಡೆದಿದ್ದರು. ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಸರಳ ವ್ಯಕ್ತಿತ್ವ ಹಾಗೂ ಜನಾನುರಾಗದಿಂದ ಗ್ರಾಮಸ್ಥರ ಹೃದಯದಲ್ಲಿ ವಿಶೇಷ ಸ್ಥಾನ ಪಡೆದಿದ್ದರು.

ಮೃತರಿಗೆ ಪತ್ನಿ, ಹಾರೋಕೊಪ್ಪ ಗ್ರಾಮ ಪಂಚಾಯಿತಿ ಮಾಜಿ ಸದಸ್ಯೆ ಸರೋಜಮ್ಮ, ಪುತ್ರ ಜೆಡಿಎಸ್ ಯುವ ಮುಖಂಡ ಜಿ.ಟಿ.ಕಿರಣ್ ಗೌಡ, ಸೊಸೆ, ಇಬ್ಬರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗ ಇದ್ದಾರೆ.

ಮೃತರ ಅಂತ್ಯಕ್ರಿಯೆ ಶನಿವಾರ ಸ್ವಗ್ರಾಮ ಗರಕಹಳ್ಳಿಯಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ತೀವ್ರ ಸಂತಾಪ**

ತಮ್ಮಣ್ಣ ಅವರ ನಿಧನಕ್ಕೆ ಬೆಂಗಳೂರು ದಕ್ಷಿಣ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಹೆಚ್ ಸಿ ಜಯಮುತ್ತು, ತಾಲೂಕು ಅಧ್ಯಕ್ಷ ಗೋವಿಂದಹಳ್ಳಿ ನಾಗರಾಜು, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಇಗ್ಗಲೂರು ಕುಮಾರ್ ಡಿಎಂಕೆ, ಗರಕಹಳ್ಳಿ ಕೃಷ್ಣೇಗೌಡ, ಸಾಮಾಜಿಕ ಕಾರ್ಯಕರ್ತ ಹೇಮಂತ್ ಗೌಡ ಸೇರಿದಂತೆ ಅನೇಕ ಪ್ರಗತಿಪರ ಕೃಷಿಕರು, ಗ್ರಾಮಸ್ಥರು, ಕೃಷಿ, ರೇಷ್ಮೆ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ತೀವ್ರ ಸಂತಾಪ ಸೂಚಿಸಿದ್ದಾರೆ.

ತಮ್ಮಣ್ಣ ಅವರ ಅಗಲಿಕೆಯಿಂದ ಪರಿಶ್ರಮ, ಧೈರ್ಯ ಮತ್ತು ಕೃಷಿ ಪ್ರೇಮದ ಪ್ರತೀಕವಾಗಿದ್ದ ಒಬ್ಬ ಆದರ್ಶ ರೈತನನ್ನು ಗ್ರಾಮ ಕಳೆದುಕೊಂಡಂತಾಗಿದೆ.

# ಐತಿಹಾಸಿಕ 'ನಾರಿ ಶಕ್ತಿ ವಂದನಾ ಅಧಿನಿಯಮ'ಮಂಡನೆ– ಪ್ರಧಾನಿ ಮೋದಿಗೆ ಧನ್ಯವಾದ ಸಲ್ಲಿಸಿದ ಛಲವಾದಿ ನಾರಾಯಣಸ್ವಾಮಿ

**ಬೆಂಗಳೂರು** : ಒಂದು ರಾಷ್ಟ್ರದ ಪ್ರಗತಿಯನ್ನು ಆ ಸಮಾಜದ ಮಹಿಳೆಯರು ಸಾಧಿಸಿರುವ ಪ್ರಗತಿಯ ಆಧಾರದ ಮೇಲೆ ಅಳೆಯುತ್ತೇನೆ." ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಈ ಮಾತುಗಳು ಇಂದು ಭಾರತದ ಸಂಸತ್ತಿನಲ್ಲಿ ಸಾಕಾರಗೊಳ್ಳುತ್ತಿವೆ. ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33 ಮೀಸಲಾತಿ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಮಂಡಿಸಿರುವ ಐತಿಹಾಸಿಕ ಸಾಂವಿಧಾನಿಕ ತಿದ್ದುಪಡಿ ಮಸೂದೆಯನ್ನು ಮುಕ್ತಕಂಠದಿಂದ ಸ್ವಾಗತಿಸುವುದಾಗಿ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿರುವ ಅವರು, ಮಹಿಳೆಯರ ಕನಸು ನನಸು: ಮೋದಿಜೀ ಅವರ ದೃಢ ಸಂಕಲ್ಪದಿಂದ ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ಮಹಿಳಾ ಮೀಸಲಾತಿ ಮಸೂದೆಗೆ ಜೀವ ನೀಡಿ, ಅದನ್ನು ವಾಸ್ತವಕ್ಕೆ ತರುತ್ತಿರುವ ಗೌರವಾನ್ವಿತ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರಿಗೆ ಸಮಸ್ತ ಸ್ತ್ರೀ ಸಮಾಜದ ಪರವಾಗಿ ಅನಂತ ಅನಂತ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಇದು ಕೇವಲ ಒಂದು ಮಸೂದೆಯಲ್ಲ, ಇದು ತಾಯಿ ಭಾರತಮಾತೆಯ ಪುತ್ರಿಯರಿಗೆ ನೀಡುತ್ತಿರುವ ಶಾಸನಾತ್ಮಕ ಗೌರವ. ಅಬಲೆಯನ್ನು 'ಸಬಲೆ'ಯನ್ನಾಗಿ ಮಾಡುವ ಮೋದಿಜೀ ಅವರ ಈ ನಿರ್ಧಾರ ಇತಿಹಾಸದಲ್ಲಿ ಸುವರ್ಣಾಕ್ಷರಗಳಲ್ಲಿ ಬರೆಯಲ್ಪಡುವಂಥದ್ದು.

ಇತಿಹಾಸದ ಸಾಹಸಗಾಥೆ – ನಮ್ಮ ಸ್ಫೂರ್ತಿ, ನಮ್ಮ ಇತಿಹಾಸವು ಮಹಿಳೆಯರ ಸಾಹಸಕ್ಕೆ ಸಾಕ್ಷಿಯಾಗಿದೆ. ಕಿತ್ತೂರು ರಾಣಿ ಚೆನ್ನಮ್ಮನ ಅಪ್ರತಿಮ ಧೈರ್ಯ, ಒನಕೆ ಓಬವ್ವನ ತಪಸ್ಸು, ಝಾನ್ಸಿ ರಾಣಿ ಲಕ್ಷ್ಮೀಬಾಯಿಯ ರಣಾಂಗಣದ ಹೋರಾಟಗಳು ನಮಗೆ ಸದಾ ಪ್ರೇರಣೆ. ಅಂದು ಅನ್ಯಾಯದ ವಿರುದ್ಧ ಕತ್ತಿ ಹಿಡಿದು ಹೋರಾಡಿದ ಮಹಿಳೆಯರು, ಇಂದು ದೇಶದ ನೀತಿ ನಿರೂಪಣೆಯಲ್ಲಿ ಪಾಲ್ಗೊಳ್ಳಲು 'ಸಂವಿಧಾನದ ಶಕ್ತಿ'ಯನ್ನು ಪಡೆದುಕೊಳ್ಳುತ್ತಿದ್ದಾರೆ.

**ಅಂಕಿ–ಅಂಶಗಳ ಕಿರುನೋಟ:** ಬದಲಾವಣೆಯ ಪರ್ವ ಈ ಮಸೂದೆಯು ದೇಶದ ರಾಜಕೀಯ ಚಿತ್ರಣವನ್ನೇ ಬದಲಿಸಲಿದೆ.



**ಲೋಕಸಭೆಯ ಬಲ:** ಸದಸ್ಯ ಬಲವು 543 ರಿಂದ 850ಕ್ಕೆ ಏರಿಕೆಯಾಗುವ ನಿರೀಕ್ಷೆಯಿದ್ದು, ಇದರಲ್ಲಿ ಮಹಿಳೆಯರ ಪ್ರಾತಿನಿಧ್ಯ ಗಣನೀಯವಾಗಿ ಹೆಚ್ಚಲಿದೆ.

ಕರ್ನಾಟಕದ ಪ್ರಭಾವ: ಕರ್ನಾಟಕ ವಿಧಾನಸಭೆಯ ಸ್ಥಾನಗಳು 224 ರಿಂದ 336ಕ್ಕೆ ಏರಿಕೆಯಾಗುವ ಸಾಧ್ಯತೆಯಿದ್ದು, ಮಹಿಳೆಯರಿಗೆ ನಿರ್ಣಾಯಕ ಸ್ಥಾನಗಳು ಲಭಿಸಲಿವೆ. ಗಡಿ ಮೀರಿ ಪ್ರಾತಿನಿಧ್ಯ: 2029ರ ವೇಳೆಗೆ ದೇಶದ ಪ್ರತಿಯೊಂದು ನಿರ್ಧಾರದಲ್ಲೂ ಮಹಿಳೆಯರ ಧ್ವನಿ ಶೇ. 33ರಷ್ಟು ಪ್ರತಿಧ್ವನಿಸಲಿದೆ. ಮಹಿಳಾ ಮೀಸಲಾತಿಯ ಪ್ರಾಮುಖ್ಯತೆ ಮತ್ತು ಪರಿಣಾಮಗಳು.

ಲಿಂಗ ಸಮಾನತೆ: ಸಂಸತ್ತಿನಲ್ಲಿ ಮಹಿಳೆಯರ ಸಂಖ್ಯೆ ಹೆಚ್ಚುವುದರಿಂದ ಮಹಿಳಾ ಮತ್ತು ಮಕ್ಕಳ ಸುರಕ್ಷತೆ, ಶಿಕ್ಷಣ ಹಾಗೂ ಆರೋಗ್ಯಕ್ಕೆ ಸಂಬಂಧಿಸಿದ ಕಾಯ್ದೆಗಳು ಹೆಚ್ಚು ಪರಿಣಾಮಕಾರಿಯಾಗಿ ಜಾರಿಗೆ ಬರಲಿವೆ. ಮಹಿಳೆಯರ ಸುಭದ್ರತೆ ಹಾಗೂ ಬಲವರ್ಧನೆಗೆ ಈ ಮಸೂದೆ ಸಹಕಾರಿಯಾಗಲಿದೆ.

ನಿರ್ಧಾರ ತೆಗೆದುಕೊಳ್ಳುವ ಶಕ್ತಿ: ಕೇವಲ ಮತದಾರರಾಗಿ ಉಳಿಯದೆ, ಮಹಿಳೆಯರು ದೇಶದ ಭವಿಷ್ಯವನ್ನು ನಿರ್ಧರಿಸುವ 'ನಿರ್ಧಾರಕರು' (Decision Makers) ಆಗಲಿದ್ದಾರೆ.

**ಸಾಮಾಜಿಕ ಬದಲಾವಣೆ:** ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ಮೀಸಲಾತಿಯಿಂದಾದ ಬದಲಾವಣೆಯನ್ನು ನಾವು ನೋಡಿದ್ದೇವೆ. ಈಗ ಅದು ರಾಷ್ಟ್ರಮಟ್ಟದಲ್ಲಿ ಪ್ರತಿಫಲಿಸಲಿದ್ದು, ಆಡಳಿತದಲ್ಲಿ ಪಾರದರ್ಶಕತೆ ಮತ್ತು ಸಂವೇದನಾಶೀಲತೆ ಹೆಚ್ಚಲಿದೆ.

ಈ ಮಸೂದೆಯು ಕೇವಲ ರಾಜಕೀಯ ಲಾಭಕ್ಕಾಗಿ ಅಲ್ಲ, ಬದಲಾಗಿ ಭಾರತವನ್ನು 'ವಿಕಸಿತ ಭಾರತ'ವನ್ನಾಗಿ ಮಾಡುವ ಗುರಿಯತ್ತ ಇಟ್ಟ ದೊಡ್ಡ ಹೆಜ್ಜೆಯಾಗಿದೆ. ತಾಯಂದಿರ, ಸಹೋದರಿಯರ ದಶಕಗಳ ಕಾಲದ ಹೋರಾಟಕ್ಕೆ ಇಂದು ಜಯ ಸಿಕ್ಕಿದೆ. ಈ ಮಸೂದೆಯು ಮುಂಬರುವ ಪೀಳಿಗೆಯ ಹೆಣ್ಣುಮಕ್ಕಳಿಗೆ ದೊಡ್ಡ ಮಟ್ಟದ ಆತ್ಮವಿಶ್ವಾಸವನ್ನು ತುಂಬಲಿದೆ. ನವ ಭಾರತದ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಇನ್ನು ಮುಂದೆ ಅಳಿಸಲಾಗದ ಮುದ್ರೆಯಾಗಲಿದೆ.

ಇಂತಹ ಐತಿಹಾಸಿಕ ತೀರ್ಮಾನಕ್ಕೆ ಮತ್ತೊಮ್ಮೆ ಭಾರತ ಸರ್ಕಾರ ಮತ್ತು ಪ್ರಧಾನಿಗಳಿಗೆ ಅಭಿನಂದನೆಗಳನ್ನು ಸಲ್ಲಿಸುವುದಾಗಿ ತಿಳಿಸಿದ್ದಾರೆ.

# ISO 50001:2018 ಅಂತಾರಾಷ್ಟ್ರೀಯ ಪ್ರಮಾಣಪತ್ರ ಪಡೆದ ದೇಶದ ಪ್ರಥಮ ಜಲಮಂಡಳಿ ಎನ್ನುವ ಹೆಗ್ಗಳಿಕೆಗೆ ಪಾತ್ರವಾದ BWSSB

**ಬೆಂಗಳೂರು** : ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರ ದೂರದೃಷ್ಟಿಯ ನಾಯಕತ್ವದಲ್ಲಿ, ಬೆಂಗಳೂರು ಜಲಮಂಡಳಿ (Bangalore Water Supply & Sewerage Board - BWSSB) ಐತಿಹಾಸಿಕ ಮೈಲಿಗಲ್ಲೊಂದನ್ನು ಸಾಧಿಸುವ ಮೂಲಕ ತನ್ನ ಮುಕುಟಕ್ಕೆ ಹೊಸ ಗರಿಯೊಂದನ್ನು ಸೇರಿಸಿಕೊಂಡಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ISO 50001:2018 ಪ್ರಮಾಣಪತ್ರವನ್ನು ಪಡೆದ ದೇಶದ ಮೊದಲ ಜಲ ಮಂಡಳಿ ಎಂಬ ಹೆಗ್ಗಳಿಕೆಗೆ BWSSB ಪಾತ್ರವಾಗಿದೆ.

ಏಪ್ರಿಲ್ 14, 2026 ರಂದು Bureau Veritas (ಬ್ಯೂರೋ ವೆರಿಟಾಸ್) ಅಧಿಕೃತವಾಗಿ ನೀಡಿರುವ ಈ ಪ್ರತಿಷ್ಠಿತ ಪ್ರಮಾಣಪತ್ರವು, ಮಂಡಳಿಯ ಅತ್ಯುತ್ತಮ ಇಂಧನ ನಿರ್ವಹಣಾ ವ್ಯವಸ್ಥೆಗಳನ್ನು (Energy Management Systems) ಔಪಚಾರಿಕವಾಗಿ ಗುರುತಿಸಿದೆ. ನಿರ್ದಿಷ್ಟವಾಗಿ ಹೇಳುವುದಾದರೆ, TK Halli (ಟಿ.ಕೆ.ಹಳ್ಳಿ), Harohalli (ಹಾರೋಹಳ್ಳಿ) ಮತ್ತು Tataguni (ತಾತಗುಣಿ) – ಈ ಮೂರು ಪ್ರಮುಖ ಸ್ಥಳಗಳಲ್ಲಿರುವ ತನ್ನ ಬೃಹತ್ ನೀರು ಸರಬರಾಜು ಪಂಪಿಂಗ್ ಸ್ಟೇಷನ್‌ಗಳನ್ನು (Bulk Water Supply Pumping Stations) ಅಂತಾರಾಷ್ಟ್ರೀಯ ಮಟ್ಟದಲ್ಲಿ ನಿರ್ವಹಿಸುತ್ತಿರುವುದಕ್ಕಾಗಿ ಬೆಂಗಳೂರು ಜಲಮಂಡಳಿಗೆ ಈ ಹೊಸ ಪ್ರಮಾಣಪತ್ರವನ್ನು ನೀಡಿ ಗೌರವಿಸಲಾಗಿದೆ.

ಇದಲ್ಲದೆ, ಈ ಪ್ರಮಾಣಪತ್ರವು ಕಾವೇರಿ ಭವನದಲ್ಲಿರುವ (Cauvery Bhavan) ಪ್ರಧಾನ ಕಚೇರಿಯ ಪ್ರಮುಖ ಪೂರಕ ಕಾರ್ಯಗಳನ್ನು ಹಾಗೂ ಬೃಹತ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ (Greater Bengaluru Authority Limits - GBA Limits) ನಿರಂತರ ನೀರು ಸರಬರಾಜು ಮಾಡುವ ಒಟ್ಟಾರೆ ಪ್ರಕ್ರಿಯೆಯನ್ನು ಒಳಗೊಂಡಿದೆ.

ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಡಾ. ರಾಮ್ ಪ್ರಸಾತ್ ಮನೋಹರ್ ಅವರ ನೇತೃತ್ವದಲ್ಲಿ ಜಲಮಂಡಳಿಯ ಹಿರಿಯ ಅಧಿಕಾರಿಗಳು, ಈ ಅಂತಾರಾಷ್ಟ್ರೀಯ ಮಾನ್ಯತೆ ಪಡೆಯಲು ಪ್ರಮುಖ ಕಾರಣೀಭೂತರಾದ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಪ್ರಮಾಣಪತ್ರವನ್ನು ಹಸ್ತಾಂತರಿಸಿ, ವಿಶೇಷ ಧನ್ಯವಾದಗಳನ್ನು ಅರ್ಪಿಸಿದರು.

ಈ ಅಂತಾರಾಷ್ಟ್ರೀಯ ಮಾನ್ಯತೆಯನ್ನು ಶ್ಲಾಘಿಸಿದ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು, "ಪ್ರತಿಷ್ಠಿತ ISO 50001:2018 ಪ್ರಮಾಣಪತ್ರವನ್ನು ಪಡೆದುಕೊಂಡಿರುವುದು ಒಂದು ಸ್ಮರಣೀಯ ಸಾಧನೆಯಾಗಿದ್ದು, ಬೆಂಗಳೂರು ನಗರಕ್ಕೆ ವಿಶ್ವದರ್ಜೆಯ, ಸುಸ್ಥಿರ ಜಲ ಮೂಲಸೌಕರ್ಯವನ್ನು ನಿರ್ಮಿಸುವಲ್ಲಿ ನಮ್ಮ ಸರ್ಕಾರದ ಬದ್ಧತೆಯನ್ನು ಇದು ಪ್ರತಿಬಿಂಬಿಸುತ್ತದೆ. ಈ ಬೃಹತ್ ನೀರು ಸರಬರಾಜು ಪಂಪಿಂಗ್ ಸ್ಟೇಷನ್‌ಗಳಾದ್ಯಂತ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವ ಮೂಲಕ, ಬೆಂಗಳೂರು ಜಲಮಂಡಳಿ ಕೇವಲ ಗಮನಾರ್ಹವಾದ ರಾಷ್ಟ್ರೀಯ ಮಾನದಂಡವನ್ನು ಸ್ಥಾಪಿಸಿಲ್ಲ, ಬದಲಾಗಿ ಲಕ್ಷಾಂತರ ನಾಗರಿಕರಿಗೆ ಅತ್ಯಂತ ದಕ್ಷ, ವಿಶ್ವಾಸಾರ್ಹ ಮತ್ತು ತಡೆರಹಿತ ನೀರಿನ ಸೇವೆಗಳನ್ನು ತಲುಪಿಸುವುದನ್ನು ಖಚಿತಪಡಿಸುತ್ತಿದೆ. ಈ ಮೈಲಿಗಲ್ಲು ಬ್ರ್ಯಾಂಡ್ ಬೆಂಗಳೂರು ಅನ್ನು ಭವಿಷ್ಯಕ್ಕೆ ಸಿದ್ಧವಾದ, ಹವಾಮಾನ–ಸ್ಥಿತಿಸ್ಥಾಪಕ ಜಾಗತಿಕ ಮಹಾನಗರವಾಗಿ ಪರಿವರ್ತಿಸುವ ನಮ್ಮ ದೃಷ್ಟಿಕೋನವನ್ನು ಇನ್ನಷ್ಟು ವೇಗವಾಗಿ ಅನುಷ್ಠಾನಗೊಳಿಸುವ ಕ್ರಮವಾಗಿದೆ," ಎಂದು ಹೇಳಿದರು.

ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ತುಷಾರ್ ಗಿರಿನಾಥ್ ಮಾತನಾಡಿ, "ಈ ಐತಿಹಾಸಿಕ ಪ್ರಮಾಣಪತ್ರವು BWSSB ಯಲ್ಲಿನ ಪ್ರತಿಯೊಬ್ಬರ ಕಠಿಣ ಪರಿಶ್ರಮ ಹಾಗೂ ಸಮರ್ಪಣಾ ಭಾವದ ನೇರ ಫಲಿತಾಂಶವಾಗಿದೆ," ಎಂದು ತಿಳಿಸಿದರು.

ಈ ಐತಿಹಾಸಿಕ ಸಾಧನೆಯ ಕುರಿತು ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಡಾ. ರಾಮ್ ಪ್ರಸಾತ್ ಮನೋಹರ್ ಐಎಎಸ್ ಅವರು ಮಾತನಾಡಿ, "ಪ್ರತಿ ಮನೆಗೂ ಶುದ್ಧ ಮತ್ತು ಸುರಕ್ಷಿತ ಕುಡಿಯುವ ನೀರು ಒದಗಿಸಲು ಬೆಂಗಳೂರು ಜಲಮಂಡಳಿ ಬದ್ಧವಾಗಿದೆ. ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳ ಸಮರ್ಥ ನಾಯಕತ್ವದಲ್ಲಿ, ಅಂತಾರಾಷ್ಟ್ರೀಯ ಮಾನದಂಡಗಳನ್ನು ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ನಾವು ನಿರಂತರವಾಗಿ ನಮ್ಮ ತಂತ್ರಜ್ಞಾನವನ್ನು ಮೇಲ್ದರ್ಜೆಗೇರಿಸುತ್ತಿದ್ದೇವೆ. ಈ ಐತಿಹಾಸಿಕ ಪ್ರಮಾಣಪತ್ರವು ಬೆಂಗಳೂರು ಜಲಮಂಡಳಿಯಲ್ಲಿನ ಪ್ರತಿಯೊಬ್ಬರ ಕಠಿಣ ಪರಿಶ್ರಮ ಮತ್ತು ಸಮರ್ಪಣಾಭಾವದ ನೇರ ಫಲಿತಾಂಶವಾಗಿದೆ," ಎಂದು ತಿಳಿಸಿದ್ದಾರೆ. ಈ ಮೈಲಿಗಲ್ಲನ್ನು ಸಾಧಿಸುವಲ್ಲಿ ಮುಖ್ಯ ಅಭಿಯಂತರರಾದ (ಯೋಜನೆ) ಡಾ. ರಾಜೀವ್ ಮತ್ತು ಮುಖ್ಯ ಅಭಿಯಂತರರಾದ (ಕೆ–M & JA) ಶ್ರೀ ರಾಜಶೇಖರ್ ಅವರ ಸಂಘಟಿತ ಪ್ರಯತ್ನವನ್ನು ನಾವು ಶ್ಲಾಘಿಸುತ್ತೇವೆ."

ಈ ಹೊಸ ಜಾಗತಿಕ ಮಾನ್ಯತೆಯು ಮಂಡಳಿಯ ಇತ್ತೀಚಿನ ರಾಷ್ಟ್ರೀಯ ವಿಜಯಗಳಿಗೆ ಪೂರಕವಾಗಿದೆ. ಕಳೆದ ವರ್ಷವಷ್ಟೇ, ಕೊಳವೆ ಮೂಲಕ ಕುಡಿಯುವ ನೀರು ಸರಬರಾಜು ನಿರ್ವಹಣಾ ವ್ಯವಸ್ಥೆಗಾಗಿ ಪ್ರತಿಷ್ಠಿತ Bureau of Indian Standards - BIS (ಭಾರತೀಯ ಮಾನದಂಡಗಳ ಬ್ಯೂರೋ) ಪ್ರಮಾಣಪತ್ರವನ್ನು ಪಡೆದ ಭಾರತದ ಮೊದಲ ಜಲ ಮಂಡಳಿ ಎಂಬ ಹೆಗ್ಗಳಿಕೆಗೆ BWSSB ಪಾತ್ರವಾಗಿ ರಾಷ್ಟ್ರೀಯ ಮಟ್ಟದಲ್ಲಿ ಸುದ್ದಿಯಾಗಿತ್ತು. ঃখখ ನಿಂದ ಸತತ ಆರು ತಿಂಗಳ ಕಠಿಣ ಮೌಲ್ಯಮಾಪನದ ನಂತರ ದೊರೆತ ಈ ರಾಷ್ಟ್ರೀಯ ಪ್ರಶಸ್ತಿಯು, ಇದೀಗ ಹೊಸ ಅಂತಾರಾಷ್ಟ್ರೀಯ ISO 50001:2018 ಪ್ರಮಾಣೀಕರಣದೊಂದಿಗೆ ಸೇರಿಕೊಂಡು, BWSSB ಯ ತ್ವರಿತ ಸಾಂಸ್ಥಿಕ ರೂಪಾಂತರವನ್ನು ಹಾಗೂ ಬೆಂಗಳೂರಿನ ನಾಗರಿಕರಿಗೆ ನೀಡಲಾಗುತ್ತಿರುವ ರಾಜಿಯಾಗದ ಸೇವೆಯ ಗುಣಮಟ್ಟವನ್ನು ಎತ್ತಿತೋರಿಸುತ್ತದೆ.


**ಕ್ಲಿಕ್ಸ್ ಕ್ಯಾಪಿಟಲ್ ಸರ್ವೀಸಸ್ ಪ್ರೈ. ಲಿಮಿಟೆಡ್**
ನೋಂದಾಯಿತ ಕಚೇರಿ: W2/14, 1ನೇ ಮಹಡಿ, ಪಶ್ಚಿಮ ಪಟೇಲ್ ನಗರ, ದೆಹಲಿ, 110008

**ತಿದ್ದುಪಡಿ**

**ಕ್ಲಿಕ್ಸ್ ಕ್ಯಾಪಿಟಲ್ ಸರ್ವೀಸಸ್ ಪ್ರೈ. ಲಿಮಿಟೆಡ್** ನಿಂದ ಮಾರಾಟ ಸೂಚನೆಯನ್ನು ಸೌತ್ ಇಂಡಿಯಾ ಟೈಮ್ಸ್ & ವಿಜಯ ವಿಶ್ವವಾಣಿ ಪತ್ರಿಕೆಯಲ್ಲಿ (ಇಂಗ್ಲಿಷ್+ಕನ್ನಡ) ಬೆಂಗಳೂರು ಆವೃತ್ತಿಯಲ್ಲಿ 15.04.2026 ರಂದು ಪ್ರಕಟಿಸಲಾಗಿದೆ, ಅಂದರೆ, ಸಾಲಗಾರರ ಹೆಸರು: **M/S Mi So ಎಂಟರ್ಪ್ರೈಸಸ್ ಪ್ರೈವೇಟ್ ಲಿಮಿಟೆಡ್,** ಇದರಲ್ಲಿ ಮೀಸಲು ಬೆಲೆ ಮತ್ತು ಇಎಂಡಿಯನ್ನು ರೂ. 2,74,89,600/- ಮತ್ತು ರೂ. 27,48,960/- ಬದಲಿಗೆ **ರೂ. 2,47,40,640 ಮತ್ತು ರೂ. 24,74,064/-** ಎಂದು ಓದಿಕೊಳ್ಳಬೇಕು.
ಮಾರಾಟ ಸೂಚನೆಯ ಇತರ ವಿಷಯಗಳು ಹಾಗೆಯೇ ಇರುತ್ತವೆ.

**ಅಧಿಕೃತ ಅಧಿಕಾರಿ**
**ಕ್ಲಿಕ್ಸ್ ಕ್ಯಾಪಿಟಲ್ ಸರ್ವೀಸಸ್ ಪ್ರೈ. ಲಿಮಿಟೆಡ್**



**ಆಲ್ಟಮ್ ಕ್ರೆಡೋ ಹೋಮ್ ಫೈನಾನ್ಸ್ ಪ್ರೈವೇಟ್ ಲಿಮಿಟೆಡ್**
ನೋಂ. ಕಚೇರಿ: ಮಹಡಿ ಸಂಖ್ಯೆ 7, ಕಲ್ಪತರು ಇನ್ಫಿನಿಯಾ, ಪ್ಲಾಟ್ ಸಂಖ್ಯೆ 22, ಸಬ್ ಪ್ಲಾಟ್ ಸಂಖ್ಯೆ 3, ಸಿಟಿಎಸ್ ಸಂಖ್ಯೆ. 15/1, ಗ್ರಾಮ ಭಮುರ್ದಾ, ವಕ್ಡೆವಾಡಿ, ಶಿವಾಜಿ ನಗರ, ಪುಣೆ ನಗರ, ಮಹಾರಾಷ್ಟ್ರ 411005

**ಸ್ವಾಧೀನ ಸೂಚನೆ [ನಿಯಮ 8(1)] (ಸ್ಥಿರ ಆಸ್ತಿಗಾಗಿ)**

ಕೆಳಸಹಿದಾರರು ಆಲ್ಟಮ್ ಕ್ರೆಡೋ ಹೋಮ್ ಫೈನಾನ್ಸ್ ಪ್ರೈವೇಟ್ ಲಿಮಿಟೆಡ್ (ಇನ್ನು ಮುಂದೆ "ಎಸಿಹೆಚ್‌ಎಫ್‌ಎಲ್" ಎಂದು ಉಲ್ಲೇಖಿಸಲಾಗುತ್ತದೆ) ನ ಅಧಿಕೃತ ಅಧಿಕಾರಿಯಾಗಿದ್ದು, ಹಣಕಾಸು ಆಸ್ತಿಗಳ ಸೆಕ್ಯುರಿಟೈಸೇಶನ್ ಮತ್ತು ಪುನರ್ನಿರ್ಮಾಣ ಮತ್ತು ಭದ್ರತಾ ಹಿತಾಸಕ್ತಿ ಜಾರಿ ಕಾಯ್ದೆ, 2002 ರ ಅಡಿಯಲ್ಲಿ ಮತ್ತು ಭದ್ರತಾ ಹಿತಾಸಕ್ತಿ (ಜಾರಿ) ನಿಯಮಗಳು, 2002 ರ ನಿಯಮ 3 ರೊಂದಿಗೆ ಓದಲಾದ ಸೆಕ್ಷನ್ 13(12) ರ ಅಡಿಯಲ್ಲಿ ನೀಡಲಾದ ಅಧಿಕಾರವನ್ನು ಚಲಾಯಿಸಿ, ಕೆಳಗಿನ ಕೋಷ್ಟಕದಲ್ಲಿ ಉಲ್ಲೇಖಿಸಿರುವಂತೆ ಸಾಲಗಾರರು/ಸಹ-ಸಾಲಗಾರರು/ಗಳಿಗೆ ತಗಾದೆ ಸೂಚನೆಯನ್ನು ನೀಡಿದ್ದು, ನಿಗದಿತ ಅವಧಿಯೊಳಗೆ ಮೊತ್ತವನ್ನು ಮರುಪಾವತಿಸುವಂತೆ ಸೂಚಿಸಿದ್ದಾರೆ.
ಸಾಲಗಾರರು/ಸಹ-ಸಾಲಗಾರರು ನಿಗದಿತ ಸಮಯದೊಳಗೆ ಬಾಕಿ ಹಣವನ್ನು ಮರುಪಾವತಿಸಲು ವಿಫಲರಾಗಿದ್ದು, ಕೆಳಸಹಿದಾರರು ಸದರಿ ನಿಯಮಗಳ 8ನೇ ನಿಯಮದೊಂದಿಗೆ ಓದಲಾದ ಸದರಿ ಕಾಯಿದೆಯ ಸೆಕ್ಷನ್ 13(4) ರ ಅಡಿಯಲ್ಲಿ, ಕೆಳಗಿನ ಕೋಷ್ಟಕದಲ್ಲಿ ಉಲ್ಲೇಖಿಸಲಾದ ದಿನಾಂಕದಂದು ಭದ್ರತಾ ಆಸ್ತಿ(ಗಳ) **ಸಾಂಕೇತಿಕ ಸ್ವಾಧೀನವನ್ನು** ತೆಗೆದುಕೊಂಡಿದ್ದಾರೆ ಎಂದು ಸಾಲಗಾರರು ಮತ್ತು ಸಾರ್ವಜನಿಕರಿಗೆ ಇಲ್ಲಿ ಸೂಚನೆ ನೀಡಲಾಗಿದೆ.
ಸಾಲಗಾರರು/ಭದ್ರತಾ ಸಾಲಗಾರರು ಮತ್ತು ಸಾರ್ವಜನಿಕರು ಭದ್ರತಾ ಆಸ್ತಿಯೊಂದಿಗೆ ವ್ಯವಹರಿಸದಂತೆ ಇಲ್ಲಿ ಎಚ್ಚರಿಕೆ ನೀಡಲಾಗಿದೆ ಮತ್ತು ಆಸ್ತಿಯೊಂದಿಗಿನ ಯಾವುದೇ ವ್ಯವಹಾರಗಳು ತಗಾದೆ ಸೂಚನೆಯಲ್ಲಿ ಉಲ್ಲೇಖಿಸಲಾದ ಮೊತ್ತಕ್ಕೆ ಎಸಿಹೆಚ್‌ಎಫ್‌ಎಲ್ ನ ಶುಲ್ಕಕ್ಕೆ ಒಳಪಟ್ಟಿರುತ್ತವೆ.
ಭದ್ರತಾ ಆಸ್ತಿ(ಗಳನ್ನು) ಪುನಃ ಪಡೆದುಕೊಳ್ಳಲು ಲಭ್ಯವಿರುವ ಸಮಯದ ಬಗ್ಗೆ, ಕಾಯಿದೆಯ ಸೆಕ್ಷನ್ 13 ರ ಉಪ-ವಿಭಾಗ (8) ರ ನಿಬಂಧನೆಗಳತ್ತ ಸಾಲಗಾರರ ಗಮನಕ್ಕೆ ತರಲಾಗಿದೆ.

| ಕ್ರ. ಸಂ. | ಸಾಲಗಾರರ ವಿವರಗಳು | ಎನ್ ಪಿ ಎ ದಿನಾಂಕ ಮತ್ತು ಬಾಕಿ ಮೊತ್ತ | 13(2) ದಿನಾಂಕ ಮತ್ತು ಸ್ವಾಧೀನ ದಿನಾಂಕ |
|---|---|---|---|
| 1 | ಚಂದ್ರಶೇಖರ ಪುಟ್ಟ ಬಿರಯ್ಯ (ಸಾಲಗಾರರು), ಶಿಲ್ಪಾ ಎ ಎಸ್ (ಸಹ-ಅರ್ಜಿದಾರರು) ಖಾತೆ ಸಂಖ್ಯೆ S161202000049 | 29-ಡಿಸೆಂಬರ್-25 ರೂ. 2,17,080/- 06-ಜನವರಿ-2026 ರಂತೆ | 06-ಜನವರಿ-2026 16-ಏಪ್ರಿಲ್-2026 |

**ಆಸ್ತಿ ವಿವರಣೆ:-** ಎಲ್ಲಾ ಭಾಗ ಮತ್ತು ವಿಭಾಗಗಳು ಸೇರಿದಂತೆ ಸ್ಥಿರ ಆಸ್ತಿಯ ನಂ.25/25, ಇ-ಸ್ವತ್ತು ನಂ.152500903602020051, ತುಮಕೂರು ತಾಲ್ಲೂಕಿನ ಹೆಬ್ಬೂರು ಹೋಬಳಿಯ ನಿಡುವಲಲು ಗ್ರಾಮ ಪಂಚಾಯತ್ನ ತಾವರೆಕೆರೆ ಗ್ರಾಮದಲ್ಲಿದೆ, ಪೂರ್ವದಿಂದ ಪಶ್ಚಿಮಕ್ಕೆ 9.7536 ಮೀಟರ್ ಮತ್ತು ಉತ್ತರದಿಂದ ದಕ್ಷಿಣಕ್ಕೆ 11.8872 ಮೀಟರ್ ಅಳತೆ, ಒಟ್ಟು 115.94 ಚದರ ಮೀಟರ್ ಅಳತೆ, **ಗಡಿಗಳು:** ಪೂರ್ವ - ಲೋಕೇಶ ಅವರಿಗೆ ಸೇರಿದ ನಿವೇಶನ ಮನೆ, ಪಶ್ಚಿಮ - ಚಿಕ್ಕಮ್ಮ ಅವರಿಗೆ ಸೇರಿದ ನಿವೇಶನ, ದಕ್ಷಿಣ - ಜಾವೀದ್ ಅವರ ಖಾಲಿ ನಿವೇಶನ, ಉತ್ತರ - ರಸ್ತೆ

**ದಿನಾಂಕ: 18.04.2026**
**ಸ್ಥಳ: ಕರ್ನಾಟಕ**

**ಸಹಿ/-, ಅಧಿಕೃತ ಅಧಿಕಾರಿ**
**ಆಲ್ಟಮ್ ಕ್ರೆಡೋ ಹೋಮ್ ಫೈನಾನ್ಸ್ ಪ್ರೈವೇಟ್ ಲಿಮಿಟೆಡ್**

# ನನ್ನ ಮತ್ತು ಸಿದ್ದರಾಮಯ್ಯ ಗುಂಪು ಅಂಥ ಎಲ್ಲಿದೆ? ಎಲ್ಲರೂ ನಮ್ಮ ಶಾಸಕರೇ: ಡಿಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು :** ಸಿದ್ದರಾಮಯ್ಯ ಮತ್ತು ನಾನು ಒಟ್ಟಿಗೇ ಇದ್ದೇವೆ. ಪ್ರತಿದಿನ ಜತೆಯಲ್ಲೇ ಕೂರುತ್ತೇವೆ, ಚರ್ಚಿಸುತ್ತೇವೆ. ಎಲ್ಲಿದೆ ನಮ್ಮಲ್ಲಿ ಗುಂಪು ಎಂಬುದು? ಎಲ್ಲರೂ ನಮ್ಮ ಶಾಸಕರೇ. ಮಾಧ್ಯಮಗಳೇ ನಮ್ಮನ್ನು ಇಬ್ಭಾಗ ಮಾಡುತ್ತಿವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಸಿದ್ದರಾಮಯ್ಯ ಅವರೊಟ್ಟಿಗೆ ಒಂದೇ ವಿಮಾನದಲ್ಲಿ ಬಹಳ ದಿನಗಳ ನಂತರ ಪ್ರಯಾಣ ಮಾಡುತ್ತಿದ್ದೀರಲ್ಲಾ ಎಂಬ ಮಾಧ್ಯಮದವರ ಪ್ರಶ್ನೆಗೆ ಸಿಟ್ಟಾದ ಡಿ ಕೆ ಶಿವಕುಮಾರ್ ಅವರು, "ನಿಮಗೆ ತಲೆ ಕೆಟ್ಟಿದೆ ಎನಿಸುತ್ತಿದೆ. ಎಲ್ಲಿದೆ ನನ್ನ ಮತ್ತು ಸಿದ್ದರಾಮಯ್ಯ ಗುಂಪು. ನೀವೇ ಗುಂಪು ಸೃಷ್ಟಿ ಮಾಡುತ್ತಿದ್ದೀರಿ. ದೆಹಲಿಯಲ್ಲಿ ಸಿದ್ದರಾಮಯ್ಯ ಅವರ ಗುಂಪು ಎಂದು ಹೇಳಿದ್ದೀರಿ. ಅವರೇನೂ ಸಿದ್ದರಾಮಯ್ಯ ಗುಂಪು ಎಂದು ಬೋರ್ಡ್ ಹಾಕಿಕೊಂಡಿದ್ದಾರೆಯೇ? ಅಥವಾ ನನ್ನ ಗುಂಪು ಎಂದು ನಾನು ಬೋರ್ಡ್ ಹಾಕಿಕೊಂಡಿದ್ದೇನೆಯೇ? ಎಲ್ಲ 139 ಶಾಸಕರು ನನ್ನ ಹಾಗೂ ಸಿದ್ದರಾಮಯ್ಯ ಅವರ ಶಾಸಕರೇ ಆಗಿದ್ದಾರೆ. ಯಾವ ಗುಂಪೂ ಇಲ್ಲ, ಬೋರ್ಡೂ ಇಲ್ಲ. ನಿಮಗೆ ಗೊತ್ತಿದೆಯೇ ಯಾರ್ಯಾರ ಗುಂಪು ಏನಿದೆ ಅಂತ? ನಿಮಗೆ ಹೆಂಗೆ ಬೇಕೋ ಹಂಗೆ ಚಟಕ್ಕೆ ಬರೆಯುತ್ತಾ ಇದ್ದೀರಿ" ಎಂದರು.

ನಿಮ್ಮ ಪಕ್ಷದಲ್ಲಿ ಒಬ್ಬೊಬ್ಬರು ಒಂದೊಂದು ಹೇಳಿಕೆ ನೀಡುತ್ತಾ ಇದ್ದಾರಲ್ಲಾ ಎಂದು ಕೇಳಿದಾಗ, "ಯಾವ ಹೇಳಿಕೆಯೂ ಇಲ್ಲ. ಯಾವ ಗುಂಪೂ ಇಲ್ಲ. 139 ಶಾಸಕರು ನನ್ನದೇ ಗುಂಪು. ಕಾಂಗ್ರೆಸ್ ಗುಂಪು. ನಮಗೆ ಪಕ್ಷ ಹಾಗೂ ಪಕ್ಷದ ಹಿತ ಮುಖ್ಯ. ಪಕ್ಷದ ಅಭಿವೃದ್ಧಿಗೆ ಹಾಗೂ ಅದರ ಒಳಿತಿಗೆ ಏನು ಬೇಕು ಎಂಬುದರ ಬಗ್ಗೆ ಚರ್ಚೆ ನಡೆಸಿದ್ದೇವೆ. ನಾವೆಲ್ಲ ಒಟ್ಟಿಗೆ ಸೇರಿ ಕೆಲಸ ಮಾಡುತ್ತಿದ್ದೇವೆ, ಮಾಡುತ್ತೇವೆ" ಎಂದರು.

ಜಬ್ಬಾರ್ ಹಾಗೂ ನಸೀರ್ ಅಹ್ಮದ್ ಅವರ ವಿರುದ್ಧ ಕ್ರಮ ಕೈಗೊಂಡಿರುವುದರ ಬಗ್ಗೆಯೂ ಮಾತನಾಡುತ್ತೇನೆ ಎಂದು ಸತೀಶ್ ಜಾರಕಿಹೊಳಿ ಅವರು ಹೇಳಿದ್ದರ ಬಗ್ಗೆ ಕೇಳಿದಾಗ, "ಇಲ್ಲಿ ಯಾವುದೇ ವೈಯಕ್ತಿಕ ವಿಚಾರಗಳು ಇಲ್ಲ. ಪಕ್ಷಕ್ಕೆ ತನ್ನದೇ ಆದ ರೀತಿ-ರಿವಾಜುಗಳಿವೆ. ಎಂಎಲ್ ಎ, ಎಂಎಲ್ ಸಿ ವಿಚಾರವಾಗಿ ದೆಹಲಿ ನಾಯಕರು ಏನೂ ಹೇಳದೇ, ಅವರು ಏನೂ ಸೂಚನೆ ಕೊಡದೆ, ನಾವು ಏನೂ ಮಾಡಲೂ ಆಗುವುದಿಲ್ಲ. ಕೆಲವನ್ನು ಮಾರ್ಗದರ್ಶನದ ಅನುಸಾರವಾಗಿ ಮಾಡಬೇಕಾಗುತ್ತದೆ. ಕೆಲವರು ನನ್ನ ಮೇಲೆ ದೂರಬಹುದು. ಹಾಗೇ ನನ್ನ ಮೇಲೆ ಹೇಳಿದರೂ ಚಿಂತೆಯಿಲ್ಲ. ಪಕ್ಷದ ಶಿಸ್ತಿನ ಚೌಕಟ್ಟಿನಲ್ಲಿ



ನಾವೆಲ್ಲರೂ ಕೆಲಸ ಮಾಡಬೇಕಾಗುತ್ತದೆ" ಎಂದರು.

**ಕಾಂಗ್ರೆಸ್ ಪಕ್ಷ ಇರುವುದೇ ಎಲ್ಲರ ಒಳಿತಿಗೆ**

ಅಲ್ಪಸಂಖ್ಯಾತ ಸಮುದಾಯವನ್ನು ಮತ್ತೆ ತುಳಿಯುವ ಯತ್ನ ಮಾಡಲಾಗುತ್ತಿದೆ ಎನ್ನುವ ಆರೋಪದ ಬಗ್ಗೆ ಕೇಳಿದಾಗ, "ಇಡೀ ಕಾಂಗ್ರೆಸ್ ಪಕ್ಷ ಇರುವುದೇ ಪರಿಶಿಷ್ಟ ಜಾತಿ, ಪಂಗಡ, ಅಲ್ಪಸಂಖ್ಯಾತರು, ಹಿಂದುಳಿದ ವರ್ಗ, ರೈತರು – ಹೀಗೆ ಎಲ್ಲಾ ವರ್ಗಕ್ಕೂ ನ್ಯಾಯ ಒದಗಿಸಲು" ಎಂದರು.

ಸತೀಶ್ ಜಾರಕಿಹೊಳಿ ಅವರ ಜತೆ ಏನು ಚರ್ಚೆ ನಡೆಯಿತು ಎಂದು ಕೇಳಿದಾಗ, "ಅವರು ನಮ್ಮ ಪಕ್ಷದ ನಾಯಕರು. 2028 ಕ್ಕೆ ಕಾಂಗ್ರೆಸ್ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವುದೇ ನಮ್ಮ ಉದ್ದೇಶ. ನಾವು ಒಟ್ಟಿಗೆ ಕೆಲಸ ಮಾಡುತ್ತಿದ್ದೇವೆ. ನನಗೆ ಶೇ. 1000 ಪಟ್ಟು ಅಧಿಕಾರಕ್ಕೆ ಮರಳುವ ವಿಶ್ವಾಸವಿದೆ" ಎಂದರು.

"ನಾನು ಹಾಗೂ ಸತೀಶ್ ಜಾರಕಿಹೊಳಿ ಅವರು ಬೆಂಗಳೂರಿನ ಟ್ರಾಫಿಕ್ ಅನ್ನು ಹೇಗೆ ನಿಯಂತ್ರಣ ಮತ್ತು ಕಡಿಮೆ ಮಾಡಬೇಕು ಎನ್ನುವ ವಿಚಾರವಾಗಿ ಚರ್ಚೆ ನಡೆಸಿದ್ದೇವೆ. ನೆಲಮಂಗಲದಿಂದ ಗೊರಗುಂಟೆಪಾಳ್ಯದವರೆಗೆ ಹೆಚ್ಚು ವಾಹನ ಸಂಚಾರ ದಟ್ಟಣೆ ಇದೆ. ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ಮೂಲಕ ನಗರದ ಒಳಗೆ ವಾಹನಗಳು ಬರದಂತೆ ಹೇಗೆ ಬದಲಿ ವ್ಯವಸ್ಥೆ ಮಾಡಬಹುದು. ನೈಸ್ ರಸ್ತೆಗೆ ಮುನ್ನ ಯಾವ ವ್ಯವಸ್ಥೆ ಮಾಡಬಹುದು ಎಂದು ಚರ್ಚೆ ನಡೆಸಿದ್ದೇವೆ. ಈಗಾಗಲೇ ಬಿಜಿನೆಸ್ ಕಾರಿಡಾರ್ ಯೋಜನೆ ಕೈಗೆತ್ತಿಕೊಂಡಿದ್ದೇವೆ" ಎಂದರು.

**ರಾಜಕೀಯ ಲಾಭಕ್ಕಾಗಿ ಕ್ಷೇತ್ರ ಮರುವಿಂಗಡಣೆ ತೀರ್ಮಾನ**

ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್ ವಿಂಗಡಣೆ ಬಗ್ಗೆ ಕೇಂದ್ರದ ತರಾತುರಿ ನಿರ್ಧಾರದ ಬಗ್ಗೆ ಕೇಳಿದಾಗ, "ಅವರು ಏಕೆ ಆತುರದಲ್ಲಿ ಇದ್ದಾರೆ ಎಂದು ತಿಳಿಯುತ್ತಿಲ್ಲ. ಕಾಂಗ್ರೆಸ್ ಪಕ್ಷವು ಚೌಕಟ್ಟಿನ ಒಳಗೆ ಇದರ ಬಗ್ಗೆ ಸೂಕ್ತ ಚರ್ಚೆ ನಡೆಸಬೇಕು ಎಂದು ಬಯಸುತ್ತದೆ. ರಾಜಕೀಯ ಲಾಭಕ್ಕಾಗಿ ಯಾವುದೇ ಸ್ಪಷ್ಟನೆ ಇಲ್ಲದೇ ಈ ನಿರ್ಧಾರವನ್ನು ಬಿಜೆಪಿ ತೆಗೆದುಕೊಳ್ಳುತ್ತಿದೆ. ಇದು ಒಳ್ಳೆಯದಲ್ಲ" ಎಂದರು.

"ಬಿಜೆಪಿಯವರು ಅಭದ್ರತೆ ಎದುರಿಸುತ್ತಿದ್ದಾರೆ. ಅದಕ್ಕೆ ಈ ವಿಚಾರದ ಬಗ್ಗೆ ತರಾತುರಿಯಲ್ಲಿದ್ದಾರೆ. ಸೋನಿಯಾ ಗಾಂಧಿ ಅವರ ನೇತೃತ್ವದಲ್ಲಿ ಈ ಹಿಂದೆ ಈ ಬಗ್ಗೆ ತೀರ್ಮಾನ ಆಗಿತ್ತು" ಎಂದರು.

ಕ್ಷೇತ್ರ ಪುನರ್ ವಿಂಗಡಣೆ ವಿರೋಧಿಸಿ ತಮಿಳುನಾಡಿನ ನಿಲುವಿನ ಬಗ್ಗೆ ಕೇಳಿದಾಗ, "ಕ್ಷೇತ್ರ ಪುನರ್ ವಿಂಗಡಣೆ ಸರಿಯಾದ ಕ್ರಮವಲ್ಲ. ಇದು ಬೇಕಾಗಿಲ್ಲ" ಎಂದರು.

ದೆಹಲಿ ಭೇಟಿ ಹಾಗೂ ಸಚಿವ ಸಂಪುಟ ವಿಸ್ತರಣೆ ಬಗ್ಗೆ ಕೇಳಿದಾಗ, "ಈಗ ಆ ವಿಚಾರ ಚರ್ಚೆಯಿಲ್ಲ. ಮೊದಲು ಚುನಾವಣೆಗಳನ್ನು ಮುಗಿಸೋಣ. ಮೊದಲ ಆದ್ಯತೆ ಚುನಾವಣೆಗೆ. 'ಬ್ರಿಡ್ಜ್ ಟು ಬೆಂಗಳೂರು' ಕಾರ್ಯಕ್ರಮ ನಿಮಿತ್ತ ನಾನು ಹಾಗೂ ಮುಖ್ಯಮಂತ್ರಿ ದೆಹಲಿಗೆ ತೆರಳುತ್ತಿದ್ದೇವೆ. ಇತರೇ ದೇಶಗಳ ರಾಯಭಾರಿಗಳು, ಉದ್ಯಮಿಗಳು ಸೇರಿದಂತೆ ಅನೇಕರು ಸೇರುತ್ತಿದ್ದಾರೆ. ಐಟಿ ಬಿಟಿ ಸಚಿವರು ಇದನ್ನು ಆಯೋಜಿಸಿದ್ದಾರೆ" ಎಂದು ತಿಳಿಸಿದರು.

# ಸಾರ್ವಜನಿಕರ ಅಹವಾಲುಗಳ ತ್ವರಿತ ಇತ್ಯರ್ಥಕ್ಕೆ ಸೂಚನೆ: ಪೊಮ್ಮಲ ಸುನೀಲ್ ಕುಮಾರ್

**ಬೆಂಗಳೂರು:** ನಾಗರಿಕರಿಂದ ಬಂದಂತಹ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಿ, ಸಮಸ್ಯೆಗಳನ್ನು ಬಗೆಹರಿಸಲು ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿನ ನಾಗರಿಕರ ಸಮಸ್ಯೆಗಳನ್ನು ಆಲಿಸಿ, ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಇಂದು ಬೆಳಿಗ್ಗೆ 7 ಗಂಟೆಯಿಂದ ಅಮೃತಹಳ್ಳಿ ಮುಖ್ಯ ರಸ್ತೆಯಲ್ಲಿರುವ ನಗರ ಪಾಲಿಕೆಯ ಆಯುಕ್ತರ ಕಚೇರಿಯ ಸಭಾಂಗಣದಲ್ಲಿ ನಡೆದ "ಫೋನ್-ಇನ್ ಕಾರ್ಯಕ್ರಮ"ದಲ್ಲಿ ನಾಗರಿಕರಿಂದ ನೇರವಾಗಿ ಅಹವಾಲುಗಳನ್ನು ಸ್ವೀಕರಿಸಿದ ವೇಳೆ ವಿವಿಧ ವಾರ್ಡ್‌ಗಳಿಂದ ಮುಖ್ಯವಾಗಿ ಘನತ್ಯಾಜ್ಯ ಸಮಸ್ಯೆ, ರಸ್ತೆ ದುರಸ್ತಿ ಸೇರಿದಂತೆ ಇನ್ನಿತರೆ ದೂರುಗಳನ್ನು ಖುದ್ದಾಗಿ ಆಲಿಸಿದ ಆಯುಕ್ತರು, ತ್ವರಿತ ಪರಿಹಾರಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

**ನಾಗರಿಕರಿಂದ 51 ಕರೆಗಳ ಮೂಲಕ 61 ಅಹವಾಲುಗಳ ಸ್ವೀಕಾರ:**

ಇಂದು ನಡೆದ ಫೋನ್-ಇನ್ ಕಾರ್ಯಕ್ರಮದಲ್ಲಿ ಒಟ್ಟು 51 ಕರೆಗಳಿಂದ 61 ಅಹವಾಲುಗಳು ದಾಖಲಾಗಿವೆ. ಎಲ್ಲಾ ಅಹವಾಲುಗಳನ್ನು ಪರಿಶೀಲಿಸಿ, ತಕ್ಷಣ ಸ್ಪಂದಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು.

**ಕಳೆದ 29 ವಾರಗಳ ಫೋನ್-ಇನ್ ಕಾರ್ಯಕ್ರಮದ ವಿವರ:**

ಬೆಂಗಳೂರು ಉತ್ತರ ನಗರ ಪಾಲಿಕೆಯಲ್ಲಿ ಸೆಪ್ಟೆಂಬರ್ 26 ರಿಂದ ಪ್ರಾರಂಭಿಸಿರುವ ಫೋನ್-ಇನ್ ಕಾರ್ಯಕ್ರಮದಲ್ಲಿ ಕಳೆದ 29 ವಾರಗಳಲ್ಲಿ ಒಟ್ಟು 1690 ಅಹವಾಲುಗಳು ದಾಖಲಾಗಿದ್ದು, ಅವುಗಳಲ್ಲಿ 1240 ಅಹವಾಲುಗಳಿಗೆ ಸೂಕ್ತ ಕ್ರಮ ಕೈಗೊಂಡು ಇತ್ಯರ್ಥಪಡಿಸಲಾಗಿದೆ. ಇತರೆ ನಗರ ಪಾಲಿಕೆಗಳು ಹಾಗೂ ಇಲಾಖೆಗಳ ಸಂಬಂಧಿಸಿದ ದೂರುಗಳನ್ನು ಸಂಬಂಧಪಟ್ಟವರಿಗೆ ರವಾನಿಸಿ ಇತ್ಯರ್ಥಪಡಿಸಲು ಸೂಚಿಸಲಾಗಿದೆ. ಇನ್ನು ಬಾಕಿ ಉಳಿದ 322 ದೂರುಗಳನ್ನು ತ್ವರಿತವಾಗಿ ಬಗೆಹರಿಸಲು ನಿರ್ದೇಶನ ನೀಡಲಾಗಿದೆ.

**ನಿರಂತರವಾಗಿ ಪ್ರತಿ ಶುಕ್ರವಾರ ಫೋನ್‌ಇನ್ ಕಾರ್ಯಕ್ರಮ:**

ನಾಗರಿಕರ ಕುಂದುಕೊರತೆಗಳನ್ನು ಖುದ್ದಾಗಿ ಆಲಿಸಿ, ಕೂಡಲೇ ಪರಿಹಾರ ನೀಡುವ ಪ್ರಯತ್ನದಲ್ಲಿ ಆಯುಕ್ತರಿಂದ



ಫೋನ್-ಇನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಇದಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ಸಿಕ್ಕಿದ್ದು, ಈ ಕಾರ್ಯಕ್ರಮವನ್ನು ನಿರಂತರವಾಗಿ ಪ್ರತಿವಾರ ಕೈಗೊಳ್ಳಲಾಗುವುದು.

**ಕಾರ್ಯಕ್ರಮದಲ್ಲಿ ಸ್ವೀಕರಿಸಿದ ಪ್ರಮುಖ ದೂರುಗಳು:**

* ರಸ್ತೆ ಹಾಗೂ ರಸ್ತೆ ಗುಂಡಿಗಳ ಸಮಸ್ಯೆಯ ಬಗ್ಗೆ 26 ದೂರುಗಳು ಬಂದಿದೆ.
* ತ್ಯಾಜ್ಯ ನಿರ್ವಹಣೆ ಸಂಬಂಧ 13 ಅರ್ಜಿಗಳು.
* ಬೀದಿನಾಯಿಗಳ ಸಮಸ್ಯೆಗಳ ಬಗ್ಗೆ 5 ಅರ್ಜಿಗಳು
* ಬೀದಿ ದೀಪಗಳ ನಿರ್ವಹಣೆ ಕುರಿತು 4 ಅರ್ಜಿಗಳು
* ಮರದ ಕೊಂಬೆಗಳನ್ನು ಕತ್ತರಿಸಲು 3 ಮನವಿಗಳು.

ಈ ವೇಳೆ ಮುಖ್ಯ ಅಭಿಯಂತರರಾದ ರಾಘವೇಂದ್ರ ಪ್ರಸಾದ್, ಕಾರ್ಯಪಾಲಕ ಅಭಿಯಂತರರು ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಹೀಟ್-ಹೆಲ್ತ್ ಪ್ರೋಟೋಕಾಲ್ ಕಾರ್ಯಕ್ರಮ ಜಾರಿ: ಪೌರಕಾರ್ಮಿಕರಿಗೆ ತರಬೇತಿ ಹಾಗೂ ಕೂಲಿಂಗ್ ಕಿಟ್ ವಿತರಣೆ

**ಬೆಂಗಳೂರು:** ಉತ್ತರ ನಗರ ಪಾಲಿಕೆ ಹಾಗೂ ಅ40 ಸಂಸ್ಥೆಗಳ ಸಹಯೋಗದಲ್ಲಿ, ನಗರದ ಬಿಸಿಲಿನ ತೀವ್ರತೆಯನ್ನು ಗಮನದಲ್ಲಿಟ್ಟುಕೊಂಡು ಹೀಟ್-ಹೆಲ್ತ್ ಪ್ರೋಟೋಕಾಲ್ ಜಾರಿಗೆ ತರಲಾಗುತ್ತಿದೆ.

ಈ ಸಂಬಂಧ, ಯಲಹಂಕ ನ್ಯೂಟೌನ್‌ನ ಅಂಬೇಡ್ಕರ್ ಭವನದಲ್ಲಿ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅಧ್ಯಕ್ಷತೆಯಲ್ಲಿ ತರಬೇತಿ ಹಾಗೂ ಕೂಲಿಂಗ್ ಕಿಟ್ (ಟೆಂಪರೇಚರ್ ಮತ್ತು ಹುಮಿಡಿಟಿ ಚೆಕ್ಕರ್, ನೆಕ್ ಕಾಲರ್ ಫ್ಯಾನ್, ನೀರು ಕುಡಿಯಲು




ಬಾಟಲ್, ಟೋಪಿ, ಹ್ಯಾಂಡ್ ಸ್ಲೀವ್ಸ್) ವಿತರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತರು, ಒಣತ್ಯಾಜ್ಯ ಸಂಗ್ರಹಣಾ ಕೇಂದ್ರ (DWCC) ಸಿಬ್ಬಂದಿ ಹಾಗೂ ಪೌರಕಾರ್ಮಿಕರಿಗೆ ಬಿಸಿಲಿನ ಪರಿಣಾಮಗಳು ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಅರಿವು ಮೂಡಿಸಲಾಯಿತು.

ಪೈಲಟ್ ಹಂತದಲ್ಲಿ ನಾಗವಾರ (ವಾರ್ಡ್ 23) ಮತ್ತು ಎಚ್‌ಬಿಆರ್ (ವಾರ್ಡ್ 24) ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಕೂಲಿಂಗ್ ಕಿಟ್‌ಗಳನ್ನು ವಿತರಿಸಲಾಯಿತು.

**ಆಯುಕ್ತರ ಕಿವಿಮಾತು**

ಕಾರ್ಯಕ್ರಮದಲ್ಲಿ ಮಾತನಾಡಿದ ಆಯುಕ್ತರು, ಬೆಂಗಳೂರಿನಲ್ಲಿ ತಾಪಮಾನ ಏರಿಕೆಯಾಗುತ್ತಿರುವ ಹಿನ್ನೆಲೆ ಪೌರಕಾರ್ಮಿಕರ ಆರೋಗ್ಯದ ಬಗ್ಗೆ ವಿಶೇಷ ಗಮನ ಹರಿಸಬೇಕು ಎಂದು ಕಿವಿಮಾತು ಹೇಳಿದರು.

ಪ್ರಸ್ತುತ ಪೈಲಟ್ ಹಂತದಲ್ಲಿ ಕಿಟ್‌ಗಳನ್ನು ವಿತರಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಎಲ್ಲಾ ಪೌರಕಾರ್ಮಿಕರಿಗೆ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ನಗರದಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅಧಿಕಾರಿಗಳು ಹಾಗೂ ಪೌರಕಾರ್ಮಿಕರು ಹೆಚ್ಚಿನ ಶ್ರಮ ವಹಿಸಬೇಕು ಎಂದು ಸೂಚಿಸಿದರು.

ಹಾಗೂ ಬಿಸಿಲು, ಮಳೆ, ಚಳಿ ಎನ್ನದೇ ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸುವಂತೆ ಸೂಚಿಸಿ, "ಸರ್ಕಾರದ ಕೆಲಸ ದೇವರ ಕೆಲಸ" ಎಂಬ ಮನೋಭಾವದಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

**ತರಬೇತಿ ಚಟುವಟಿಕೆಗಳು**

ತರಬೇತಿ ಕಾರ್ಯಕ್ರಮದಲ್ಲಿ ಬಿಸಿಲಿನ ಆರೋಗ್ಯದ ಮೇಲೆ ಬೀರುವ ಪರಿಣಾಮ, ತಾಪಮಾನ ಅಂದಾಜು ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಮಾರ್ಗದರ್ಶನ ನೀಡಲಾಯಿತು.

ಈ ವೇಳೆ ಜಂಟಿ ಆಯುಕ್ತರಾದ ಪಲ್ಲವಿ ಮತ್ತು ಮೊಹಮ್ಮದ್ ನಯೀಮ್ ಮೊಮಿನ್, ಆರೋಗ್ಯಾಧಿಕಾರಿಯಾದ ಸಿದ್ದಪ್ಪಾಜಿ ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಸಿಬ್ಬಂದಿಗಳು ಹಾಜರಿದ್ದರು.

# ಮೊಸರಲ್ಲೂ ಕಲ್ಲು ಹುಡುಕುವ ಕಾಂಗ್ರೆಸ್ ನಾಯಕರು, ಮತ್ತೆ ಮೋದಿ ಪ್ರಧಾನಿಯಾಗುತ್ತಾರೆ ಎಂಬ ಭಯ: ಪ್ರತಿಪಕ್ಷ ನಾಯಕ ಆರ್.ಅಶೋಕ

**ಬೆಂಗಳೂರು :** ನಾರಿ ಶಕ್ತಿ ವಂದನಾ ಅಧಿನಿಯಮ ಹಾಗೂ ಕ್ಷೇತ್ರ ಮರುವಿಂಗಡಣೆ ವಿಚಾರದಲ್ಲಿ ಕಾಂಗ್ರೆಸ್ ನಾಯಕರು ಮೊಸರಲ್ಲಿ ಕಲ್ಲು ಹುಡುಕುತ್ತಿದ್ದಾರೆ. ಈ ಹಿಂದೆ ಮಸೂದೆಯನ್ನು ಸ್ವಾಗತ ಮಾಡುತ್ತೇವೆಂದು ಹೇಳಿ ಈಗ ಕಿತಾಪತಿ ಮಾಡುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರೀಗ ಧರ್ಮಾಧಾರಿತ ಮೀಸಲು ನೀಡಬೇಕೆಂದು ಆಗ್ರಹ ಮಾಡುತ್ತಿದ್ದಾರೆ. ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸಂವಿಧಾನದಲ್ಲಿ ಧರ್ಮಾಧಾರಿತ ಮೀಸಲಿಗೆ ಅವಕಾಶವಿಲ್ಲ. ದೇಶದ ಎಲ್ಲ ಮಹಿಳೆಯರು ಈ ಮಸೂದೆಗೆ ಬೆಂಬಲ ನೀಡುತ್ತಿದ್ದಾರೆ ಎಂದರು.

ತಮಿಳುನಾಡು ಸಿಎಂ ಸ್ಟಾಲಿನ್‌ಗೆ ಬುದ್ಧಿ ಕಡಿಮೆ ಇದೆ. ಇದೇ ರೀತಿ ಕಾಂಗ್ರೆಸ್ ನಾಯಕರು ಕೂಡ ಅನ್ಯಾಯ ಆಗುತ್ತಿದೆ ಎಂದು ಹೇಳುತ್ತಿದ್ದಾರೆ. ಹಿಂದೆ ಲೋಕಸಭೆ ಕ್ಷೇತ್ರ ಎಷ್ಟಿರಬೇಕೆಂದು ಕಾಂಗ್ರೆಸ್ ನಾಯಕರೇ ತೀರ್ಮಾನ ಮಾಡಿದ್ದರು. ಜನಸಂಖ್ಯೆ ಆಧಾರಿತವಾಗಿಯೇ ಕ್ಷೇತ್ರ ಮರುವಿಂಗಡಣೆ ಮಾಡಲಾಗುತ್ತಿತ್ತು. ರಾಜ್ಯದಲ್ಲಿ 28 ಲೋಕಸಭೆ ಕ್ಷೇತ್ರಗಳು 42 ಆಗುತ್ತಿವೆ. ಇಲ್ಲಿ ಕ್ಷೇತ್ರಗಳು ಕಡಿಮೆಯಾಗುವುದಿಲ್ಲ. ಕೇರಳದಲ್ಲಿ 20 ಕ್ಷೇತ್ರಗಳಿಂದ 30 ಕ್ಕೆ, ತಮಿಳುನಾಡಿನಲ್ಲಿ 39 ರಿಂದ 59 ಕ್ಕೆ ಏರಿಕೆಯಾಗಲಿದೆ. ಆದರೂ ವಿರೋಧ ಮಾಡುತ್ತಿದ್ದಾರೆ. ಇದನ್ನು ಜಾರಿ ಮಾಡಿದರೆ ಮತ್ತೆ ನರೇಂದ್ರ ಮೋದಿ ಪ್ರಧಾನಿಯಾಗಿ ಎಲ್ಲರೂ ಟೆಂಟ್ ಕಟ್ಟಿಕೊಂಡು ಹೋಗಬೇಕಾಗುತ್ತದೆ ಎಂಬ ಭಯ ವಿರೋಧ ಪಕ್ಷಗಳ ನಾಯಕರಲ್ಲಿದೆ. ದಕ್ಷಿಣ ಭಾರತದ ರಾಜ್ಯಗಳಿಗೆ ಯಾವುದೇ ಅನ್ಯಾಯ ಆಗುತ್ತಿಲ್ಲ. ಯಾವುದೇ ರಾಜ್ಯಗಳಲ್ಲಿ ಸ್ಥಾನಗಳು ಕಡಿಮೆಯಾಗುತ್ತಿಲ್ಲ. ವಿರೋಧ ಪಕ್ಷಗಳ ನಾಯಕರಿಗೆ ಅಭಿವೃದ್ಧಿ ಬೇಕಿಲ್ಲ. ಕಾಂಗ್ರೆಸ್‌ನ ವಂಶಾಡಳಿತಕ್ಕೆ ಪೂರಕವಾಗಿ ಎಲ್ಲರೂ ಮಾತಾಡುತ್ತಿದ್ದಾರೆ ಎಂದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮಹಿಳಾ ಮೀಸಲಾತಿ ತರುವ ಮೂಲಕ ಮಹಿಳಾ ಸಮಾನತೆ ತರುತ್ತಿದೆ. ಕಾಂಗ್ರೆಸ್ ನಾಯಕರು ಈ ಹಿಂದೆ ಇಂತಹ ಪ್ರಯತ್ನ ಮಾಡಿದರೂ ಸಫಲವಾಗಿರಲಿಲ್ಲ. ನಾರಿ ಶಕ್ತಿ ವಂದನಾ ಅಧಿನಿಯಮ ಹೊಸ ಇತಿಹಾಸವನ್ನು ಸೃಷ್ಟಿಸಿದ್ದು, ಲೋಕಸಭೆ ಹಾಗೂ ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಸಿಗಲಿದೆ. ಇದರ ಜೊತೆಗೆ ಜನಸಂಖ್ಯೆಗೆ ಪೂರಕವಾಗಿ ಕ್ಷೇತ್ರ ಮರುವಿಂಗಡಣೆ ಆಗಲಿದೆ. ಇದರಿಂದ ಎಲ್ಲರಿಗೂ ಪ್ರಾತಿನಿಧ್ಯ ಸಿಗಲಿದೆ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರಿಗೆ ಅಭಿನಂದನೆ ತಿಳಿಸುತ್ತೇನೆ ಎಂದರು.



**ಸ್ವಾಗತಾರ್ಹ ತೀರ್ಪು**

ಮಾಜಿ ಸಚಿವ ವಿನಯ್ ಕುಲಕರ್ಣಿ ಮಾಡಿಸಿದ ಕೊಲೆ ಪ್ರಕರಣದಲ್ಲಿ, ಇಬ್ಬರು ಸಾಕ್ಷಿ ಹೇಳಿದ್ದಾರೆ. ರಾಜಕಾರಣಿಗಳ ಮಾತು ಕೇಳಿಕೊಂಡು ಕೊಲೆ ಮಾಡಿದರೆ ಏನಾಗುತ್ತದೆ ಎಂಬುದಕ್ಕೆ ಇದು ಉತ್ತಮ ಉದಾಹರಣೆ. ಸಿಬಿಐ ತನಿಖೆ ನಡೆಯದೇ ಇದ್ದಿದ್ದರೆ ಪೊಲೀಸ್ ಇಲಾಖೆ ಕೇಸನ್ನು ಮುಚ್ಚಿಹಾಕುತ್ತಿತ್ತು. ಈಗ ಎಲ್ಲವೂ ಸಾಬೀತಾಗಿದ್ದು, ತಪ್ಪಿತಸ್ಥರು ಯಾರೆಂದು ಗೊತ್ತಾಗಿದೆ. ವಿನಯ್ ಕುಲಕರ್ಣಿಯೇ ಕೊಲೆ ಮಾಡಿಸಿದ್ದು ಎಂದು ಕೋರ್ಟ್ ತೀರ್ಪು ನೀಡಿದೆ. ರಾಜಕೀಯ ಕ್ಷೇತ್ರದಲ್ಲಾಗುವ ಕೊಲೆಗಳಿಗೆ ಇದು ತಿಲಾಂಜಲಿ ನೀಡಲಿದೆ. ಇದು ಸ್ವಾಗತಾರ್ಹ ತೀರ್ಪು ಎಂದರು.

**ತುಘಲಕ್ ದರ್ಬಾರ್**

ರಾಜ್ಯದ ಮಕ್ಕಳು ಹಿಂದಿ ಓದುವ ಮೊದಲೇ ಸರ್ಕಾರ ತೀರ್ಮಾನ ತೆಗೆದುಕೊಳ್ಳಬೇಕಿತ್ತು. ಪರೀಕ್ಷೆಯ ಸಮಯದಲ್ಲಿ ತುಘಲಕ್ ದರ್ಬಾರ್ ಮಾಡುವ ಅಗತ್ಯವಿರಲಿಲ್ಲ. ನಾನು ಕೂಡ ಕನ್ನಡದ ಹೋರಾಟಗಾರನಾಗಿದ್ದು, ಗೋಕಾಕ್ ಚಳವಳಿಯಲ್ಲಿ ಭಾಗವಹಿಸಿ ಪೊಲೀಸರ ಲಾಠಿ ಏಟಿನಿಂದ ಕಾಲಿಗೆ ಗಾಯವಾಗಿ ಆಸ್ಪತ್ರೆ ಸೇರಿದ್ದೆ. ಹೊಸೂರಿನಲ್ಲಿ ಹೆಚ್ಚಿನವರು ಕನ್ನಡ ಮಾತಾಡುತ್ತಾರೆ. ಕಾಸರಗೋಡಿನಲ್ಲೂ ಕನ್ನಡಿಗರು ಹೆಚ್ಚಿದ್ದಾರೆ. ಅಲ್ಲಿ ಕನ್ನಡ ಇಲ್ಲವೆಂದರೆ ಸಮಸ್ಯೆಯಾಗುತ್ತದೆ. ಉರ್ದು ಶಾಲೆಗಳಲ್ಲಿ ಮೊದಲಿಗೆ ಉರ್ದು, ಎರಡನೇ ಭಾಷೆಯಾಗಿ ಇಂಗ್ಲಿಷ್ ಓದುತ್ತಾರೆ. ಕೊನೆಯ ಭಾಷೆಯಾಗಿ ಕನ್ನಡ ಓದುತ್ತಾರೆ. ತ್ರಿಭಾಷಾ ಸೂತ್ರ ಇಲ್ಲವೆಂದರೆ ಅಲ್ಲಿ ಕನ್ನಡವೂ ಇರುವುದಿಲ್ಲ. ವಿದ್ಯಾರ್ಥಿಗಳ ವಿಚಾರ ಬಂದಾಗ ಸದನ ಸಮಿತಿ ರಚಿಸಿ ಚರ್ಚೆ ಮಾಡಬೇಕಿತ್ತು ಅಥವಾ ವಿಧಾನಸಭೆ ಅಧಿವೇಶನ ಕರೆದು ಚರ್ಚಿಸಬೇಕಿತ್ತು. ಅದನ್ನು ಬಿಟ್ಟು ಏಕಾಏಕಿ ತೀರ್ಮಾನ ಮಾಡಿರುವುದು ಸರಿಯಲ್ಲ. ಕನ್ನಡಕ್ಕೆ ಆದ್ಯತೆ ನೀಡಬೇಕೆಂಬುದು ನಮ್ಮ ಆಗ್ರಹ. ದ್ವಿಭಾಷಾ ಸೂತ್ರದಿಂದಲೇ ಕನ್ನಡ ಬೆಳೆಯುತ್ತದೆ ಎನ್ನಲು ಸಾಧ್ಯವಿಲ್ಲ. ತ್ರಿಭಾಷಾ ನೀತಿ ಕುರಿತು ದೀರ್ಘ ಚರ್ಚೆ ನಡೆಯಬೇಕಿತ್ತು ಎಂದರು.

ಸಿಎಂ ಸ್ಥಾನ ಕುರಿತು ಇನ್ನೂ ಸಮಸ್ಯೆ ಬಗೆಹರಿದಿಲ್ಲ. ಎಲ್ಲರೂ ದೆಹಲಿಗೆ ಹೋಗುತ್ತಿರುವುದರಿಂದ ಸರ್ಕಾರ ಸತ್ತುಹೋಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮಗ ಹಾಗೂ ಎಲ್ಲ ಸಚಿವರ ಮಕ್ಕಳು ನಮ್ಮಪ್ಪನೇ ಸಿಎಂ ಎಂದು ಹೇಳಿಕೆ ನೀಡುತ್ತಿದ್ದಾರೆ. ಪ್ರತಿ ಮನೆಯಲ್ಲೂ ಇಂದು ಕ್ಯಾಬಿನೆಟ್ ರಚನೆಯಾಗಿದೆ. ಕಾಂಗ್ರೆಸ್ ಈಗ ಒಡೆದ ಮನೆಯಾಗಿ ಜನರ ಪಾಲಿಗೆ ಸತ್ತಿದೆ. ಬಜೆಟ್‌ನಲ್ಲಿ ಒಂದೂವರೆ ಲಕ್ಷ ಕೋಟಿ ರೂ. ಸಾಲ ಮಾಡಿ, ಕರ್ನಾಟಕವನ್ನು ಸಾಲದ ಕೂಪಕ್ಕೆ ತಳ್ಳಿದ್ದಾರೆ. ಸರ್ಕಾರವೀಗ ತ್ರಿಶಂಕು ಸ್ಥಿತಿಯಲ್ಲಿದೆ ಎಂದರು.

ದಾವಣಗೆರೆಯಲ್ಲಿ ಮುಸ್ಲಿಮರಿಗೆ ಅನ್ಯಾಯವಾಗಿರುವುದಕ್ಕೆ ಮುಸ್ಲಿಮ್ ಮುಖಂಡರು ಕಾಂಗ್ರೆಸ್ ವಿರುದ್ಧ ಮಾತಾಡುತ್ತಿದ್ದಾರೆ. ಸಚಿವ ಜಮೀರ್ ಅಹ್ಮದ್ ಅವರನ್ನೂ ಟಾರ್ಗೆಟ್ ಮಾಡಲಾಗುತ್ತಿದೆ. ಇಡೀ ಪಕ್ಷ ಹಾಗೂ ಸರ್ಕಾರ ಸಂಪೂರ್ಣ ಗೊಂದಲದಲ್ಲಿದೆ. ಇಂದೇ ಚುನಾವಣೆ ನಡೆದರೆ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಬರಲಿದೆ. ಬಾಗಲಕೋಟೆ ಹಾಗೂ ದಾವಣಗೆರೆಯಲ್ಲಿ ಬಿಜೆಪಿ ಗೆಲ್ಲಲಿದೆ. ನರೇಂದ್ರ ಮೋದಿ ಪ್ರಧಾನಿಯಾಗಿದ್ದಕ್ಕೆ ನಮಗೇನೂ ಸಮಸ್ಯೆಯಾಗಿಲ್ಲ, ಬಿಜೆಪಿ ಬೆಂಬಲಿಸುತ್ತೇವೆ ಎಂದು ಮುಸ್ಲಿಮರು ಹೇಳಿದ್ದಾರೆ. ಅವರ ಈ ನಡೆಯನ್ನು ಸ್ವಾಗತಿಸುತ್ತೇನೆ ಎಂದರು.

# ತೃಪ್ತಿಕರವಾಗಿ ಕಾರ್ಯನಿರ್ವಹಿಸದ ಘನತ್ಯಾಜ್ಯ ನಿರ್ವಹಣಾ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಿ: ಆಯುಕ್ತ ಕೆ ಎನ್ ರಮೇಶ್

**ಬೆಂಗಳೂರು :** ದಕ್ಷಿಣ ನಗರ ಪಾಲಿಕೆಯ ಆಯುಕ್ತರಾದ ಕೆ. ಎನ್. ರಮೇಶ್ ಪಾಲಿಕೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಸಮಸ್ಯೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಘನತ್ಯಾಜ್ಯ ನಿರ್ವಹಣಾ ವಿಭಾಗದ ಹಿರಿಯ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಿದರು. ನಗರದ ಸ್ವಚ್ಛತೆಯನ್ನು




ಕಾಪಾಡುವ ನಿಟ್ಟಿನಲ್ಲಿ ಆಯುಕ್ತರು ಅಧಿಕಾರಿಗಳಿಗೆ ಈ ಕೆಳಗಿನ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು:

**ಬೃಹತ್ ತ್ಯಾಜ್ಯ ಉತ್ಪಾದಕರರ ಪಟ್ಟಿ ಮಾಡಿ** ಪಾಲಿಕೆ ವ್ಯಾಪ್ತಿಯಲ್ಲಿ ಬೃಹತ್ ತ್ಯಾಜ್ಯ ಉತ್ಪಾದಕರ ಸಮೀಕ್ಷೆ ನಡೆಸಿ, ಅಧಿಕೃತ ಎಂಪನೆಲ್ಡ್ ವೆಂಡರ್‌ಗಳ ಮೂಲಕವೇ ಕಸ ಸಂಗ್ರಹಣೆಯಾಗುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಲು ಸೂಚಿಸಿದರು.

**ಹಾಜರಾತಿ ಮತ್ತು ಮೇಲ್ವಿಚಾರಣೆ** ಪ್ರತಿನಿತ್ಯ ಆಟೋ ಟಿಪ್ಪರ್‌ಗಳು (ATs) ಮತ್ತು ಕಾಂಪಾಕ್ಟರ್‌ಗಳ ಕಾರ್ಯಕ್ಷಮತೆ ಹಾಗೂ ಮಾರ್ಷಲ್‌ಗಳು, ಲಿಂಕ್ ವರ್ಕರ್ಸ್, ಪಿಕೆಗಳ (ಪೌರಕಾರ್ಮಿಕರು) ಮೇಲ್ವಿಚಾರಕರ ಹಾಜರಾತಿ ಮತ್ತು ಜವಾಬ್ದಾರಿಗಳ ಕುರಿತು ನಿರ್ದೇಶನ ನೀಡಿದರು.

**ತೃಪ್ತಿಕರವಾಗಿ ಕಾರ್ಯನಿರ್ವಹಿಸದ ಗುತ್ತಿಗೆದಾರರ ವಿರುದ್ಧ ಕ್ರಮ** ಸಾರ್ವಜನಿಕರ ಹಿತದೃಷ್ಟಿಯಿಂದ ತೃಪ್ತಿಕರವಾಗಿ ಕೆಲಸ ಮಾಡದ ಗುತ್ತಿಗೆದಾರರಿಗೆ ನೋಟಿಸ್ ನೀಡಿ ವಜಾಗೊಳಿಸಲು ಸೂಚಿಸಿದರು. ಮತ್ತು ರಸ್ತೆಗಳಲ್ಲಿ ಕಸ ಎಸೆಯುವವರಿಗೆ ಭಾರಿ ಪ್ರಮಾಣದಲ್ಲಿ ದಂಡ ವಿಧಿಸಲು ನಿರ್ದೇಶನ ನೀಡಿದರು.

**ಪ್ಲಾಸ್ಟಿಕ್ ಮುಕ್ತ ನಗರಗೊಳಿಸಿ** ಏಕಬಳಕೆಯ ಪ್ಲಾಸ್ಟಿಕ್ ಮೇಲಿನ ನಿಷೇಧವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವ ಸಂಬಂಧ ಅಂಗಡಿ ಮುಗ್ಗಟ್ಟುಗಳ ಮೇಲೆ ಆಗಿಂದಾಗ್ಗೆ ದಾಳಿ ಮಾಡಲು ಸೂಚಿಸಿದರು. ಸಾರ್ವಜನಿಕರಲ್ಲಿ ಏಕ ಬಳಕೆ ಪ್ಲಾಸ್ಟಿಕ್ ನಿಷೇಧ' ಕುರಿತು ಅರಿವು ಮೂಡಿಸುವಂತೆ ಸೂಚಿಸಿದರು.

**ಮನೆಮಟ್ಟದಲ್ಲಿ ವಿಂಗಡಣೆ** ಹಸಿ ಮತ್ತು ಒಣ ಕಸವನ್ನು ಮನೆಮಟ್ಟದಲ್ಲೇ ವಿಂಗಡಿಸುವ ಪ್ರಕ್ರಿಯೆಯನ್ನು ಸುಧಾರಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದರು.

ಈ ವೇಳೆ ಪಾಲಿಕೆಯ ಘನತ್ಯಾಜ್ಯ ವಿಭಾಗದ ಡಿ.ಜಿ.ಎಂ, ಎ.ಜಿ.ಎಂ. ಹಾಗೂ ಇನ್ನಿತರ ಅಧಿಕಾರಿಗಳು ಮತ್ತು ಸ್ವಯಂ ಸೇವಕರು ಉಪಸ್ಥಿತರಿದ್ದರು.

**ಜೆಪಿ ನಗರದ ಶಾಕಾಂಬರಿ ನಗರದಲ್ಲಿ ಆಯುಕ್ತರಿಂದ ಜನಗಣತಿ ಕಾರ್ಯಗಳ ಪರಿಶೀಲನೆ** ಇನ್ನೊಂದೆಡೆ ಆಯುಕ್ತರು ಜೆಪಿ ನಗರದ ಶಾಕಾಂಬರಿ ನಗರಕ್ಕೆ ಭೇಟಿ ನೀಡಿ ಜನಗಣತಿ ಕಾರ್ಯದ ಅಂಗವಾಗಿ ನಡೆಯುತ್ತಿರುವ ಬ್ಲಾಕ್‌ಗಳ ಸೃಜನೆ (Creation Blocks) ಮತ್ತು ಮನೆಗಳ ಪಟ್ಟಿ ಮಾಡುವಿಕೆ (House-listing) ಕಾರ್ಯವನ್ನು ಖುದ್ದಾಗಿ ಪರಿಶೀಲಿಸಿದರು.

ಜನಗಣತಿ ಪ್ರಕ್ರಿಯೆಯಲ್ಲಿ ಯಾವುದೇ ಲೋಪದೋಷಗಳಿಲ್ಲದೆ 100% ನಿಖರತೆಯನ್ನು ಕಾಪಾಡಿಕೊಳ್ಳುವಂತೆ ಸಿಬ್ಬಂದಿಗೆ ತಿಳಿಸಿದರು. ಈ ಸಂದರ್ಭದಲ್ಲಿ ಚಾರ್ಜ್ ಆಫೀಸರ್ ಆದ ಶ್ರೀ ಮನು ಗೌಡ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಇ-Khata: ಆಸ್ತಿದಾರರಿಗೆ ಗುಡ್‌ನ್ಯೂಸ್: ಆನ್‌ಲೈನ್‌ನಲ್ಲೇ ಖಾತಾ ತಿದ್ದುಪಡಿ, 30 ಸೆಕೆಂಡಿಗೆ ಇ-ಖಾತಾ ವಿತರಣೆ

ರಾಜ್ಯ ಸರ್ಕಾರದ ಪ್ರಮುಖ ಯೋಜನೆ ಜಾಗಿರುವ ಆಸ್ತಿಗಳ ದಾಖಲಾತಿ ಡಿಜಿಟಲೀಕರಣ, ಪರಿಣಾಮಕಾರಿ ಇ-ಖಾತಾ ವಿತರಣೆಗೆ ಪ್ರಕ್ರಿಯೆ ನಡೆಯುತ್ತಿದೆ. ಇದೀಗ ಮುಂದುವರಿದ ಗ್ರೇಟರ್ ಬೆಂಗಳೂರು ಪ್ರಾಧಿಕಾರವು




(GBA) ಮಹತ್ವದ ಕ್ರಮಕ್ಕೆ ಮುಂದಾಗಿದೆ. ನಾಗರಿಕರಿಗಾಗಿ ಆನ್‌ಲೈನ್ ನಲ್ಲೇ 'ಖಾತಾ ತಿದ್ದುಪಡಿ' ಸೌಲಭ್ಯವನ್ನು ಜಾರಿಗೆ ತರಲು ಮುಂದಾಗಿದೆ.

ನಾಗರಿಕರಿಗೆ ಉತ್ತಮ ಸೇವೆ ಒದಗಿಸುವುದು ಹಾಗೂ ಹೆಚ್ಚಿನ ಅನುಕೂಲತೆ ಕಲ್ಪಿಸುವ ಉದ್ದೇಶದಿಂದ ನಾಗರಿಕರಿಗೇ ಆನ್‌ಲೈನ್ ಖಾತಾ ತಿದ್ದುಪಡಿ ಸೌಲಭ್ಯವನ್ನು ಶೀಘ್ರದಲ್ಲಿ ಪರಿಚ ಯಿಸಲಾಗುವುದು. ಇದರಿಂದ ಮತ್ತಷ್ಟು ತ್ವರಿತ ಸೇವೆ ನಾಗರಿಕರಿಗೆ ಸಿಕ್ಕಂತಾಗುತ್ತದೆ ಎಂದು ಕಂದಾಯ ವಿಭಾಗದ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್ ಅವರು ಗುರುವಾರ ಸುದ್ದಿಗೋಷ್ಠಿಯಲ್ಲಿ ಅವರು ಹೊಸ ಯೋಜನೆ ಕುರಿತು ಮಾಹಿತಿ ನೀಡಿದ್ದಾರೆ.

ಆನ್‌ಲೈನ್‌ನಲ್ಲಿ ತ್ವರಿತ ಖಾತಾ ತಿದ್ದುಪಡಿ ಈ ಯೋಜನೆಯ ಮೂಲಕ ನಾಗರಿಕರು ತಮ್ಮ ಖಾತಾ ವಿವರಗಳಲ್ಲಿ ಇರುವ ದೋಷಗಳನ್ನು ಯಾವುದೇ ವಿಳಂಬವಿಲ್ಲದೆ ಸುಲಭವಾಗಿ ತಿದ್ದಿಕೊಳ್ಳಲು ಸಾಧ್ಯವಾಗುತ್ತದೆ. ಇದರಿಂದ ವ್ಯವಸ್ಥೆ ಹೆಚ್ಚು ಪರಿಣಾಮಕಾರಿ, ಪಾರದರ್ಶಕ ಮತ್ತು ಬಳಕೆದಾರ ಸ್ನೇಹಿಯಾಗಿ ರೂಪು ಗೊಳ್ಳಲಿದೆ. ಮಾಲೀಕರ ಹೆಸರು ಮತ್ತು ಆಸ್ತಿಯ ಅಳತೆ ಹೊರತುಪಡಿಸಿ, ಸ್ಥಳ, ವಾರ್ಡ್ ಸಂಖ್ಯೆ ಸೇರಿದಂತೆ ಇತರ ವಿವರಗಳನ್ನು ನಾಗರಿಕರು ತಿದ್ದುಪಡಿ ಮಾಡಿಕೊಳ್ಳಲು ಅವಕಾಶ ಕಲ್ಪಿಸ ಲಾಗುವುದು ಎಂದು ಅವರು ತಿಳಿಸಿದರು. 25 ಲಕ್ಷ ಡ್ರಾಫ್ಟ್ ಖಾತಾ, 10 ಲಕ್ಷ ಇ-ಖಾತಾ ವಿತರಣೆ ಸುಮಾರು 25 ಲಕ್ಷ ಡ್ರಾಫ್ಟ್ ಖಾತಾ ಅರ್ಜಿಗಳು ಆನ್‌ಲೈನ್ ಮೂಲಕ ಸಲ್ಲಿಕೆಯಾಗಿದ್ದು, ಅವುಗಳಲ್ಲಿ 10 ಲಕ್ಷಕ್ಕೂ ಹೆಚ್ಚು ನಾಗರಿಕರಿಗೆ ಈಗಾಗಲೇ ಅಂತಿಮ ಇ-ಖಾತಾ ನೀಡಲಾಗಿದೆ. ಎಲ್ಲಾ ದಾಖಲೆಗಳು ಸರಿಯಾಗಿದ್ದಲ್ಲಿ ಸರಾಸರಿ 05 ದಿನಗಳೊಳಗೆ ಅಂತಿಮ ಇ-ಖಾತಾ ನೀಡಲಾಗುತ್ತಿದೆ. ಡ್ರಾಫ್ಟ್ ಖಾತೆಯಿಂದ ಅಂತಿಮ ಖಾತೆಗೆ ಪರಿವರ್ತನೆಯ ಪ್ರಕ್ರಿಯೆ ಯಾವುದೇ ಪ್ರಮುಖ ಸಮಸ್ಯೆಗಳಿಲ್ಲದೆ ಸುಗಮವಾಗಿ ನಡೆಯುತ್ತಿದೆ.

ಪ್ರತಿ 30 ಸೆಕೆಂಡಿಗೆ ಇ-ಖಾತಾ ವಿತರಣೆ ಪ್ರತಿದಿನ 1,000 ಕ್ಕೂ ಹೆಚ್ಚು ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ. ಸರಾಸರಿ ಪ್ರತಿ 30 ಸೆಕೆಂಡಿಗೆ ಒಂದು ಇ-ಖಾತಾ ವಿತರಿಸಲಾಗುತ್ತಿದೆ, ಇದು ಡಿಜಿಟಲ್ ಪ್ರಕ್ರಿಯೆಯ ವೇಗ ಮತ್ತು ಕಾರ್ಯ ಕ್ಷಮತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಆಯುಕ್ತರು ತಿಳಿಸಿದರು. ಖಾತಾ ತಿರಸ್ಕಾರ ಪ್ರಕ್ರಿಯೆಯಲ್ಲಿ ಕೆಲವು ಸವಾಲುಗಳು ಗಮನಕ್ಕೆ ಬಂದಿದ್ದು, ಇದನ್ನು ಸರಿಪಡಿಸಲು ರಿಜೆಕ್ಷನ್ ಆಡಿಟ್ ತಂಡವನ್ನು ರಚಿಸಲಾಗಿದೆ.

ಈ ತಂಡವು ತಿರಸ್ಕೃತ ಅರ್ಜಿಗಳನ್ನು ಪರಿಶೀಲಿಸುತ್ತಿದ್ದು, ತಿರಸ್ಕರಿಸಲಾದ ಅರ್ಜಿಗಳನ್ನು ಮರುಪರಿಶೀಲಿಸಿ ಅವು ಗಳನ್ನು ಮಂಜೂರು ಮಾಡಲಾಗುತ್ತಿದೆ. ಸ್ವಯಂಚಾಲಿತ ಮ್ಯೂಟೇಷನ್ ವ್ಯವಸ್ಥೆ ಜಾರಿಗೆ ಮ್ಯೂಟೇಷನ್ ಪ್ರಕ್ರಿಯೆಯಲ್ಲಿ ವಿಳಂಬವನ್ನು ಕಡಿಮೆ ಮಾಡಲು ಸ್ವಯಂಚಾಲಿತ ಮ್ಯೂಟೇಷನ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಉಪ-ನೋಂದಣಾಧಿಕಾರಿಗಳ ಕಚೇರಿಯಲ್ಲಿ ನಡೆದ ವಹಿವಾಟುಗಳು ಈಗ ಸ್ವಯಂಚಾಲಿತವಾಗಿ ಮ್ಯೂಟೇಷನ್ ಆಗಲಿವೆ. ಅದೇ ರೀತಿ, ಪೌತಿ (ವಾರಸುದಾರರ) ಪ್ರಕರಣಗಳಲ್ಲಿಯೂ ವಿಳಂಬವನ್ನು ತಪ್ಪಿಸಲು ಸ್ವಯಂ ಮ್ಯೂಟೇಷನ್ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ ಎಂದು ಹೇಳಿದರು.

# ಪದ್ಮನಾಭನಗರ ವ್ಯಾಪ್ತಿಯಲ್ಲಿ ರಸ್ತೆ ಅಗಲೀಕರಣ, ಸ್ವಚ್ಛತಾ ವ್ಯವಸ್ಥೆ ಹಾಗೂ ಜನಗಣತಿ-2027 ಕ್ಕೆ ಸಂಬಂದಿಸಿದಂತೆ ಸ್ಥಳ ಪರಿಶೀಲಿಸಿದ ಪಶ್ಚಿಮ ನಗರ ಪಾಲಿಕೆ ಆಯುಕ್ತರು

**ಬೆಂಗಳೂರು :** ಪಶ್ಚಿಮ ನಗರ ಪಾಲಿಕೆ ಆಯುಕ್ತರಾದ ಡಾ: ರಾಜೇಂದ್ರ ಕೆ.ವಿ. ಅವರು ಪದ್ಮನಾಭನಗರ ವಿಭಾಗದ ವ್ಯಾಪ್ತಿಯಲ್ಲಿ ಪ್ರಸ್ತಾಪಿತ ರಸ್ತೆ ಅಗಲೀಕರಣ, ವಾರ್ಡ್ ಮಟ್ಟದ ಸ್ವಚ್ಛತಾ ಕಾರ್ಯಗಳು ಹಾಗೂ ಭಾರತ ಜನಗಣತಿ-



2027 ಕ್ಕೆ ಸಂಬಂಧಿಸಿದಂತೆ ಸ್ಥಳ ಪರಿಶೀಲನೆ ನಡೆಸಿದರು.

**ರಸ್ತೆ ಅಗಲೀಕರಣಕ್ಕೆ ಸಂಬಂಧಪಟ್ಟಂತೆ ಸ್ಥಳ ಪರಿಶೀಲನೆ:**

ಪದ್ಮನಾಭನಗರ ವ್ಯಾಪ್ತಿ ಪ್ರಸಕ್ತ ಆಯ ವ್ಯಯ ದಲ್ಲಿನ ಬಿ-ಸ್ಮೈಲ್ ಅಡಿ ಪ್ರಸ್ತಾಪಿತ ರಸ್ತೆ ಅಗಲೀಕರಣಕ್ಕೆ ಸಂಬಂಧಿಸಿದಂತೆ ಇಟ್ಟಮಡು ರಸ್ತೆಯ ಸುಮಾರು 1.2 ಕಿ.ಮೀ ಉದ್ದದ ಭಾಗಕ್ಕೆ ಭೇಟಿ ನೀಡಿ ಪರಿಶೀಲಿಸಿ, ಸರ್ವೇಯರ್ ಗಳು, ನಗರ ಯೋಜಕರು ಹಾಗೂ ಕಂದಾಯ ಅಧಿಕಾರಿಗಳು ಜಂಟಿಯಾಗಿ ಸ್ಥಳ ಪರಿಶೀಲನೆಯೊಂದಿಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

**ಇಟ್ಟಮಡು ರಸ್ತೆಯಲ್ಲಿ ಸ್ವಚ್ಛತೆ ಪರಿಶೀಲನೆ:**

ಹೊಸಕೆರೆಹಳ್ಳಿ ವಾರ್ಡ್ ನ ಇಟ್ಟಮಡು ರಸ್ತೆಯಲ್ಲಿ ಸ್ವಚ್ಛತಾ ವ್ಯವಸ್ಥೆಯನ್ನು ಪರಿಶೀಲಿಸಿ, ಆರೋಗ್ಯ ಮೇಲ್ವಿಚಾರಕರು ಹಾಗೂ ಮಾರ್ಷಲ್ ಗಳಿಗೆ ರಸ್ತೆಗಳಲ್ಲಿ ಕಸ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಹಾಗೂ ಅನಧಿಕೃತವಾಗಿ ಕಸ ಹಾಕುವವರ ವಿರುದ್ಧ ದಂಡಾತ್ಮಕ ಕ್ರಮಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವಂತೆ ನಿರ್ದೇಶನ ನೀಡಿದರು.

**ಜನಗಣತಿ 2027 ಕ್ಕೆ ಸಂಬಂಧಿಸಿದಂತೆ ಪರಿಶೀಲನೆ:ಗಣತಿದಾರರಿಗೆ ಮಾರ್ಗದರ್ಶನ:**

ಹೊಸಕೆರೆಹಳ್ಳಿ ವಾರ್ಡ್ ನ 5ನೇ ಅಡ್ಡರಸ್ತೆ, ಟಿ.ಜಿ. ಲೇಔಟ್ ನಲ್ಲಿ ಭಾರತ ಜನಗಣತಿ 2027 ಭಾಗವಾಗಿ ಗಣತಿದಾರರು ಮತ್ತು ಮೇಲ್ವಿಚಾರಕರೊಂದಿಗೆ ಬ್ಲಾಕ ವಾರು ಹಾಗೂ ಮನೆಗಳ ಪಟ್ಟಿ ಸಿದ್ದಪಡಿಸುವದರ ಬಗ್ಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದರು. ಜನಗಣತಿ ಮಾಹಿತಿ ಸಂಗ್ರಹಣೆ ಪ್ರಕ್ರಿಯೆಯನ್ನು ವೀಕ್ಷಿಸಿ, ಗಣತಿದಾರರಿಗೆ ಅಗತ್ಯ ಮಾಹಿತಿ ನೀಡುವಂತೆ ಸೂಚಿಸಿದರು. ಜೊತೆಗೆ, ಆಸ್ತಿ ಮಾಲೀಕರು ಪ್ರಸಕ್ತ ಸಾಲಿನ ಕಂದಾಯವನ್ನು ಪಾವತಿಸುವಂತೆ ಹಾಗೂ ಇ-ಆಸ್ತಿ ಪಡೆಯುವ ಕುರಿತು ಜಾಗೃತಿ ಮೂಡಿಸಲು ಕರೆ ನೀಡಿದರು.

ಈ ಪರಿಶೀಲನೆ ಸಂದರ್ಭದಲ್ಲಿ ಉಪ ಆಯುಕ್ತರು (ಆಡಳಿತ) ಸಾಯಿದಾ ಆಫ್ರಿನ್ ಭಾನು, ಅಧೀಕ್ಷಕ ಅಭಿಯಂತರರು ಜಯಶಂಕರ್, ನಗರ ಯೋಜಕರು, ಕಾರ್ಯಪಾಲಕ ಅಭಿಯಂತರರು, ಕಂದಾಯ ಅಧಿಕಾರಿಗಳು, ಗಣತಿದಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಕಬ್ಬು ಬೇಸಾಯದಲ್ಲಿ ಎ ಐ ತಂತ್ರಜ್ಞಾನ ಮಹಾರಾಷ್ಟ್ರ ಮಾದರಿಯಲ್ಲಿ ರಾಜ್ಯ ಸರ್ಕಾರವು ಜಾರಿಗೆ ತರಲಿ

ಕಳೆದ ಎರಡು ವರ್ಷಗಳಿಂದ ಮಹಾರಾಷ್ಟ್ರ ರಾಜ್ಯದಲ್ಲಿ ಐದು ಸಾವಿರಕ್ಕೂ ಹೆಚ್ಚು ರೈತರು ಕೃತಕ ಬುದ್ಧಿಮತ್ತೆ AI ತಂತ್ರಜ್ಞಾನವನ್ನು ಅಳವಡಿಸಿಕೊಂಡು ಕಬ್ಬು ಬೇಸಾಯ ಮಾಡುತ್ತಿರುವ ಕಾರಣ ಪ್ರತಿ ಎಕರೆಗೆ 50ರಷ್ಟು ಹೆಚ್ಚು ಇಳುವರಿ ಪಡೆಯುತ್ತಿದ್ದು ಬೇಸಾಯದ ಖರ್ಚು ಕೂಡ ಕಡಿಮೆಯಾಗಿದೆ ಇದರಿಂದ ರೈತರಿಗೆ ಹೆಚ್ಚು ಲಾಭ ಬರುತ್ತಿದೆ. ಇದೇ ಮಾದರಿ ಕರ್ನಾಟಕ ಸರ್ಕಾರವು ಜಾರಿಗೆ ತರಬೇಕು ಎಂದು ರಾಜ್ಯ ಕಬ್ಬು ಬೆಳೆಗಾರ ಸಂಘದ ರಾಜ್ಯಾಧ್ಯಕ್ಷ ಕುರುಬೂರ್ ಶಾಂತಕುಮಾರ್ ಒತ್ತಾಯಿಸಿದ್ದಾರೆ.

ಅನ್ವಯ ಕಂದಾಯ ವಸೂಲಿ ಬಾಕಿ. ಆರ್ ಸಿ. ನಿಯಮದಂತೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಸಕ್ಕರೆ ಗೋದಾಮು ಜಪ್ತಿ ಮಾಡಿ ರೈತರ ಹಣ ಕೊಡಿಸಲಿ.

2025-26 ರಲ್ಲಿ ರಾಜ್ಯದ 80 ಸಕ್ಕರೆ ಕಾರ್ಖಾನೆಗಳು 5 ಕೋಟಿ 75 ಲಕ್ಷ ಕಬ್ಬು ನೂರಿಸಿವೆ ಈ ಬಾಬ್ತು ರೈತರಿಗೆ 3000 ಕೋಟಿ ಕಬ್ಬಿನ ಹಣ ಬಾಕಿ ಇದೆ.

ಕಬ್ಬು. ಬತ್ತ. ಜೋಳ. ಬೆಳೆಗಳಿಂದ ಯತನಾಲ್ ಉತ್ಪಾದನೆ ಮಾಡಿ ಮಾರಾಟ ಮಾಡುವ ತಂತ್ರಜ್ಞಾನ ರೈತರಿಗೆ ನೀಡಿ ಇದರಿಂದ ರೈತರಿಗೆ ಹೆಚ್ಚು ಲಾಭ ಸಿಗುತ್ತದೆ ಅಡುಗೆ ಅನಿಲ (ಗ್ಯಾಸ್)ಸಮಸ್ಯೆ ಬಗೆಹರಿಯುತ್ತದೆ.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಏ ತಂತ್ರಜ್ಞಾನ ಅಳವಡಿಸಿಕೊಳ್ಳುವ ರೈತರಿಗೆ ಪ್ರತಿ ಹೆಕ್ಟರಿಗೆ 25,000 ಖರ್ಚು ಬರುತ್ತದೆ. ಈ ಬಾಬ್ತು ಮಹಾರಾಷ್ಟ್ರ ರಾಜ್ಯ ಸರ್ಕಾರ 18000 ಸಹಾಯಧನ ಕೊಡುತ್ತಿದೆ. ಉಳಿದ 7 ಸಾವಿರ ರೂಗಳನ್ನು ಆಯಾ ಭಾಗದ ಸಕ್ಕರೆ ಕಾರ್ಖಾನೆ ಬರಿಸುತ್ತಿದೆ. .

ಈ ಬಗ್ಗೆ ಅಧ್ಯಯನ ನಡೆಸಲು ನೆನ್ನೆ ಮಹಾರಾಷ್ಟ್ರ ರಾಜ್ಯದ ಬಾರಮತಿ ಕೃಷಿ ವಿಜ್ಞಾನ ಕೇಂದ್ರಕ್ಕೆ ನಮ್ಮ ಸಂಘಟನೆಯ 16 ರೈತರ ತಂಡ ಅಧ್ಯಯನ ನಡೆಸಿ ಬಂದಿದ್ದೇವೆ. ರಾಜ್ಯದಲ್ಲಿ 50ಕ್ಕೂ ಹೆಚ್ಚು ಸಕ್ಕರೆ ಕಾರ್ಖಾನೆಗಳು ರೈತರ ಕಬ್ಬಿನ ಹಣ ಪಾವತಿ ಮಾಡಿಲ್ಲ. ಬಾಕಿ ಉಳಿಸಿಕೊಂಡಿರುವ ಕಾರ್ಖಾನೆಗಳಿಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಸಕ್ಕರೆ ನಿಯಂತ್ರಣ ಕಾಯ್ದೆ

ಯತನಾಲ್ ಬಳಕೆಯಿಂದ ಪರಿಸರ ಸಂರಕ್ಷಣೆಯಾಗುತ್ತದೆ ವಿದೇಶಿ ವಿನಿಮಯ ಉಳಿಯುತ್ತದೆ. ರೈತರ ಆದಾಯ ದುಪ್ಪಟ್ಟಾಗುತ್ತದೆ. ಕೇಂದ್ರ ಸರ್ಕಾರ ಕೂಡಲೇ ಈ ಬಗ್ಗೆ ಗಮನ ಹರಿಸಬೇಕು ಎಂದು ಒತ್ತಾಯಿಸಲಾಗಿದೆ . ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮಹೇಶ್ ಬೆಳಗಾಂಕರ್. . ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಮೇಶ್ ಹಿರೇಮಠ. ಎಸ್ ಬಿ ಸಿದ್ನಾಳ್. ರಾಜ್ಯ ಉಪಾಧ್ಯಕ್ಷ ಎನ್ ಎಚ್ ದೇವಕುಮಾರ್. ರಾಜ್ಯ ಸಂಘಟನಾ ಕಾರ್ಯದರ್ಶಿ ಹತ್ತಳ್ಳಿ ದೇವರಾಜ್. ಧಾರವಾಡ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪರಶುರಾಮ್ ಎತ್ತಿನಗುಡ್ಡ. ಬರಡನಪುರ ನಾಗರಾಜ್. ಬಾಪುಗೌಡ ಬಸವನಗೌಡ ಪಾಟೀಲ್. ವೀರಣ್ಣಗೌಡ. ಶಿವಪ್ಪ ಭೈರೂಜಿ ಇದ್ದರು.

# ಬಿಜೆಪಿ ಷಡ್ಯಂತ್ರದಿಂದ ವಿನಯ್ ಕುಲಕರ್ಣಿಗೆ ಸಂಕಷ್ಟ: ಡಿ.ಕೆ. ಶಿವಕುಮಾರ್

ನವದೆಹಲಿ : ಬಿಜೆಪಿ ಷಡ್ಯಂತ್ರದಿಂದ ವಿನಯ್ ಕುಲಕರ್ಣಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅವರು ಧೈರ್ಯ ಕಳೆದುಕೊಳ್ಳುವ ಅಗತ್ಯವಿಲ್ಲ. ರಾಜಕಾರಣದಲ್ಲಿ ಇಂತಹ ಹೋರಾಟ ಮಾಡಲೇಬೇಕು, ಅವರು ಹೋರಾಟ ಮಾಡುತ್ತಾರೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ನವದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಪ್ರತಿಕ್ರಿಯೆ ನೀಡಿದರು.

ವಿನಯ್ ಕುಲಕರ್ಣಿ ಅವರಿಗೆ ಜೀವಾವಧಿ ಶಿಕ್ಷೆ ಪ್ರಕಟವಾಗಿರುವ ಬಗ್ಗೆ ಕೇಳಿದಾಗ, "ನನಗೆ ನ್ಯಾಯಾಲಯದ ಬಗ್ಗೆ ಗೌರವವಿದೆ. ಇಲ್ಲಿ ದೊಡ್ಡ ಒಳಸಂಚು ನಡೆದಿದೆ. ಬಿ ರಿಪೋರ್ಟ್ ಸಲ್ಲಿಕೆ ವೇಳೆ ಸಿಬಿಐ ತನಿಖೆ ನಡೆಸಿ ಕಿರುಕುಳ ನೀಡಲಾಗಿದೆ. ಒಳಸಂಚಿನಲ್ಲಿ ವಿನಯ್ ಕುಲಕರ್ಣಿ ಅವರನ್ನೂ ಸಿಲುಕಿಸಲಾಗಿದೆ. ಮೇಲ್ಮನವಿಗೆ ಇನ್ನು 30 ದಿನಗಳ ಕಾಲಾವಕಾಶವಿದ್ದು, ನಾನು ಅವರ ಕುಟುಂಬದ ಜತೆ ಚರ್ಚೆ ಮಾಡಿದ್ದೇನೆ. ಅವರು ನಂಬಿರುವ ದೇವರ ಮೇಲೆ ಸತ್ಯ ಮಾಡಿ, ನಾನು ಈ ತಪ್ಪು ಮಾಡಿಲ್ಲ ಎಂದಿದ್ದಾರೆ. ನನಗೆ ಇವತ್ತಿಗೂ ಅವರ ಮೇಲೆ ನಂಬಿಕೆ ಇದೆ. ಶಿಕ್ಷೆ ಪ್ರಕಟಣೆ ಬಗ್ಗೆ ಗೌರವ ನೀಡಬೇಕು. ನನ್ನ ಪ್ರಕಾರ ಅವರು ತಪ್ಪು ಮಾಡಿಲ್ಲ. ಅವರ ಕುಟುಂಬದ ಜತೆ ನಾನು ಮಾನಸಿಕವಾಗಿ ಶಕ್ತಿ ತುಂಬುವ ಕೆಲಸ ಮಾಡುತ್ತೇವೆ. ಕಾರ್ಯಕರ್ತರು ಧೈರ್ಯ ಕಳೆದುಕೊಳ್ಳುವುದು. ಸತ್ಯಕ್ಕೆ ಗೆಲುವು ಸಿಕ್ಕೇ ಸಿಗುತ್ತದೆ. ನನ್ನ ವಿಚಾರದಲ್ಲೂ ಅನೇಕ ಸಂಚು ನಡೆಯಿತು. ನಾನು ಸಾಕಷ್ಟು ಅನುಭವಿಸಿದೆ. ಕೊನೆಗೆ ನನಗೆ ನ್ಯಾಯ ಸಿಕ್ಕಿದ್ದು ಸುಪ್ರೀಂ ಕೋರ್ಟ್ ನಲ್ಲಿ. ಈ ಪ್ರಕರಣದಲ್ಲೂ ಮೇಲಿನ ಕೋರ್ಟ್ ನಲ್ಲಿ ನ್ಯಾಯ ಸಿಗುವ ವಿಶ್ವಾಸವಿದೆ" ಎಂದರು.



ಯಾರ ಒಳಸಂಚು ಇದೆ ಎಂದು ಕೇಳಿದಾಗ, "ಸಮಯ ಬಂದಾಗ ಹೇಳುತ್ತೇನೆ. ಸಿಬಿಐ ತನಿಖೆ ನೀಡುವ ಅಗತ್ಯ ಏನಿತ್ತು? ಸಿಬಿಐಗೆ ಪ್ರಕರಣ ಕೊಡಿಸುವೆ ಎಂದು ಹೇಳುವ ಸಂದರ್ಭ ಏನಿತ್ತು? ನಾನು ಅವತ್ತೇ ಹೇಳಿದ್ದೆ ಎಂದು ಯಡಿಯೂರಪ್ಪನವರು ಹೇಳುತ್ತಿದ್ದಾರಲ್ಲಾ, ಮುಂಚಿತವಾಗಿ ಹೇಗೆ ಹೇಳಲಾಯಿತು? ಉತ್ತರ ಕರ್ನಾಟಕದಲ್ಲಿ ರಾಜಕೀಯವಾಗಿ ಒಬ್ಬ ನಾಯಕ ಶಕ್ತಿಯಾಗಿ ಬೆಳೆಯುತ್ತಿದ್ದಾನೆ ಎಂದು ಬಿಜೆಪಿಯವರು ಒಳಸಂಚು ಮಾಡಿದ್ದಾರೆ" ಎಂದರು.

**ಸಿದ್ದರಾಮಯ್ಯ ಅವರೇ ನನ್ನ ತಂಡ ಎಂದರೆ ನಂಬಬಹುದು**

ಹಿರಿಯ ಶಾಸಕರು ದೆಹಲಿಗೆ ಭೇಟಿ ನೀಡಿದ್ದ ಬಗ್ಗೆ ಕೇಳಿದಾಗ, "ಅದು ಅವರಿಗೆ ಬಿಟ್ಟ ವಿಚಾರ. ಆದರೆ ಅವರನ್ನು ಒಂದು ತಂಡ ಎಂದು ಹೇಳಲಾಗುತ್ತಿದೆ. ಅವರದ್ದು ಯಾವ ತಂಡವೂ ಇಲ್ಲ. ಇಲ್ಲಿ ಸಿದ್ದರಾಮಯ್ಯ ಅವರ ತಂಡವೂ ಇಲ್ಲ, ಡಿ.ಕೆ. ಶಿವಕುಮಾರ್ ತಂಡವೂ ಇಲ್ಲ. ಸ್ವತಃ ಸಿದ್ದರಾಮಯ್ಯನವರೇ ಇದು ನನ್ನ ತಂಡ ಎಂದು ಹೇಳಿದಾಗ ಅದು ಅವರ ತಂಡ ಎಂದು ಒಪ್ಪಬಹುದು. ಈ ವಿಚಾರವನ್ನು ಸಿದ್ದರಾಮಯ್ಯನವರೂ ಹೇಳುತ್ತಿಲ್ಲ, ನಾನು ಹೇಳುತ್ತಿಲ್ಲ. ಜಯಚಂದ್ರ ಅವರು 1978ರಲ್ಲಿ ಶಾಸಕರಾಗಿದ್ದು ಸಿದ್ದರಾಮಯ್ಯ ಅವರಿಗಂತ ಮುಂಚಿತವಾಗಿ ಬಂದವರು ಅವರನ್ನು ಸಿದ್ದರಾಮಯ್ಯ ತಂಡ ಎಂದು ಹೇಳಲು ಆಗುತ್ತದೆಯೇ?" ಎಂದು ತಿಳಿಸಿದರು.

ದೆಹಲಿಗೆ ಬಂದು ಸಚಿವ ಸಂಪುಟ ಪುನರಚನೆ ಮಾಡಿಸಬೇಕಾದ ಪರಿಸ್ಥಿತಿ ಬಂದಿದೆ ಎಂದು ಕೇಳಿದಾಗ, "ಈ ವಿಚಾರವಾಗಿ ಸಿಎಂ ಉತ್ತರ ನೀಡುತ್ತಾರೆ" ಎಂದು ತಿಳಿಸಿದರು.

# ತಹಶೀಲ್ದಾರರುಗಳಿಗೆ ಸಚಿವ ಕೃಷ್ಣ ಬೈರೇಗೌಡರ ಕಿವಿಮಾತು

**ಬೆಂಗಳೂರು :** ದಿನಕ್ಕೆ ಸರಾಸರಿ 12,000 ಪುಟ ಸ್ಕ್ಯಾನ್ ಮಾಡಬೇಕು ಎಂಬುದು ಗುರಿಯಿದ್ದರೂ, ಕೆಲ ತಾಲೂಕುಗಳಲ್ಲಿ 8,000 ಪುಟ ದಾಟುತ್ತಿರಲಿಲ್ಲ ಎಂದು ಭೂದಾಖಲೆ ಸ್ಕ್ಯಾನಿಂಗ್ ವಿರುದ್ಧ ಅಸಡ್ಡೆ ತೋರುತ್ತಿರುವ ತಹಶೀಲ್ದಾರರುಗಳ ವಿರುದ್ಧ ಕಂದಾಯ ಸಚಿವ ಕೃಷ್ಣ ಬೈರೇಗೌಡ ಗರಂ ಆದ ಘಟನೆ ನಡೆದಿದೆ.

ವಿಕಾಸಸೌಧದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ರಾಜ್ಯದ ಎಲ್ಲಾ ತಹಶೀಲ್ದಾರ್ ಗಳ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಭೂ ಸುರಕ್ಷಾ ಯೋಜನೆ ಬಗ್ಗೆ ಸಭೆಯಲ್ಲಿ ಗಂಭೀರ ಚರ್ಚೆಯಲ್ಲಿ ಪಾಲ್ಗೊಂಡ ಸಚಿವರು, ಸ್ಕ್ಯಾನಿಂಗ್ ಕೆಲಸಕ್ಕೆ ಪ್ರತಿ ತಾಲೂಕಿಗೆ ತಲಾ 8 ಜನ ಡೇಟಾ ಆಪರೇಟರ್ ನೀಡಿದರೂ ಕೆಲ ತಾಲೂಕುಗಳಲ್ಲಿ ಪ್ರಗತಿ ಕುಂಠಿತವಾಗಿದೆ ಎಂದು ದೂರಿದರು. ಅಲ್ಲದೇ ಅಸಮರ್ಪಕ ಉತ್ತರ ನೀಡಿದ ಗದಗ ಜಿಲ್ಲೆ ಶಿರಹಟ್ಟಿ ತಹಶೀಲ್ದಾರ್ ಗೆ ಕ್ಲಾಸ್ ತೆಗೆದುಕೊಂಡರಲ್ಲದೇ, ಕೆಲಸ ಮಾಡದ ಅಧಿಕಾರಿಗಳ ವಿರುದ್ಧ ಸಚಿವರು ಗರಂ ಆದ ಘಟನೆ ಸಂಭವಿಸಿದೆ.

ಮಲೆನಾಡು ಪ್ರದೇಶಗಳಾದ ಚಿಕ್ಕಮಗಳೂರು, ಕೊಡಗು ಜಿಲ್ಲೆಯಲ್ಲಿ ಹಾಗೂ ಹಿಂದುಳಿದ ಜಿಲ್ಲೆಗಳಾದ ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಸ್ಕ್ಯಾನಿಂಗ್ ಕೆಲಸ ಸಂಪೂರ್ಣ ಮುಗಿದಿದೆ. ಆದರೆ, ಬೆಂಗಳೂರು ನಗರ, ಶ್ರೀರಂಗಪಟ್ಟಣ, ಮದ್ದೂರು, ಪಾಂಡವಪುರ ಮೈಸೂರಿನ ಇತರೆ ತಾಲೂಕಿನಲ್ಲಿ ಈ ಕೆಲಸ ಏಕೆ ಸಾಧ್ಯವಿಲ್ಲ. ಬೆಳ್ತಂಗಡಿ, ಮೂಡಬಿದರೆ, ಪುತ್ತೂರು ಚಳ್ಳಕೆರೆ, ಕಂಪ್ಲಿ, ಸಿರಗುಪ್ಪ ಸೇರಿ 60 ತಾಲೂಕುಗಳುಗ ಗುರಿಯನ್ನೂ ಮೀರಿ ದಿನಕ್ಕೆ 20,000 ಪುಟ ಸ್ಕ್ಯಾನ್ ಮಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಹೊನ್ನಾವರದಲ್ಲಿ ದಿನಕ್ಕೆ 40,000 ಪುಟ ಸ್ಕ್ಯಾನ್ ಮಾಡಲಾಗುತ್ತಿದೆ. ಹೀಗೆ ಬೇರೆ ತಾಲೂಕಿನಲ್ಲಿ ಸಾಧ್ಯವಾದದ್ದು ಇತರರಿಂದ ಏಕೆ ಸಾಧ್ಯವಿಲ್ಲ ಎಂದು ಪ್ರಶ್ನಿಸಿದ್ದಾರೆ. ನಾಲ್ಕೂ ಕಂದಾಯ ವಿಭಾಗದ ಪ್ರಾದೇಶಿಕ ಆಯುಕ್ತರು ಕಡಿಮೆ ಸ್ಕ್ಯಾನ್ ಆಗುತ್ತಿರುವ ತಾಲೂಕುಗಳ ಮೇಲೆ ನಿಗಾವಹಿಸಲು ಸೂಚಿಸಿದ್ದಾರೆ.

19 ಲಕ್ಷ ಪುಟ ಭೂ ದಾಖಲೆಗಳನ್ನು ಜನ ಈಗಾಗಲೇ ಆನ್ಲೈನ್ ಮೂಲಕ ಪಡೆದಿದ್ದಾರೆ. ಭೂ ದಾಖಲೆಗಳಿಗಾಗಿ ಜನ ನಮ್ಮ ಕಚೇರಿಗೆ ಬರಬೇಡಿ ಎಂದು ತಹಶೀಲ್ದಾರರು ಜನರಲ್ಲಿ ಅರಿವು ಮೂಡಿಸಿ. ಜನ ಅನಗತ್ಯವಾಗಿ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದು ಕಡಿಮೆಯಾದರೆ, ಅಧಿಕಾರಿಗಳ ಕೆಲಸದ ಒತ್ತಡ ಕಡಿಮೆಯಾಗುತ್ತೆ, ಮಧ್ಯವರ್ತಿಗಳ ಹಾವಳಿಯೂ ಕಡಿಮೆಯಾಗುತ್ತೆ ಎಂದರು.

**ತಹಶೀಲ್ದಾರರುಗಳಿಗೆ ಸಚಿವ ಕೃಷ್ಣ ಬೈರೇಗೌಡರ ಕಿವಿಮಾತು**

**ಕೋರ್ಟ್ ಕೇಸ್**

ತಹಶೀಲ್ದಾರ್ ಕೋರ್ಟ್ ಕೇಸ್ ವಿಲೇವಾರಿಯಲ್ಲಿ ಉತ್ತಮ ಪ್ರಗತಿ. ಹಳೆಯ ಬಹುತೇಕ ಪ್ರಕರಣ ವಿಲೇವಾರಿ. ಆದರೂ, ಶಿಗ್ಗಾಂವ್,ಶಿರಾ, ಮುಳಬಾಗಿಲು ಸೇರಿ ಕೆಲ ತಾಲೂಕುಗಳಲ್ಲಿ ಮಾತ್ರ 90 ದಿನಕ್ಕೆ ಮೀರಿದ ಪ್ರಕರಣ ಬಾಕಿ. ಅದನ್ನೂ ಶೀಘ್ರ ವಿಲೇವಾರಿಗೊಳಿಸಲು ಸಚಿವರು ಸೂಚಿಸಿದರು. ಕೋರ್ಟ್ ಕೇಸ್ ಗಳನ್ನು 10700 ರಿಂದ 140ಕ್ಕೆ ಇಳಿಸಲಾಗಿದೆ. ಈ ಪ್ರಕರಣಗಳನ್ನೂ ಶೀಘ್ರ ವಿಲೇಗೆ ಸೂಚಿಸಿದರು.

**ಫೌತಿಖಾತೆ**

ಕುಟುಂಬದ ವ್ಯಾಜ್ಯಗಳಿಲ್ಲದ ಆಸ್ತಿಗಳನ್ನು ಸಾಧ್ಯವಾದಷ್ಟು ಶೀಘ್ರದಲ್ಲಿ ಫೌತಿಖಾತೆ ಮಾಡಬೇಕು.



ಗುಂಡ್ಲುಪೇಟೆಯಲ್ಲಿ ಈ ತಿಂಗಳಲ್ಲಿ 4,000 ಆಸ್ತಿಗಳ ಫೌತಿಖಾತೆ ಸಾಧ್ಯತೆ ಬಗ್ಗೆ ತಹಶೀಲ್ದಾರ್ ಭರವಸೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಫೌತಿಖಾತೆ ಆಂದೋಲನ ಬಹುತೇಕ ಮುಕ್ತಾಯ. ಉಳ್ಳಾಲದಲ್ಲಿ 18 ಹಾಗೂ ಮಂಗಳೂರಲ್ಲಿ 357 ಆಸ್ತಿಗಳು ಮಾತ್ರ ಫೌತಿಗೆ ಬಾಕಿ. ಉಳಿದಂತೆ ಇಡೀ ಜಿಲ್ಲೆ ಫೌತಿಮುಕ್ತ. ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ಅಧಿಕಾರಿಗಳನ್ನೂ ಸಚಿವರು ಪ್ರಶಂಸಿದರು.

ಎಚ್ ಡಿ ಕೋಟೆ, ಹಾಸನದ ಆಲೂರಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫೌತಿ ಬಾಕಿ. ಆಲೂರಿನಲ್ಲಿ ಕಳೆದ ಒಂದು ತಿಂಗಳಲ್ಲಿ ಕೇವಲ 27 ಪ್ರಕರಣ ಮಾತ್ರ ಫೌತಿ. ಹುಣಸೂರಿನಲ್ಲಿ 5800 ಪ್ರಕರಣಗಳ ಪೈಕಿ 53 ಹಾಗೂ ಚಾಮರಾಜನಗರದಲ್ಲಿ 11000 ಪ್ರಕರಣಗಳ ಪೈಕಿ 88 ಪ್ರಕರಣದಲ್ಲಿ ಮಾತ್ರ ಫೌತಿ ಆಗಿದೆ. ಚಾಮರಾಜನಗರದ ಎಲ್ಲಾ ಅಧಿಕಾರಿಗಳಿಗೆ ಸಚಿವರು ಬೆವರಿಳಿಸಿದರು.

ಶಿಕಾರಿಪುರ ತಾಲೂಕಲ್ಲಿ 6700 ಪ್ರಕರಣ ಇದೆ. ಆದರೆ, ಈ ತಾಲೂಕಲ್ಲಿ ಯಾವ ವಿಚಾರದಲ್ಲೂ ಕೆಲಸ ಆಗಿಲ್ಲ. ಬೆಂಗಳೂರು ಗ್ರಾಮಾಂತರ, ರಾಯಚೂರು, ಹಾವೇರಿ ಜಿಲ್ಲೆಗಳಲ್ಲೂ ಅಧಿಕ ಪ್ರಕರಣ ಬಾಕಿ. ಫೌತಿಖಾತೆ ಪ್ರಕರಣಗಳನ್ನು ಶೀಘ್ರ ಮುಗಿಸಲು ಎಲ್ಲಾ ತಹಶೀಲ್ದಾರರಿಗೂ ಸೂಚಿಸಿದರು.

**ಪೋಡಿ ದುರಸ್ಥಿ**

1 ರಿಂದ 10 ಮಂಜೂರಿದಾರಷ್ಟೇ ಇರುವ ಎಲ್ಲಾ ಸರ್ವೇ ನಂಬರ್ ಗಳ 1 ಣಂ 5 ಕೆಲಸವನ್ನು ಮುಂದಿನ ಒಂದು ವಾರದಲ್ಲಿ ಪೂರ್ಣಗೊಳಿಸಬೇಕು ಬೆಂಗಳೂರು ದಕ್ಷಿಣ ಇಡೀ ಜಿಲ್ಲೆಯಲ್ಲಿ ಇಂಡೀಕರಣ ಸೊನ್ನೆ. ಏನೂ ಪ್ರಗತಿ ಇಲ್ಲ. ಡಿಡಿಎಲ್ಆರ್ ಹಾಗೂ ಎಡಿಎಲ್ಆರ್ ಗಳು ಎಚ್ಚೆತ್ತುಕೊಂಡು ಕೆಲಸ ಮಾಡಬೇಕು. ಇಲ್ಲದಿದ್ದರೆ ಶಿಸ್ತುಕ್ರಮದ ಎಚ್ಚರಿಕೆ ನೀಡಿದರು.

**ಕಂದಾಯ ಗ್ರಾಮ**

ಆಲೂರು, ನಂಜನಗೂಡು ಯಲಹಂಕ, ಚಿಟಗುಪ್ಪ, ಯಳಂದೂರು, ಹರಪನಹಳ್ಳಿ, ಹಡಗಲಿ, ಕೂಡ್ಲಿಗಿ, ಕೊಳ್ಳೆಗಾಲ, ಜೇವರ್ಗಿ, ಹನೂರು ತಾಲೂಕುಗಳಲ್ಲಿ ಕಂದಾಯ ಗ್ರಾಮಗಳ ರಿಜಿಸ್ಟ್ರೇಷನ್ ಕಡಿಮೆ ಆಗಿದೆ. ಇದು ಬಡವರ ಕೆಲಸ, ಅರ್ಧಂಬರ್ಧ ಮಾಡಿಕೊಟ್ಟರೆ ಜನರಿಗೆ ಅನ್ಯಾಯವಾಗುತ್ತೆ. ಹೀಗಾಗಿ ಕಂದಾಯ ಗ್ರಾಮಗಳ ಕೆಲಸ ಪೂರ್ತಿ ಮಾಡಿಕೊಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೆಲವರು ಎಷ್ಟೇ ಕಷ್ಟ ಇದ್ದರೂ ಚಾಲೆಂಜಿಂಗ್ ಆಗಿ ತಗೊಂಡು ಕೆಲಸ ಮಾಡಿದ್ದಾರೆ. ಆದರೆ, ಬೇರೆಯವರು ಸರಿಯಾಗಿ ಮಾಡ್ತಾ ಇಲ್ಲ. ಬಡವರ ಕೆಲಸ ದಯವಿಟ್ಟು ಉದಾಸೀನ ಮಾಡಬೇಡಿ ಎಂದು ಮನವಿ ಮಾಡಿದರು. ಸಭೆಯಲ್ಲಿ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ (ಪ್ರಭಾರಿ) ರಿತ್ವಿಕ್ ಪಾಂಡೆ, ಕಂದಾಯ ಆಯುಕ್ತರಾದ ಮೀನಾ ನಾಗರಾಜ್, ಸರ್ವೇ ಆಯುಕ್ತರಾದ ವೆಂಕಟರಾಜು ಅವರು ಉಪಸ್ಥಿತರಿದ್ದರು.

# ಹಂಪಿ ನಗರ ಉದ್ಯಾನವನಕ್ಕೆ ಶ್ರೀ ಕೆಂಗಲ್ ಹನುಮಂತಯ್ಯ ಸ್ಮೃತಿವನ ನಾಮಕರಣ: ಸಾರ್ವಜನಿಕರಿಂದ ಆಕ್ಷೇಪಣೆ ಆಹ್ವಾನ

**ಬೆಂಗಳೂರು** : ಮೈಸೂರು ರಸ್ತೆಯ ಬಿ.ಎಚ್.ಇ.ಎಲ್ ಜಂಕ್ಷನ್ ಪ್ರದೇಶದಲ್ಲಿ ಅಭಿವೃದ್ಧಿಪಡಿಸಿರುವ ಉದ್ಯಾನವನಕ್ಕೆ ಶ್ರೀ ಕೆಂಗಲ್ ಹನುಮಂತಯ್ಯ ಸ್ಮೃತಿವನ ಎಂದು ನಾಮಕರಣ ಮಾಡಲು ಉದ್ದೇಶಿಸಲಾಗಿದೆ.

ಈ ನಾಮಕರಣ ಕುರಿತು ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆಗಳು ಅಥವಾ ಅಭಿಪ್ರಾಯಗಳು ಇದ್ದಲ್ಲಿ, ಈ ಪ್ರಕಟಣೆಯ ದಿನಾಂಕದಿಂದ 30 ದಿನಗಳೊಳಗಾಗಿ ಲಿಖಿತವಾಗಿ ಅಪರ ಆಯುಕ್ತರು (ಕಂದಾಯ), ಬೆಂಗಳೂರು ಪಶ್ಚಿಮ ನಗರ ಪಾಲಿಕೆ, 16ನೇ ಅಡ್ಡರಸ್ತೆ, ಮಲ್ಲೇಶ್ವರಂ, ಐಪಿಪಿ ಕಟ್ಟಡ, ಬೆಂಗಳೂರು-03 ರವರ ಕಚೇರಿಗೆ ಸಲ್ಲಿಸಲು ಕೋರಲಾಗಿದೆ. ನಿಗದಿತ ಅವಧಿಯಲ್ಲಿ ಲಭ್ಯವಾಗುವ ಆಕ್ಷೇಪಣೆಗಳನ್ನು ಪರಿಶೀಲಿಸಿ, ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಲೋಕಸಭೆ: ಕಾಂಗ್ರೆಸ್, ಡಿಎಂಕೆ ಮೇಲೆ ಹೆಚ್.ಡಿ. ಕುಮಾರಸ್ವಾಮಿ ತೀವ್ರ ವಾಗ್ದಾಳಿ

**ನವದೆಹಲಿ :** ಲೋಕಸಭೆ ಮತ್ತು ವಿಧಾಸಭೆಗಳಲ್ಲಿ ಮಹಿಳೆಯರಿಗೆ 33% ಮೀಸಲಾತಿ ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಇರಿಸಿರುವ ಹೆಜ್ಜೆ ಐತಿಹಾಸಿಕ ಎಂದು ಬಣ್ಣಿಸಿದ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು; ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಹಾಗೂ ಡಿಎಂಕೆ ಪಕ್ಷಗಳ ವಾದಗಳು ಭಯ ಹುಟ್ಟಿಸುವ ರೀತಿಯಲ್ಲಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಲೋಕಸಭೆಯಲ್ಲಿ ಶುಕ್ರವಾರ ಮಹಿಳಾ ಮೀಸಲು ಮಸೂದೆಯನ್ನು ಬೆಂಬಲಿಸಿ ಮಾತನಾಡಿದ ಕೇಂದ್ರ ಸಚಿವರು; ಮಹಿಳೆಯರಿಗೆ ಮೀಸಲಾತಿ ನೀಡುವ ನಿಟ್ಟಿನಲ್ಲಿ ಈ ಮಸೂದೆಯು ಭಾರತದ ಪ್ರಜಾಪ್ರಭುತ್ವದ ಪಯಣದಲ್ಲಿ ಕ್ರಾಂತ ಕ್ರಾಂತಿಕಾರಕ ಹೆಜ್ಜೆಯಾಗಿದೆ ಎಂದರು.

**ಸುಧಾರಣೆಗಳಿಗೆ ಕಾಂಗ್ರೆಸ್ ಅಡ್ಡಿಯಾಗಿದೆ:**

ಕಾಂಗ್ರೆಸ್ ಪಕ್ಷವು ನಿರಂತರವಾಗಿ ಸುಧಾರಣೆಗಳಿಗೆ ವ್ಯವಸ್ಥಿತವಾಗಿ ತಡೆಯೊಡ್ಡುತ್ತಿದೆ. ಈ ಮಸೂದೆಯನ್ನು ಬೆಂಬಲಿಸುವುದನ್ನು ಬಿಟ್ಟು ಜನರನ್ನು ದಾರಿತಪ್ಪಿಸುವ ಸಂಕಥನಗಳನ್ನು ಸೃಷ್ಟಿಸುತ್ತಿದೆ. ಕಾಂಗ್ರೆಸ್ ಸೃಷ್ಟಿಸುತ್ತಿರುವ ಗೊಂದಲಗಳಿಗೆ ಅರ್ಥವಿಲ್ಲ, ಅವುಗಳನ್ನು ಜನರು ನಂಬುವುದಿಲ್ಲ ಹಾಗೂ ಸಂಕುಚಿತ ಸಂಕಥನಗಳ ಕಾಂಗ್ರೆಸ್ ವಾದವು ರಾಷ್ಟ್ರದ ವಿಶಾಲ ತಳಹದಿಯ ಭಾವನೆಯನ್ನು ಪ್ರತಿಬಿಂಬಿಸುವುದಿಲ್ಲ ಎಂದು ಅವರು ಸ್ಪಷ್ಟ ಮಾತುಗಳಲ್ಲಿ ಹೇಳಿದರು.

**ಎಂ.ಕೆ. ಸ್ಟಾಲಿನ್ ನಿಲುವು ದಕ್ಷಿಣ ಭಾರತದ ಅಭಿಪ್ರಾಯವಲ್ಲ:**

ಮಸೂದೆಯ ಬಗ್ಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರು ತೆಗೆದುಕೊಂಡ ನಿಲುವು ಎಲ್ಲಾ ದಕ್ಷಿಣದ ರಾಜ್ಯಗಳ ಅಭಿಪ್ರಾಯವಲ್ಲ ನೇರ ಮಾತುಗಳಲ್ಲಿ ಹೇಳಿದ ಕೇಂದ್ರ ಸಚಿವರು; ಇಂದು ನಾವು ಯಾವ ಮಸೂದೆಯ ಬಗ್ಗೆ ಚರ್ಚೆ ನಡೆಸುತ್ತಿದ್ದೇವೆಯೋ ಅದನ್ನು ಮುಕ್ತವಾಗಿ ಬೆಂಬಲಿಸಿರುವ ಆಂಧ್ರ ಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರನ್ನು ಶ್ಲಾಘಿಸಿ, ನಾಯ್ಡು ಅವರಿಗೇನು ರಾಷ್ಟ್ರಪ್ರೇಮ ಇಲ್ಲವೇ? ಇಂದು ಪ್ರಶ್ನಿಸಿದರು.

ತಮಿಳುನಾಡಿನಲ್ಲಿ ಅಧಿಕಾರದಲ್ಲಿರುವ ಡಿಎಂಕೆ ಈ ಮಹತ್ವದ ಮಸೂದೆಗಳನ್ನು ತೀವ್ರವಾಗಿ ವಿರೋಧಿಸುತ್ತಿರುವುದು ಮತ್ತು ಅವುಗಳು ದಕ್ಷಿಣದ ರಾಜ್ಯಗಳ ಮೇಲೆ ಭಾರಿ ಪ್ರತಿಕೂಲ ಪರಿಣಾಮ ಬೀರುತ್ತವೆ ಎಂಬ ಕಳವಳವನ್ನು ವ್ಯಕ್ತಪಡಿಸಿದೆ. ಇದು ಸರಿಯಲ್ಲ, ಅನಗತ್ಯವಾಗಿದೆ ಎಂದು ಕೇಂದ್ರ ಸಚಿವರು ಪ್ರತಿಪಾದಿಸಿದರು.

**ಕಿರಿಯ ಸಹೋದರ ಎಂದು ಕುಟುಕಿದ ಸಚಿವರು:**

ಕಾಂಗ್ರೆಸ್ ಮತ್ತು ಡಿಎಂಕೆ ಮೈತ್ರಿಯನ್ನು ಗುರಿಯಾಗಿಸಿಕೊಂಡು ವಾಗ್ದಾಳಿ ನಡೆಸಿದ ಕುಮಾರಸ್ವಾಮಿ ಅವರು; ರಾಹುಲ್ ಗಾಂಧಿ ಅವರು ಕೆಲ ದಿನಗಳ ಹಿಂದೆ, ತಾವು ಸ್ಟಾಲಿನ್ ಅವರ ಕಿರಿಯ ಸಹೋದರ ಎಂದು ಹೇಳಿಕೊಂಡಿದ್ದರು. ಆದರೆ ವಿಧಾನಸಭೆ ಕ್ಷೇತ್ರಗಳ ಹಂಚಿಕೆ ನಂತರ ಹಿರಿಯ ಸಹೋದರ ಕಿರಿಯ ಸಹೋದರನ ಮೇಲೆ ಮುನಿಸಿಕೊಂಡಂತೆ ಕಾಣುತ್ತಿದೆ. ಆದರೂ ಕಿರಿಯ ಸಹೋದರ ಈಗಲೂ ಹಿರಿಯ ಸಹೋದರನಿಂದ ಪ್ರೀತಿಯನ್ನು ನಿರೀಕ್ಷೆ ಮಾಡುತ್ತಿರುವಂತೆ ತೋರುತ್ತಿದೆ ಎಂದು ತರಾಟೆಗೆ ತೆಗೆದುಕೊಂಡರು.

ಮಹಿಳಾ ಮೀಸಲಾತಿ, ಅದರಲ್ಲೂ ಮುಖ್ಯವಾಗಿ ಅನುಪಾತದ ಪ್ರಾತಿನಿಧ್ಯದ ಬಗ್ಗೆ ರಾಹುಲ್ ಗಾಂಧಿ ಅವರ ನಿಲುವಿನಲ್ಲಿ ಸ್ಪಷ್ಟತೆ ಇಲ್ಲ ಎಂದು ಟೀಕಿಸಿದ ಸಚಿವ ಕುಮಾರಸ್ವಾಮಿ ಅವರು; ರಾಹುಲ್.ಗಾಂಧಿ ಅವರು ತಮಿಳುನಾಡು ಬಗ್ಗೆ ನೀಡುತ್ತಿರುವ ಹೇಳಿಕೆಯನ್ನು ಉತ್ತರ ಪ್ರದೇಶ, ಬಿಹಾರ ಅಥವಾ ಮಧ್ಯಪ್ರದೇಶಕ್ಕೆ ಹೋಗಿ



ಹೇಳುತ್ತಾರೆಯೇ? ಎಂದು ಖಾರವಾಗಿ ಪ್ರಶ್ನಿಸಿದರು.

ಕ್ಷೇತ್ರ ಮರು ವಿಂಗಡಣೆಯ ಬಗ್ಗೆ ಪ್ರತಿಪಕ್ಷಗಳ ಕಳವಳಕ್ಕೆ ಅರ್ಥವಿಲ್ಲ. ಸರ್ಕಾರವು ಎಲ್ಲಾ ರಾಜ್ಯಗಳಲ್ಲಿ ಸ್ಥಾನಗಳಲ್ಲಿ ಸರಾಸರಿ ಶೇ.50ರಷ್ಟು ಕ್ಷೇತ್ರಗಳನ್ನು ಹೆಚ್ಚಿಸುವ ಏಕರೂಪ ಬದ್ಧತೆಯನ್ನು ಖಚಿತಪಡಿಸಿದೆ. ಯಾವುದೇ ರಾಜ್ಯವು ತನ್ನ ಪ್ರಸ್ತುತ ಪ್ರಾತಿನಿಧ್ಯವನ್ನು ಕಳೆದುಕೊಳ್ಳುವುದಿಲ್ಲ ಹಾಗೂ ಭಾರತವು ತನ್ನ ಅಪಾರ ಜನಸಂಖ್ಯೆಯ ಹೊರತಾಗಿಯೂ ಬ್ರಿಟನ್ ನಂತಹ ದೇಶಕ್ಕಿಂತ ಕಡಿಮೆ ಚುನಾಯಿತ ಪ್ರತಿನಿಧಿಗಳನ್ನು ಹೊಂದಿದೆ. ಹೀಗಾಗಿ ಸಂಸದರ ಸಂಖ್ಯೆಯನ್ನು ಹೆಚ್ಚಿಸುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸ್ವಾತಂತ್ರ್ಯ ಬಂದು 75 ವರ್ಷಗಳ ನಂತರ ಬಹುದೊಡ್ಡ ಪರಿವರ್ತನಾತ್ಮಕ ಸುಧಾರಣೆಗೆ ಪ್ರಧಾನಿಗಳು ನಾಂದಿ ಹಾಡಿದ್ದಾರೆ ಎಂದ ಸಚಿವರು; ಪ್ರಧಾನಿಗಳ ನೇತೃತ್ವದಲ್ಲಿ ಭಾರತವು ದೃಢವಾದ ಮತ್ತು ಅರ್ಥಪೂರ್ಣ ಪರಿವರ್ತನೆಯತ್ತ ಸಾಗುತ್ತಿದೆ. ಇಡೀ ಜಗತ್ತು ಯುದ್ಧಗಳಿಂದ ತಲ್ಲಣಿಸುತ್ತಿದ್ದರೆ ಭಾರತ ಮಾತ್ರ ಸುಧಾರಣೆಗಳತ್ತ ದೃಢ ಸಂಕಲ್ಪದಿಂದ ಹೊರಳಿದೆ ಎಂದು ಒತ್ತಿ ಹೇಳಿದರು.

ಲೋಕಸಭೆಯ ಸಂಖ್ಯಾಬಲ ಹೆಚ್ಚಿಸುವ ಕೇಂದ್ರದ ನಿರ್ಧಾರವು ವಿಧಾನಸಭೆಗಳು ಮತ್ತು ಲೋಕಸಭೆಯಲ್ಲಿ ಮಹಿಳೆಯರ ಹೆಚ್ಚಿನ ಭಾಗವಹಿಸುವಿಕೆಯನ್ನು ಸಕ್ರಿಯಗೊಳಿಸುತ್ತದೆ ಮತ್ತು ಪ್ರಜಾಪ್ರಭುತ್ವವನ್ನು ಬಲಪಡಿಸುವ ಕ್ರಾಂತಿಕಾರಕ ಹೆಜ್ಜೆಯಾಗಿದೆ. ಈ ಕ್ರಮವು ಮಹಿಳೆಯರಿಗೆ ಮಾಡುವ ಉಪಕಾರವಲ್ಲ, ಬದಲಾಗಿ ಸಮಾಜಕ್ಕೆ ಅವರು ನೀಡಿದ ಕೊಡುಗೆಯನ್ನು ಗುರುತಿಸಿ ಮನ್ನಣೆ ನೀಡುವುದೇ ಆಗಿದೆ ಎಂದು ಅವರು ಹೇಳಿದರು ಹಾಗೂ ಮಹಿಳೆಯರು ಶಕ್ತಿ ಸ್ವರೂಪರು, ರಾಷ್ಟ್ರ ನಿರ್ಮಾಣದ ಕೇಂದ್ರಬಿಂದುವಾಗಿದ್ದಾರೆ ಎಂದು ಬಣ್ಣಿಸಿದರು.

**ಮಹಿಳಾ ಮೀಸಲು ಕನಸು ಕಂಡಿದ್ದ ದೇವೇಗೌಡರು:**

1995ರಲ್ಲಿ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಕರ್ನಾಟಕದ ಮುಖ್ಯಮಂತ್ರಿಯಾಗಿದ್ದಾಗ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ನೀಡುವ ಆಶಯವನ್ನು ಪ್ರಪ್ರಥಮ ಬಾರಿಗೆ ಪ್ರಸ್ತಾಪಿಸಿದ್ದರು ಎಂಬುದನ್ನು ಸ್ಮರಿಸಿದ ಸಚಿವರು; ದೇವೇಗೌಡರು ಆ ನಂತರ 1996ರಲ್ಲಿ ಪ್ರಧಾನಿಯಾಗಿ ಸಂಸತ್ತಿನಲ್ಲಿ ಈ ಮಹಿಳಾ ಮೀಸಲು ಮಸೂದೆಯನ್ನು ಮಂಡಿಸಿದರು, ಆದರೆ ರಾಜಕೀಯ ಬೆಂಬಲದ ಕೊರತೆಯಿಂದಾಗಿ ಆ ಸಮಯದಲ್ಲಿ ಅದನ್ನು ಈ ಸದನದಲ್ಲಿ ಅಂಗೀಕರಿಸಲು ಸಾಧ್ಯವಾಗಲಿಲ್ಲ ಎಂದು ಹೇಳಿದರು.

ರಾಷ್ಟ್ರದ ಒಟ್ಟು ಜನಸಂಖ್ಯೆಯಲ್ಲಿ ಅರ್ಧದಷ್ಟು ಇರುವ ಮಹಿಳೆಯರಿಗೆ ಈ ಮೀಸಲಾತಿ ಬಹುದೊಡ್ಡ ಶಕ್ತಿಯನ್ನು ತುಂಬುತ್ತದೆ. ಆತ್ಮನಿರ್ಭರ ಭಾರತದ ಮೂಲಕ ವಿಕಸಿತ ಭಾರತ ಸಾಕಾರಕ್ಕೆ ಪ್ರಧಾನಿಗಳು ಹೇಗೆ ಶ್ರಮಿಸುತ್ತಿದ್ದಾರೆಯೋ ಹಾಗೆಯೇ ಮಹಿಳೆಯರಿಗೆ ಮೀಸಲು ನೀಡಿ ರಾಜಕೀಯವಾಗಿ ಶಕ್ತಿ ನೀಡುವ ಮೂಲಕ *ನಾರೀಭಾರತ* ಸಾಕಾರಕ್ಕೆ ಮುಂದಾಗಿದ್ದಾರೆ ಎಂದು ಸಚಿವ ಕುಮಾರಸ್ವಾಮಿ ಅವರು ಪ್ರತಿಪಾದಿಸಿದರು.

ನಾನು ಕೂಡ ಈ ಐತಿಹಾಸಿಕ ಸಂದರ್ಭಕ್ಕೆ ಭಾಗವಾಗಿರುವುದು ನನಗೆ ಅತೀವ ಸಂತೋಷ ತಂದಿದೆ ಎಂದು ಹೇಳಿದ ಸಚಿವರು; ಈ ಮೀಸಲಾತಿಯನ್ನು ನಾವು ಔದಾರ್ಯವೆಂದು ನೋಡಬಾರದು. ವಾಸ್ತವವಾಗಿ, ಇದು ನಮ್ಮ ಸಮಾಜದಲ್ಲಿ ಮಹಿಳೆಯರ ಶಕ್ತಿ ಮತ್ತು ಕೊಡುಗೆಗೆ ಮನ್ನಣೆ, ಗೌರವ ನೀಡುವುದಾಗಿದೆ. ತಾಯಿಯೇ ಮೊದಲ ಗುರು ಮತ್ತು ಮಹಿಳೆಯೊಬ್ಬರು ಕಲಿತರೆ ಶಾಲೆಯೊಂದನ್ನು ತೆರೆದಂತೆ ಎಂಬ ಮಾತನ್ನು ನಾವೆಲ್ಲರೂ ಕೇಳಿದ್ದೇವೆ. ಶಾಸನಸಭೆಗಳಲ್ಲಿ ಮಹಿಳೆಯರಿಗೆ ಹೆಚ್ಚು ಅವಕಾಶ ನೀಡುವ ಮೂಲಕ ಪ್ರಜಾಪ್ರಭುತ್ವದ ಅಡಿಪಾಯವನ್ನು ಮತ್ತಷ್ಟು ಬಲಪಡಿಸಲಾಗುತ್ತಿದೆ. ಈ ಐತಿಹಾಸಿಕ ದಿನದಂದು ಭಾರತಮಾತೆ ನಮ್ಮೆಲ್ಲರ ಬಗ್ಗೆ ಹೆಮ್ಮೆಪಡುತ್ತಿದ್ದಾಳೆ ಎಂದು ನಾನು ನಂಬಿದ್ದೇನೆ ಎಂದು ಪ್ರತಿಪಾದಿಸಿದರು.

# ಬಂಡೆಯ ಮನೆಗೆ ಸಾಹುಕಾರ; ಮುಸ್ಲಿಂ ನಾಯಕರ ಅಸಮಾಧಾನ ಎದುರಿಸಲು ಸಹಕಾರ? ಡಿಕೆ ಶಿವಕುಮಾರ್-ಸತೀಶ್ ಜಾರಕಿಹೊಳಿ ಭೇಟಿ

ಬೆಂಗಳೂರು: ಕರ್ನಾಟಕ ಕಾಂಗ್ರೆಸ್‌ನಲ್ಲಿ ಸಚಿವ ಸತೀಶ್ ಜಾರಕಿಹೊಳಿ ಉತ್ತರ ಧ್ರುವವಾದರೆ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ದಕ್ಷಿಣ ಧ್ರುವ.



ಇದನ್ನು ಇಬ್ಬರೂ ಪರಸ್ಪರ ವೈರಿಗಳು ಎಂದರ್ಥದಲ್ಲಿ ತೆಗೆದುಕೊಳ್ಳುವ ಅವಶ್ಯಕತೆಯಿಲ್ಲ. ಸತೀಶ್ ಜಾರಕಿಹೊಳಿ ಉತ್ತರ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್‌ನ ಚಹರೆಯಾದರೆ, ಡಿಕೆ ಶಿವಕುಮಾರ್ ದಕ್ಷಿಣ ಕರ್ನಾಟಕ ಭಾಗದಲ್ಲಿ ಪಕ್ಷದ ಪ್ರಾಥಮಿಕ ಪ್ರತಿನಿಧಿ.

ಹಾಗಂತ ಇಬ್ಬರೂ ನಾಯಕರ ನಡುವೆ ಸ್ಪರ್ಧೆ ಇಲ್ಲವೆಂದೂ ಇಲ್ಲ. ಮುಖ್ಯಮಂತ್ರಿ ಸ್ಥಾನದ ಮೇಲೆ ಕಣ್ಣಿಟ್ಟಿರುವ ಡಿಕೆ ಶಿವಕುಮಾರ್ ಅವರಿಗೆ ಯಾರಾದರೂ ಪ್ರಬಲ ಟಕ್ಕರ್ ಕೊಡಬಲ್ಲರು ಎಂದರೆ ಅದು ಸತೀಶ್ ಜಾರಕಿಹೊಳಿ. ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೀಲಿ ಕಣ್ಣಿನ ಹುಡುಗ ಕೂಡ ಹೌದು.

ಹಾಗೆಯೇ ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಕುರಿತ ಸತೀಶ್ ಜಾರಕಿಹೊಳಿ ಹೇಳಿಕೆ ಡಿಕೆ ಶಿವಕುಮಾರ್ ಅವರನ್ನು ಆಗಾಗ್ಗೆ ಚಿಂತೆಗೀಡು ಮಾಡುತ್ತಲೇ ಇರುತ್ತದೆ. ಆದಾಗ್ಯೂ, ಇಬ್ಬರೂ ನಾಯಕರ ಪಕ್ಷನಿಷ್ಠೆ ಮತ್ತು ಪಕ್ಷಕ್ಕೆ ಎದುರಾಗುವ ಸವಾಲುಗಳನ್ನು ಎದುರಿಸುವಲ್ಲಿ ತೋರುವ ಒಗ್ಗಟ್ಟಿನ ಬಗ್ಗೆ ಯಾವ ಅನುಮಾನವೂ ಇಲ್ಲ. ಸತೀಶ್ ಜಾರಕಿಹೊಳಿ-ಡಿಕೆ ಶಿವಕುಮಾರ್ ಅವರ ಇಂದಿನ (ಏ.17-ಶುಕ್ರವಾರ) ಭೇಟಿಯೇ ಇದಕ್ಕೆ ಸಾಕ್ಷಿ.ಹೌದು, ಕರ್ನಾಟಕ ಕಾಂಗ್ರೆಸ್‌ನ ಎರಡು ಪ್ರಬಲ ಶಕ್ತಿ ಕೇಂದ್ರಗಳೆಂದೇ ಪರಿಗಣಿಸಲ್ಪಡುವ ಡಿಕೆ ಶಿವಕುಮಾರ್ ಮತ್ತು ಸತೀಶ್ ಜಾರಕಿಹೊಳಿ ಇಂದು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಈ ಕುರಿತು ಖುದ್ದು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿರುವ ಡಿಸಿಎಂ, "ಇಂದು ಸಚಿವ ಸತೀಶ್ ಜಾರಕಿಹೊಳಿ ಅವರು ಕುಮಾರಪಾರ್ಕ್‌ನಲ್ಲಿರುವ ಸರ್ಕಾರಿ ನಿವಾಸದಲ್ಲಿ ನನ್ನನ್ನು ಭೇಟಿಯಾಗಿ ಚರ್ಚೆ ನಡೆಸಿದರು" ಎಂದು ತಿಳಿಸಿದ್ದಾರೆ.ಇಬ್ಬರೂ ನಾಯಕರ ನಡುವೆ ಏನು ಚರ್ಚೆ ನಡೆದಿದೆ ಎಂಬುದು ಇನ್ನಷ್ಟೇ ಸ್ಪಷ್ಟವಾಗಬೇಕಿದೆ. ಏಕೆಂದರೆ ಸತೀಶ್ ಜಾರಕಿಹೊಳಿ ಮತ್ತು ಡಿಕೆ ಶಿವಕುಮಾರ್ ಇಬ್ಬರೂ ಇದನ್ನು "ಸೌಜನ್ಯಯುತ ಭೇಟಿ" ಎಂದು ಬಣ್ಣಿಸಿದ್ದಾರೆ. ಆದರೆ ಇಬ್ಬರೂ ನಾಯಕರೂ ಖಂಡಿತವಾಗಿಯೂ ಕರ್ನಾಟಕ ಕಾಂಗ್ರೆಸ್‌ನಲ್ಲಿ ಸದ್ಯ ಭುಗಿಲೆದ್ದಿರುವ ಮುಸ್ಲಿಂ ನಾಯಕರ ಅಸಮಾಧಾನದ ಕುರಿತು ಚರ್ಚೆ ನಡೆಸಿರುವುದು ಸ್ಪಷ್ಟ.ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಬಳಿಕ, ರಾಜ್ಯ ಕಾಂಗ್ರೆಸ್‌ನಲ್ಲಿ ಮುಸ್ಲಿಂ ನಾಯಕರ ನಡುವೆ ಸ್ಪರ್ಧೆ ಮತ್ತು ರಾಜ್ಯ ನಾಯಕತ್ವದ ವಿರುದ್ಧ ಅಸಮಾಧಾನ ಕಂಡುಬರುತ್ತಿದೆ. ದಾವಣಗೆರೆ ದಕ್ಷಿಣದಲ್ಲಿ ಮುಸ್ಲಿಂ ಅಭ್ಯರ್ಥಿಗೆ ಟಿಕೆಟ್ ಕೊಡದಿರುವುದು ಈ ಅಸಮಾಧಾನಕ್ಕೆ ಕಾರಣವಾಗಿದೆ. ಮತದಾನದ ಬಳಿಕ ಮುಸ್ಲಿಂ ಮತಗಳು ಬಿಜೆಪಿಗ ಶಿಫ್ಟ್ ಆಗಿರುವ ಬಗ್ಗೆ ಸತೀಶ್ ಜಾರಕಿಹೊಳಿ ಅನುಮಾನ ವ್ಯಕ್ತಪಡಿಸಿದ್ದರು.ಅಬ್ದುಲ್ ಜಬ್ಬಾರ್ ಕೆಪಿಸಿಸಿ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು, ಅವರನ್ನು ಕಾಂಗ್ರೆಸ್ ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟಿಸಿರುವುದು, ನಸೀರ್ ಅಹ್ಮದ್ ಅವರನ್ನು ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಹುದ್ದೆಯಿಂದ ವಜಾಗೊಳಿಸಿರುವುದು ಮತ್ತು ಸಚಿವ ಜಮೀರ್ ಅಹ್ಮದ್ ಖಾನ್ ಮತ್ತು ಡಿಕೆ ಶಿವಕುಮಾರ್ ನಡುವೆ ನಡೆಯುತ್ತಿರುವ ಸೈಲೆಂಟ್ ವಾರ್ ಈಗ ರಾಜ್ಯ ರಾಜಕಾರಣದ ಕೇಂದ್ರಬಿಂದುವಾಗಿದೆ.

ಶಿಸ್ತು ಉಲ್ಲಂಘನೆ ಹೆಸರಲ್ಲಿ ತಮ್ಮ ಬೆಂಬಲಿಗರ ಮೇಲೆ ಪ್ರಹಾರ ಮಾಡಿರುವ ಡಿಕೆ ಶಿವಕುಮಾರ್ ವಿರುದ್ಧ, ಜಮೀರ್ ಅಹ್ಮದ್ ಖಾನ್ ಸಿಟ್ಟಾಗಿದ್ದಾರೆ. ಅಶಿಸ್ತಿನ ಬಾಣ ಡಿಕೆ ಶಿಕುಮಾರ್ ಅವರತ್ತ ತಿರುಗಿಸಿರುವ ಜಮೀರ್ ಅಹ್ಮದ್, ಪಕ್ಷ ತಮಗೆ ನೀಡಿದ ಜವಾಬ್ದಾರಿಗಳನ್ನು ನಿಭಾಯಿಸುತ್ತಿರುವುದಾಗಿ ಕೆಪಿಸಿಸಿ ಅಧ್ಯಕ್ಷರಿಗೆ ತಿರುಗೇಟು ನೀಡಿದ್ದಾರೆ.

ಈ ಎಲ್ಲಾ ಬೆಳವಣಿಗೆಗಳ ಮಧ್ಯೆ ಡಿಕೆ ಶಿವಕುಮಾರ್ ಮತ್ತು ಸತೀಶ್ ಜಾರಕಿಹೊಳಿ ಭೇಟಿ ಮಾಡಿ ಮಾತುಕತೆ ನಡೆಸಿರುವುದು, ರಾಜ್ಯ ರಾಜಕಾರಣದ ಗಮನ ಸೆಳೆದಿದೆ ಎಂದು ಹೇಳಬಹುದು.

# ಕರ್ನಾಟಕ ಲೋಕಾಯುಕ್ತದ ನಾಲ್ಕು ದಶಕಗಳ ಸಾರ್ಥಕ ಪಯಣ: ಏಪ್ರಿಲ್ 18 ರಂದು ವಿಶೇಷ ಕಾರ್ಯಕ್ರಮ!

**ಬೆಂಗಳೂರು:** ಭ್ರಷ್ಟಾಚಾರ ನಿರ್ಮೂಲನೆ ಮತ್ತು ಆಡಳಿತ ಸುಧಾರಣೆಯಲ್ಲಿ ಮಹತ್ತರ ಪಾತ್ರ ವಹಿಸಿರುವ 'ಕರ್ನಾಟಕ ಲೋಕಾಯುಕ್ತ' ಸಂಸ್ಥೆಯು ತನ್ನ ಯಶಸ್ವಿ ನಾಲ್ಕು ದಶಕಗಳ ಪಯಣವನ್ನು ಪೂರೈಸಿದ್ದು, ಈ ಅಂಗವಾಗಿ 2026ರ ಏಪ್ರಿಲ್ 18, ಶನಿವಾರದಂದು ಮಧ್ಯಾಹ್ನ 2.30 ಗಂಟೆಗೆ ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮವನ್ನು




ಆಯೋಜಿಸಲಾಗಿದೆ.

ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ. ಸುಪ್ರೀಂ ಕೋರ್ಟ್ ನ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕದ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರುಗಳಾದ ಕೆ.ಎನ್. ಫಣೀಂದ್ರ ಮತ್ತು ಬಿ. ವೀರಪ್ಪ ಅವರ ಘನ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮವು ಜರುಗಲಿದೆ.

ಈ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಲೋಕಾಯುಕ್ತ ನಿಯತಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ ಚುನಾಯಿತ ಪ್ರತಿನಿಧಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಹೊಸ ಪೋರ್ಟಲ್ ಹಾಗೂ ಆನ್‌ಲೈನ್ ತನಿಖಾ ಮಾಡ್ಯೂಲ್‌ಗೆ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಮಾಜಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರನ್ನು ಸನ್ಮಾನಿಸಲಾಗುವುದು. ಸಭಾ ಕಾರ್ಯಕ್ರಮದ ನಂತರ ಸಂಜೆ 4:30 ರಿಂದ 6:00 ರವರೆಗೆ ವಿಶೇಷ ವಿಚಾರಗೋಷ್ಠಿಗಳು ನಡೆಯಲಿದ್ದು, ನಂತರ ಭ್ರಷ್ಟಾಚಾರದ ವಿರುದ್ಧದ ಹೋರಾಟ ಕುರಿತು ವಿವಿಧ ಗೋಷ್ಠಿಗಳು ನಡೆಯಲಿವೆ.

ಭ್ರಷ್ಟಾಚಾರ ಮತ್ತು ದುರಾಡಳಿತ ವಿರುದ್ಧ ಹೋರಾಟದ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ.ಎಸ್. ಪಾಟೀಲ್, ಲೋಕಾಯುಕ್ತ ಕಾಯ್ದೆಯಡಿ ಕುಂದುಕೊರತೆಗಳ ಪರಿಹಾರ ವಿಷಯದ ಮೇಲೆ ನಿವೃತ್ತ ನ್ಯಾಯಮೂರ್ತಿಗಳಾದ ಕೆ.ಎನ್. ಫಣೀಂದ್ರ ಹಾಗೂ ಭ್ರಷ್ಟಾಚಾರ ತಡೆಗಟ್ಟುವುದು ಹೇಗೆ ಎಂಬುದರ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ವಿಚಾರಗೋಷ್ಠಿ ನಡೆಲಿಸಲಿದ್ದಾರೆ.

ಕರ್ನಾಟಕ ಲೋಕಾಯುಕ್ತ ಸಂಸ್ಥೆಯು ತನ್ನ ಅರ್ಥಪೂರ್ಣ ಹಾಗೂ ಅವಿರತ ಸೇವೆಯ 40 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ್ದು, ಈ ಸುದೀರ್ಘ ಅವಧಿಯಲ್ಲಿ ಸಂಸ್ಥೆಯು ಹಲವಾರು ಸವಾಲುಗಳನ್ನು ಎದುರಿಸಿದ್ದರೂ ಸಹ, ಸಾರ್ವಜನಿಕ ಸೇವೆಯಲ್ಲಿನ ಭ್ರಷ್ಟಾಚಾರ, ಸ್ವಜನಪಕ್ಷಪಾತ ಹಾಗೂ ಆಡಳಿತ ದುರುಪಯೋಗದ ವಿರುದ್ಧದ ಹೋರಾಟದಲ್ಲಿ ಸದಾ ಸ್ಥಿತಪ್ರಜ್ಞವಾಗಿ ಕಾರ್ಯ ನಿರ್ವಹಿಸಿಕೊಂಡು ಬಂದಿದೆ.

ಸಮಾಜದಲ್ಲಿ ಭ್ರಷ್ಟಾಚಾರವು ಭಯಾನಕ ರೀತಿಯಲ್ಲಿ ಬೆಳೆಯುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ ಎಂಬ ಟೀಕೆಗಳಿದ್ದರೂ ಸಹ, ಧನಾತ್ಮಕ ಚಿಂತನೆ ಹಾಗೂ ಪರಿಶ್ರಮದಿಂದ ಭಷ್ಟಾಚಾರವನ್ನು ಹತ್ತಿಕ್ಕಬಹುದು ಎಂಬ ವಿಶ್ವಾಸವನ್ನು ಸಂಸ್ಥೆಯು ಮೂಡಿಸಿದೆ.

# ಶ್ರೀ ಲಕ್ಕಮ್ಮ ದೇವಿ ಜಾತ್ರಾ ಮಹೋತ್ಸವ: ಕಮಲದಿನ್ನಿಯಲ್ಲಿ ಭಕ್ತಿ-ಸಂಸ್ಕೃತಿಯ ಮಹಾಸಂಗಮ- ಸಾವಿರಾರು ಭಕ್ತರ ಆಗಮನ ನಿರೀಕ್ಷೆ

ರಾಯಚೂರು ಜಿಲ್ಲೆಯ ಲಿಂಗಸೂರು ತಾಲೂಕಿನ ಕಮಲದಿನ್ನಿ ಗ್ರಾಮವು ಮತ್ತೆ ಭಕ್ತಿ, ಸಂಪ್ರದಾಯ ಮತ್ತು ಸಾಂಸ್ಕೃತಿಕ ವೈಭವದ ಕೇಂದ್ರವಾಗಲು ಸಜ್ಜಾಗಿದೆ. ಗ್ರಾಮೀಣ ಪರಂಪರೆಯ ಪ್ರತೀಕವಾಗಿರುವ ಶ್ರೀ ಲಕ್ಕಮ್ಮ ದೇವಿ ಜಾತ್ರಾ ಮಹೋತ್ಸವವು ಏಪ್ರಿಲ್ 20, 2026ರಂದು ಅದ್ದೂರಿಯಾಗಿ ನಡೆಯಲಿದ್ದು, ಈ ವರ್ಷವೂ ಸಾವಿರಾರು ಭಕ್ತರು ಭಾಗವಹಿಸುವ ನಿರೀಕ್ಷೆ ವ್ಯಕ್ತವಾಗಿದೆ.

ಈ ಜಾತ್ರೆಯ ವೈಶಿಷ್ಟ್ಯವೆಂದರೆ ಭಕ್ತಿ ಮತ್ತು ಸಂಸ್ಕೃತಿಯ ಜೊತೆಗೆ ಪೂಜಾರಿ ಮನೆತನದವರಿಂದ ನಡೆಯುವ "ಉಡಿ ತುಂಬುವ" ಕಾರ್ಯಕ್ರಮ ಹಾಗೂ ದೇವಿಗೆ ಮಾಡುವ ಭವ್ಯ ಅಲಂಕಾರಗಳು. ಈ ಸಂಪ್ರದಾಯುಗಳು ಕೇವಲ ಆಚರಣೆಗಳಲ್ಲ; ತಲೆಮಾರುಗಳಿಂದ ಬಂದ ನಂಬಿಕೆ, ಭಕ್ತಿ ಮತ್ತು ಗ್ರಾಮೀಣ ಧಾರ್ಮಿಕ ಜೀವನದ ಆಳವನ್ನು ಪ್ರತಿಬಿಂಬಿಸುವ ಮಹತ್ವದ ಸಂಕೇತಗಳಾಗಿವೆ.

ಉಡಿ ತುಂಬುವ ಕಾರ್ಯಕ್ರಮವು ದೇವಿಯ ಆಶೀರ್ವಾದ, ಸಮೃದ್ಧಿ ಮತ್ತು ಶಕ್ತಿಯ ಪ್ರತೀಕವಾಗಿ ಕಾಣಲ್ಪಡುತ್ತದೆ. ಈ ವಿಧಿವಿಧಾನವು ಭಕ್ತರಲ್ಲಿ ಅಪಾರ ಭಕ್ತಿಭಾವವನ್ನು ಉಂಟುಮಾಡುತ್ತದೆ. ಅದೇ ರೀತಿ, ಜಾತ್ರೆಯ ಸಂದರ್ಭದಲ್ಲಿ ದೇವಿಗೆ ಮಾಡುವ ವಿಶೇಷ ಅಲಂಕಾರವು ಅತ್ಯಂತ ಭವ್ಯವಾಗಿದ್ದು, ಹೂವಿನ ಅಲಂಕಾರ, ಪರಂಪರೆಯ ಆಭರಣಗಳು ಮತ್ತು ವೈಭವದ ವಸ್ತ್ರಗಳಿಂದ ದೇವಿಯನ್ನು ಸಿಂಗರಿಸಲಾಗುತ್ತದೆ. ಈ ಅಲಂಕಾರಗಳು ಭಕ್ತರಲ್ಲಿ ಆತ್ಮೀಯ ಭಾವನೆಯನ್ನು ಮೂಡಿಸಿ, ದೇವಿಯ ಮಹಿಮೆಯನ್ನು ಅನುಭವಿಸುವಂತೆ ಮಾಡುತ್ತವೆ.

ಜಾತ್ರೆ ಏಪ್ರಿಲ್ 18ರಿಂದಲೇ ಆರಂಭವಾಗಲಿದ್ದು, ಮೊದಲ ದಿನ ವಿಶೇಷ ಪೂಜೆಗಳು ಮತ್ತು ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಏಪ್ರಿಲ್ 19ರಂದು ಬೆಳಿಗ್ಗೆ 6 ಗಂಟೆಯಿಂದ ಅಭಿಷೇಕ ಹಾಗೂ ವಿವಿಧ ವಿಧಿವಿಧಾನಗಳು ನೆರವೇರಲಿದ್ದು, ರಾತ್ರಿ ಭಜನೆ ಮತ್ತು ಹರಿಕಥೆಗಳು ಭಕ್ತರನ್ನು ಆಧ್ಯಾತ್ಮಿಕ ಲೋಕಕ್ಕೆ ಕರೆದೊಯ್ಯಲಿವೆ.

ಮುಖ್ಯ ದಿನವಾದ ಏಪ್ರಿಲ್ 20ರಂದು ಬೆಳಿಗ್ಗೆ 10.30ರಿಂದ 11.45ರವರೆಗೆ ಮಹಾ ರಥೋತ್ಸವ



ವಿಜೃಂಭಣೆಯಿಂದ ನಡೆಯಲಿದ್ದು, ಸಾವಿರಾರು ಭಕ್ತರು ದೇವಿಯ ರಥವನ್ನು ಎಳೆಯುವ ಮೂಲಕ ಭಕ್ತಿಯ ಪರಾಕಾಷ್ಠೆಯನ್ನು ತೋರಿಸಲಿದ್ದಾರೆ. ನಂತರ ಮಧ್ಯಾಹ್ನ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಲಿದ್ದು, ಭಕ್ತರಿಗೆ ಪ್ರಸಾದ ವಿತರಿಸಲಾಗುತ್ತದೆ. ಸಂಜೆ 6 ಗಂಟೆಯಿಂದ ವಿಶೇಷ ಪೂಜೆ ಮತ್ತು ಮಂಗಳಾರತಿ ನಡೆಯಲಿದೆ.

ಈ ಜಾತ್ರೆಯ ಮತ್ತೊಂದು ಪ್ರಮುಖ ಅಂಶವೆಂದರೆ ವಿವಿಧ ಕುಟುಂಬಗಳಿಂದ ನಡೆಯುವ ಸಂಪ್ರದಾಯಿಕ ದಾನ ಮತ್ತು ಕೊಡುಗೆಗಳು. ಬಿಜ್ಜೂರ ಕುಟುಂಬದವರಿಂದ ವಧುವಿಗೆ ಮಾಂಗಲ್ಯ ಕೊಡುಗೆ, ಇಂಗಳಗಿ ಕುಟುಂಬದಿಂದ ವಧುವರರಿಗೆ ಬಟ್ಟೆ ದಾನ, ದಂಡಿನ ಕುಟುಂಬದಿಂದ ವಿಶೇಷ ಅನ್ನಸಂತರ್ಪಣೆ – ಇವು ಜಾತ್ರೆಯ ಪರಂಪರೆಯ ಸಮೃದ್ಧಿಯನ್ನು ತೋರಿಸುತ್ತವೆ. ಈ ರೀತಿಯ ದಾನಧರ್ಮಗಳು ಗ್ರಾಮೀಣ ಸಮಾಜದಲ್ಲಿ ಒಗ್ಗಟ್ಟಿನ ಸಂಕೇತವಾಗಿ ಕಾಣಿಸುತ್ತವೆ.

ಜಾತ್ರೆಯ ಅವಧಿಯಲ್ಲಿ ಡೊಳ್ಳು ಕುಣಿತ, ಭಜಂತ್ರಿ, ನಾಟಕಗಳು ಹಾಗೂ ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಗ್ರಾಮವು ಹಬ್ಬದ ಸಂಭ್ರಮದಲ್ಲಿ ಮುಳುಗಲಿದೆ.

ಏಪ್ರಿಲ್ 21ರಂದು ಸಮಾರೋಪ ಕಾರ್ಯಕ್ರಮ ನಡೆಯಲಿದ್ದು, ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಲಿದ್ದಾರೆ. ಏಪ್ರಿಲ್ 22ರಂದು ಬೆಳಿಗ್ಗೆ ದೇವರ ಪೂಜೆಯೊಂದಿಗೆ ಜಾತ್ರೆಗೆ ಅಧಿಕೃತ ತೆರೆ ಬೀಳಲಿದೆ.

ಭಕ್ತರಿಗಾಗಿ ಅಗತ್ಯ ಸೌಲಭ್ಯಗಳನ್ನು ಸಮರ್ಪಕವಾಗಿ ಕಲ್ಪಿಸಲಾಗಿದೆ ಎಂದು ಆಯೋಜಕರು ತಿಳಿಸಿದ್ದಾರೆ. ಸುತ್ತಮುತ್ತಲಿನ ಗ್ರಾಮಗಳಿಂದಲೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ನಿರೀಕ್ಷೆಯಿದ್ದು, ಈ ಜಾತ್ರೆ ಭಕ್ತಿ, ಸಂಸ್ಕೃತಿ ಮತ್ತು ಸಾಮಾಜಿಕ ಒಗ್ಗಟ್ಟಿನ ಜೀವಂತ ಉದಾಹರಣೆಯಾಗಿ ಮತ್ತೊಮ್ಮೆ ಮೂಡಿಬರಲಿದೆ.

ಸಮಾಜ ಸೇವಕ ಶಶಿಧರ್ ಬಿಜ್ಜೂರ ಅವರು ಪತ್ರಿಕಾ ಪ್ರಕಟಣೆಯಲ್ಲಿ, ಜಾತ್ರೆಯ ಮಹತ್ವವನ್ನು ಉಲ್ಲೇಖಿಸಿ, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಮಹೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

ಒಟ್ಟಾರೆ, ಶ್ರೀ ಲಕ್ಕಮ್ಮ ದೇವಿ ಜಾತ್ರೆ ಕೇವಲ ಒಂದು ಹಬ್ಬವಲ್ಲ; ಅದು ಭಕ್ತಿ, ಸಂಸ್ಕೃತಿ ಮತ್ತು ಗ್ರಾಮೀಣ ಜೀವನದ ಶಾಶ್ವತ ಪರಂಪರೆಯ ಮಹೋತ್ಸವವಾಗಿದೆ.

# ಸ್ನೇಹಿತ ಮೋದಿ ಜೊತೆ ಉತ್ತಮ ಸಂಭಾಷಣೆ ನಡೆಸಿದೆ: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

**ವಾಷಿಂಗ್ಟನ್(ಅಮೆರಿಕ):** ನನ್ನ ಸ್ನೇಹಿತ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಉತ್ತಮ ಸಂಭಾಷಣೆ ನಡೆಸಿದ್ದೇನೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಇಸ್ರೇಲ್ ಮತ್ತು ಲೆಬನಾನ್ ನಡುವಿನ 10 ದಿನಗಳ ಕದನ ವಿರಾಮ ಒಪ್ಪಂದದ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, ಭಾರತ ಮತ್ತು ಅಮೆರಿಕ ಉಭಯ ನಾಯಕರು ಮಂಗಳವಾರ ನಡೆಸಿದ ಮಾತುಕತೆಗಳ ಕುರಿತು ಮಾಹಿತಿ ಹಂಚಿಕೊಂಡಿದ್ದಾರೆ. "ಮೋದಿ ಅವರೊಂದಿಗೆ ಮಾತುಕತೆ ನಡೆಸಿದ್ದೇನೆ. ಭಾರತದಲ್ಲಿ ನನ್ನ ಸ್ನೇಹಿತ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ನಾವು ಒಳ್ಳೆಯ ಸಂಭಾಷಣೆ ನಡೆಸಿದ್ದೇವೆ" ಎಂದಿದ್ದಾರೆ.



ಟ್ರಂಪ್ ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕರೆ ಮಾಡಿದ್ದು, ದ್ವಿಪಕ್ಷೀಯ ಸಂಬಂಧಗಳ ಕುರಿತು ಚರ್ಚಿಸಿದ್ದಾರೆ. ಅಲ್ಲದೆ, ಪಶ್ಚಿಮ ಏಷ್ಯಾದಲ್ಲಿನ ಪರಿಸ್ಥಿತಿಗಳ ಕುರಿತು ಉಭಯ ನಾಯಕರು ತಮ್ಮ ದೃಷ್ಟಿಕೋನಗಳನ್ನು ಹಂಚಿಕೊಂಡಿದ್ದಾರೆ. 40 ನಿಮಿಷಗಳ ಕಾಲ ಮಾತುಕತೆ: ಭಾರತದ ಅಮೆರಿಕ ರಾಯಭಾರಿ ಸೆರ್ಗಿಯ್ ಗೋರ್ ಪ್ರಕಾರ, ಟ್ರಂಪ್-ಮೋದಿ ದೂರವಾಣಿ ಸಂಭಾಷಣೆಯ ಸಮಯದಲ್ಲಿ, ಇಬ್ಬರೂ ನಾಯಕರು ಹಾರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸುವ ಮತ್ತು ಸುರಕ್ಷಿತವಾಗಿಡುವ ಕುರಿತು ಮಹತ್ವ ಚರ್ಚೆ ನಡೆಸಿದರು. ಸುಮಾರು 40 ನಿಮಿಷಗಳ ಕಾಲ ಈ ಮಾತುಕತೆ ನಡೆಯಿತು. ಫೆಬ್ರವರಿ 28ರಂದು ಇರಾನ್ ಜೊತೆ ಅಮೆರಿಕ-ಇಸ್ರೇಲ್ ಯುದ್ಧ ಪ್ರಾರಂಭವಾದ ಬಳಿಕ ಎರಡನೇ ಬಾರಿಗೆ ಮಂಗಳವಾರ ಇಬ್ಬರೂ ನಾಯಕರು ಫೋನ್ ಕರೆಯಲ್ಲಿ ಮಾತನಾಡಿದರು. ಇದೇ ವೇಳೆ ಟ್ರಂಪ್, ಸದ್ಯ ನಡೆಯುತ್ತಿರುವ ಇರಾನ್ ಮತ್ತು ಯುಎಸ್ ಯುದ್ಧದ ಅಂತ್ಯಕ್ಕೆ ಒಪ್ಪಂದಕ್ಕಾಗಿ ರಾಜತಾಂತ್ರಿಕ ಮಾತುಕತೆ ಅಂತಿಮಗೊಂಡರೆ ಪಾಕಿಸ್ತಾನಕ್ಕೆ ತೆರಳಲು ಸಿದ್ಧವಿರುವುದಾಗಿ ತಿಳಿಸಿದ್ದಾರೆ. ಇಸ್ಲಾಮಾಬಾದ್‌ನಲ್ಲಿ ಒಪ್ಪಂದಕ್ಕೆ ಸಹಿ ಹಾಕುವುದಾದರೆ, ನಾನು ಅಲ್ಲಿಗೆ ತೆರಳುತ್ತೇನೆ. ಅವರಿಗೆ ನನ್ನ ಅಗತ್ಯವಿದೆ ಎಂದಿದ್ದಾರೆ.

ಪಾಕಿಸ್ತಾನ - ಅಮೆರಿಕದ ಸಂಬಂಧವು ಸಕಾರಾತ್ಮಕವಾಗಿರುವ ಕುರಿತು ಮಾತನಾಡಿರುವ ಅವರು, ಪಾಕಿಸ್ತಾನದವರು ಉತ್ತಮ ಕೆಲಸ ಮಾಡಿದ್ದಾರೆ ಎಂದು ಹೇಳಿದ್ದಾರೆ. ಇರಾನ್ ಜೊತೆಗಿನ ಮಾತುಕತೆಗಳು ಮತ್ತು ಇಸ್ರೇಲ್ ಲೆಬನಾನ್ ಗಡಿಯಲ್ಲಿ ಯುದ್ಧವನ್ನು ನಿಲ್ಲಿಸುವ ಪ್ರಯತ್ನಗಳು ಸೇರಿದಂತೆ ಪಶ್ಚಿಮ ಏಷ್ಯಾದ್ಯಂತ ಅಮೆರಿಕವು ಬಹು ರಾಜತಾಂತ್ರಿಕ ಮಾರ್ಗಗಳನ್ನು ಮುನ್ನಡೆಸುತ್ತಿದೆ. ಇಸ್ರೇಲ್ ಮತ್ತು ಲೆಬನಾನ್ ಒಳಗೊಂಡ ಕದನ ವಿರಾಮ ಒಪ್ಪಂದವು ರೂಪುಗೊಳ್ಳುತ್ತಿದೆ. ಒಪ್ಪಂದಕ್ಕೆ ಹಿಜ್ಬುಲ್ಲಾ ಕೂಡ ಸೇರ್ಪಡೆಗೊಳ್ಳಬಹುದು. ಕದನ ವಿರಾಮಕ್ಕೆ ಎಲ್ಲರೂ ಒಪ್ಪುತ್ತಿದ್ದಾರೆ ಎಂದು ಟ್ರಂಪ್ ಹೇಳಿಕೊಂಡಿದ್ದಾರೆ.

# ಎಲ್‌ಪಿಜಿ ಗ್ಯಾಸ್ ಪೂರೈಕೆ ಹೆಚ್ಚಾದರೂ ಗಂಟೆಗಟ್ಟಲೆ ಸಾಲು, ತೀರದ ಆಟೋ ಚಾಲಕರ ಗೋಳು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಆಟೋ ಎಲ್‌ಪಿಜಿ ಕೊರತೆ ತೀವ್ರವಾಗಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರ ಸಂಕಷ್ಟಕ್ಕೆ ಸ್ಪಂದಿಸಿರುವ ಇಂಡಿಯನ್ ಆಯಿಲ್ ಕಾರ್ಪೊರೇಷನ್ (ಐಒಸಿಎಲ್) ತನ್ನ ಪೂರೈಕೆಯನ್ನು ಶೇ 300ರಷ್ಟು ಹೆಚ್ಚಿಸಿದೆ.

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷವು ಅಂತರಾಷ್ಟ್ರೀಯ ಮಟ್ಟದಲ್ಲಿ ಇಂಧನ ಪೂರೈಕೆಯ ಮೇಲೆ ಪರಿಣಾಮ ಬೀರಿದ್ದು, ಇದರ ನೇರ ಹೊಡೆತ ಇದೀಗ



ಬೆಂಗಳೂರಿನ ಆಟೋ ಚಾಲಕರು ಮತ್ತು ಎಲ್‌ಪಿಜಿ ವಾಹನ ಸವಾರರ ಮೇಲೆ ಬಿದ್ದಿದೆ.

ಸಾಲುಗಟ್ಟಿ ನಿಲ್ಲುವ ಪರಿಸ್ಥಿತಿ ಬೆಂಗಳೂರು ಸೇರಿದಂತೆ ರಾಜ್ಯದ ಒಟ್ಟು ಆಟೋ ಎಲ್‌ಪಿಜಿ ಮಾರುಕಟ್ಟೆಯ ಸುಮಾರು ಶೇ 80ರಷ್ಟು ಪಾಲನ್ನು ಖಾಸಗಿ ಆಟೋ ಎಲ್‌ಪಿಜಿ ಡಿಸ್ಪೆನ್ಸಿಂಗ್ ಸ್ಟೇಷನ್‌ಗಳು ಚಿಹೊಂದಿವೆ.

ಆದರೆ, ಯುದ್ಧದ ಕಾರಣದಿಂದಾಗಿ ಖಾಸಗಿ ಕಂಪನಿಗಳಿಗೆ ಅನಿಲ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದ್ದು, ಹೆಚ್ಚಿನ ಖಾಸಗಿ ಬಂಕ್‌ಗಳು ಮುಚ್ಚಲ್ಪಟ್ಟಿವೆ ಅಥವಾ ಸೀಮಿತ ದಾಸ್ತಾನು ಹೊಂದಿವೆ. ಇದರಿಂದಾಗಿ ನಗರದ ಹಲವೆಡೆ ಆಟೋ ಚಾಲಕರು ಇಂಧನಕ್ಕಾಗಿ ಕಿಲೋಮೀಟರ್‌ಗಟ್ಟಲೆ ಸಾಲುಗಟ್ಟಿ ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಬಿಕ್ಕಟ್ಟನ್ನು ನಿವಾರಿಸಲು ಮುಂದಾಗಿರುವ ಸರ್ಕಾರಿ ಸ್ವಾಮ್ಯದ ಇಂಡಿಯನ್ ಆಯಿಲ್ ಸಂಸ್ಥೆಯು ತನ್ನ ವಿತರಣಾ ಕೇಂದ್ರಗಳಿಗೆ ಅನಿಲ ಪೂರೈಕೆಯನ್ನು ಗಣನೀಯವಾಗಿ ಏರಿಕೆ ಮಾಡಿದೆ. ಖಾಸಗಿ ಬಂಕ್‌ಗಳ ಮೇಲಿನ ಅವಲಂಬನೆ ತಗ್ಗಿಸಲು ಮತ್ತು ಮಾರುಕಟ್ಟೆಯಲ್ಲಿ ಉಂಟಾಗಿರುವ ಕೊರತೆಯನ್ನು ಸರಿದೂಗಿಸಲು ಈ ಶೇ 300ರಷ್ಟು ಹೆಚ್ಚುವರಿ ಪೂರೈಕೆ ಸಹಕಾರಿಯಾಗಲಿದೆ ಎಂದು ಸಂಸ್ಥೆ ತಿಳಿಸಿದೆ. ಆದರೂ, ಏಕಾಏಕಿ ಹೆಚ್ಚಾದ ಬೇಡಿಕೆಯಿಂದಾಗಿ ಇಂಡಿಯನ್ ಆಯಿಲ್ ಬಂಕ್‌ಗಳ ಮುಂದೆಯೂ ವಾಹನಗಳ ದಟ್ಟಣೆ ಕಂಡುಬರುತ್ತಿದೆ. ಸಂಘರ್ಷ ಮುಂದುವರಿದರೆ ಮುಂದಿನ ದಿನಗಳಲ್ಲಿ ಇಂಧನ ಬೆಲೆ ಮತ್ತು ಲಭ್ಯತೆಯ ಮೇಲೆ ಮತ್ತಷ್ಟು ಪರಿಣಾಮ ಬೀರುವ ಆತಂಕವೂ ಎದುರಾಗಿದೆ.

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷ ದಿಂದಾಗಿ ಖಾಸಗಿ ವಲಯದ ಇಂಧನ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದ್ದು, ಬೆಂಗಳೂರಿನಲ್ಲಿ ಆಟೋ ಎಲ್‌ಪಿಜಿಗಾಗಿ ತೀವ್ರ ಹಾಹಾಕಾರ ಸೃಷ್ಟಿಯಾಗಿದೆ. ಈ ತುರ್ತು ಪರಿಸ್ಥಿತಿಯನ್ನು ನಿಭಾಯಿಸಲು ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ ಮಹತ್ವದ ಹೆಜ್ಜೆ ಇಟ್ಟಿದ್ದು, ನಗರಕ್ಕೆ ಪೂರೈಸುವ ಆಟೋ ಎಲ್‌ಪಿಜಿ ಪ್ರಮಾಣವನ್ನು ಹೆಚ್ಚಿಸಿದೆ. ಬಿಕ್ಕಟ್ಟು ಆರಂಭವಾಗುವ ಮೊದಲು ದಿನಕ್ಕೆ ಸರಾಸರಿ 23 ಮೆಟ್ರಿಕ್ ಟನ್ ಅನಿಲ ಪೂರೈಸುತ್ತಿದ್ದ ಕಂಪನಿಯು, ಏಪ್ರಿಲ್ 15ರಂದು ದಾಖಲೆಯ 75.53 ಮೆಟ್ರಿಕ್ ಟನ್ ಪೂರೈಕೆ ಮಾಡಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಬೆಂಗಳೂರು ಹಾಗೂ ಕರ್ನಾಟಕದ ಒಟ್ಟಾರೆ ಆಟೋ ಎಲ್‌ಪಿಜಿ ಮಾರುಕಟ್ಟೆಯಲ್ಲಿ ಖಾಸಗಿ ಆಟೋ ಎಲ್‌ಪಿಜಿ ಡಿಸ್ಪೆನ್ಸಿಂಗ್ ಸ್ಟೇಷನ್‌ಗಳ ಪಾಲು ಸುಮಾರು ಶೇ 80ರಷ್ಟಿದೆ.

ಆದರೆ, ಅಂತರಾಷ್ಟ್ರೀಯ ಮಟ್ಟದ ಯುದ್ಧದ ಪರಿಸ್ಥಿತಿಯು ಖಾಸಗಿ ಕಂಪನಿಗಳ ಸರಬರಾಜು ಸರಪಳಿಯ ಮೇಲೆ ಗಂಭೀರ ಪರಿಣಾಮ ಬೀರಿದೆ. ಇದರಿಂದಾಗಿ ನಗರದ ಬಹುತೇಕ ಖಾಸಗಿ ಬಂಕ್‌ಗಳು ಮುಚ್ಚಲ್ಪಟ್ಟಿದ್ದು, ಇಂಧನಕ್ಕಾಗಿ ಆಟೋ ಚಾಲಕರು ಇಂಡಿಯನ್ ಆಯಿಲ್ ಬಂಕ್‌ಗಳ ಮುಂದೆ ಕಿಲೋಮೀಟರ್‌ಗಟ್ಟಲೆ ಸಾಲುಗಟ್ಟಿ ನಿಲ್ಲುವಂತಾಗಿದೆ. ಚಾಲಕರ ಈ ಬೇಡಿಕೆಯನ್ನು ಪೂರೈಸಲು ಮತ್ತು ಮಾರುಕಟ್ಟೆಯಲ್ಲಿನ ಕೊರತೆಯನ್ನು ಸರಿದೂಗಿಸಲು ಇಂಡಿಯನ್ ಆಯಿಲ್ ತನ್ನ ದಾಸ್ತಾನನ್ನು ಗರಿಷ್ಠ ಮಟ್ಟಕ್ಕೆ ಏರಿಸಿದೆ.

ಹಠಾತ್ ಏರಿಕೆಯಾದ ಬೇಡಿಕೆಯಿಂದಾಗಿ ಇಂಡಿಯನ್ ಆಯಿಲ್ ಬಂಕ್‌ಗಳಲ್ಲಿ ಹೆಚ್ಚಿನ ದಟ್ಟಣೆ ಕಂಡುಬರುತ್ತಿದ್ದರೂ, ಕಂಪನಿಯು ಸತತವಾಗಿ ಪೂರೈಕೆಯನ್ನು ಮುಂದುವರಿಸುವ ಭರವಸೆ ನೀಡಿದೆ.

ಪಶ್ಚಿಮ ಏಷ್ಯಾದ ಬಿಕ್ಕಟ್ಟು ಶಮನವಾಗುವವರೆಗೆ ಖಾಸಗಿ ವಲಯದ ಪೂರೈಕೆಯಲ್ಲಿ ಅನಿಶ್ಚಿತತೆ ಮುಂದುವರಿಯುವ ಸಾಧ್ಯತೆ ಇರುವುದರಿಂದ, ಸರ್ಕಾರಿ ಸ್ವಾಮ್ಯದ ಕಂಪನಿಗಳ ಮೇಲಿನ ಒತ್ತಡ ಹೆಚ್ಚಾಗಿದೆ. ಸದ್ಯಕ್ಕೆ ಪೂರೈಕೆ ಹೆಚ್ಚಳ ಮಾಡಿರುವುದು ಆಟೋ ಚಾಲಕರಿಗೆ ಮತ್ತು ಸಾರ್ವಜನಿಕರಿಗೆ ದೊಡ್ಡ ಮಟ್ಟದ ನೆಮ್ಮದಿ ನೀಡಿದೆ.

# ಕ್ಷೇತ್ರ ಪುನರ್‌ವಿಂಗಡಣೆ ವಿರುದ್ಧ ಶಶಿ ತರೂರ್; ರಾಜಕೀಯ ಡಿಮಾನಿಟೈಸೇಶನ್ ಬೇಡ ಎಂದು ನರೇಂದ್ರ ಮೋದಿಗೆ ಸಲಹೆ!

**ಹೊಸದಿಲ್ಲಿ:** ಕ್ಷೇತ್ರ ಪುನರ್‌ವಿಂಗಡಣೆ ಮಸೂದೆಯನ್ನು "ಪೊಲಿಟಿಕಲ್ ಡಿಮಾನಿಟೈಸೇಶನ್" ಎಂದು ಕರೆದಿರುವ ತಿರುವನಂತಪುರಂ ಕಾಂಗ್ರೆಸ್ ಸಂಸದ ಶಶಿ ತರೂರ್, ಇದನ್ನು ಜಾರಿಗೆ ತರದಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಪುನರ್‌ವಿಂಗಡಣೆ ಮಸೂದೆ ಸಂಬಂಧಿಸಿದಂತೆ ಕರೆಯಲಾಗಿರುವ ಸಂಸತ್ತಿನ ವಿಶೇಷ ಅಧಿವೇಶನದಲ್ಲಿ, ಲೋಕಸಭೆಯನ್ನುದ್ದೇಶಿಸಿ ಶಶಿ



ತರೂರ್ ಸುದೀರ್ಘ ಭಾಷಣ ಮಾಡಿದರು. ಈ ವೇಳೆ ಕಾಂಗ್ರೆಸ್ ಸಂಸದರು ಕ್ಷೇತ್ರ ಪುನರ್‌ವಿಂಗಡಣೆಯನ್ನು 2016ರ ನೋಟು ಅಮಾನ್ಯೀಕರಣಕ್ಕೆ ಹೋಲಿಸಿ ಗಮನ ಸೆಳೆದರು. ಲೋಕಸಭೆಯಲ್ಲಿ ಅಮಿತ್ ಶಾ ಮಂಡಿಸಿದ ಕ್ಷೇತ್ರ ಪುನರ್‌ವಿಂಗಡಣೆ ಮಸೂದೆ ವಿರೋಧಿಸಿ ಮಾತನಾಡಿದ ಶಶಿ ತರೂರ್, "ಕೇಂದ್ರ ಸರ್ಕಾರ 2016ರಲ್ಲಿ ಜಾರಿಗೆ ತಂದ ನೋಟು ಅಮಾನ್ಯೀಕರಣ ಕಾನೂನಿನಂತೆಯೇ, ಕ್ಷೇತ್ರ ಪುನರ್‌ವಿಂಗಡಣೆ ಕೂಡ ರಾಜ್ಯಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ" ಎಂದು ಎಚ್ಚರಿಸಿದರು. ಕ್ಷೇತ್ರ ಪುನರ್‌ವಿಂಗಡಣೆಯಿಂದ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ಬರಲಿದೆ ಎಂದು ಆತಂಕ ವ್ಯಕ್ತಪಡಿಸಿರುವ ಶಶಿ ತರೂರ್, ಈ ಮಸೂದೆಯನ್ನು "ರಾಜಕೀಯ ನೋಟು ಅಮಾನ್ಯೀಕರಣ" ಎಂದು ಹೇಳಿ ಅಚ್ಚರಿ ಮೂಡಿಸಿದರು. ಇದೇ ವೇಳೆ ಶಶಿ ತರೂರ್ ಮಹಿಳಾ ಮೀಸಲಾತಿ ಕುರಿತ ಕೇಂದ್ರದ ಉದ್ದೇಶದ ಬಗ್ಗೆಯೂ ಅನುಮಾನ ವ್ಯಕ್ತಪಡಿಸಿದ್ದಾರೆ. ಮಹಿಳಾ ಮೀಸಲಾತಿ ಮಸೂದೆ ಕುರಿತು ಲೋಕಸಭೆಯಲ್ಲಿ ಪ್ರಧಾನಿ ಮೋದಿ ಭಾಷಣ ಕುರಿತು ಮಾತನಾಡಿದ ಶಶಿ ತರೂರ್, "ಪ್ರಧಾನಿ ಮೋದಿ ಅವರು ನಾರಿಶಕ್ತಿಯ ಬಗ್ಗೆ ಮಾತನಾಡಿದ್ದಾರೆ.

ಆದರೆ ಮಹಿಳಾ ಮೀಸಲಾತಿ ಮಸೂದೆ ಮತ್ತು ಕ್ಷೇತ್ರ ಪುನರ್‌ವಿಂಗಡಣೆ ಮಸೂದೆಯನ್ನು ಒಂದಕ್ಕೊಂದು ಸೇರಿಸಿ ಗೊಂದಲಮಯ ಮಾಡಿದ್ದಾರೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

"ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ತರುವ ಮೂಲಕ, ದೇಶದ ನಾರಿಶಕ್ತಿಗೆ ಮತ್ತಷ್ಟು ಬಲ ನೀಡುವ ಉದ್ದೇಶ ಹೊಂದಿರುವುದಾಗಿ ಕೇಂದ್ರ ಸರ್ಕಾರ ಹೇಳಿದೆ. ಆದರೆ ಅದನ್ನು ಕ್ಷೇತ್ರ ಪುನರ್‌ವಿಂಗಡಣೆ ಮಸೂದೆ ಜೊತೆ ತಳುಕು ಹಾಕಲಾಗಿದೆ. ಇದು ಕೇಂದ್ರ ಸರ್ಕಾರದ ಉದ್ದೇಶದ ಮೇಲೆ ಅನುಮಾನ ಮೂಡುವಂತೆ ಮಾಡಿದೆ" ಎಂದು ಕಾಂಗ್ರೆಸ್ ಸಂಸದ ಕಿಡಿಕಾರಿದರು.ನಿನ್ನೆ (ಏ.16-ಗುರುವಾರ) ಕ್ಷೇತ್ರ ಪುನರ್‌ವಿಂಗಡಣೆ ಕುರಿತು ಲೋಕಸಭೆಯಲ್ಲಿ ಅಮಿತ್ ಶಾ ಭಾಷಣ ಮಾಡಿದ್ದು, "ಕ್ಷೇತ್ರ ಪುನರ್‌ವಿಂಗಡಣೆ ಮಸೂದೆಯನ್ನು ಅಂಗೀಕಾರ ಮಾಡುವುದರಿಂದ ಕರ್ನಾಟಕವೂ ಸೇರಿದಂತೆ ದಕ್ಷಿಣದ ಯಾವ ರಾಜ್ಯಗಳಿಗೂ ಅನ್ಯಾಯ ಆಗುವುದಿಲ್ಲ" ಎಂದು ಸ್ಪಷ್ಟಪಡಿಸಿದ್ದರು. ಅಮಿತ್ ಶಾ ಭಾಷಣದ ಬಳಿಕ ಲೋಕಸಭೆಯಲ್ಲಿ ಮಾತನಾಡಿದ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ, "ಅಮಿತ್ ಶಾ ಅವರು ನೀಡುತ್ತಿರುವ ಅಂಕಿ-ಅಂಶಗಳನ್ನು ನೋಡಿದ್ದರೆ ಚಾಣಕ್ಯ ಕೂಡ ಶಾಕ್ ಆಗುತ್ತಿದ್ದ" ಎಂದು ಹೇಳುವ ಮೂಲಕ ಕೇಂದ್ರ ಗೃಹ ಸಚಿವರ ಕಾಲೆಳೆದರು. ಅದೇ ರೀತಿ ಕ್ಷೇತ್ರ ಪುನರ್‌ವಿಂಗಡಣೆ ಮಸೂದೆಯನ್ನು ಬೆಂಬಲಿಸಿ ಲೋಕಸಭೆಯಲ್ಲಿ ಭಾಷಣ ಮಾಡಿದ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ, "ಕ್ಷೇತ್ರ ಪುನರ್‌ವಿಂಗಡಣೆ ಕುರಿತು ವಿಪಕ್ಷಗಳು ಸುಳ್ಳು ನಿರೂಪಣೆ ಹರಡುತ್ತಿವೆ" ಎಂದು ತೀವ್ರ ವಾಗ್ದಾಳಿ ನಡೆಸಿದ್ದರು.

ವಿಜಯ ವಿಶ್ವವಾಣಿ
ವಿಜಯ ಧ್ವನಿ
ಕನ್ನಡ ದಿನಪತ್ರಿಕೆ






ಬೆಂಗಳೂರಿನಲ್ಲಿ ನವೆಂಬರ್ ತಿಂಗಳಿನಲ್ಲಿ ನಡೆಯಲಿರುವ BENGALURU TECH SUMMITನ ಪೂರ್ವಭಾವಿಯಾಗಿ ದೆಹಲಿಯಲ್ಲಿ ನಡೆದ ವಿವಿಧ ರಾಷ್ಟ್ರಗಳ ರಾಯಭಾರಿಗಳು ಹಾಗೂ ಹೈ ಕಮಿಷನರ್ ಗಳ ಜೊತೆಗಿನ ಸಂವಾದದಲ್ಲಿ (Bridge to BENGALURU) ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾಗವಹಿಸಿದ್ದರು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಐಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಇದ್ದರು.

# ಸಿಎಂ, ಡಿಸಿಎಂ ದೆಹಲಿಗೆ ಗೊಂದಲ ನಿವಾರಣೆಗೆ ಹೈಕಮಾಂಡ್ ಭೇಟಿ

**ಬೆಂಗಳೂರು :** ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ವಿಚಾರ ಬೂದಿ ಮುಚ್ಚಿದ ಕೆಂಡದಂತಿದ್ದು, ಸಂಪುಟ ಪುನಾರಚನೆ ಕೂಗು ಬಲವಾಗಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೆಹಲಿಗೆ ತೆರಳಿದ್ದು, ವರಿಷ್ಠರನ್ನು ಭೇಟಿ ಮಾಡಿ ರಾಜ್ಯ ಕಾಂಗ್ರೆಸ್‌ನಲ್ಲಿರುವ ಗೊಂದಲಗಳ ನಿವಾರಣೆ ಸಂಬಂಧ ಚರ್ಚಿಸುವ ಸಾಧ್ಯತೆಗಳಿವೆ.



ರಾಜ್ಯದ ಐಟಿಬಿಟಿ ಇಲಾಖೆ ದೆಹಲಿಯಲ್ಲಿ ಇಂದು ಸಂಜೆ ಆಯೋಜಿಸುವ ವಿವಿಧ ದೇಶಗಳ ರಾಯಭಾರಿಗಳ ಸಮಾವೇಶವಾದ ಬ್ರಿಡ್ಜ್-2 ಬೆಂಗಳೂರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಮಧ್ಯಾಹ್ನ ದೆಹಲಿಗೆ ಪ್ರಯಾಣ ಬೆಳೆಸಿದರು. ರಾಜ್ಯದಲ್ಲಿ ಉಪಚುನಾವಣೆಗಳು ಮುಗಿಯುತ್ತಿದ್ದಂತೆಯೇ ರಾಜ್ಯ ಕಾಂಗ್ರೆಸ್‌ನಲ್ಲಿ ಚಟುವಟಿಕೆಗಳು ಗರಿಗೆದರಿದ್ದು, ಸಂಪುಟ ಪುನಾರಚನೆಗೆ ಆಗ್ರಹಿಸಿ ಸುಮಾರು 15 ಕ್ಕೂ ಹೆಚ್ಚು ಹಿರಿಯ ಕಾಂಗ್ರೆಸ್ ಶಾಸಕರು ಕಳೆದ ನಾಲ್ಕು ದಿನಗಳಿಂದ ದೆಹಲಿಯಲ್ಲೇ ಮೊಕ್ಕಾಂ ಹೂಡಿದ್ದರೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಳೆದ 3 ದಿನಗಳ ಹಿಂದೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಭೇಟಿ ಮಾಡಿ ನಾಯಕತ್ವ ಬದಲಾವಣೆಗೆ ಸಂಬಂಧಿಸಿದಂತೆ ಸ್ಪಷ್ಟ ನಿಲುವು ಪ್ರಕಟಿಸುವಂತೆ ಆಗ್ರಹಿಸಿದ್ದರು. ಈ ಎಲ್ಲ ಬೆಳವಣಿಗೆಗಳ ನಡುವೆಯೇ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳು ದೆಹಲಿಗೆ ತೆರಳಿದ್ದು, ವರಿಷ್ಠ ನಾಯಕರನ್ನು ಭೇಟಿ ಮಾಡುವ ಸಾಧ್ಯತೆಇದೆ. ರಾಜ್ಯದ ಐಟಿ ಇಲಾಖೆಯ ಕಾರ್ಯಕ್ರಮ ಮುಗಿದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇವರುಗಳು ಪ್ರತ್ಯೇಕವಾಗಿ ವರಿಷ್ಠ ನಾಯಕರುಗಳನ್ನು ಭೇಟಿ ಮಾಡಿ ಚರ್ಚೆ ನಡೆಸುವರು ಎಂದು ಹೇಳಲಾಗಿದೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷವಾಗುತ್ತಿದ್ದು, ಸಂಪುಟ ಪುನಾಚರನೆಗೆ ಹಿರಿಯ, ಕಿರಿಯ ಶಾಸಕರು ಒತ್ತಾಯಿಸುತ್ತಿದ್ದಾರೆ. ಇದಕ್ಕೆ ಅವಕಾಶ ಕೊಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವರಿಷ್ಠರ ಬಳಿ ಸಂಪುಟ ಪುನಾರಚನೆಗೆ ಅನುಮತಿ ಕೇಳುವ ಸಾಧ್ಯತೆ ಹೆಚ್ಚಿದೆ. ನಾಯಕತ್ವ ಬದಲಾವಣೆ ವಿಚಾರ ಇತ್ಯರ್ಥವಾಗದೆ ಸಂಪುಟ ಪುನಾರಚನೆಗೆ ಅವಕಾಶ ಕೊಡಬಾರದು. ಮೊದಲು ನಾಯಕತ್ವ ಬದಲಾವಣೆ ವಿಚಾರವನ್ನು ಇತ್ಯರ್ಥಗೊಳಿಸಿ ಎಂದು ಉಪಮುಖ್ಯಮಂತ್ರಿಡಿ.ಕೆ.

ರಾಜ್ಯ ಕಾಂಗ್ರೆಸ್‌ನಲ್ಲಿ ಕಳೆದ ಅಕ್ಟೋಬರ್‌ನಲ್ಲೇ ನಾಯಕತ್ವ ಬದಲಾವಣೆ ವಿಚಾರ ಬದಾವಣೆ ಮುನ್ನಲೆಗೆ ಬಂದು, ಪರ ವಿರೋಧ ಹೇಳಿಕೆಗಳು, ಸಚಿವರು ಹಾಗೂ ಶಾಸಕರುಗಳ ಡಿನ್ನರ್ ಸಭೆಗಳು ನಡೆದಿದ್ದು, ಕಾಂಗ್ರೆಸ್‌ನಲ್ಲಿ ಗೊಂದಲಗಳು ಸೃಷ್ಟಿಯಾಗಿತ್ತು. ಹೈಕಮಾಂಡ್ ಮಾತ್ರ ಈ ಬಗ್ಗೆ ಯಾವುದೇ ತೀರ್ಮಾನ ಕೈಗೊಳ್ಳದೆ ಗೊಂದಲಗಳನ್ನು ಪರಿಹರಿಸುವ ಗೋಜಿಗೂ ಹೋಗಿರಲಿಲ್ಲ. ಬಜೆಟ್ ಅಧಿವೇಶನ, ಉಪಚುನಾವಣೆಯ ಕಾರಣದಿಂದ ಯಾವುದೂ ಇತ್ಯರ್ಥವಾಗಿರಲಿಲ್ಲ. ಈಗ ಮತ್ತೆ ಈ ವಿಚಾರಗಳು ಕಾಂಗ್ರೆಸ್‌ನ ಆಂತರಿಕ ವಲಯದಲ್ಲಿ ಸದ್ದು ಮಾಡುತ್ತಿದ್ದು, ಕಾಂಗ್ರೆಸ್ ಹೈಕಮಾಂಡ್ ಈ ವಿಚಾರಗಳ ಬಗ್ಗೆ ಒಂದು ಸ್ಪಷ್ಟತೆಗೆ ಬರುವ ಅನಿವಾರ್ಯತೆ ಸೃಷ್ಟಿಯಾಗಿದೆ. ಹಾಗಾಗಿ ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿಡಿ.ಕೆ. ಶಿವಕುಮಾರ್ ರವರ ಬಳಿ ಚರ್ಚಿಸಿ ಸದ್ಯದಲ್ಲೇ ರಾಜ್ಯ ಕಾಂಗ್ರೆಸ್‌ನ ಗೊಂದಲಗಳಿಗೆ ತೆರೆ ಎಳೆಯುವ ಸಾಧ್ಯತೆ ಇವೆ.

# ವಿಶ್ವಕರ್ಮ ವಧು-ವರರ ರಾಜ್ಯಮಟ್ಟದ ಸಮಾವೇಶಕ್ಕೆ ಆಹ್ವಾನ

**ಬೆಂಗಳೂರು:** ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ (ರಿ) ವತಿಯಿಂದ ಏಪ್ರಿಲ್ 24, 25 ಹಾಗೂ 26ರಂದು ಮೂರು ದಿನಗಳ ಕಾಲ "ವಿಶ್ವಕರ್ಮ ವಧು-ವರರ ಅನ್ವೇಷಣಾ ಸಮಾವೇಶ 2026" ಹಾಗೂ 3ನೇ -ರಾಜ್ಯಮಟ್ಟದ ವಧು-ವರರ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ತಾಲ್ಲೂಕು ವಿಶ್ವಕರ್ಮ ಕುಶಲ ಕೈಗಾರಿಕಾ ಸಹಕಾರ ಸಂಘದ ಅಧ್ಯಕ್ಷ ಕೆ.ಎನ್.ಕುಮಾರಸ್ವಾಮಿ ತಿಳಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ವಿಶ್ವಕರ್ಮ ಮಹಾಸಭಾ

ರಾಜ್ಯಾಧ್ಯಕ್ಷರಾದ ಕೆ.ಪಿ. ನಂಜುಂಡಿ ವಿಶ್ವಕರ್ಮ ಅವರ ಘನ ಅಧ್ಯಕ್ಷತೆಯಲ್ಲಿ, ಪರಮಪೂಜ್ಯ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ಹಾಗೂ ಸಮಾಜದ ಮುಖಂಡರ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ.

ರಾಜ್ಯದ 31 ಜಿಲ್ಲೆಗಳ ತಾಲೂಕು, ಹೋಬಳಿ ಹಾಗೂ ಗ್ರಾಮಾಂತರ ಪ್ರದೇಶಗಳಿಂದ ವಿಶ್ವಕರ್ಮ ಸಮುದಾಯದ ಬಂಧುಗಳು ತಮ್ಮ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.



ಈ ಸಮಾವೇಶವು ಬೆಂಗಳೂರಿನ ಗುರುರಾಜ ಕಲ್ಯಾಣ ಮಂಟಪ, ರೇಸ್ ಕೋರ್ಸ್ ರಸ್ತೆ, ಚಲನಚಿತ್ರ ವಾಣಿಜ್ಯ ಮಂಡಳಿ ಪಕ್ಕ, ಶಿವಾನಂದ ಸರ್ಕಲ್‌ನಲ್ಲಿ ನಡೆಯಲಿದೆ ಹಾಗಾಗಿ ವಿಶ್ವಕರ್ಮ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ತಾಲ್ಲೂಕು ವಿಶ್ವಕರ್ಮ ಕುಶಲ ಕೈಗಾರಿಕಾ ಸಹಕಾರ ಸಂಘದ ಅಧ್ಯಕ್ಷ ಕೆ.ಎನ್.ಕುಮಾರಸ್ವಾಮಿ ಮನವಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ತಾಲ್ಲೂಕು ವಿಶ್ವಕರ್ಮ ಕುಶಲ ಕೈಗಾರಿಕಾ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರೂಪೇಶಾಚಾರ್ ಮತ್ತಿತರರು ಉಪಸ್ಥಿತರಿದ್ದರು.

# ಹೊನ್ನೇನಹಳ್ಳಿ ಗ್ರಾಮದಲ್ಲಿ ಏಪ್ರಿಲ್ 23 ರಂದು ಜಿಲ್ಲಾ ಮಟ್ಟದ ರಂಗ ಕುಣಿತ ಸ್ಪರ್ಧೆ

ಕೆ.ಆರ್.ಪೇಟೆ : ತಾಲ್ಲೂಕಿನ ಶೀಳನೆರೆ ಹೋಬಳಿಯ ಹೊನ್ನೇನಹಳ್ಳಿ ಗ್ರಾಮದಲ್ಲಿ ಗ್ರಾಮದೇವತೆ ಶ್ರೀ ಲಕ್ಷ್ಮೀದೇವಿ ಅಮ್ಮನವರ ರಂಗದ ಹಬ್ಬದ ಅಂಗವಾಗಿ ಇದೇ ಏ.23ರಂದು ಗುರುವಾರ ರಾತ್ರಿ 8ಗಂಟೆಯಿಂದ ಜಿಲ್ಲಾ ಮಟ್ಟದ ರಂಗಕುಣಿತ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಗೌರವಿಸಲಾಗುವುದು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ವಕೀಲ ಹೆಚ್.ರವಿ, ಹಿರಿಯ ಮುಖಂಡರಾದ ಹೆಚ್.ಕೆ.ಬೋರೇಗೌಡ, ಮಂಜೇಗೌಡ, ಈಶ್ವರ್, ಹೆಚ್.ಆರ್, ನಾಗರಾಜೇಗೌಡ, ನಂಜಪ್ಪ, ಕುಮಾರ್, ಪ್ರತಾಪ್, ಪರಮೇಶ್, ಕುಮಾರ್, ವಕೀಲರಾದ



ಎಂದು ಗ್ರಾಮದ ಮುಖಂಡರು ತಿಳಿಸಿದ್ದಾರೆ.

ರಂಗಕುಣಿತ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವ ತಂಡಗಳು ಮುಂಚಿತವಾಗಿ ಮೊಬೈಲ್ ಸಂಖ್ಯೆಗೆ ಕರೆ ಮಾಡಿ ನೋಂದಣಿ ಮಾಡಿಕೊಳ್ಳಬೇಕು. ರಂಗಕುಣಿತ ಸ್ಪರ್ಧೆಯಲ್ಲಿ ವಿಜೇತರಾದ ತಂಡಗಳಿಗೆ ಮೊದಲನೇ ಬಹುಮಾನ 15ಸಾವಿರ, ಎರಡನೇ ಬಹುಮಾನ 10ಸಾವಿರ, ಮೂರನೇ ಬಹುಮಾನ 5ಸಾವಿರ ನಗದು ಬಹುಮಾನ ನೀಡಿ ಗ್ರಾಮದ ವತಿಯಿಂದ

ರವಿ, ನಿಂಗರಾಜು, ಪ್ರದೀಪ್ ಇತರರು ಉಪಸ್ಥಿತರಿದ್ದರು.

ಆಸಕ್ತ ತಂಡಗಳು ಹೆಸರು ನೊಂದಾಯಿಸಲು ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆಗಳು: ಹೆಚ್.ಕೆ.ಬೋರೇಗೌಡ-9611016134, ನಾಗರಾಜೇಗೌಡ-9880430447, ಮಂಜಣ್ಣ-7619406532,

ಎಸ್, ರವಿ 8884999255

ಕುಮಾರ್-8710012167 ಸಂಪರ್ಕಿಸಿ ನೊಂದಾಯಿಸಿಕೊಳ್ಳಲು ಕೋರಲಾಗಿದೆ.

# ಚೌಡಸಮುದ್ರ ಗ್ರಾಮದಲ್ಲಿ ಎನ್ ಎಸ್ ಎಸ್ ಶಿಬಿರಕ್ಕೆ ಶಾಸಕ ಹೆಚ್ ಟಿ ಮಂಜು ಚಾಲನೆ

**ಕೆ.ಆರ್.ಪೇಟೆ :** ರಾಷ್ಟ್ರೀಯ ಸೇವಾ ಯೋಜನೆಯ ಘಟಕದಿಂದ ನಡೆಯುವ ವಿಶೇಷ ಶಿಬಿರಗಳು ವಿದ್ಯಾರ್ಥಿಗಳಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸುವುದರೊಂದಿಗೆ ವಿದ್ಯಾರ್ಥಿಗಳಲ್ಲಿ ವ್ಯಕ್ತಿತ್ವ ವಿಕಸನ ನಿರ್ಮಾಣವಾಗುತ್ತದೆ ಎಂದು ಶಾಸಕ ಹೆಚ್.ಟಿ.ಮಂಜು ಹೇಳಿದರು.

ತಾಲ್ಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಚೌಡಸಮುದ್ರ ಗ್ರಾಮದ ಕರ್ನಾಟಕ ರತ್ನ ಡಾ.ಶಿವಕುಮಾರಸ್ವಾಮೀಜಿ ವೃತ್ತದಲ್ಲಿ ಕೆ.ಆರ್.ಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯಬಟ್ಸೇವಾ ಯೋಜನೆ ಘಟಕದ ವತಿಯಿಂದ ಆಯೋಜಿಸಿರುವ ಏಳು ದಿನಗಳ ವಾರ್ಷಿಕ ವಿಶೇಷ ಶ್ರಮಧಾನ ಶಿಬಿರದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎನ್‌ಎಸ್‌ಎಸ್ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ ಬೆಳೆಸುವ ಮೂಲಕ ಅವರಲ್ಲಿ ಸಮಯ ಪಾಲನೆ, ಶಿಸ್ತು, ಪ್ರಾಮಾಣಿಕತೆ ಮತ್ತು ಸಾಮಾಜಿಕ ಮೌಲ್ಯಗಳನ್ನು ಬೆಳೆಸುತ್ತವೆ. ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ, ಗ್ರಾಮೀಣ ಪರಿಸರದ ದೇಶಿಯ ಸಂಸ್ಕೃತಿಯನ್ನು ಪರಿಚಯಿಸುತ್ತದೆ. ಏಳು ದಿನಗಳ ನಡೆಯುವ ಶಿಬಿರವು ಶಿಬಿರಾರ್ಥಿಗಳಲ್ಲಿರುವ ಪ್ರತಿಭಾ ಸಾಮರ್ಥ್ಯದ ಗುಣಮಟ್ಟ ಹೆಚ್ಚಿಸುತ್ತದೆ. ಪ್ರತಿದಿನ ವಿವಿಧ ಗಣ್ಯರು ಒಂದೊಂದು ವಿಷಯದ ಬಗ್ಗೆ ಉಪನ್ಯಾಸ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಜ್ಞಾನ ವಿಕಾಸಕ್ಕೆ ಅವಕಾಶವಾಗುತ್ತದೆ. ಈ ಶಿಬಿರದಿಂದ ವಿದ್ಯಾರ್ಥಿಗಳು ತಮ್ಮ ಬದುಕಿನಲ್ಲಿ ಸೇವಾ ಭಾವನೆ ಹಾಗೂ ಮಾನವೀಯ



ಮೌಲ್ಯಗಳನ್ನು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ಗ್ರಾಮೀಣ ಪರಿಸರದಲ್ಲಿ ಸೇವೆ ಮಾಡುವ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬಹುದು ಎಂದು ಶಾಸಕರು ಹೇಳಿದರು.

ಪ್ರಾಂಶುಪಾಲ ಡಾ.ವಿ.ವಿ.ಜಗದೀಶ್, ಎನ್‌ಎಸ್‌ಎಸ್ ಘಟಕದ ಕ್ರಾರ್ಯಕ್ರಮಾಧಿಕಾರಿ ಪ್ರೊ.ಆನಂದ್, ಸಹ ಶಿಬಿರಾಧಿಕಾರಿ ಶೋಭ, ಅಕ್ಕಿಹೆಬ್ಬಾಳು ಹೋಬಳಿ ಜೆಡಿಎಸ್ ಅಧ್ಯಕ್ಷ ಮಂಚೀಬೀಡು ಬಸವಲಿಂಗಪ್ಪ, ಬೀರುವಳ್ಳಿ ಗ್ರಾಮ ಪಂಚಾಯಿತಿ ಪಿಡಿಓ ಶಿವಕುಮಾರ್, ಗ್ರಾ.ಪಂ.ಮಾಜಿ ಅಧ್ಯಕ್ಷ ಬಿ.ಎನ್.ಕುಮಾರ್, ಬೀರುವಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಈರೇಗೌಡ, ಹರೀಶ್, ಮುಖಂಡರಾದ ರುದ್ರಪ್ಪ, ರವಿ, ಶಿವಪ್ಪ, ರಾಜಪ್ಪ, ಮಲ್ಲೇಶ್, ಬಿ.ಎಲ್.ಡಿ.ಚಂದ್ರು, ಜೈನ್ನಹಳ್ಳಿ ಸಂತೋಷ್, ಉಪನ್ಯಾಸಕರಾದ ಡಾ.ರಮೇಶ್, ಡಾ.ಸವಿತಾ, ಡಾ.ಮಹೇಶ್, ಡಾ.ಶಿವಕುಮಾರಸ್ವಾಮಿ, ಜಯಕೀರ್ತಿ, ವೈ.ಎನ್.ಪುಷ್ಪಲತಾ, ರಿಯಾಜ್ ಅಹಮದ್, ಭುವನೇಶ್ವರಿ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಶಿಬಿರಾರ್ಥಿಗಳು ಎನ್‌ಎಸ್‌ಎಸ್ ಗೀತೆ ಹಾಡಿದರು, ಶಿಬಿರದಲ್ಲಿ ಶಿಬಿರಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ಶಿಬಿರದ ಆರಂಭಕ್ಕೂ ಮುನ್ನ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ, ಸ್ವಾಮಿವಿವೇಕಾನಂದ, ಬಸವೇಶ್ವರ, ಸಿದ್ದಗಂಗಾಶ್ರೀಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಕಾರ್ಯಕ್ರಮವನ್ನು ವಿಧ್ಯುಕ್ತವಾಗಿ ಆರಂಭಿಸಲಾಯಿತು.

# ಬೆಂಗಳೂರಿನಲ್ಲಿ ಜಾಗತಿಕ ಸುಸ್ಥಿರ ಇಂಧನ ಸಮ್ಮೇಳನ ಉದ್ಘಾಟಿಸಲಿರುವ ಸಿಜೆಐ ನ್ಯಾ.ಸೂರ್ಯಕಾಂತ್, ಸಿಎಂ ಸಿದ್ದರಾಮಯ್ಯ

**ಬೆಂಗಳೂರು :** "ಸುಸ್ಥಿರ ಇಂಧನ, ಭಾರತದ ಕಾರ್ಯಸೂಚಿ 2047-ಇಂಧನ ಭದ್ರತೆಗಾಗಿ ಕಾನೂನು, ನೀತಿ ಹಾಗೂ ಆವಿಷ್ಕಾರಗಳ ಹೊಸ ಚಿಂತನೆ" ಕುರಿತ



ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನ ಏಪ್ರಿಲ್ 18 ರಂದು ಬೆಂಗಳೂರಿನ ಶಾಂಗ್ರಿ-ಲಾ ಹೋಟೆಲ್‌ನಲ್ಲಿ ನಡೆಯಲಿದ್ದು, ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ.

ಕಾಮನ್‌ವೆಲ್ತ್ ಲೀಗಲ್ ಎಜುಕೇಷನ್ ಅಸೋಸಿಯೇಷನ್ (CLEA) ಮತ್ತು ಇಂಧನ ಇಲಾಖೆ ಜಂಟಿಯಾಗಿ ಆಯೋಜಿಸುತ್ತಿರುವ ಈ ಸಮ್ಮೇಳನವು ದೇಶ- ವಿದೇಶಗಳ ಪ್ರಮುಖ ನ್ಯಾಯಶಾಸ್ತ್ರಜ್ಞರು, ನೀತಿ ನಿರೂಪಕರು, ಉದ್ಯಮ ತಜ್ಞರು ಮತ್ತು ಶಿಕ್ಷಣ ತಜ್ಞರನ್ನು ಈ ವೇದಿಕೆಯಲ್ಲಿ ಒಟ್ಟುಗೂಡಿಸಲಾಗುತ್ತದೆ.

ಉದ್ಘಾಟನಾ ಸಮಾರಂಭದ ನೇತೃತ್ವ ವಹಿಸಲಿರುವ ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರು ಉದ್ಘಾಟನಾ ಭಾಷಣ ಮಾಡಲಿದ್ದಾರೆ. ಸುಸ್ಥಿರತೆ, ನಾವೀನ್ಯತೆ ಮತ್ತು ಇಂಧನ ಭದ್ರತೆಗೆ ಒತ್ತು ನೀಡಲಿರುವ ಈ ಉನ್ನತ ಮಟ್ಟದ ಉದ್ಘಾಟನಾ ಅಧಿವೇಶನವು ದೇಶದ ಇಂಧನ ಭವಿಷ್ಯದ ಕುರಿತ ಚರ್ಚೆಗಳಿಗೆ ನಾಂದಿ ಹಾಡಲಿದೆ.

ಈ ಸಮ್ಮೇಳನವು ಇಂಧನ ವಲಯದಲ್ಲಿ ಕರ್ನಾಟಕದ ಮುಂದಾಳತ್ವವನ್ನು ಸಾರಲಿದೆ. ಪ್ರಗತಿಪರ ಇಂಧನ ನೀತಿಗಳೊಂದಿಗೆ ನಾವೀನ್ಯತೆಯನ್ನು ಬೆಳೆಸುವಲ್ಲಿ ಮತ್ತು ಭಾರತದ ದೀರ್ಘಕಾಲೀನ ಇಂಧನ ಗುರಿಗಳು ಮತ್ತು ನಿವ್ವಳ ಶೂನ್ಯ ಬದ್ಧತೆಗಳಿಗೆ ರಾಜ್ಯದ ಕೊಡುಗೆಯನ್ನು ಬಲಪಡಿಸುವಲ್ಲಿ ಇಂಧನ ಇಲಾಖೆಯು ಪ್ರಮುಖ ಪಾತ್ರ ವಹಿಸುತ್ತದೆ.

ಈ ಸಮ್ಮೇಳನವು ಭಾರತದ ಇಂಧನ ಪರಿವರ್ತನೆ, ನೀತಿ ಮತ್ತು ಆಡಳಿತದ ಕುರಿತು ಸಂವಾದಕ್ಕೆ ವೇದಿಕೆಯನ್ನು ಒದಗಿಸಲಿದ್ದು, 2047ರ ವೇಳೆಗೆ ಇಂಧನ ಭದ್ರತೆ ಮತ್ತು ಸುಸ್ಥಿರತೆಗಾಗಿ ರಾಷ್ಟ್ರೀಯ ಗುರಿಗೆ ಅನುಗುಣವಾಗಿರುತ್ತದೆ.

ಈ ಸಮ್ಮೇಳನವು ಏಪ್ರಿಲ್ 19 ರಂದು ನಡೆಯುವ ಸಮಾರೋಪ ಸಮಾರಂಭ'ದೊಂದಿಗೆ ಮುಕ್ತಾಯಗೊಳ್ಳಲಿದ್ದು, ಪ್ರಮುಖ ಶಿಫಾರಸುಗಳು ಮತ್ತು ಒಳನೋಟಗಳ ಮೂಲಕ ಮುಂದಿನ ದಾರಿಯನ್ನು ವಿವರಿಸಲಾಗುವುದು.

ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ನೇತೃತ್ವದಲ್ಲಿ ಮತ್ತು ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಅವರ ಮಾರ್ಗದರ್ಶನದಲ್ಲಿ ಈ ಸಮ್ಮೇಳನ ನಡೆಯಲಿದೆ.

ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ. ರಾಮ್ ಪ್ರಸಾತ್ ಮನೋಹರ್; ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ. ಎನ್. ಶಿವಶಂಕರ್; ಮತ್ತು ಕ್ರೆಡಲ್ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ. ರುದ್ರಪ್ಪಯ್ಯ ಸೇರಿದಂತೆ ಇತರ ಅಧಿಕಾರಿಗಳು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

# ಕರ್ನಾಟಕ ಲೋಕಾಯುಕ್ತದ ನಾಲ್ಕು ದಶಕಗಳ ಸಾರ್ಥಕ ಪಯಣ: ಏಪ್ರಿಲ್ 18 ರಂದು ವಿಶೇಷ ಕಾರ್ಯಕ್ರಮ

**ಬೆಂಗಳೂರು :** ಭ್ರಷ್ಟಾಚಾರ ನಿರ್ಮೂಲನೆ ಮತ್ತು ಆಡಳಿತ ಸುಧಾರಣೆಯಲ್ಲಿ ಮಹತ್ತರ ಪಾತ್ರ ವಹಿಸಿರುವ 'ಕರ್ನಾಟಕ ಲೋಕಾಯುಕ್ತ' ಸಂಸ್ಥೆಯು ತನ್ನ ಯಶಸ್ವಿ ನಾಲ್ಕು ದಶಕಗಳ ಪಯಣವನ್ನು ಪೂರೈಸಿದ್ದು, ಈ ಅಂಗವಾಗಿ 2026ರ ಏಪ್ರಿಲ್ 18, ಶನಿವಾರದಂದು ಮಧ್ಯಾಹ್ನ 2.30 ಗಂಟೆಗೆ ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕದ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರುಗಳಾದ ಕೆ.ಎನ್. ಫಣೀಂದ್ರ ಮತ್ತು ಬಿ. ವೀರಪ್ಪ ಅವರ ಘನ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮವು ಜರುಗಲಿದೆ.

ಈ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಲೋಕಾಯುಕ್ತ ನಿಯತಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ ಚುನಾಯಿತ ಪ್ರತಿನಿಧಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಹೊಸ ಪೋರ್ಟಲ್ ಹಾಗೂ ಆನ್‌ಲೈನ್ ತನಿಖಾ ಮಾಡ್ಯೂಲ್‌ಗೆ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಮಾಜಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರನ್ನು ಸನ್ಮಾನಿಸಲಾಗುವುದು.

ಸಭಾ ಕಾರ್ಯಕ್ರಮದ ನಂತರ ಸಂಜೆ 4:30 ರಿಂದ 6:00 ರವರೆಗೆ ವಿಶೇಷ ವಿಚಾರಗೋಷ್ಠಿಗಳು ನಡೆಯಲಿದ್ದು, ನಂತರ ಭ್ರಷ್ಟಾಚಾರದ ವಿರುದ್ಧದ ಹೋರಾಟ ಕುರಿತು ವಿವಿಧ ಗೋಷ್ಠಿಗಳು ನಡೆಯಲಿವೆ.

ಭ್ರಷ್ಟಾಚಾರ ಮತ್ತು ದುರಾಡಳಿತ ವಿರುದ್ಧ ಹೋರಾಟದ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ.ಎಸ್. ಪಾಟೀಲ್, ಲೋಕಾಯುಕ್ತ ಕಾಯ್ದೆಯಡಿ ಕುಂದುಕೊರತೆಗಳ ಪರಿಹಾರ ವಿಷಯದ ಮೇಲೆ ನಿವೃತ್ತ ನ್ಯಾಯಮೂರ್ತಿಗಳಾದ ಕೆ.ಎನ್. ಫಣೀಂದ್ರ ಹಾಗೂ ಭ್ರಷ್ಟಾಚಾರ ತಡೆಗಟ್ಟುವುದು ಹೇಗೆ? ಎಂಬುದರ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ವಿಚಾರಗೋಷ್ಠಿ ನಡೆಸಲಿದ್ದಾರೆ.

ಕರ್ನಾಟಕ ಲೋಕಾಯುಕ್ತ ಸಂಸ್ಥೆಯು ತನ್ನ ಅರ್ಥಪೂರ್ಣ ಹಾಗೂ ಅವಿರತ ಸೇವೆಯ 40 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ್ದು, ಈ ಸುದೀರ್ಘ ಅವಧಿಯಲ್ಲಿ ಸಂಸ್ಥೆಯು ಹಲವಾರು ಸವಾಲುಗಳನ್ನು ಎದುರಿಸಿದ್ದರೂ ಸಹ, ಸಾರ್ವಜನಿಕ ಸೇವೆಯಲ್ಲಿನ ಭ್ರಷ್ಟಾಚಾರ, ಸ್ವಜನಪಕ್ಷಪಾತ ಹಾಗೂ ಆಡಳಿತ ದುರುಪಯೋಗದ ವಿರುದ್ಧದ ಹೋರಾಟದಲ್ಲಿ ಸದಾ ಸ್ಥಿತಪ್ರಜ್ಞವಾಗಿ ಕಾರ್ಯ ನಿರ್ವಹಿಸಿಕೊಂಡು ಬಂದಿದೆ.

ಸಮಾಜದಲ್ಲಿ ಭ್ರಷ್ಟಾಚಾರವು ಭಯಾನಕ ರೀತಿಯಲ್ಲಿ ಬೆಳೆಯುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ ಎಂಬ ಟೀಕೆಗಳಿದ್ದರೂ ಸಹ, ಧನಾತ್ಮಕ ಚಿಂತನೆ ಹಾಗೂ ಪರಿಶ್ರಮದಿಂದ ಭಷ್ಟಾಚಾರವನ್ನು ಹತ್ತಿಕ್ಕಬಹುದು ಎಂಬ ವಿಶ್ವಾಸವನ್ನು ಸಂಸ್ಥೆಯು ಮೂಡಿಸಿದೆ. ಜೀವನದ ಹಾದಿಯಲ್ಲಿ ಬರುವ ಕಠಿಣ ಸವಾಲುಗಳನ್ನು ಧೈರ್ಯ ಮತ್ತು ತಾಳ್ಮೆಯಿಂದ ಎದುರಿಸಿದಾಗ ಮಾತ್ರ ಯಶಸ್ಸು ಸಾಧ್ಯ.ಆಮಿಷಗಳಿಗೆ ಒಳಗಾಗದ, ಅಧಿಕಾರದ ಆಸೆಗೆ ಮಣಿಯದ ಮತ್ತು ದೃಢ ಸಂಕಲ್ಪವುಳ್ಳ ಪ್ರಾಮಾಣಿಕ ವ್ಯಕ್ತಿಗಳ ಅಗತ್ಯತೆ ಇಂದು ಹೆಚ್ಚಿದೆ. ಸಾರ್ವಜನಿಕ ಹಿತಾಸಕ್ತಿಯೇ ಪರಮ ಗುರಿಯಾಗಿಸಿಕೊಂಡು ಕೆಲಸ ಮಾಡುವ ವ್ಯಕ್ತಿಗಳನ್ನು ನಾವು ಪ್ರೋತ್ಸಾಹಿಸಬೇಕಿದೆ. ಎಂತಹದೇ ನಿರಾಸೆ ಎದುರಾದರೂ ಶಾಂತ ಮತ್ತು ಸ್ಥಿರವಾದ ದೃಢತೆಯೊಂದಿಗೆ ಭ್ರಷ್ಟಾಚಾರದ ವಿರುದ್ಧದ ಹೋರಾಟ ಮುಂದುವರಿಯಬೇಕು.

ಒಟ್ಟಾರೆಯಾಗಿ, ಪ್ರಾಮಾಣಿಕ ವ್ಯಕ್ತಿಗಳನ್ನು ಬೆಳೆಸುವಲ್ಲಿ ನಾವು ವಿಫಲವಾದರೆ ಅನ್ಯಾಯವು ಗೆದ್ದು, ನ್ಯಾಯವು ಮರೆಯಾಗುವ ಅಪಾಯವಿದೆ ಎಂದು ಸಂಸ್ಥೆಯು ಎಚ್ಚರಿಸಿದೆ. ಸವಾಲುಗಳೇ ವ್ಯಕ್ತಿಯನ್ನು ಪರಿಪೂರ್ಣಗೊಳಿಸುತ್ತವೆ ಎಂಬ ಧ್ಯೇಯವಾಕ್ಯದೊಂದಿಗೆ ಲೋಕಾಯುಕ್ತವು ನಾಲ್ಕು ದಶಕಗಳನ್ನು ದಾಟಿ ಮುಂದಿನ ಹೆಜ್ಜೆಯನ್ನು ಇಡುತ್ತಿದೆ.

# ನಟಿ ರನ್ಯಾ ರಾವ್ ಬಂಧನ ಆದೇಶ ಎತ್ತಿಹಿಡಿದ ಸುಪ್ರೀಂ ಕೋರ್ಟ್

ನವದೆಹಲಿ: ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಕನ್ನಡದ ನಟಿ ಹರ್ಷವರ್ಧಿನಿ ರನ್ಯಾ ರಾವ್ ಅವರಿಗೆ ಭಾರಿ ಹಿನ್ನಡೆಯಾಗಿದೆ.

ಪ್ರಕರಣದಲ್ಲಿ ಕೇಂದ್ರ ಆರ್ಥಿಕ ಗುಪ್ತಚರ ಬ್ಯೂರೋ (ಸಿಇಐಬಿ) ರನ್ಯಾ ವಿರುದ್ಧ ಹೊರಡಿಸಿದ್ದ ಬಂಧನ ಆದೇಶವನ್ನು ಸುಪ್ರೀಂ ಕೋರ್ಟ್ ಗುರುವಾರ ಎತ್ತಿಹಿಡಿದಿದೆ.

ಡಿಸೆಂಬರ್ 19, 2025ರಂದು ಕರ್ನಾಟಕ ಹೈಕೋರ್ಟ್ ಕೂಡ ರನ್ಯಾ ರಾವ್ ಬಂಧನ ಆದೇಶವನ್ನು ಎತ್ತಿಹಿಡಿದಿತ್ತು. ಇದನ್ನು ಪ್ರಶ್ನಿಸಿ ರನ್ಯಾ ರಾವ್ ಅವರ ತಾಯಿ ಮತ್ತು ಮತ್ತೊಬ್ಬ ಆರೋಪಿ ಸಾಹಿಲ್ ಸರ್ಕಾರಿಯ ಜೈನ್ ಅವರ ಸೋದ ರಸಂಬಂಧಿ ಸಲ್ಲಿಸಿದ್ದ ಮೇಲ್ಮನವಿಗಳನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಎಂ.ಎಂ. ಸುಂದ್ರೇಶ್ ಮತ್ತು ಎನ್.ಕೋಟೀಶ್ವರ್ ಸಿಂಗ್ ಅವರ ಪೀಠ, ವಜಾಗೊಳಿಸಿ ಆದೇಶಿಸಿದೆ.

ಪ್ರತಿವಾದಿಯ ವಿರುದ್ಧ ಅನುಸರಿಸಿರುವ ಕ್ರಮ ಸರಿಯಾಗಿದೆ ಎಂದು ನಾವು ಕಂಡುಕೊಂಡಿದ್ದೇವೆ. ಅಧಿಕಾರಿಗಳು ಸಂವಿಧಾನದ 22(3)(ಬಿ) ವಿಧಿಯ ಅಡಿಯಲ್ಲಿ ಬಂಧನ ಆದೇಶ ಹೊರಡಿಸಿದ್ದು, ಇದರಿಂದ ಸಾಂವಿಧಾನಿಕ ಆದೇಶದ ಉಲ್ಲಂಘನೆ ಯಾಗಿಲ್ಲ ಎಂದು ಪೀಠ ಹೇಳಿದೆ.

ಪ್ರಕರಣದಲ್ಲಿ ವಿದೇಶಿ ವಿನಿಮಯ ಸಂರಕ್ಷಣೆ ಮತ್ತು ಕಳ್ಳಸಾಗಣೆ ಚಟುವಟಿಕೆಗಳ ತಡೆಗಟ್ಟುವಿಕೆ ಕಾಯ್ದೆ (COFEPOSA) ನಿಬಂಧನೆಗಳ ಅಡಿ ಯಲ್ಲಿ ಬಂಧಿಸಲ್ಪಟ್ಟ ಹರ್ಷವರ್ಧಿನಿ ರನ್ಯಾ ರಾವ್ ಮತ್ತು ಸಾಹಿಲ್ ಸರ್ಕಾರಿಯ ಜೈನ್ ಇಬ್ಬರೂ ತಮ್ಮ ಬಂಧನ ಆದೇಶಗಳನ್ನು ತಾಂತ್ರಿಕ ಮತ್ತು ಕಾರ್ಯವಿಧಾನದ ಆಧಾರದ ಮೇಲೆ ಪ್ರಶ್ನೆ ಮಾಡಿದ್ದರು.

ಕಾನೂನು ನೆರವು ನೀಡದಿರುವ ಹಕ್ಕಿನ ಕುರಿತಂತೆ, ಸಂವಿಧಾನದ 22(3)(b) ವಿಧಿಯ ಆಮದು ಅಔಈಇಕಔಖ ಕಾಯ್ದೆಯ ಸೆಕ್ಷನ್ 8(e) ಪ್ರಕಾರ, ಬಂಧಿತನು ಹಕ್ಕುಗಳ ವಿಚಾರದಲ್ಲಿ ಕಾನೂನು ನೆರವು



ಪಡೆಯಲು ಸಾಧ್ಯವಿಲ್ಲ ಎಂದು ಪೀಠ ಹೇಳಿತು. ಸಾಮಾನ್ಯವಾಗಿ ಹೇಳುವುದಾದರೆ, ಒಬ್ಬ ಅಧಿಕಾರಿಯು ದಾಖಲೆ ಗಳನ್ನು ಇರಿಸಿ ಬಂಧನ ಪ್ರಾಧಿಕಾರದ ಪರವಾಗಿ ಸಲಹಾ ಮಂಡಳಿಗೆ ಸಹಾಯ ಮಾಡಿದಾಗ, ಬಂಧಿತ ವ್ಯಕ್ತಿಯು ನಿಯಮಿತ ರೀತಿಯಲ್ಲಿ ಕಾನೂನು ನೆರವು ಪಡೆಯಲು ಸಾಧ್ಯವಿಲ್ಲ ಎಂದು ಪೀಠ ತಿಳಿಸಿತು.

ರನ್ಯಾ ರಾವ್ ಅವರನ್ನು 2025ರ ಮಾರ್ಚ್ 3ರಂದು ಬೆಂಗಳೂರಿನ ಕೆಂಪೇಗೌಡ ಅಂತಾ ರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯ (DRI) ವಶಕ್ಕೆ ಪಡೆದಿತ್ತು.

ಭಾರತೀಯ ಪಾಸ್‌ಪೋರ್ಟ್ ಹೊಂದಿರುವ ಮಹಿಳಾ ಪ್ರಯಾಣಿಕರೊಬ್ಬರು ದುಬೈ, ಯುನೈಟೆಡ್ ಅರಬ್ ಎಮಿರೇಟ್ಸ್‌ನಿಂದ ಭಾರತದ ಬೆಂಗಳೂರಿಗೆ ಬಾರ್‌ಗಳು ಹಾಗೂ ಪೇಸ್ಟ್ ರೂಪದಲ್ಲಿ ಚಿನ್ನವನ್ನು ಸಾಗಿಸುತ್ತಿದ್ದಾರೆ ಎಂದು ಬೆಂಗಳೂರು ವಲಯ ಘಟಕದ ಆಖಋಗೆ ನಿರ್ದಿಷ್ಟ ಗುಪ್ತಚರ ಮಾಹಿತಿ ಲಭಿಸಿತ್ತು. ಅಧಿಕಾರಿಗಳು ಸುಮಾರು 14.2 ಕಿಲೋಗ್ರಾಂಗಳಷ್ಟು ತೂಕದ ಚಿನ್ನದ ಬಾರ್‌ಗಳನ್ನು ವಶಪಡಿಸಿಕೊಂಡಿದ್ದರು.

ಚಿನ್ನವನ್ನು ಬೆಲ್ಟ್ ಮತ್ತು ಜಾಕೆಟ್‌ನಲ್ಲಿ ಮರೆಮಾಡಿ ಕಸ್ಟಮ್ಸ್ ತಪಾಸಣೆಗಳನ್ನು ತಪ್ಪಿಸಲು ಪ್ರಯತ್ನಿಸಿದ್ದಾರೆ. ಪರಿಶೀಲನೆಯಿಂದ ತಪ್ಪಿಸಿಕೊಳ್ಳಲು ರಾವ್ ವಿವಿಐಪಿ ವಿಮಾನ ನಿಲ್ದಾಣದ ನಿರ್ಗಮನವನ್ನು ದುರುಪಯೋಗ ಪಡಿಸಿ ಕೊಂಡಿದ್ದಾರೆ ಎಂದು ಡಿಆರ್‌ಐ ತನಿಖಾಧಿಕಾರಿಗಳು ಹೇಳಿದ್ದರು.

ಮಾರ್ಚ್ 4, 2025ರಂದು ರಾವ್ ಅವರನ್ನು ಬಂಧಿಸಿದ್ದ ಅಧಿಕಾರಿಗಳು ಮಾರ್ಚ್ 10ರಂದು ಕಸ್ಟಮ್ಸ್ ಕಾಯ್ದೆ, 1962ರ ಸೆಕ್ಷನ್ 108ರ ಅಡಿಯಲ್ಲಿ ಅವರ ಹೇಳಿಕೆಯನ್ನು ದಾಖಲಿಸಿಕೊಂಡಿದ್ದರು. ಬಳಿಕ ಮಾರ್ಚ್ 12ರಂದು ಅವರ ಸಹಚರ ತರುಣ್ ಕೊಂಡೂರು ರಾಜು ಹೇಳಿಕೆ ದಾಖಲಿಸಲಾಯಿತು.

ಈ ಹೇಳಿಕೆಗಳ ಆಧಾರದ ಮೇಲೆ ಜೈನ್ ಅವರನ್ನು ಏಪ್ರಿಲ್ 7ರಂದು ಅಧಿಕಾರಿಗಳು ಬಂಧಿಸಿದ್ದರು.

ವಿಜಯ ವಿಶ್ವವಾಣಿ
ವಿಜಯ ಧ್ವನಿ
ಕನ್ನಡ ದಿನಪತ್ರಿಕೆ



# ಲವ್ ಜಿಹಾದ್.......

ಪ್ರೀತಿ – ಪ್ರೇಮದ ಧರ್ಮ ಯುದ್ಧ.....

ಒಂದು ಆತ್ಮಾವಲೋಕನ,.....

ನಿಜ ಪ್ರೀತಿಯನ್ನು ಅನುಮಾನದಿಂದ ನೋಡುವ ಅತ್ಯಂತ ಕೆಟ್ಟ, ದುಷ್ಟ ಸಮಾಜ ನಿರ್ಮಾಣವಾಗದಿರಲಿ, ಹಾಗೆಯೇ ಪ್ರೀತಿಯ ಮುಗ್ಧತೆ ಧರ್ಮದ ಹೆಸರಿನಲ್ಲಿ ನಾಶವಾಗದಿರಲಿ......

ಈಗಿನ ಮಹಾರಾಷ್ಟ್ರದ ನಾಸಿಕ್ ಜಿಲ್ಲೆಯ ಟಿಸಿಎಸ್ ಕಂಪನಿಯ ಲವ್ ಜಿಹಾದ್ ಪ್ರಕರಣ, ಹಾಗೆಯೇ ಕರ್ನಾಟಕದ ಹುಬ್ಬಳ್ಳಿ ಸೇರಿ ಕೆಲವು ಜಿಲ್ಲೆಗಳ ಘಟನೆಗಳು, ಕೇರಳ ಸೇರಿ ಕೆಲವು ರಾಜ್ಯಗಳ ಕಡೆ ಒಂದಷ್ಟು ಪ್ರಕರಣಗಳು ಹೀಗೆ ಆಗಾಗ ಸುದ್ದಿಗಳು ಬರುತ್ತಿರುತ್ತವೆ.

ಲವ್ ಜಿಹಾದ್ ಮತ್ತೊಮ್ಮೆ ಇಡೀ ದೇಶಾದ್ಯಂತ ಮಾಧ್ಯಮಗಳಲ್ಲಿ ಚರ್ಚೆಯಾಗುತ್ತಿದೆ. ಹಾಗೆಯೇ ನಾಸಿಕ್ ಘಟನೆ ಪೋಲೀಸ್ ತನಿಖೆಯ ಹಂತದಲ್ಲಿದೆ. ದಿನದಿಂದ ದಿನಕ್ಕೆ ಒಂದಷ್ಟು ಆತಂಕಕಾರಿ ಸುದ್ದಿಗಳು ಹೊರ ಬರುತ್ತಿವೆ. ಇದರ ಸತ್ಯಾಸತ್ಯತೆಯ ಬಗ್ಗೆ ಚರ್ಚಿಸಲು ಇನ್ನೊಂದಿಷ್ಟು ಸಮಯ ಬೇಕಾಗುತ್ತದೆ. ಆದರೂ ಮೂಲಭೂತವಾಗಿ ಲವ್ ಜಿಹಾದ್ ಬಗ್ಗೆ ಒಂದಷ್ಟು ಆತ್ಮಾವಲೋಕನ ಮತ್ತು ಅಭಿಪ್ರಾಯ....

ಲವ್ ಜಿಹಾದ್ ಅಥವಾ ಪ್ರೀತಿ ಪ್ರೇಮದ ಧರ್ಮ ಯುದ್ದ ಅಥವಾ ಪ್ರೀತಿಯಿಂದ ಮತಾಂತರ ಯುದ್ಧ....

ಇದು ನಿಜವೇ, ಆರೋಪ ಮಾತ್ರವೇ,

ಎಲ್ಲೋ ಅಪರೂಪದ ಸಣ್ಣ ಘಟನೆಗಳೇ, ವ್ಯವಸ್ಥಿತ ಜಾಲವೇ, ಸಹಜ ಪ್ರೀತಿ ಪ್ರೇಮದ ಪ್ರಕರಣಗಳೇ.....

ಮನುಷ್ಯರನ್ನೇ ಧರ್ಮದ ಆಧಾರದ ಮೇಲೆ ಒಡೆದು, ನಮ್ಮದೇ ಶ್ರೇಷ್ಠ ಎಂಬ ಮನೋಭಾವ ಬೆಳೆಸಿ, ಜೊತೆಗೆ ಇತರ ಧರ್ಮಗಳ ವಿರುದ್ಧ ದ್ವೇಷ ಭಾವನೆ ಮೂಡಿಸಿ ಅದರ ನಾಶಕ್ಕೆ ಪ್ರಯತ್ನಿಸುತ್ತಾ ಇರುವ ಧಾರ್ಮಿಕ ಮುಖಂಡರುಗಳು ಹೆಚ್ಚಾಗುತ್ತಿರುವ ಜಾಗತಿಕ ವಿದ್ಯಮಾನಗಳ ಹಿನ್ನೆಲೆಯಲ್ಲಿ ಖಚಿತವಾಗಿ ಏನನ್ನಾದರೂ ಹೇಳುವುದು ಕಷ್ಟ. ಭಾರತದಲ್ಲಿ ರಾಜಕೀಯ ಕಾರಣದಿಂದಾಗಿ ಸತ್ಯ ಮತ್ತು ಸುಳ್ಳುಗಳ ನಡುವಿನ ಅಂತರ ತುಂಬಾ ಕಡಿಮೆಯಾಗಿದೆ.

ಲವ್ ಜಿಹಾದ್ ಎಂಬುದು ನನಗೆ ಅರ್ಥವಾಗಿರುವುದೇನೆಂದರೆ , ಮುಸ್ಲಿಂ ಮೂಲಭೂತವಾದಿಗಳು ಹಿಂದೂ ಹೆಣ್ಣುಮಕ್ಕಳನ್ನು ಪ್ರೀತಿಸಿ ಅಥವಾ ಪ್ರೀತಿಯ ನಾಟಕವಾಡಿ ಅವರನ್ನು ಮದುವೆಯಾಗಿ, ಅವರನ್ನು ಮತ್ತು ಅವರ ಮಕ್ಕಳನ್ನು ಇಸ್ಲಾಮೀಕರಣ ಮಾಡಿ ಭಾರತವನ್ನು ಇಸ್ಲಾಂ ರಾಷ್ಟ್ರವನ್ನಾಗಿ ಮಾಡುವ ಒಳಸಂಚು ಎಂದು.

ಇದು ನಿಜವೇ ಅಥವಾ ಹಿಂದೂ ಮೂಲಭೂತವಾದಿಗಳ ಕುತಂತ್ರ ಆರೋಪವೇ ಅಥವಾ ಓಟ್ ಬ್ಯಾಂಕಿನ ರಾಜಕೀಯವೇ ?

ನನಗೆ ಸ್ಪಷ್ಟವಾಗಿ ಗೊತ್ತಿಲ್ಲ. ಏಕೆಂದರೆ ಪ್ರೀತಿ ಮತ್ತು ಅಪರಾಧಗಳು ಸಾಮಾನ್ಯ ಗ್ರಹಿಕೆಗೆ ಸ್ಪಷ್ಟವಾಗಿ ನಿಲುಕುವುದಿಲ್ಲ.

ನಿಜವಾಗಿದ್ದಲ್ಲಿ ಅದು ಶಿಕ್ಷಾರ್ಹ ಅಪರಾಧ ಮತ್ತು ದೇಶದ್ರೋಹ ಹಾಗು ಮಾನವ ದ್ರೋಹ. ಸುಳ್ಳಾಗಿದ್ದಲ್ಲಿ ಆ ರೀತಿಯ ಸುಳ್ಳು ಸುದ್ದಿ ಹಬ್ಬಿಸಿ ತಮ್ಮ ಸ್ವಾರ್ಥ ಸಾಧನೆಗೆ ದೇಶ ಮತ್ತು ಧರ್ಮವನ್ನು ಉಪಯೋಗಿಸಿಕೊಳ್ಳುವವರೂ ದೇಶ ಮತ್ತು ಧರ್ಮ ದ್ರೋಹಿಗಳೇ.

ಆದರೆ ಮುಖ್ಯ ಪ್ರಶ್ನೆ ಎಂದರೆ.......

ಭಾರತೀಯ ಹಿಂದೂ ಯುವತಿಯರು ಪ್ರೀತಿಯ ನಾಟಕವಾಡುವ ವ್ಯಕ್ತಿಗಳ ಆಕರ್ಷಣೆಗೆ ಸುಲಭವಾಗಿ ಬಲಿಯಾಗುವಷ್ಟು ದುರ್ಬಲರೇ ? ಅಥವಾ ನಮ್ಮ ಸಾಮಾಜಿಕ ವ್ಯವಸ್ಥೆ ನಮ್ಮ ಹೆಣ್ಣುಮಕ್ಕಳನ್ನು ಅಷ್ಟೊಂದು ಕೆಳಮಟ್ಟದಲ್ಲಿ ಬೆಳೆಸಿದೆಯೇ ? ಅಥವಾ ನಿಜ ಪ್ರೀತಿ ಮತ್ತು ಕಪಟತೆ ಅರಿಯದಷ್ಟು ಮುಗ್ಧರೇ ? ಅಥವಾ ಮಾತು, ರೂಪ, ಬಟ್ಟೆ, ಕಾರು, ಹಣದ ಆಸೆಗೆ ಸುಲಭವಾಗಿ ಮರುಳಾಗುವ ಚಂಚಲೆಯರೆ ? ( ಬಲವಂತವಾಗಿ ಅಥವಾ ಒತ್ತಾಯಪೂರ್ವಕವಾಗಿ ಪ್ರಯತ್ನಿಸುವುದು ಅತ್ಯಾಚಾರಕ್ಕೆ ಸಮ. ಅದು ಈ ವ್ಯಾಪ್ತಿಗೆ ಒಳಪಡುವುದಿಲ್ಲ)

ನಾವು ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ......

ಮೂಲಭೂತವಾಗಿ ಭಾರತದ ಎಲ್ಲಾ ವರ್ಗದ ಸಂಸ್ಕೃತಿ ಮತ್ತು ಜೀವನಶೈಲಿಯಲ್ಲಿ ಪ್ರೀತಿಗೆ ಅತ್ಯುನ್ನತ ಸ್ಥಾನವಿದೆ. ಪ್ರೀತಿ ಮಾಡುವುದಲ್ಲ ಅದು ಆಗುವುದು – ತನಗರಿವಿಲ್ಲದೆ ಘಟಿಸುವುದು, ಅನುಭವಿಸುವುದು.

ಪ್ರೀತಿ ಎಂಬುದು ಪ್ರೀತಿ, ಪ್ರೇಮ, ಪ್ರಣಯ, ತ್ಯಾಗ, ಸಹಕಾರ, ಆಕರ್ಷಣೆ, ಅವಲಂಬನೆ, ಹೊಂದಾಣಿಕೆ, ಜವಾಬ್ದಾರಿ ಮುಂತಾದ ಅನೇಕ ಅಂಶಗಳ ಹೃದಯದ ಭಾಷೆ, ಭಾವನೆಗೆ ಸಂಬಂಧಿಸಿದ ಎಲ್ಲಾ ಅಂಶಗಳ ಸಮ್ಮಿಲನ.

ಕೇವಲ ಹಣ, ಅಧಿಕಾರ, ಸೌಂದರ್ಯ, ಮಾತಿನ ಕಲೆಗಾರಿಕೆ ಮುಂತಾದವುಗಳಿಗೆ ಒಲಿಯುವುದು ಒಂದು ಮೋಹವೇ ಹೊರತು ನಿಜ ಪ್ರೀತಿಯಲ್ಲ....

ಚೆಂಡು ಈಗ ನಮ್ಮ ಅಂಗಳದಲ್ಲೇ ಇದೆ, ನಾವೇ ನಿಯಂತ್ರಣಕ್ಕೆ ತೆಗೆದುಕೊಳ್ಳಬೇಕು....

ಪ್ರೀತಿಸುವ ಮನಸ್ಸುಗಳನ್ನು ಮುಗ್ಧ ಮನಸ್ಸು ಎಂದು ಸಮಾಧಾನ ಮಾಡಿಕೊಳ್ಳಬಾರದು. ಅದು ಆಸೆ, ಅಜ್ಞಾನ, ಆಕರ್ಷಣೆ ಅಥವಾ ನಿಜ ಪ್ರೀತಿಯೇ ಆಗಿರಬೇಕೆ ಹೊರತು ಮುಗ್ಧತೆಯಲ್ಲ.

ಒಂದುವೇಳೆ ಲವ್ ಜಿಹಾದ್ ಶತ್ರುಗಳ ಪ್ರಬಲ ಅಸ್ತ್ರವೇ ಆಗಿದ್ದಲ್ಲಿ ನಮ್ಮ ಸಾಮಾಜಿಕ ವ್ಯವಸ್ಥೆ ದೃಢವಾಗಿದ್ದಲ್ಲಿ ಭಯಪಡುವ ಅವಶ್ಯಕತೆಯೇ ಇಲ್ಲ. ಬಲವಂತವಾದಲ್ಲಿ ಮಾತ್ರ ಅದು ಕಾನೂನು ಸುವ್ಯವಸ್ಥೆಯ ಸಮಸ್ಯೆ.

ಅದಕ್ಕಾಗಿ ಎಲ್ಲಾ ಮುಸ್ಲಿಮರನ್ನು ತೆಗಳಿ ಅವರನ್ನು ಮುಖ್ಯವಾಹಿನಿಯಿಂದ ದೂರತಳ್ಳಿ ಮತ್ತಷ್ಟು ಅವಮಾನಕ್ಕೀಡುಮಾಡುವುದೂ ಸರಿಯಲ್ಲ. ಧರ್ಮಕ್ಕಾಗಿ

ಎಳೆಯ ಪ್ರೀತಿಯ ಮನಸ್ಸುಗಳನ್ನು ನೋಯಿಸುವುದು ತರವಲ್ಲ.

ಪ್ರೀತಿಯನ್ನು ಪ್ರೀತಿಯಾಗೇ ಉಳಿಸಿಕೊಳ್ಳಲು ಭಾರತೀಯ ಮನಸ್ಸುಗಳು ಪಣ ತೊಡೋಣ.

ಎಲ್ಲಾ ಧರ್ಮಗಳ ಮೂಲಭೂತವಾದಿ ಕ್ರೂರಿಗಳ ಕೈಯಲ್ಲಿ ಪ್ರೀತಿ ಬಂಧಿಯಾಗಿ ನಲುಗದಂತೆ ನೋಡಿಕೊಳ್ಳೋಣ.....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



ವಿವೇಕಾನಂದ. ಎಚ್. ಕೆ.
9663750451....
9844013068......

# ಬ್ರಿಡ್ಜ್ ಟು ಬೆಂಗಳೂರು: ಕರ್ನಾಟಕದ ಕ್ರಮಕ್ಕೆ ರಾಜತಾಂತ್ರಿಕರ ಮೆಚ್ಚುಗೆ: ಸಿದ್ದರಾಮಯ್ಯ

**ನವದೆಹಲಿ :** ತಂತ್ರಜ್ಞಾನದ ಜೊತೆಗೆ ವ್ಯಾಪಾರ, ನಾವೀನ್ಯತೆ, ಜನರ ಸಹಯೋಗ ಹಾಗೂ ವಿಶ್ವದೊಂದಿಗಿನ ಪಾಲುದಾರಿಕೆಯತ್ತ ಕರ್ನಾಟಕ ಆಸಕ್ತಿ ಹೊಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ನವದೆಹಲಿಯಲ್ಲಿ ನಡೆದ ಬ್ರಿಡ್ಜ್ ಟು ಬೆಂಗಳೂರು: ವಿವಿಧ ದೇಶಗಳ ರಾಯಭಾರಿಗಳು ಹಾಗೂ ರಾಜತಾಂತ್ರಿಕರೊಂದಿಗೆ ನಡೆದ ಸಂವಾದ




ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

**ಬೆಂಗಳೂರು ಕನಸುಗಳನ್ನು ಕಟ್ಟಿಕೊಳ್ಳುವ, ಭವಿಷ್ಯ ರೂಪಿಸುವ ನಗರ :** ಕರ್ನಾಟಕವು ಜಾಗತಿಕ ನಾವೀನ್ಯತಾ ಕೇಂದ್ರ ಮತ್ತು ಹೂಡಿಕೆಯ ಆದ್ಯತಾ ತಾಣವಾಗಿರುವುದನ್ನು ಪ್ರಮುಖವಾಗಿ ಪ್ರಸ್ತಾಪಿಸಿದ ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು, ಬೆಂಗಳೂರು ಕೇವಲ ಭೇಟಿ ನೀಡುವ ನಗರವಲ್ಲ. ಕನಸುಗಳನ್ನು ಕಟ್ಟಿಕೊಳ್ಳುವ, ಭವಿಷ್ಯ ರೂಪಿಸುವ ನಗರವಾಗಿದೆ. ಎಲ್ಲರನ್ನೂ, ಎಲ್ಲದನ್ನೂ ಸ್ವಾಗತಿಸುವ ಅದರ ಮುಕ್ತ ಧೋರಣೆ, ಸದೃಢ ಪರಿಸರ ವ್ಯವಸ್ಥೆ ಮತ್ತು ಉತ್ತಮ ಜೀವನಮಟ್ಟದಿಂದ ಜಾಗತಿಕ ಪ್ರತಿಭೆ, ನಾವೀನ್ಯತೆ ಹಾಗೂ ಹೂಡಿಕೆಗಳನ್ನು ನಿರಂತರವಾಗಿ ಸೆಳೆಯುತ್ತಾ, ಅವಕಾಶಗಳ ನಗರವಾಗಿ ಮುಂದುವರಿಯುತ್ತಿದೆ ಎಂದರು.

**ದೀರ್ಘಾವಧಿಯ ಪಾಲುದಾರಿಕೆಯಲ್ಲಿ ಆಸಕ್ತಿ**

ನಾವೀನ್ಯತೆ ನೇತೃತ್ವದಲ್ಲಿನ ಬೆಳವಣಿಗೆ ಮತ್ತು ಅಂತರರಾಷ್ಟ್ರೀಯ ಪಾಲುದಾರಿಕೆ ಕುರಿತು ಮಾತನಾಡಿದ ಐಟಿ, ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು, "ಕರ್ನಾಟಕವು ಬಂಡವಾಳ ಹೂಡಿಕೆಗಷ್ಟೇ ಸೀಮಿತವಾದ ?ಸುಪ್ತ ಪಾಲುದಾರಿಕೆ?ಯಲ್ಲಿ ಆಸಕ್ತಿ ಹೊಂದಿರದೆ, ದೀರ್ಘಾವಧಿಯ, ನಿರ್ದಿಷ್ಟ ಫಲಿತಾಂಶ ಆಧಾರಿತ ನಾವೀನ್ಯತೆಯ ಸಹಯೋಗಗಳನ್ನು ಕಾರ್ಯಗತಗೊಳಿಸಲು ನೆರವಾಗುವ ಪಾಲುದಾರರ ಹುಡುಕಾಟದಲ್ಲಿ ಇದೆ" ಎಂದರು.

ಹೂಡಿಕೆದಾರರು ಮತ್ತು ಉದ್ಯಮಿಗಳಿಗೆ ಬೆಂಗಳೂರು ಆಕರ್ಷಕ ಕೇಂದ್ರವಾಗಿ ಹೊರಹೊಮ್ಮುತ್ತಿದೆ : ರಾಜತಾಂತ್ರಿಕರ ಮೆಚ್ಚುಗೆ ಕರ್ನಾಟಕವು ತಂತ್ರಜ್ಞಾನ ಕೇಂದ್ರದಿಂದ ಜಾಗತಿಕ ನಾವೀನ್ಯತೆಯ ಪ್ರಮುಖ ಪಾಲುದಾರ ತಾಣವಾಗಿ ಅಭಿವೃದ್ಧಿಗೊಂಡಿದ್ದು, ನೀತಿ-ನಿರೂಪವಣೆಯ ನೆರವು, ನವೋದ್ಯಮಗಳನ್ನು ಜಾಗತಿಕ ಮಟ್ಟಕ್ಕೆ ಬೆಳೆಸಲು ಅಗತ್ಯ ಬೆಂಬಲ, ಸಂಶೋಧನಾ ಸಹಯೋಗ ಮತ್ತು ಮಾರುಕಟ್ಟೆ ಲಭ್ಯತೆ ಅವಕಾಶಗಳನ್ನು ಒದಗಿಸುವ ಮೂಲಕ, ಹೂಡಿಕೆದಾರರು ಮತ್ತು ಉದ್ಯಮಿಗಳಿಗೆ ಆಕರ್ಷಕ ಕೇಂದ್ರವಾಗಿ ಹೊರಹೊಮ್ಮುತ್ತಿದೆ ಎಂದು ವಿವಿಧ ದೇಶಗಳ ರಾಜತಾಂತ್ರಿಕರು ಬಣ್ಣಿಸಿದ್ದಾರೆ.

ಬೆಂಗಳೂರಿಗೆ ಸೇತುವೆ ಉಪಕ್ರಮದ ಮೂಲಕ ಕರ್ನಾಟಕವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ರಚನಾತ್ಮಕವಾಗಿ ಕಾರ್ಯೋನ್ಮುಖವಾಗಿರುವುದನ್ನು ಶ್ಲಾಘಿಸಿದರು.

ಇದು ತಂತ್ರಜ್ಞಾನ, ನಾವೀನ್ಯತೆ ಮತ್ತು ಜಾಗತಿಕ ಸಹಭಾಗಿತ್ವಗಳ ಮೇಲೆ ಕೇಂದ್ರೀಕೃತವಾಗಿದ್ದ, ರಾಜ್ಯ ಸರ್ಕಾರದ ನೇತೃತ್ವದಲ್ಲಿ ನಡೆದ ಭಾರತದ ಅತ್ಯಂತ ಪ್ರಮುಖ ರಾಜತಾಂತ್ರಿಕ ಕಾರ್ಯಕ್ರಮಗಳಲ್ಲಿ ಒಂದಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸಂವಾದ ಕಾರ್ಯಕ್ರಮದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವ ಎಂ.ಬಿ ಪಾಟೀಲ ಮತ್ತು ಎಲೆಕ್ಟ್ರಾನಿಕ್ಸ್, ವಿವಿಧ ಇಲಾಖೆಯ ಉನ್ನತ ಅಧಿಕಾರಿಗಳು ಮತ್ತು ಜಾಗತಿಕ ಉದ್ಯಮ ದಿಗ್ಗಜರು ಭಾಗವಹಿಸಿದ್ದರು.

45ಕ್ಕೂ ಹೆಚ್ಚು ರಾಯಭಾರಿಗಳು ಮತ್ತು ಹೈಕಮಿಷನರ್‌ಗಳು ಸೇರಿದಂತೆ 80ಕ್ಕೂ ಹೆಚ್ಚು ದೇಶಗಳ ಹಿರಿಯ ರಾಜತಾಂತ್ರಿಕ ಪ್ರತಿನಿಧಿಗಳೂ ಕಾರ್ಯಕ್ರಮದಲ್ಲಿ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಜಾಗತಿಕ ಸಂಸ್ಥೆಗಳು ಮತ್ತು ಕೈಗಾರಿಕೆ ಮತ್ತು ಸರ್ಕಾರದ ಹಿರಿಯ ಪಾಲುದಾರರನ್ನು ಒಳಗೊಂಡ 140ಕ್ಕೂ ಹೆಚ್ಚು ಜನರು ಪಾಲ್ಗೊಂಡಿದ್ದರು.

ಅಂತರರಾಷ್ಟ್ರೀಯ ಪ್ರಮುಖ ವ್ಯಾಪಾರ ಮತ್ತು ಹೂಡಿಕೆ ಸಂಸ್ಥೆಗಳ ಭಾಗವಹಿಸುವಿಕೆಯೂ ಗಮನ ಸೆಳೆಯಿತು. ಇದು ಸರ್ಕಾರದಿಂದ ಸರ್ಕಾರಕ್ಕೆ ಮತ್ತು ವಾಣಿಜ್ಯ ವಹಿವಾಟಿನಿಂದ ಸರ್ಕಾರದ ಜೊತೆಗಿನ ಸಹಯೋಗವನ್ನು ಕಾರ್ಯಗತಗೊಳಿಸುವ ಪ್ರಕ್ರಿಯೆಯನ್ನು ಮತ್ತಷ್ಟು ಬಲಪಡಿಸುವತ್ತ ಮಹತ್ವದ ಹೆಜ್ಜೆಯಾಗಿದೆ.

ಸ್ವಿಟ್ಜರ್ಲೆಂಡ್, ಸೌದಿ ಅರೇಬಿಯಾ, ಡೆನ್ಮಾರ್ಕ್, ಫ್ರಾನ್ಸ್, ಈಜಿಪ್ಟ್, ಮಲೇಷ್ಯಾ, ಜಪಾನ್, ಜರ್ಮನಿ ಹಾಗೂ ಭೂತಾನ್ ಸೇರಿದಂತೆ ಪ್ರಮುಖ ಪಾಲುದಾರ ರಾಷ್ಟ್ರಗಳ ರಾಜತಾಂತ್ರಿಕ ಪ್ರತಿನಿಧಿಗಳು ಸಂವಾದದಲ್ಲಿ ಭಾಗವಹಿಸಿದ್ದರು. ಹಲವಾರು ರಾಯಭಾರಿಗಳು ಮತ್ತು ಪ್ರತಿನಿಧಿಗಳು ಮಾತನಾಡಿ ಕರ್ನಾಟಕದ ಜೊತೆಗಿನ ವಿವಿಧ ದೇಶಗಳ ಗಾಢವಾದ ಮತ್ತು ಬೆಳೆಯುತ್ತಿರುವ ಪಾಲುದಾರಿಕೆಯ ಮೇಲೆ ಬೆಳಕು ಚೆಲ್ಲಿದರು.

ಜಾಗತಿಕ ನಾವೀನ್ಯತಾ ಮೈತ್ರಿಕೂಟ (ಜಿಐಎ) – ದಂತಹ ರಚನಾತ್ಮಕ ವೇದಿಕೆಗಳ ಮೂಲಕ ಭಾರತದ ನಾವೀನ್ಯತೆ ವ್ಯವಸ್ಥೆಯ ಜೊತೆ ಗಾಢ ಸಂಬಂಧವನ್ನು ಕಾರ್ಯಗತಗೊಳಿಸಲು ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳನ್ನು ಶ್ಲಾಘಿಸಿದರು.

# ನನ್ನ ಹಾಗೂ ಜಮೀರ್ ಮಧ್ಯೆ ಯಾವ ಗಲಾಟೆ ನಡೆದಿಲ್ಲ: ಡಿಸಿಎಂ ಡಿ.ಕೆ. ಶಿವಕುಮಾರ್ ಸ್ಪಷ್ಟನೆ

**ನವದೆಹಲಿ :** ನನ್ನ ಹಾಗೂ ಜಮೀರ್ ಮಧ್ಯೆ ಯಾವ ಗಲಾಟೆ ನಡೆದಿಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಸ್ಪಷ್ಟನೆ ನೀಡಿದರು.

ನವದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಶುಕ್ರವಾರ ಪ್ರತಿಕ್ರಿಯೆ ನೀಡಿದರು.

ಸಚಿವ ಜಮೀರ್ ಅಹ್ಮದ್ ಅವರು ರಾಜೀನಾಮೆ ನೀಡುತ್ತಾರೆ ಎಂಬ ವದಂತಿ ಹರಿದಾಡುತ್ತಿದೆ, ಸಚಿವ ಸಂಪುಟ ಸಭೆಯಲ್ಲಿ ನಿಮ್ಮ ಮಧ್ಯೆ ಗಲಾಟೆ ನಡೆದಿದೆಯೇ ಎಂದು ಕೇಳಿದಾಗ, "ಈ ವಿಚಾರವಾಗಿ ಪತ್ರಿಕೆಗಳಲ್ಲಿ ಬರೆಯಲಾಗಿದೆ. ಅದು ಸುಳ್ಳು. ಪಾಪ, ಜಮೀರ್ ನನ್ನ ಜತೆ ಮಾತನಾಡಿಲ್ಲ, ಈ ವಿಚಾರವಾಗಿ ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯೂ ಆಗಿಲ್ಲ. ನನ್ನ ಕುಟುಂಬದ ಕೆಲಸದ ಹಿನ್ನೆಲೆಯಲ್ಲಿ ಸಂಪುಟ ಸಭೆ ಮುಗಿಸಿಕೊಂಡು ನಾನು ಹೋದೆ. ಅದರ ಹೊರತಾಗಿ ಬೇರೆ ಯಾವ ವಿಚಾರವೂ ಇಲ್ಲ. ಹೈಕಮಾಂಡ್ ಯಾವ ತೀರ್ಮಾನ ನೀಡಿರುತ್ತದೋ ಅದರಂತೆ ಸಿಎಂ ಹಾಗೂ ಪಕ್ಷ ನಿರ್ಧಾರ ಕೈಗೊಂಡಿದೆ" ಎಂದು ತಿಳಿಸಿದರು.

**ಕಾಂಗ್ರೆಸ್ ಪಕ್ಷ ಅಲ್ಪಸಂಖ್ಯಾತರ ರಕ್ಷಣೆ, ನೆರವು ನೀಡುತ್ತಾ ಬಂದಿದೆ**

ಅಲ್ಪಸಂಖ್ಯಾತ ನಾಯಕರನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಕೇಳಿದಾಗ, "ಪ್ರತಿ ಸಂದರ್ಭದಲ್ಲಿ ಅಲ್ಪಸಂಖ್ಯಾತರನ್ನು ಕಾಂಗ್ರೆಸ್ ಪಕ್ಷದಷ್ಟು ಬೇರೆ ಯಾರೂ ರಕ್ಷಣೆ ಮಾಡಿಲ್ಲ. ಹಿಂದೆಯೂ ಬೇರೆಯವರು ಮಾಡಿಲ್ಲ, ಮುಂದೆಯೂ ಮಾಡಲು ಆಗುವುದಿಲ್ಲ. ಆ ಕ್ಷೇತ್ರದಲ್ಲಿ ಅವರ ಜನಸಂಖ್ಯೆ ಹೆಚ್ಚಾಗಿದೆ ನಿಜ. ಆದರೆ ಕಳೆದ 30-40 ವರ್ಷಗಳಿಂದ ಶಾಮನೂರು ಶಿವಶಂಕರಪ್ಪನವರು ಆ ಕ್ಷೇತ್ರವನ್ನು ಕಾಪಾಡಿಕೊಂಡು ಬಂದಿದ್ದಾರೆ. ಜಮೀರ್, ನಸೀರ್ ಹಾಗೂ ಜಬ್ಬಾರ್ ಅವರ ಒಪ್ಪಿದ ನಂತರವೇ ನಾವು ಟಿಕೆಟ್ ನೀಡಿದ್ದೇವೆ" ಎಂದು ತಿಳಿಸಿದರು.

ಫಲಿತಾಂಶ ಬರುವ ಮುಂಚೆಯೇ ಯಾಕೆ ಆತುರದ ಕ್ರಮ ಎಂದು ಕೇಳಿದಾಗ, "ಕೆಲವು ವರದಿಗಳ ಆಧಾರದ ಮೇಲೆ ಹೈಕಮಾಂಡ್ ನಾಯಕರು ತೀರ್ಮಾನ ಮಾಡಿದ್ದಾರೆ" ಎಂದು ತಿಳಿಸಿದರು.

# ತಾಳೆಗರಿ ಹಾಗೂ ಹಸ್ತಪ್ರತಿಗಳಲ್ಲಿ ಉಳಿದಿದ್ದ ವಚನಗಳನ್ನು ಕನ್ನಡಿಗರಿಗೆ ಸಮರ್ಪಕವಾಗಿ ತಲುಪಿಸುವಲ್ಲಿ ಡಾ.ಫ.ಗು. ಹಳಕಟ್ಟಿ ಸೇವೆ ಸ್ಮರಣೀಯ: ಎಂ.ಬಿ.ಪಾಟೀಲ

**ಬೆಂಗಳೂರು:** ಕನ್ನಡದ ಅಮೂಲ್ಯ ಸಾಹಿತ್ಯ ಪರಂಪರೆಯಲ್ಲಿ ವಚನಗಳಿಗೆ ಅಗ್ರಸ್ಥಾನವಿದೆ. ತಾಳೆಗರಿ ಹಾಗೂ ಹಸ್ತಪ್ರತಿಗಳಲ್ಲಿ ಉಳಿದಿದ್ದ ವಚನಗಳನ್ನು ಸಂಗ್ರಹಿಸಿ, ಅವುಗಳನ್ನು ಕನ್ನಡಿಗರಿಗೆ ಸಮರ್ಪಕವಾಗಿ ಪರಿಚಯಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು.

ಹಳಕಟ್ಟಿಯವರ ಅಪೂರ್ವ ತ್ಯಾಗ ಮತ್ತು ಸಾಹಿತ್ಯ ಸೇವೆಯನ್ನು ಈ ಕೃತಿ ಸಮಗ್ರವಾಗಿ ದಾಖಲಿಸುತ್ತದೆ.



ತಲುಪಿಸುವಲ್ಲಿ ಡಾ. ಫ. ಗು. ಹಳಕಟ್ಟಿ ಅವರ ಸೇವೆ ಸ್ಮರಣೀಯ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಕನ್ನಡ ಮುದ್ರಣಾಲಯಗಳ ಇತಿಹಾಸ ಸಂಶೋಧನಾ ಕೇಂದ್ರದ ವತಿಯಿಂದ ಬೆಂಗಳೂರಿನ ಸಚಿವರ ನಿವಾಸದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 'ವಚನ ಪಿತಾಮಹ ಡಾ. ಫ. ಗು. ಹಳಕಟ್ಟಿ' ಅವರ ಕುರಿತ 'ಮುದ್ರಣ ಗುಮ್ಮಟ' ಕೃತಿಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು.

ವಚನಗಳನ್ನು ಕೇವಲ ಸಂಗ್ರಹಿಸುವುದಲ್ಲದೆ, ಅವುಗಳನ್ನು ಅಚ್ಚುಕಟ್ಟಾಗಿ ಮುದ್ರಿಸಿ ಜನಸಾಮಾನ್ಯರಿಗೆ ತಲುಪಿಸಲು ಹಳಕಟ್ಟಿಯವರು ತಮ್ಮ ಮನೆಯನ್ನೇ ಮಾರಾಟ ಮಾಡಿ ಮುದ್ರಣ ಯಂತ್ರವನ್ನು ಖರೀದಿಸಿದ್ದರು. ಈ ಮೂಲಕ ಬಸವನಾಡಿನಲ್ಲಿ ಮುದ್ರಣ ಯಂತ್ರಗಳನ್ನು ಅರ್ಥಪೂರ್ಣ ಕೃತಿಯನ್ನು ಹೊರತಂದ ಸ್ಪ್ಯಾನ್ ಪ್ರಿಂಟರ್ಸ್‌ನ ಎಂ. ಕೃಷ್ಣಮೂರ್ತಿ ಅವರನ್ನು ಸಚಿವರು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಸಚಿವ ಡಾ. ಎಂ.ಬಿ. ಪಾಟೀಲ್ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಅಖಿಲ ಭಾರತ ಮುದ್ರಣಕಾರರ ಒಕ್ಕೂಟದ ಮಾಜಿ ಅಧ್ಯಕ್ಷ ಸಿ.ಆರ್. ಜನಾರ್ಧನ್, ಕರ್ನಾಟಕ ರಾಜ್ಯ ಮುದ್ರಣಕಾರರ ಸಂಘದ ಅಧ್ಯಕ್ಷ ಬಿ.ಆರ್. ಅಶೋಕ್ ಕುಮಾರ್, ಅಖಿಲ ಭಾರತ ವೀರಶೈವ ಮಹಾಸಭೆಯ ರಾಷ್ಟ್ರೀಯ ಕಾರ್ಯದರ್ಶಿ ಎಚ್.ಎಂ. ರೇಣುಕಾ ಪ್ರಸನ್ನ, ಕನ್ನಡಪರ ಹೋರಾಟಗಾರ ಪಾಲನೇತ್ರ, ಕರ್ನಾಟಕ ಇತಿಹಾಸ ಅಕಾಡೆಮಿಯ ಪ್ರಧಾನ ಕಾರ್ಯದರ್ಶಿ ಕೆ.ಎಲ್. ರಾಜಶೇಖರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೆಂಗಳೂರು ವಾಹನ ದಟ್ಟಣೆ ನಿವಾರಣೆಗೆ 11 ಎಲಿವೇಟೆಡ್‌ಗೆ ಸಭೆ ಒಪ್ಪಿಗೆ

**ಬೆಂಗಳೂರು:** ವಾಹನ ದಟ್ಟಣೆ ನಿವಾರಿಸಿ ಸುಗಮ ವಾಹನ ಸಂಚಾರಕ್ಕಾಗಿ ಐದು ಬೆಂಗಳೂರು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಸುಮಾರು 75.60 ಕಿ.ಮೀ. ಉದ್ದದ 11 ಸಂಖ್ಯೆಯ ಎಲಿವೇಟೆಡ್ ಕಾರಿಡಾರ್‌ನ್ನು 13,262.70 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ನಿರ್ಮಿಸುವ ಯೋಜನೆಗೆ ಗುರುವಾರ ಸಚಿವ ಸಂಪುಟ ಸಭೆಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಬೆಂಗಳೂರು ಸ್ಮಾರ್ಟ್ ಇನ್ಫ್ರಾಸ್ಟ್ರಕ್ಚರ್ ಸಂಸ್ಥೆಯಿಂದ ವಾಹನ ದಟ್ಟಣೆಗೆ ದೀರ್ಘಾವಧಿ ಪರಿಹಾರವಾಗಿ ಈ ಎಲಿವೇಟೆಡ್ ಕಾರಿಡಾರ್ ನಿರ್ಮಿಸಲಾಗುವುದು. ಯೋಜನೆಗೆ ಭೂ ಸ್ವಾಧೀನ ವೆಚ್ಚ 2,072.55 ಕೋಟಿ ರೂ. ಆಗಲಿದೆ. ಯೋಜನಾ ವೆಚ್ಚದ ಪೈಕಿ 7,140 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಭರಿಸಲಿದೆ. 9 ಕಾರಿಡಾರ್‌ನ್ನು ಇಪಿಸಿ ಮಾದರಿ ಹಾಗೂ ಉಳಿದ ಎರಡು ಕಾರಿಡಾರ್‌ನ್ನು ಹೈಬ್ರಿಡ್ ಆನ್ವಿಟಿ ಮಾಡೆಲ್‌ನಲ್ಲಿ ನಿರ್ಮಿಸಲು ಯೋಜಿಸಲಾಗಿದೆ ಎಂದು ಕಾನೂನು ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದರು. ಕೆಸರಿನಿಂದ ಬಯೋಗ್ಯಾಸ್ ಬಳಸಿ ಬಯೋಗ್ಯಾಸ್ ಶುದ್ಧೀಕರಣ ವ್ಯವಸ್ಥೆ ಯೋಜನೆ: ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 5 ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳಲ್ಲಿ ಕೆಸರಿನಿಂದ (Sludge) ಉತ್ಪತ್ತಿಯಾಗುವ ಬಯೋಗ್ಯಾಸ್ ಅನ್ನು ಉಪಯೋಗಿಸಿಕೊಂಡು Biogas Purification system and compression ಯೋಜನೆ ಕೈಗೊಳ್ಳಲಾಗುತ್ತಿದೆ. ಇದನ್ನು 20 ವರ್ಷಗಳ ಅವಧಿಗೆ ಪಿಪಿಪಿ (Public Private Partnership) ಮಾದರಿಯಲ್ಲಿ 85 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲು ಸಚಿವ ಸಂಪುಟ ಸಭೆಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಇದರಿಂದ 85 ಕೋಟಿ ರೂ. ಆದಾಯ ಸಿಗಲಿದೆ.

ಮಧ್ಯಂತರ ವರ್ತುಲ ರಸ್ತೆ 2007 ಪಂಕ್ತೀಕರಣ ಮರು ನಿಗದಿ: ಸಂಪುಟ ಸಭೆಯಲ್ಲಿ, BMRDA ಯೋಜನೆ – ಮಧ್ಯಂತರ ವರ್ತುಲ ರಸ್ತೆ-2023ರ ಪಂಕ್ತೀಕರಣವನ್ನು (Alignment) ನಿರಸ ನಗೊಳಿಸಿ, ಮಧ್ಯಂತರ ವರ್ತುಲ ರಸ್ತೆ – 2007ರ ಪಂಕ್ತೀಕರಣವನ್ನು ಅಲ್ಪ ಬದಲಾವಣೆಯೊಂದಿಗೆ ಮರು ನಿಗದಿಪಡಿಸಿ, ಪರಿಷ್ಕೃತ ಅಧಿಸೂಚನೆಯನ್ನು ಹೊರಡಿಸಲು ಅನುಮೋದನೆ ನೀಡಲಾಗಿದೆ. ಬೈಯ ಪ್ಪನಹಳ್ಳಿ ರೈಲ್ವೆ ಲೆವೆಲ್ ಕ್ರಾಸಿಂಗ್ ಬಳಿ ಹೆಚ್ಚುವರಿ 2 ಪಥದ ಮೇತುವೆ ರಸ್ತೆ ನಿರ್ಮಾಣ ಹಾಗೂ IOC ಜಂಕ್ಷನ್ ಬಳಿ ಎಲಿವೇಟೆಡ್ ರೋಟರಿ ಫ್ಲೈ ಓವರ್ ನಿರ್ಮಿಸುವ ಯೋಜನೆಯ 436.44 ಕೋಟಿ ರೂ.ಗಳ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಶೇಕಡಾ 5 ಮೀರದ ಟೆಂಡರ್ ಪ್ರಿಮಿಯಂಗೆ ಸಂಪುಟ ಸಭೆಯಲ್ಲಿ ಅನುಮೋದನೆ ಸಿಕ್ಕಿದೆ.

# ಲಿಂಗತ್ವ ಅಲ್ಪಸಂಖ್ಯಾತರ ಸ್ವಯಂ ಲಿಂಗ ಗುರುತಿಸಿಕೊಳ್ಳುವ ಹಕ್ಕು ಮೊಟಕು

ಬೆಂಗಳೂರು: ಲಿಂಗತ್ವ ಅಲ್ಪಸಂಖ್ಯಾತರ ತಮ್ಮ ಲಿಂಗವನ್ನು ಸ್ವಯಂ ಗುರುತಿಸಿಕೊಳ್ಳುವ ಹಕ್ಕನ್ನು ಮೊಟಕುಗೊಳಿಸಿರುವ ಲಿಂಗತ್ವ ಅಲ್ಪಸಂಖ್ಯಾತರ (ರಕ್ಷಣೆ ಮತ್ತು ಹಕ್ಕುಗಳ) ತಿದ್ದುಪಡಿ ಕಾಯಿದೆ 2026ನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಯ ಸಂಬಂಧ ಕೇಂದ್ರ ಸರ್ಕಾರವು ಪ್ರತಿಕ್ರಿಯೆ ನೀಡುವಂತೆ ಹೈಕೋರ್ಟ್ ಸೂಚನೆ ನೀಡಿದೆ.

ಕೆಲವು ವರ್ಷಗಳಿಂದ ಹಾರ್ಮೋನ್ ಚಿಕಿತ್ಸೆಗೆ ಒಳಗಾಗುತ್ತಿರುವ ಲಿಂಗಪರಿವರ್ತಿತ ತೃತೀಯ ಲಿಂಗಿ ಮಾಯಾ ಮತ್ತು ಹಾರ್ಮೋನ್ ಚಿಕಿತ್ಸೆಗೆ ಒಳಗಾಗಿ ಲಿಂಗಪರಿರ್ತನೆ ಮಾಡಿಕೊಂಡು ತನ್ನ ಅಧಿಕೃತ ದಾಖಲೆಗಳಲ್ಲಿ ಹೆಸರು ಮತ್ತು ಲಿಂಗವನ್ನು ಬದಲಾಯಿಸುವ ಪ್ರಕ್ರಿಯೆಯಲ್ಲಿ ತೊಡಗಿರುವ ತೃತೀಯ ಲಿಂಗಿ ಸಲ್ಲಿಸಿರುವ ಎರಡು ಪ್ರತ್ಯೇಕ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದಮ್ ಅವರಿದ್ದ ಏಕಸದಸ್ಯಪೀಠ ಈ ಸೂಚನೆ ನೀಡಿ, ವಿಚಾರಣೆ ಮುಂದೂಡಿತು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, 2019ರ ಕಾಯಿದೆಯ ಸೆಕ್ಷನ್ 2(ಕೆ) ಅಡಿಯಲ್ಲಿ ಟ್ರಾನ್ಸ್‌ಜೆಂಡರ್ ವ್ಯಕ್ತಿ ಎಂಬ ವ್ಯಾಖ್ಯಾನದಿಂದ ತಮ್ಮನ್ನು ಹೊರಗಿಟ್ಟಿರುವುದರಿಂದ ಅವರಿಗೆ ಯಾವ ಸೇವೆಗಳೂ ಸಿಗುವುದಿಲ್ಲ. ಎರಡನೇ ಅರ್ಜಿದಾರರು ಪಾಸ್‌ಪೋರ್ಟ್‌ಗಾಗಿ ಅರ್ಜಿ ಸಲ್ಲಿಸಿದ್ದಾರೆ ಮತ್ತು ಅವರ ಅಧಿಕೃತ ದಾಖಲೆಗಳನ್ನು ಆದ್ಯತೆಯ ಮೇರೆಗೆ ನವೀಕರಿಸಬೇಕು ಎಂದು ಕೋರಿದರು.

ಅಲ್ಲದೆ, ಮೊದಲ ಅರ್ಜಿದಾರರು ಫೆಬ್ರವರಿಯಲ್ಲಿ ತಮ್ಮ ಔಷಧಿ ಪ್ರಿಸ್ಕ್ರಿಪ್ಷನ್ ಅನ್ನು ಪಡೆದಿದ್ದು, ಮತ್ತೀಗ




ಅದನ್ನು ಶೀಘ್ರದಲ್ಲೇ ನವೀಕರಿಸಬೇಕು. ಆದರೂ ಸಹ 2026ರ ತಿದ್ದುಪಡಿ ಜಾರಿಗೆ ಬಂದ ನಂತರ ಈ ಸೇವೆಗಳು ಅವರಿಗೆ ಲಭ್ಯವಿಲ್ಲದಿರಬಹುದು.

ಹಾಗಾಗಿ ಚಿಕಿತ್ಸೆಯನ್ನು ಮುಂದುವರೆಸಲು ಮಧ್ಯಂತರ ಆದೇಶ ನೀಡಬೇಕು ಮತ್ತು ಆಕ್ಷೇಪಾರ್ಹ ಕಾಯಿದೆಯ ಸಾಂವಿಧಾನಿಕ ಸಿಂಧುತ್ವವನ್ನು ನಂತರ ಪರಿಶೀಲಿಸಬಹುದು ಎಂದು ಹೇಳಿದರು.

ಕೇಂದ್ರ ಹಾಜರಾದ ಪರ ಹಾಜರಾದ ವಕೀಲರು, ಯಾವುದೇ ಮಧ್ಯಂತರ ಪರಿಹಾರ ನೀಡುವುದನ್ನು ಆಕ್ಷೇಪಿಸಿದರು ಮತ್ತು ಪಾಸ್‌ಪೋರ್ಟ್‌ಗಾಗಿ ಅರ್ಜಿ ಸಲ್ಲಿಸಿರುವ ಎರಡನೇ ಅರ್ಜಿದಾರರ ಆಧಾರ್, ಪ್ಯಾನ್ ಇತ್ಯಾದಿಗಳ ದಾಖಲೆಗಳನ್ನು ರದ್ದುಗೊಳಿಸಲು ಈವರೆಗೆ ಯಾವುದೇ ಕ್ರಮಗಳನ್ನು ತೆಗೆದುಕೊಂಡಿಲ್ಲ. ಅದೇ ರೀತಿ, ಯಾವುದೇ ವೈದ್ಯರು ಮೊದಲ ಅರ್ಜಿದಾರರಿಗೆ ಹೆಚ್ಚಿನ ಚಿಕಿತ್ಸೆ ನೀಡಲು ನಿರಾಕರಿಸಿದ್ದಾರೆ ಎಂಬುದಕ್ಕೆ ಯಾವುದೇ ಪುರಾವೆಗಳಿಲ್ಲ ಎಂದು ವಿವರಿಸಿದರು.

ಅರ್ಜಿದಾರರು ಹಾನಿಯಾಗುತ್ತದೆಂದು ಹೇಳುತ್ತಿರುವುದು ನಿರೀಕ್ಷಿತ ಸ್ವರೂಪದ್ದಾಗಿದ್ದು, ನಿರ್ದಿಷ್ಟ ಸಾಕ್ಷ್ಯಾಧಾರಗಳಿಲ್ಲದೆ, ಯಾವುದೇ ಮಧ್ಯಂತರ ಪರಿಹಾರವನ್ನು ನೀಡಬಾರದು ಎಂದು ಪೀಠಕ್ಕೆ ಕೋರಿದರು.

ಪ್ರಕರಣ: ಲಿಂಗತ್ವ ಅಲ್ಪಸಂಖ್ಯಾತರ (ರಕ್ಷಣೆ ಮತ್ತು ಹಕ್ಕುಗಳ) ತಿದ್ದುಪಡಿ ಕಾಯಿದೆ 2026ನ್ನು ತೃತೀಯ ಲಿಂಗಿಗಳು ತಮ್ಮ ಲಿಂಗವನ್ನು ತಾವೇ ಗುರುತಿಸಿಕೊಳ್ಳುವ ಹಕ್ಕನ್ನು ತೆಗೆದುಹಾಕಲಾಗಿದೆ. ಬದಲಾಗಿ,

ವೈದ್ಯಕೀಯ ಮಂಡಳಿಯ ಶಿಫಾರಸಿನ ಮೇರೆಗೆ ಜಿಲ್ಲಾ ಮ್ಯಾಜಿಸ್ಟ್ರೇಟ್ ಪ್ರಮಾಣಪತ್ರ ನೀಡಲಿದ್ದಾರೆ. ಜೊತೆಗೆ, ಕಾಯಿದೆಯು ಲಿಂಗತ್ವ ಅಲ್ಪಸಂಖ್ಯಾತರ ವ್ಯಾಖ್ಯಾನವನ್ನು ಸಂಕುಚಿತಗೊಳಿಸಿದೆ. ಇದು ಸಲಿಂಗಿ ಮತ್ತು ಲೆಸ್ಬಿಯನ್ನರನ್ನು ಹೊರಗಿಡಬಹುದೆಂದು ಹೇಳುತ್ತದೆ. ಇದರಿಂದ ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆಯಾಗಿದೆ.

# ಜನಸಂಖ್ಯೆಯ ಅನುಸಾರ ಡಿಲಿಮಿಟೇಶನ್ ದಕ್ಷಿಣ ರಾಜ್ಯಗಳಿಗೆ ಎಸಗುವ ಘೋರ ಅನ್ಯಾಯ

ಜನಸಂಖ್ಯೆಯ ಆಧಾರದ ಮೇಲೆ ಲೋಕಸಭಾ ಕ್ಷೇತ್ರಗಳ ಮರುಹಂಚಿಕೆ (Delimitation) ಮಾಡುವುದು ದಕ್ಷಿಣದ ರಾಜ್ಯಗಳಿಗೆ ಎಸಗುವ ಘೋರ ಅನ್ಯಾಯ ಎಂದು



ಕನ್ನಡದ ಪ್ರಮುಖ ತಂತ್ರಜ್ಞಾನ ಆಧಾರಿತ ಬರಹಗಾರ ಮಧು ವೈ.ಎನ್. ಅಭಿಪ್ರಾಯಪಟ್ಟಿದ್ದಾರೆ. ಅವರ ಫೇಸ್‌ಬುಕ್ ಬರಹ ಇಲ್ಲಿದೆ. 'ಜನಸಂಖ್ಯೆಯ ಅನುಸಾರ ಡಿಲಿಮಿಟೇಶನ್ ಮಾಡುವುದು ದಕ್ಷಿಣ ರಾಜ್ಯಗಳಿಗೆ ಎಸಗುವ ಘೋರ ಅನ್ಯಾಯ. ಬಿಜೆಪಿ ಸಂಸದರು ಅಭಿಮಾನಿಗಳು ಅಷ್ಟೇ ಯಾಕೆ ದೇಶದ ಸಮಗ್ರತೆ ಬಯಸುವ ಉತ್ತರ ಭಾರತದ ಸ್ನೇಹಿತರೂ ಸಹ ಇದನ್ನು ವಿರೋಧಿಸಬೇಕು. ಮುಸ್ಲಿಮರ ಮೇಲೆ ಮಕ್ಕಳ ಹೆರುವ ನಿಯಂತ್ರಣ ಹೇರಬೇಕು ಎಂದು ಕೂಗು ಹಾಕುತ್ತ ಬಂದ ಬಿಜೆಪಿ ಮಿತ್ರರು ಇದಕ್ಕೆ ಮಾತ್ರ ಬೆಪ್ಪರಂತೆ ಭಿನ್ನ ರಾಗ ಎಳೆಯುವುದು ವಂಚನೆ ಮನೋಭಾವ ಬಿತ್ತರಿಸುತ್ತಿದೆ'.

'ಆದರೆ ಕೇಂದ್ರ ಸರಕಾರ ಹೊಸ ಪರಿಹಾರವೊಂದನ್ನು ಸೂಚಿಸುತ್ತಿರು ವಂತಿದೆ. ಪ್ರತಿ ರಾಜ್ಯದ ಈಗಿನ ಸಂಖ್ಯೆಯನ್ನು ಒಂದೂವರೆ ಪಟ್ಟು ಸಮನಾಗಿ ಏರಿಸುತ್ತೇವೆ ಎಂದು. ಇದನ್ನು ಮಾಡಬಹುದು. ಇದನ್ನೇ ಮಾಡಬೇಕು. ಆಡಳಿತಾನುಕೂಲಕ್ಕೆ ಕಾಲಕಾಲಕ್ಕೆ ಸೀಟು ಮರುಹಂಚಿಕೆ ಅಗತ್ಯವಿದ್ದಿರಬಹುದು. ಆದರೆ ಇದಕ್ಕೆ ಸಂವಿಧಾನ ಒಪ್ಪುತ್ತದೋ ಇಲ್ಲವೋ ಗೊತ್ತಿಲ್ಲ. ಸಂವಿಧಾನವನ್ನು ತಿದ್ದಿಯಾದರೂ ಸರಿ ದಕ್ಷಿಣ ರಾಜ್ಯಗಳ ದಕ್ಷತನ ಮತ್ತು ಹಿತಾಸಕ್ತಿ ಕಾಪಾಡಬೇಕು'.

'ಭಾರತದ ಬಹುಭಾಗ ಬಡತನ, ಮೂಢತನ ದೇಶವನ್ನು ಹಿಂದೆ ಎಳೆಯುವ ಈ ಭಾರ- ನಿಜಕ್ಕೂ ಹೆಚ್ಚೆಚ್ಚು ಮಕ್ಕಳು ಹೆರುವ ಈ ಕೆಲವು ಭೌಗೋಳಿಕ(ಹಿಂದಿ ಬೆಲ್ಟ್) ಮತ್ತು ಸಾಮಾಜಿಕ (ಮುಸ್ಲಿಂ ಮತ್ತು ಹಿಂದಿ ಬೆಲ್ಟಿನ ಹಿಂದೂ) ಭಾಗಗಳಿಗೆ ಸೀಮಿತವಾಗಿದ್ದು ಇದಕ್ಕೆ ಸರ್ಜರಿ ಯಾಗಬೇಕಿದೆ. ಸರಕಾರಗಳು ಇದರತ್ತ ಹೆಚ್ಚು ಗಮನ ಹರಿಸಬೇಕಿದೆ'.

Printed, Published, & owned by : YOGESH, Printed at: SNEHA PRINTERS, No. 129, Kempe gowda Nagar, Magadi Main Road, Bangalore 560 091.
Published at : No. 10, 2nd Floor, 7th Block, Sir M. Visweswaraiah Layout, Muddayanapalya Circle, Bangalore 560 091.
Editor : YOGESH : Mobile : 9912220350 Email : info.southindiatimes@gmail.com